23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 343 | ನವದೆಹಲಿ | ಬೆಲೆ ₹ 10 | ಜೂನ್ 17, 2026, ಬುಧವಾರ

## ಒಳಪುಟಗಳಲ್ಲಿ

ಪ್ಯಾರಿಸ್ ಒಪ್ಪಂದದ ಅಡಿಯಲ್ಲಿ ಭಾರತ, ಜಪಾನ್ ಇಂಗಾಲದ ಡೈಆಕ್ಸೈಡ್ ವ್ಯಾಪಾರಕ್ಕಾಗಿ ನಿಯಮ ನಿಗದಿ- ಪು.4


ಬೆಂಗಳೂರಿನ ಜನಸಂಖ್ಯೆಗೆ ತಕ್ಕಂತೆ ಉಪನಗರ ನಿರ್ಮಾಣ ಅಗತ್ಯ- ಪು.5

ಇರಾನ್ ಪುನರ್ ನಿರ್ಮಾಣಕ್ಕೆ 300 ಶತಕೋಟಿ ಡಾಲರ್ ನಿಧಿ ಘೋಷಣೆ: ವರದಿ ನಿರಾಕರಿಸಿದ ಟ್ರಂಪ್- ಪು.8

# ನೀಟ್ ಮರುಪರೀಕ್ಷೆ: ಜೂ22 ರವರೆಗೆ ಟೆಲಿಗ್ರಾಂ ನಿಷೇಧ

### ಪರೀಕ್ಷೆ ಮೇಲೆ ಪರಿಣಾಮ ಬೀರದಂತೆ ತಾತ್ಕಾಲಿಕ ನಿರ್ಬಂಧ: ಕೇಂದ್ರ ಮಾಹಿತಿ ತಂತ್ರಜ್ಞಾನ ಸಚಿವಾಲಯ ಹೇಳಿಕೆ

**ನವದೆಹಲಿ, ಜೂ. 16: ವೈದ್ಯಕೀಯ ಪ್ರವೇಶ ಪರೀಕ್ಷೆ ನೀಟ್ ಮರುಪರೀಕ್ಷೆಯನ್ನು ಪಾರದರ್ಶಕ ಹಾಗೂ ಸುರಕ್ಷಿತವಾಗಿ ನಡೆಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ದೇಶಾದ್ಯಂತ ಮೆಸೇಜಿಂಗ್ ಆಪ್ ಟೆಲಿಗ್ರಾಮ್ ತಾತ್ಕಾಲಿಕವಾಗಿ ನಿರ್ಬಂಧಿಸಿದೆ.**




ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ನೀಡಿರುವ ಅಧಿಕೃತ ನಿರ್ದೇಶನದ ಪ್ರಕಾರ, ಜೂ.22ರವರೆಗೆ ಟೆಲಿಗ್ರಾಮ್ ಸೇವೆ ಲಭ್ಯವಿರುವುದಿಲ್ಲ. ಜೂ.21ರಂದು ದೇಶಾದ್ಯಂತ ಬಿಗಿಯಾದ ಭದ್ರತೆಯೊಂದಿಗೆ ನೀಟ್ ಮರು ಪರೀಕ್ಷೆ ನಡೆಯಲಿದ್ದು, ಪರೀಕ್ಷೆಗೆ ಸಂಬಂಧಿಸಿದ ಯಾವುದೇ ಮಾಹಿತಿ ಅಥವಾ ಪ್ರಶ್ನೆಪತ್ರಿಕೆಗಳು ಸಾಮಾಜಿಕ ಮಾಧ್ಯಮಗಳಲ್ಲಿ ಸೋರಿಕೆಯಾಗದಂತೆ ತಡೆಯಲು ಈ ಕ್ರಮ ಕೈಗೊಳ್ಳಲಾಗಿದೆ.

ನೀಟ್ ಪರೀಕ್ಷೆಯನ್ನು ನಡೆಸುವ ಜವಾಬ್ದಾರಿ ಹೊತ್ತಿರುವ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ಕೇಂದ್ರ ಸರ್ಕಾರದ ಈ ತ್ವರಿತ ಮತ್ತು ಕಠಿಣ ನಿರ್ಧಾರವನ್ನು ಮುಕ್ತಕಂಠದಿಂದ ಸ್ವಾಗತಿಸಿದೆ. ಈ ತಾತ್ಕಾಲಿಕ ನಿಷೇಧವು ಪರೀಕ್ಷೆಯ ನ್ಯಾಯಸಮ್ಮತತೆಯನ್ನು ಕಾಪಾಡಲು ಮತ್ತು ದೇಶದ ಲಕ್ಷಾಂತರ ಪ್ರಾಮಾಣಿಕ ವಿದ್ಯಾರ್ಥಿಗಳಿಗೆ ಯಾವುದೇ ಅನ್ಯಾಯವಾಗದಂತೆ ತಡೆಯಲು ನೆರವಾಗಲಿದೆ ಎಂದು ಎನ್‌ಟಿಎ ತಿಳಿಸಿದೆ.

ಇತ್ತೀಚಿನ ಅಂಕಿ ಅಂಶಗಳ ಪ್ರಕಾರ ಭಾರತದಲ್ಲಿ 10 ಕೋಟಿಗೂ ಹೆಚ್ಚು ಮಂದಿ ಟೆಲಿಗ್ರಾಂ ಸಕ್ರಿಯ ಬಳಕೆದಾರರಿದ್ದಾರೆ. ಜಾಗತಿಕವಾಗಿ ಟೆಲಿಗ್ರಾಮ್ ಆಪ್ ಡೌನ್‌ಲೋಡ್ ಆಗುವ ಒಟ್ಟು ಪ್ರಮಾಣದಲ್ಲಿ ಸುಮಾರು ಶೇ.22ರಷ್ಟು ಪಾಲು ಭಾರತದ್ದೇ ಆಗಿದೆ. ಭಾರತದ ಇಂಟರ್ನೆಟ್ ಬಳಕೆದಾರರಲ್ಲಿ ಶೇ.39ರಷ್ಟು ಜನರು ವಿವಿಧ ಅಗತ್ಯಗಳಿಗಾಗಿ ಟೆಲಿಗ್ರಾಮ್ ಬಳಸುತ್ತಾರೆ. ಈ ತಾತ್ಕಾಲಿಕ ನಿಷೇಧದಿಂದಾಗಿ ಸಾಮಾನ್ಯ ಬಳಕೆದಾರರಿಗೆ ಕೆಲವು ದಿನಗಳ ಕಾಲ ತೊಂದರೆಯಾಗಲಿದ್ದರೂ, ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯ ಮತ್ತು ಪರೀಕ್ಷೆಯ ಭದ್ರತೆಯ ಹಿತದೃಷ್ಟಿಯಿಂದ ಈ ಕ್ರಮ ಅನಿವಾರ್ಯವಾಗಿತ್ತು ಎಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ತಿಳಿಸಿದೆ.

ಟೆಲಿಗ್ರಾಮ್ ಆಪ್ ಮೇಲಿನ ನಿಷೇಧ ಜೂ.22ಕ್ಕೆ ಮುಗಿದರೂ, ಜೂ.30ರವರೆಗೆ ಈ ಮೆಸೇಜ್ ಎಡಿಟಿಂಗ್ ವೈಶಿಷ್ಟ್ಯವನ್ನು ನಿಷ್ಕ್ರಿಯಗೊಳಿಸುವಂತೆ ಟೆಲಿಗ್ರಾಮ್ ಸಂಸ್ಥೆಗೆ ಸರ್ಕಾರ ಆದೇಶಿಸಿದೆ.

ಟೆಲಿಗ್ರಾಮ್‌ನಲ್ಲಿ ಹಳೆಯ ಸಂದೇಶಗಳ ಸಮಯವನ್ನು ಬದಲಾಯಿಸದೆ, ಅವುಗಳ ಒಳಗಿನ ಪಠ್ಯವನ್ನು ಎಡಿಟ್ ಮಾಡಬಹುದು. ಪರೀಕ್ಷೆ ಮುಗಿದ ನಂತರ ಹಳೆಯ ಮೆಸೇಜ್‌ಗಳನ್ನು ಎಡಿಟ್ ಮಾಡಿ, ತಮಗೆ ಪರೀಕ್ಷೆಗೂ ಮುನ್ನವೇ ಪ್ರಶ್ನೆಪತ್ರಿಕೆ ಸಿಕ್ಕಿತ್ತು ಎಂದು ಸುಳ್ಳು ಪುರಾವೆ ಸೃಷ್ಟಿಸಿ ಪ್ರಶ್ನೆಪತ್ರಿಕೆ ಸೋರಿಕೆ ವದಂತಿ ಹರಡಲು ಈ ಸೌಲಭ್ಯವನ್ನು ಬಳಸಲಾಗುತ್ತಿತ್ತು. ಇದನ್ನು ತಡೆಯಲು ಸರ್ಕಾರ ಈ ನಿರ್ಧಾರ ಮಾಡಿದೆ.

ನೀಟ್ ಮರು ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳನ್ನು ತಾವೇ ಮೊದಲು ನೀಡುವುದಾಗಿ ಹೇಳಿ ಕೆಲವು ವಂಚಕರ ಜಾಲಗಳು ಟೆಲಿಗ್ರಾಮ್ ಚಾನಲ್‌ಗಳ ಮೂಲಕ ಅಭ್ಯರ್ಥಿಗಳು ಹಾಗೂ ಅವರ ಪೋಷಕರಿಂದ ಹಣ ವಸೂಲಿ ಮಾಡಲು ಯತ್ನಿಸುತ್ತಿದ್ದವು. ಇಂತಹ ವಂಚನೆ ತಡೆಯಲು ಸರ್ಕಾರ ಮುಂದಾಗಿದೆ.

# ಮೋದಿಗೆ ಆರ್ಡರ್ ಆಫ್ ದಿ ವೈಟ್ ಡಬಲ್ ಕ್ರಾಸ್



**ನವದೆಹಲಿ, ಜೂ.16:** ಭಾರತ ಮತ್ತು ಸ್ಲೋವಾಕಿಯಾ ನಡುವಿನ ಸಂಬಂಧಗಳನ್ನು ಬಲಪಡಿಸುವಲ್ಲಿ ಮತ್ತು ಎರಡೂ ದೇಶಗಳ ನಡುವೆ ಬೆಳೆಯುತ್ತಿರುವ ಪಾಲುದಾರಿಕೆಯನ್ನು ಒತ್ತಿಹೇಳುವಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಕೊಡುಗೆಯನ್ನು ಗುರುತಿಸಿ, ಸ್ಲೋವಾಕಿಯಾ ಇಂದು ಅವರಿಗೆ ತನ್ನ ಅತ್ಯುನ್ನತ ನಾಗರಿಕ ಗೌರವವಾದ ಆರ್ಡರ್ ಆಫ್ ದಿ ವೈಟ್ ಡಬಲ್ ಕ್ರಾಸ್ (ಫಸ್ಟ್ ಕ್ಲಾಸ್) ಅನ್ನು ಪ್ರದಾನ ಮಾಡಿದೆ.

- ಸ್ಲೋವಾಕಿಯಾ ದೇಶದ ಅತ್ಯುನ್ನತ ನಾಗರಿಕ ಗೌರವ ಕೊಡುಗೆ
- 1.4 ಶತಕೋಟಿ ಭಾರತೀಯರಿಗೆ ಅರ್ಪಣೆ

ಬ್ರಾಟಿಸ್ಲಾವಾದಲ್ಲಿ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಸ್ವೀಕರಿಸಿದ ಮೋದಿ, ಸ್ಲೋವಾಕಿಯಾದ ಜನರು ಮತ್ತು ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸಿದರು ಮತ್ತು ಈ ಗೌರವವನ್ನು ಭಾರತದ 140 ಕೋಟಿ ಜನರಿಗೆ ಅರ್ಪಿಸಿದರು. ಈ ಪ್ರಶಸ್ತಿಯನ್ನು ಭಾರತ ಮತ್ತು ಸ್ಲೋವಾಕಿಯಾ ನಡುವಿನ ಶಾಶ್ವತ ಸ್ನೇಹಕ್ಕಾಗಿ ಅರ್ಪಿಸುತ್ತೇನೆ" ಎಂದು ಹೇಳಿದರು.

ಆರ್ಡರ್ ಆಫ್ ದಿ ವೈಟ್ ಡಬಲ್ ಕ್ರಾಸ್ ಸ್ಲೋವಾಕಿಯಾದ ವಿದೇಶಿ ಪ್ರಜೆಗಳಿಗೆ ನೀಡಲಾಗುವ ಅತ್ಯುನ್ನತ ಗೌರವವಾಗಿದೆ. ಮತ್ತು ಸ್ಲೋವಾಕಿಯಾದೊಂದಿಗಿನ ಸಂಬಂಧಗಳ ಅಭಿವೃದ್ಧಿ ಮತ್ತು ಅಂತರರಾಷ್ಟ್ರೀಯ ಸಹಕಾರದ ಉತ್ತೇಜನಕ್ಕೆ ಅಸಾಧಾರಣ ಕೊಡುಗೆಗಳನ್ನು ಗುರುತಿಸಿ ಇದನ್ನು ನೀಡಲಾಗುತ್ತದೆ. ಮೋದಿಗೆ ಸ್ಲೋವಾಕಿಯಾದ ಅತ್ಯುನ್ನತ ನಾಗರಿಕ ಗೌರವವನ್ನು ನೀಡುವುದನ್ನು ಭಾರತದ ಬೆಳೆಯುತ್ತಿರುವ ಜಾಗತಿಕ ಸ್ಥಾನಮಾನ ಮತ್ತು ಯುರೋಪಿನಾದ್ಯಂತದ ದೇಶಗಳೊಂದಿಗೆ ಅದರ ವಿಸ್ತರಿಸುತ್ತಿರುವ ರಾಜತಾಂತ್ರಿಕ ಸಂಬಂಧದ ಗುರುತಿಸುವಿಕೆ ಎಂದು ಪರಿಗಣಿಸಲಾಗಿದೆ. ಈ ಪ್ರಶಸ್ತಿಯು ನವದೆಹಲಿ ಮತ್ತು ಬ್ರಾಟಿಸ್ಲಾವಾ ನಡುವಿನ ಬಲವಾದ ಮತ್ತು ಶಾಶ್ವತವಾದ ಸ್ನೇಹವನ್ನು ಸಂಕೇತಿಸುತ್ತದೆ ಮತ್ತು ದ್ವಿಪಕ್ಷೀಯ ಸಂಬಂಧಗಳ ಸಕಾರಾತ್ಮಕ ಪಥವನ್ನು ಎತ್ತಿ ತೋರಿಸುತ್ತದೆ ಎಂದು ಭಾರತೀಯ ಅಧಿಕಾರಿಗಳು ಹೇಳಿದ್ದಾರೆ.

# ಪರೀಕ್ಷಾ ವೈಫಲ್ಯ ಮುಚ್ಚಿಹಾಕಲು ಸರ್ಕಾರದ ಹುನ್ನಾರ: ಮಲ್ಲಿಕಾರ್ಜುನ ಖರ್ಗೆ ಆರೋಪ

**ನವದೆಹಲಿ, ಜೂ.16:** ನೀಟ್ ಮರು ಪರೀಕ್ಷೆಯ ಸುತ್ತಲಿನ ವಿವಾದದ ಕುರಿತು ನರೇಂದ್ರ ಮೋದಿ ನೇತೃತ್ವದ ಸರ್ಕಾರದ ವಿರುದ್ಧ ಮಂಗಳವಾರ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ದಾಳಿಯನ್ನು ಹೆಚ್ಚಿಸಿದ್ದಾರೆ, ಪುನರಾವರ್ತಿತ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ಪರೀಕ್ಷಾ ಅಕ್ರಮಗಳು ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯವನ್ನು ಅಪಾಯಕ್ಕೆ ಸಿಲುಕಿಸಿದೆ ಮತ್ತು ದೇಶದ ಶಿಕ್ಷಣ ವ್ಯವಸ್ಥೆಯಲ್ಲಿನ ಆಳವಾದ ಬಿಕ್ಕಟ್ಟನ್ನು ಬಹಿರಂಗಪಡಿಸಿವೆ ಎಂದು ಆರೋಪಿಸಿದ್ದಾರೆ.

ನೀಟ್ ಮರು ಪರೀಕ್ಷೆಗೆ ಸಂಬಂಧಿಸಿದಂತೆ ಟೆಲಿಗ್ರಾಮ್ ತಾತ್ಕಾಲಿಕವಾಗಿ ನಿರ್ಬಂಧಿಸುವ ಕೇಂದ್ರದ ನಿರ್ಧಾರವನ್ನು ಖರ್ಗೆ ಟೀಕಿಸಿದರು ಮತ್ತು ಪ್ರಧಾನಿ ನರೇಂದ್ರ ಮೋದಿ ಮೊದಲು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯನ್ನು ಕೋರಬೇಕು ಎಂದು ಹೇಳಿದರು. "ನೀಟ್ ಪರೀಕ್ಷೆಯ ಮರು ಪರೀಕ್ಷೆಗಾಗಿ ಮೋದಿ ಸರ್ಕಾರ ತಾತ್ಕಾಲಿಕವಾಗಿ ಟೆಲಿಗ್ರಾಮ್ ಅನ್ನು ನಿರ್ಬಂಧಿಸಿದೆ. ಪ್ರಧಾನಿ ಮೋದಿ ಮೊದಲು ಲಕ್ಷಾಂತರ ಯುವಜನರ ಭವಿಷ್ಯವನ್ನು ಪರಿಣಾಮಕಾರಿಯಾಗಿ ನಿರ್ಬಂಧಿಸಿರುವ ತಮ್ಮ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯನ್ನು ಕೋರಬೇಕು" ಎಂದು ಖರ್ಗೆ ಹೇಳಿದರು. ಭಾರತೀಯ



- ಟೆಲಿಗ್ರಾಂ ನಿರ್ಬಂಧಕ್ಕೆ ಟೀಕೆ
- ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಪಡೆಯುವಂತೆ ಆಗ್ರಹ

ವಾಯುಪಡೆಯನ್ನು ನಿಯೋಜಿಸುವುದು, ಟೆಲಿಗ್ರಾಮ್ ನಿರ್ಬಂಧಿಸುವುದು ಮತ್ತು ಸಣ್ಣ ಕಂಪನಿಗಳನ್ನು ಗುರಿಯಾಗಿಸಿಕೊಂಡು ದೊಡ್ಡ ಪೇಪರ್ ಸೋರಿಕೆ ಜಾಲಗಳ ವಿರುದ್ಧ ಕ್ರಮ ಕೈಗೊಳ್ಳಲು ವಿಫಲವಾಗುವುದು ಸೇರಿದಂತೆ ಸರ್ಕಾರದ ಕ್ರಮಗಳು ಕಳೆದ ದಶಕದಲ್ಲಿ ಸಂಗ್ರಹವಾದ ವ್ಯವಸ್ಥಿತ ವೈಫಲ್ಯಗಳ ಪರಿಣಾಮವಾಗಿದೆ ಎಂದು ಕಾಂಗ್ರೆಸ್ ಮುಖ್ಯಸ್ಥರು ಆರೋಪಿಸಿದರು. "ಭಾರತೀಯ ವಾಯುಪಡೆಯನ್ನು ನಿಯೋಜಿಸುವುದಾಗಲಿ, ಟೆಲಿಗ್ರಾಮ್ ನಿರ್ಬಂಧಿಸುವುದಾಗಲಿ ಅಥವಾ ಪೇಪರ್ ಸೋರಿಕೆ ಮಾಫಿಯಾವನ್ನು ರಕ್ಷಿಸುವಾಗ ಸಣ್ಣ ಮೀನುಗಳನ್ನು ಹಿಡಿಯುವುದಾಗಲಿ, ಕಳೆದ 10 ವರ್ಷಗಳಲ್ಲಿ 90 ಪ್ರಶ್ನೆಪತ್ರಿಕೆ ಸೋರಿಕೆ ನಡೆದಿರುವುದರಿಂದ ಮತ್ತು 90 ದಶಲಕ್ಷ ಯುವಜನರು ಈ ದುಷ್ಕೃತ್ಯ ಮತ್ತು ಭ್ರಷ್ಟಾಚಾರದ ಪರಿಣಾಮಗಳನ್ನು ಭರಿಸಬೇಕಾಗಿ ಬಂದಿರುವುದರಿಂದ ಮೋದಿ ಸರ್ಕಾರ ಈ ಕ್ರಮಗಳನ್ನು ತೆಗೆದುಕೊಳ್ಳುವಂತೆ ಒತ್ತಾಯಿಸಲಾಗುತ್ತಿದೆ" ಎಂದು ಅವರು ಹೇಳಿದರು.

### ಬಿಜೆಪಿ ವಿಫಲ

**"ದೇಶದ ಜಾಗೃತ ಮತ್ತು ಜಾಗರೂಕ ಯುವಕರು ಒಂದೇ ಒಂದು ವಿಷಯವನ್ನು ಒತ್ತಾಯಿಸುತ್ತಿದ್ದಾರೆ – ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ, ಇದು ಹೊಣೆಗಾರಿಕೆಯ ಮೊದಲ ಪರೀಕ್ಷೆಯಾಗಿದೆ. ದುರದೃಷ್ಟವಶಾತ್, ಬಿಜೆಪಿ ಈ ಪರೀಕ್ಷೆಯಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ" ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದರು.**

**ವಿದ್ಯಾರ್ಥಿಗಳ ಆತ್ಮಹತ್ಯೆಗಳ ಬಗ್ಗೆ ಮೌನ:** ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳು ಎದುರಿಸುತ್ತಿರುವ ಸಂಕಷ್ಟದ ಹೊರತಾಗಿಯೂ ಸರ್ಕಾರ ಮೌನವಾಗಿದೆ ಎಂದು ಖರ್ಗೆ ಆರೋಪಿಸಿದರು. ಪರೀಕ್ಷಾ ವಿವಾದಗಳಿಗೆ ಸಂಬಂಧಿಸಿದ ವಿದ್ಯಾರ್ಥಿಗಳ ಆತ್ಮಹತ್ಯೆಗಳ ವರದಿಗಳನ್ನು ಉಲ್ಲೇಖಿಸಿ, ಪ್ರಧಾನಿ ಪೀಡಿತ ಕುಟುಂಬಗಳ ಕಳವಳಗಳನ್ನು ಪರಿಹರಿಸಲು ವಿಫಲರಾಗಿದ್ದಾರೆ ಎಂದು ಅವರು ಹೇಳಿದರು.

"ಅರ್ಧ ಡಜನ್ ಯುವಕರು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಉಂಟಾಗಿದೆ ಎಂದು ವರದಿಯಾಗಿದೆ. ಪ್ರಧಾನಿ ಮೋದಿ ಒಂದೇ ಒಂದು ಮಾತನ್ನೂ ಹೇಳಿಲ್ಲ" ಎಂದು ಅವರು ಹೇಳಿದರು, ಲೆಕ್ಕವಿಲ್ಲದಷ್ಟು ಆಕಾಂಕ್ಷಿಗಳು ಮತ್ತು ಅವರ ಪೋಷಕರು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸಲು ವರ್ಷಗಳ ಕಾಲ ಶ್ರಮವಹಿಸಿ ಹಣವನ್ನು ಸಾಲವಾಗಿ ಪಡೆದಿದ್ದರು, ಆದರೆ ನೇಮಕಾತಿ ಮತ್ತು ಪ್ರವೇಶ ಪರೀಕ್ಷೆಗಳು ಪದೇ ಪದೇ ಪತ್ರಿಕೆ ಸೋರಿಕೆಯ ಆರೋಪಗಳಿಂದ ಹಾನಿಗೊಳಗಾದವು ಎಂದು ಅವರು ಹೇಳಿದರು. ದೇಶದ ಅತ್ಯಂತ ವಿಶ್ವಾಸಾರ್ಹ ನೇಮಕಾತಿ ಪ್ರಕ್ರಿಯೆಗಳಲ್ಲಿ ಒಂದೆಂದು ದೀರ್ಘಕಾಲದಿಂದ ಪರಿಗಣಿಸಲ್ಪಟ್ಟಿರುವ ಯೂನಿಯನ್ ಪಬ್ಲಿಕ್ ಸರ್ವಿಸ್ ಕಮಿಷನ್ ಪರೀಕ್ಷೆಯು ಇತ್ತೀಚೆಗೆ ಆರೋಪಗಳ ಮೋಡಕ್ಕೆ ಸಿಲುಕಿದೆ ಎಂದು ಖರ್ಗೆ ಟೀಕಿಸಿದ್ದಾರೆ.

# ಕೆಂಪೇಗೌಡ ಬಡಾವಣೆಯಲ್ಲಿ ಈ ಬಾರಿ ಕೆಂಪೇಗೌಡ ಜಯಂತಿ: ಸಿಎಂ ಡಿ.ಕೆ.ಶಿವಕುಮಾರ್

- 224 ಕ್ಷೇತ್ರಗಳಲ್ಲಿ ಜಯಂತಿ ಆಚರಣೆಗೆ ತಲಾ 1 ಲಕ್ಷ ಅನುದಾನ
- ಬೆಂಗಳೂರಿನ 369 ವಾರ್ಡ್ ಗಳಲ್ಲಿ ಕಾರ್ಯಕ್ರಮ ನಡೆಸಲು ತಲಾ 1 ಲಕ್ಷ ಅನುದಾನ
- ಬಿಡಿಎ ವತಿಯಿಂದ 15 ಲಕ್ಷ ಗಿಡ ನೆಡುವ ಕಾರ್ಯಕ್ರಮ

**ಬೆಂಗಳೂರು, ಜೂ.16:** "ನೂತನವಾಗಿ ನಿರ್ಮಾಣವಾಗುತ್ತಿರುವ ಕೆಂಪೇಗೌಡ ಬಡಾವಣೆಯಲ್ಲಿ ಜೂ. 27ರಂದು ಬೆಳಗ್ಗೆ 11.30ಕ್ಕೆ ನಾಡಪ್ರಭು ಕೆಂಪೇಗೌಡ ಜಯಂತಿ ನಡೆಸಲು ತೀರ್ಮಾನಿಸಲಾಗಿದೆ. ಬಿಡಿಎ ವತಿಯಿಂದ ಅಧ್ಯಕ್ಷರಾದ ಹ್ಯಾರೀಸ್ ಅವರ ನೇತೃತ್ವದಲ್ಲಿ ನಗರದಲ್ಲಿ 15 ಲಕ್ಷ ಗಿಡಗಳನ್ನು ನೆಡಲಾಗುವುದು. ಈ ಬಡಾವಣೆಯಲ್ಲಿ ನೂತನ ರಸ್ತೆಯನ್ನು ಉದ್ಘಾಟಿಸಲಾಗುವುದು? ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ಮಾಹಿತಿ ನೀಡಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮಂಗಳವಾರ ನಡೆದ ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆ ಪೂರ್ವಭಾವಿ ಸಭೆ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಪ್ರತಿ ವರ್ಷದಂತೆ ಕೆಂಪೇಗೌಡ ಜಯಂತಿ ಆಚರಣೆ ಕುರಿತಾಗಿ ಪೂರ್ವಭಾವಿ ಸಭೆ ಕರೆಯಲಾಗಿತ್ತು. ಕಾರ್ಯಕ್ರಮದ ರೂಪುರೇಷೆ ಬಗ್ಗೆ ಎಲ್ಲಾ ಸಂಘಟನೆಗಳ ಜತೆ ಚರ್ಚೆ ಮಾಡಲಾಗಿದೆ. ಪ್ರತಿ ಬಾರಿಯಂತೆ ನಗರದ ನಾಲ್ಕು ಕೆಂಪೇಗೌಡ ಗೋಪುರಗಳಿಂದ ಪ್ರತ್ಯೇಕ ತಂಡಗಳು ಆಗಮಿಸಲಿವೆ. ನಾಲ್ಕು ಗೋಪುರಗಳ ಪೈಕಿ ರಾಮಲಿಂಗಾ ರೆಡ್ಡಿ, ಕೃಷ್ಣ ಬೈರೇಗೌಡ, ಕೆ.ಜೆ ಜಾರ್ಜ್ ಹಾಗೂ ಬೈರತಿ ಸುರೇಶ್ ಅವರು ಜವಾಬ್ದಾರಿ ವಹಿಸಲಿದ್ದಾರೆ. ಇನ್ನು ಮಾಗಡಿ ತಂಡವನ್ನು ಸ್ಥಳೀಯ ಶಾಸಕರಾದ ಬಾಲಕೃಷ್ಣ, ಹುಲಿಯೂರು ದುರ್ಗ ಕಡೆಯಿಂದ ರಂಗನಾಥ್ ಅವರು ಮುನ್ನಡೆಸಲಿದ್ದಾರೆ. ಕೆಂಪೇಗೌಡ



ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿನ ಕಾರ್ಯಕ್ರಮವನ್ನು ಸಚಿವರಾದ ಕೆ.ಎಚ್ ಮುನಿಯಪ್ಪ ಅವರಿಂದ ನಡೆಸಲಾಗುವುದು. ಕೃಷ್ಣಬೈರೇಗೌಡ ನೇತೃತ್ವದಲ್ಲಿ ಬೆಂಗಳೂರಿನ ಕೆಲವು ಭಾಗಗಳಲ್ಲಿ ತಯಾರಿ ಮಾಡಲಾಗುವುದು ಎಂದು ತಿಳಿಸಿದರು.

"ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಆವರಣದಲ್ಲಿ ಕೆಂಪೇಗೌಡರ ಹೆಸರಿನಲ್ಲಿ ನಗರ ಯೋಜನೆ ಕಾಲೇಜು ನಿರ್ಮಿಸಲು ತೀರ್ಮಾನಿಸಲಾಗಿತ್ತು. ಅದರ ಸಿದ್ಧತೆ ನಡೆಸಲಾಗುತ್ತಿದೆ. ಪ್ರತಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಜಯಂತಿ ಆಚರಿಸಲಾಗುವುದು. ಇದಕ್ಕಾಗಿ 1 ಲಕ್ಷ ರೂ. ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಬೇರೊಂದು ದಿನ ಬೆಂಗಳೂರಿನ 369 ವಾರ್ಡ್ ಗಳಲ್ಲಿ ಈ ಕಾರ್ಯಕ್ರಮ ನಡೆಸಲು ಜಿಬಿಎ ವತಿಯಿಂದ ತಲಾ 1 ಲಕ್ಷ ಅನುದಾನ ನೀಡಲಾಗುವುದು. ಈ ಕಾರ್ಯಕ್ರಮದ ದಿನಾಂಕವನ್ನು ಬೆಂಗಳೂರು ನಗರದ ಸಚಿವರು ತೀರ್ಮಾನ ಮಾಡಲಿದ್ದಾರೆ. ಈ ಸಭೆಯಲ್ಲಿ ಅನೇಕ ಸಲಹೆಗಳು ಬಂದಿವೆ ಎಂದರು.

ದೇವನಹಳ್ಳಿ ವಿಮಾನ ನಿಲ್ದಾಣದಲ್ಲಿ ಥೀಮ್ ಪಾರ್ಕ್ ಪೂರ್ಣಗೊಂಡಿದ್ದು, ಇದನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಲು ಕೃಷ್ಣ ಬೈರೇಗೌಡ ನೇತೃತ್ವದಲ್ಲಿ ತಯಾರಿ ಮಾಡಲಾಗುತ್ತಿದೆ. ಕಾರ್ಯಕ್ರಮಕ್ಕೆ ಗಣ್ಯರು, ಸ್ವಾಮೀಜಿಗಳು ಹಾಗೂ ನಾಯಕರ ಆಹ್ವಾನದ ಜವಾಬ್ದಾರಿಯನ್ನು ಕೃಷ್ಣ ಬೈರೇಗೌಡರು ವಹಿಸಿಕೊಂಡಿದ್ದಾರೆ. ಸಂಘಟನೆಗಳು ಹಾಗೂ ಒಕ್ಕಲಿಗರ ಸಂಘ ತಮ್ಮದೇ ಆದ ಜವಾಬ್ದಾರಿ ಹೊತ್ತುಕೊಂಡಿವೆ. ಈ ಕಾರ್ಯಕ್ರಮ ಒಂದು ಜಾತಿ ಅಥವಾ ಧರ್ಮಕ್ಕೆ ಸೀಮಿತವಲ್ಲ. ಕೆಂಪೇಗೌಡರು ಬೆಂಗಳೂರು ನಗರ ಹಾಗೂ ರಾಜ್ಯದ ಆಸ್ತಿ. ಎಲ್ಲಾ ಧರ್ಮ, ಜಾತಿ, ಸಂಘಟನೆಯವರು ಸೇರಿ ಜಯಂತಿ ಆಚರಿಸಲಾಗುವುದು ಎಂದು ತಿಳಿಸಿದರು.

### ಸಭೆಯಲ್ಲಿ ವ್ಯಕ್ತವಾದ ಸಲಹೆಗಳು

**ಕೆಂಪೇಗೌಡರ ಜಯಂತಿ ಆಚರಣೆ ಸಂಬಂಧಿಸಿದಂತೆ ನಡೆದ ಪೂರ್ವಭಾವಿ ಸಭೆಯಲ್ಲಿ ಅನೇಕ ಸಲಹೆಗಳು ವ್ಯಕ್ತವಾಗಿದ್ದು, ಕೆಂಪೇಗೌಡ ಸಮಾಧಿ ಸ್ಥಳವನ್ನು 10 ಎಕರೆ ಜಾಗದಲ್ಲಿ ಅಭಿವೃದ್ಧಿ ಪಡಿಸಬೇಕು. ಜೊತೆಗೆ ಕೆಂಪೇಗೌಡರ ಕೋಟೆ ಅಭಿವೃದ್ಧಿಗೆ 100 ಕೋಟಿ ರೂ. ವೆಚ್ಚದ ಟೆಂಡರ್ ಆಗಿದ್ದು, ಕಾಮಗಾರಿ ಆರಂಭಕ್ಕೆ ಕ್ರಮ ಕೈಗೊಳ್ಳಬೇಕು. ಜಿಬಿಎ ವ್ಯಾಪ್ತಿಯಲ್ಲಿ ಕೆಂಪೇಗೌಡ ಪ್ರಶಸ್ತಿ ಆಯ್ಕೆ ಸಮಿತಿ ರಚಿಸಬೇಕು ಎಂಬ ವಿಚಾರಗಳು ಚರ್ಚೆಯಾದವು. ಉಳಿದಂತೆ ಬಂದ ಸಲಹೆಗಳು ಹೀಗಿವೆ..**

- ನಾಡಪ್ರಭು ಕೆಂಪೇಗೌಡ ಅವರನ್ನು ಬೆಂಗಳೂರಿನ ಸಾಂಸ್ಕೃತಿಕ ನಾಯಕ ಎಂದು ಘೋಷಣೆ
- ಎಲ್ಲಾ ಜಿಲ್ಲೆಗಳಲ್ಲಿ ಕೆಂಪೇಗೌಡ ಜಿಲ್ಲಾ ಭವನ ನಿರ್ಮಾಣ
- ಕೆಂಪೇಗೌಡರ ಹೆಸರಿನಲ್ಲಿ ಅಂತಾರಾಷ್ಟ್ರೀಯ ಉದ್ಯಾನವನ ಹಾಗೂ ಅಂತಾರಾಷ್ಟ್ರೀಯ ಸಮುದಾಯ ಭವನ ನಿರ್ಮಾಣ
- ಕೆಂಪೇಗೌಡರ ವಸ್ತುಸಂಗ್ರಹಾಲಯ
- ಕೆಂಪೇಗೌಡರ ಸ್ಮರಣೆಯಲ್ಲಿ ಬೆಂಗಳೂರಿನ ಕೆರೆಗಳ ಶುದ್ಧೀಕರಣ, ಪುನಶ್ಚೇತನ
- ಸ್ವಾಮಿನಾಥನ್ ವರದಿ ಆಧರಿಸಿ ಜಲ ನಿರ್ವಹಣೆ ಬಗ್ಗೆ ಬೆಂಗಳೂರಿಗರಿಗೆ ಜಾಗೃತಿ ಮೂಡಿಸಲು ಕಾರ್ಯಾಗಾರ
- ಪಠ್ಯಪುಸ್ತಕದಲ್ಲಿ ಕೆಂಪೇಗೌಡರ ಜೀವನ ಚರಿತ್ರೆ
- ಕೆಂಪೇಗೌಡ ಜಯಂತಿಯಂದು ಸರ್ಕಾರಿ ರಜೆ ಘೋಷಣೆ
- ನಗರದ ನಾಲ್ಕೂ ದಿಕ್ಕುಗಳಲ್ಲಿ 50-60 ಅಡಿ ಎತ್ತರದ ಕೆಂಪೇಗೌಡರ ಕಲ್ಲಿನ ಪ್ರತಿಮೆ ನಿರ್ಮಾಣ
- ಬೆಂಗಳೂರು ಗ್ರಾಮಾಂತರ ಜಿಲ್ಲೆ ಆವತಿ ಗ್ರಾಮ ಅಭಿವೃದ್ಧಿ

# ಮೋಹನ್ ಭಾಗವತ್ ಸಮರ್ಪಕ ಉತ್ತರ ನೀಡಲೇಬೇಕು, ಉಡಾಫೆ ಮಾತಿನಿಂದ ಪ್ರಯೋಜನವಿಲ್ಲ

**ನವದೆಹಲಿ, ಜೂ.16:** ಆರ್‌ಎಸ್‌ಎಸ್ ಸಂಘಟನೆ ಕುರಿತು ಮೋಹನ್ ಭಾಗವತ್ ಅವರಿಗೆ ತಾವು ಬರೆದಿರುವ ಪತ್ರವನ್ನು ಸಮರ್ಥಿಸಿಕೊಂಡಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಇದು ವೈಯಕ್ತಿಕ ಅಭಿಪ್ರಾಯವಲ್ಲ, ಕರ್ನಾಟಕ ಸರ್ಕಾರದ ಸಚಿವನಾಗಿ ಪತ್ರ ಬರೆದಿದ್ದೇನೆ, ಉತ್ತರ ನೀಡಲೇಬೇಕು, ಉಡಾಫೆ ತೋರಿದರೆ ಪ್ರಯೋಜನ ಇಲ್ಲ ಎಂದಿದ್ದಾರೆ.

**ಅಯೋಧ್ಯೆಯಲ್ಲಿ ದೇಣಿಗೆ ವಿಚಾರದಲ್ಲಿ ಹಗರಣ:** ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡಬೇಕು, ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಲೆಕ್ಕ ಕೊಡಬಾರದಾ ಅಂತ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನೆ ಮಾಡಿದರು. ಆರ್‌ಎಸ್‌ಎಸ್ ನೋಂದಣಿ ಮತ್ತು ಹಣಕಾಸು ವಹಿವಾಟುಗಳ ಮಾಹಿತಿ ಕೋರಿ ಸರಸಂಘಚಾಲಕ ಮೋಹನ್ ಭಾಗವತ್‌ಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಬರೆದ ಪತ್ರ ರಾಜ್ಯದಲ್ಲಿ ಸಂಚಲನ ಸೃಷ್ಟಿಸಿದೆ. ಅಯೋಧ್ಯೆಯಲ್ಲಿ ದೇಣಿಗೆ ವಿಚಾರದಲ್ಲಿ ಹಗರಣ ನಡೆದಿದೆ ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡುವ ಪರಿಸ್ಥಿತಿ ಬಂದಿದೆ.

### ಪ್ರಿಯಾಂಕ್ ಖರ್ಗೆ ತಾಕೀತು

ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಯಾಕೆ ಲೆಕ್ಕ ಕೊಡಬಾರದು ಎಂದು ಪ್ರಶ್ನಿಸಿದರು.

**ಪಾರದರ್ಶಕತೆ ಕೇಳುವುದು ತಪ್ಪಾ?:** ಸಂಘ ಪರಿವಾರದ ಅತ್ಯುನ್ನತ ನೀತಿ ನಿರೂಪಣಾ ಸಂಸ್ಥೆ ಭಾರತೀಯ ಪ್ರತಿನಿಧಿ ಸಭಾ ಬಿಡುಗಡೆ ಮಾಡಿರುವ ವರದಿಯ ಪ್ರಕಾರ ರಾಜ್ಯದಲ್ಲಿ ಆರ್‌ಎಸ್‌ಎಸ್‌ನ 4,127 ಶಾಖೆಗಳಿವೆ. 562 ಪಥಸಂಚಲನಗಳನ್ನು ನಡೆಸಲಾಗಿದೆ. 20 ಲಕ್ಷ ಜನ ಸೇರುವ ಕಾರ್ಯಕ್ರಮ ನಿರ್ವಹಣೆ ಮಾಡಿದ್ದಾರೆ.

ಇಷ್ಟೆಲ್ಲಾ ಬೃಹತ್ ಚಟುವಟಿಕೆಗಳನ್ನು ನಿರ್ವಹಿಸುವ ಸಂಸ್ಥೆಗೆ ಉತ್ತರದಾಯಿತ್ವ ಬೇಕಲ್ಲವೇ ಎಂದು ಪ್ರಶ್ನಿಸಿದರು. ಪಾರದರ್ಶಕತೆ ಕೇಳುವುದು ತಪ್ಪಾ? ಪತ್ರದಲ್ಲಿ ತಪ್ಪೇನಿದೆ ಹೇಳಿ? ಅಖಿಲ ಭಾರತ ಪ್ರತಿನಿಧಿ ಸಭಾ ಈ ಮಾಹಿತಿ ನೀಡಿದೆ. ಹೈಕೋರ್ಟ್ ಆದೇಶ ಉಲ್ಲಂಘಿಸಿ ಪಥಸಂಚಲನ ಮಾಡಿದರೆ ಪ್ರಶ್ನೆ ಮಾಡಬಾರದಾ ಎಂದು ಕೇಳಿದರು. ಜವಾಬ್ದಾರಿ ಸ್ಥಾನದಲ್ಲಿ ಕುಳಿತು ನಾನು ಕೇಳುತ್ತಿದ್ದೇನೆ. ಯಾವುದೇ ಧರ್ಮದ ಸಂಘ–ಸಂಸ್ಥೆಗಳಾದರೂ ಕಾನೂನು ಅಡಿಯಲ್ಲಿ ಬರಬೇಕು. ಯಾವುದೇ ಕಾರ್ಯಕ್ರಮ ಮಾಡಿದ್ರೂ ಪೊಲೀಸ್ ಅನುಮತಿ ಪಡೆಯಬೇಕು. ಆರ್‌ಎಸ್‌ಎಸ್ ಪಡೆಯುವುದು ತಪ್ಪಾ? ನಿಮ್ಮ ಆಡಳಿತ ಸಿಬ್ಬಂದಿ ಯಾರು ಎಂದು ತಿಳಿದುಕೊಳ್ಳಬಾರದಾ? ದೇಣಿಗೆ ಸಂಗ್ರಹ ಮಾಡುತ್ತಿದ್ದಾರೆ, ಎಷ್ಟು ಬರ್ತಿದೆ? ಇದೆಲ್ಲಾ ಕೇಳಬಾರದಾ? ಆರ್‌ಎಸ್‌ಎಸ್‌ನವರು ಕಾನೂನು ಹೋರಾಟಕ್ಕೆ ಮೂರು ಕೋಟಿ ಖರ್ಚು ಮಾಡಿದ್ದಾರೆ. ಸಂಘದ ನಾಯಕರು ಅಮೆರಿಕ ಪ್ರವಾಸ ಮಾಡುತ್ತಾರೆ. ಅವರಿಗೆ ಹಣ ಎಲ್ಲಿಂದ ಬರ್ತಿದೆ? ಅವರ ಚಟುವಟಿಕೆಗಳು ಏನು? ನಾನು ಪತ್ರ ಬರೆದಿರುವುದು ಆರ್‌ಎಸ್‌ಎಸ್ ಮುಖ್ಯಸ್ಥರಿಗೆ. ಉತ್ತರ ನೀಡುತ್ತಿರುವುದು ಬಿಜೆಪಿಯವರು. ಇದು ಎಲ್ಲಿಂದ ಎಲ್ಲಿಗೆ ಸಂಪರ್ಕ. ಆರ್‌ಎಸ್‌ಎಸ್ ತಾನು ರಾಜಕೀಯ ಹೊರತಾದ ಸಂಘಟನೆ ಎಂದು ಹೇಳಿಕೊಳ್ಳುತ್ತಿದೆ. ಹಾಗಿದ್ದರೆ ಬಿಜೆಪಿಯವರು ಏಕೆ ಪ್ರತಿಕ್ರಿಯಿಸುತ್ತಿದ್ದಾರೆ ಎಂದು ಪ್ರಶ್ನಿಸಿದರು.



**ರಾಜ್ಯದಲ್ಲಿ 66 ಮಂದಿಯನ್ನು ರೌಡಿಶೀಟರ್‌ಂದ ಕೈಬಿಡುವ ಪ್ರಸ್ತಾವನೆಯನ್ನು ತಡೆಹಿಡಿಯಲು ಸೂಚನೆ ನೀಡಲಾಗಿದೆ. ಈ ಪಟ್ಟಿಯಲ್ಲಿ 10ರಿಂದ 12 ಕುಖ್ಯಾತ ರೌಡಿಗಳಿದ್ದಾರೆ ಎಂಬ ಮಾಹಿತಿ ಇದೆ. ಈ ರೀತಿ ಯಡವಟ್ಟು ನಡೆಯಲು ಹೇಗೆ ಸಾಧ್ಯ ಎಂದು ವಿವರಣೆ ನೀಡುವಂತೆ ಪೊಲೀಸ್ ಆಯುಕ್ತರಿಗೆ ಸೂಚಿಸಿದ್ದೇನೆ. ಲೋಪಗಳನ್ನು ಸರಿಪಡಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು. ರೌಡಿಶೀಟರ್‌ನಿಂದ ಕೈಬಿಡಲು ಪ್ರಸ್ತಾಪಿಸಲಾದ ಪಟ್ಟಿಯಲ್ಲಿ ಕೆಲವು ಬಿಜೆಪಿ ಕಾರ್ಯಕರ್ತರ ಹೆಸರಿವೆ.**

**–ಪ್ರಿಯಾಂಕ್ ಖರ್ಗೆ, ಗೃಹ ಸಚಿವ**

### ಸಂಘದ ಚಟುವಟಿಕೆಗಳಿಗೆ ವಿರೋಧವಿಲ್ಲ

**ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ವಿರೋಧಿಯಲ್ಲ, ಯಾವುದಕ್ಕೂ ಅಡ್ಡಿಪಡಿಸುವುದೂ ಇಲ್ಲ. ಆದರೆ ನೆಲದ ಕಾನೂನನ್ನು ಪಾಲಿಸಲೇಬೇಕು. ಉತ್ತರ ನೀಡುವುದಿಲ್ಲ ಎಂದು ಹೇಳಿ ಜಾರಿಕೊಳ್ಳಲು ಅವಕಾಶ ಇಲ್ಲ. ಸರ್ಕಾರದ ಪ್ರತಿನಿಧಿಯಾಗಿ ಪತ್ರ ಬರೆದಿದ್ದೇನೆ. ಚರ್ಚೆಗೆ ಆರ್‌ಎಸ್‌ಎಸ್ ಮುಖ್ಯಸ್ಥರು ಪ್ರತಿನಿಧಿಯನ್ನು ನೇಮಿಸಬೇಕೆಂದು ಮನವಿ ಮಾಡಿರುವುದಾಗಿ ಹೇಳಿದರು. ಈ ದೇಶದಲ್ಲಿ ಪ್ರತಿಯೊಂದು ಚಟುವಟಿಕೆ ನಡೆಸುವ ಸಂಸ್ಥೆಗಳು ನೋಂದಣಿಯಾಗಲೇಬೇಕಿದೆ. ಆದಾಯ ತೆರಿಗೆ ಪಾವತಿಯಿಂದ ವಿನಾಯಿತಿ ದೊರೆತಿದೆ ಎಂದು ಹೇಳಿಕೊಳ್ಳುತ್ತಿರುವ ಆರ್‌ಎಸ್‌ಎಸ್‌ನವರು, ಯಾವ ನಿಯಮದಡಿ ತೆರಿಗೆ ಪಾವತಿಸದಂತೆ ಅವಕಾಶ ನೀಡಲಾಗಿದೆ ಎಂಬುದನ್ನು ಬಹಿರಂಗ ಪಡಿಸಲಿ. ಕಾಂಗ್ರೆಸ್‌ಗೆ 140 ವರ್ಷ ಆಗಿದೆ ಎಂಬ ಕಾರಣಕ್ಕಾಗಿ ತೆರಿಗೆ ಪಾವತಿಸಲು ವಿನಾಯಿತಿ ಕೇಳಿದರೆ ಒಪ್ಪುತ್ತಾರೆಯೇ ಎಂದು ಕೇಳಿದರು. ಆರ್‌ಎಸ್‌ಎಸ್ ಮುಖ್ಯಸ್ಥರಿಗೆ ತಾವು ಬರೆದ ಪತ್ರವನ್ನು ಜೂನ್ 15ರಂದು ಬಹಿರಂಗ ಪಡಿಸಿದ್ದೇನೆ. ಜೂನ್ 13ರಂದು ತ್ರಿಶೂರ್‌ನಲ್ಲಿ ಮೋಹನ್ ಭಾಗತ್ ಅವರು ಸಮಜಾಯಿಷಿ ನೀಡಿರುವುದು ನನ್ನ ಪತ್ರಕ್ಕೆ ಅಲ್ಲ, ಈ ಮೊದಲು ಚಿತ್ತಾಪುರದಲ್ಲಿ ಪಥಸಂಚಲನಕ್ಕೆ ಅವಕಾಶ ಸಿಗದೇ ಇದ್ದ ಕುರಿತು ಕೇಳಲಾದ ಪ್ರಶ್ನೆಗೆ ಉತ್ತರಿಸಿದ್ದಾರೆ. ತಮ್ಮ ಪತ್ರಕ್ಕೆ ಅವರ ಕಡೆಯಿಂದ ಇನ್ನೂ ಪ್ರತಿಕ್ರಿಯೆ ಬಂದಿಲ್ಲ ಎಂದರು.**

## ನಿತ್ಯ ಪಂಚಾಂಗ 17.06.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

**ಕದಳೀಗೌರೀ ವ್ರತ, ರಂಭಾ ತೃತೀಯಾ, ಕೈವಾರಮಹರಾಜ ಆರಾಧನೆ, ಮೊಹರಂ ತಿಂಗಳ ಆರಂಭ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

### ಗ್ಯಾರಂಟಿ ಯೋಜನೆಗಳ ಅಸಮರ್ಪಕ ನಿರ್ವಹಣೆ: ರಾಜ್ಯ ಸರ್ಕಾರದ ವಿರುದ್ಧ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆರೋಪ

# ವೈಫಲ್ಯ ಮುಚ್ಚಿಕೊಳ್ಳಲು ಅರ್ಹ ಫಲಾನುಭವಿಗಳ ಹಕ್ಕು ಕಸಿಯುವ ಯತ್ನ

**ಶಿರಸಿ, ಜೂ.16:** ರಾಜ್ಯ ಕಾಂಗ್ರೆಸ್ ಸರ್ಕಾರವು ಗ್ಯಾರಂಟಿ ಯೋಜನೆಗಳ ಅಸಮರ್ಪಕ ಹಾಗೂ ಅದಕ್ಷ ನಿರ್ವಹಣೆಯಿಂದ ಕರ್ನಾಟಕವನ್ನು ಆರ್ಥಿಕ ದಿವಾಳಿತನದ ಪ್ರಪಾತಕ್ಕೆ ತಳ್ಳಿದ್ದು, ಈಗ ತನ್ನ ಆಡಳಿತಾತ್ಮಕ ವೈಫಲ್ಯಗಳನ್ನು ಮುಚ್ಚಿಕೊಳ್ಳಲು ಬಡವರ ಹಾಗೂ ಅರ್ಹ ಫಲಾನುಭವಿಗಳ ಹಕ್ಕುಗಳನ್ನು ಕಸಿದುಕೊಳ್ಳುವ ಪ್ರಯತ್ನ ನಡೆಸುತ್ತಿದೆ ಎಂದು ಉತ್ತರ ಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ನಿಜವಾದ ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ತಲುಪಬೇಕು ಎಂಬುದರಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ಆದರೆ, ರಾಜಕೀಯ ಸ್ವಾರ್ಥ ಹಾಗೂ ಚುನಾವಣಾ ಲಾಭಕ್ಕಾಗಿ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿ, ಸೂಕ್ತ ಯೋಜನೆ ಮತ್ತು ಪಾರದರ್ಶಕತೆಯ ಕೊರತೆಯೊಂದಿಗೆ ಜಾರಿಗೊಳಿಸಿದ ಸರ್ಕಾರ, ಈಗ ರಾಜ್ಯದ ಖಜಾನೆ ಖಾಲಿಯಾಗುತ್ತಿದ್ದಂತೆ ಬಡವರ ಹೊಟ್ಟೆಯ ಮೇಲೆ ಹೊಡೆಯಲು ಮುಂದಾಗಿದೆ ಎಂದು ಟೀಕಿಸಿದ್ದಾರೆ.



ಯೋಜನೆಗಳ ಆರಂಭದಲ್ಲಿಯೇ ವ್ಯವಸ್ಥಿತ ಯೋಜನೆ ಹಾಗೂ ಪಾರದರ್ಶಕತೆಯನ್ನು ಅಳವಡಿಸಿಕೊಂಡಿದ್ದರೆ, ಈಗ ಎದುರಾಗಿರುವ ಆರ್ಥಿಕ ಸಮಸ್ಯೆಗಳನ್ನು ತಪ್ಪಿಸಲು ಸಾಧ್ಯವಾಗುತ್ತಿತ್ತು. ಆದರೆ, ಯಾವುದೇ ಸಮರ್ಪಕ ವ್ಯವಸ್ಥೆ ಇಲ್ಲದೆ ಯೋಜನೆಗಳನ್ನು ಜಾರಿಗೊಳಿಸಿ, ಈಗ ಏಕಾಏಕಿ 'ಪುನಃ ಸಮೀಕ್ಷೆ' ಎಂಬ ಹೆಸರಿನಲ್ಲಿ ಬಡವರನ್ನು ವಂಚಿಸಲಾಗುತ್ತಿದೆ. ಇದು ಅತ್ಯಂತ ಖಂಡನೀಯ ಬೆಳವಣಿಗೆಯಾಗಿದೆ ಎಂದು ಹೇಳಿದ್ದಾರೆ.

ಈಗಾಗಲೇ ಕೋಟ್ಯಂತರ ರೂಪಾಯಿ ಸಾರ್ವಜನಿಕ ಹಣ ದುರುಪಯೋಗವಾಗಿರುವುದನ್ನು ಸ್ವತಃ ಸರ್ಕಾರವೇ ಒಪ್ಪಿಕೊಂಡಿದೆ. ಮೂರು ವರ್ಷಗಳ ಕಾಲ ನಿರ್ಲಕ್ಷ್ಯ ತೋರಿದ ಸರ್ಕಾರ, ರಾಜ್ಯ ಬೊಕ್ಕಸ ಖಾಲಿಯಾಗುತ್ತಿದ್ದಂತೆ ಪರಿಷ್ಕರಣೆಯ ನಿರ್ಧಾರ ಕೈಗೊಂಡಿರುವುದು ಅದರ ಆಡಳಿತಾತ್ಮಕ ವೈಫಲ್ಯ ಮತ್ತು ಅಪ್ರಬುದ್ಧತೆಗೆ ಸಾಕ್ಷಿಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಈ ವೈಫಲ್ಯದ ಸಂಪೂರ್ಣ ಹೊಣೆಯನ್ನು ಸರ್ಕಾರವೇ ಹೊತ್ತುಕೊಳ್ಳಬೇಕು. ಚುನಾವಣಾ ಲಾಭಕ್ಕಾಗಿ ಗ್ಯಾರಂಟಿ ಕಾರ್ಡ್‌ಗಳನ್ನು ಹಂಚಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ, ಇದೀಗ ಪರಿಷ್ಕರಣೆಯ ನೆಪದಲ್ಲಿ ಬಡವರ ಹಕ್ಕುಗಳಿಗೆ ಧಕ್ಕೆ ತರುತ್ತಿದೆ. ರಾಜ್ಯದ ಜನತೆ ಈ ಜನವಿರೋಧಿ ಹಾಗೂ ವಂಚಕ ಧೋರಣೆಯನ್ನು ಯಾವುದೇ ಕಾರಣಕ್ಕೂ ಕ್ಷಮಿಸುವುದಿಲ್ಲ ಎಂದು ತಿಳಿಸಿದ್ದಾರೆ.


## ಆರ್‌ಎಸ್‌ಎಸ್ ತೇಜೋವಧೆಗೆ ಹತಾಶ ಯತ್ನ: ನಾರಾಯಣ ಕಿಡಿ

**ಬೆಂಗಳೂರು:** ರಾಷ್ಟ್ರೀಯ ಸ್ವಯಂಸೇವಕ ಸಂಘದ ನೋಂದಣಿ ಮತ್ತು ತೆರಿಗೆ ವಿನಾಯಿತಿ ಕುರಿತು ಸಚಿವ ಪ್ರಿಯಾಂಕ್ ಖರ್ಗೆ ಎತ್ತಿದ್ದ ಪ್ರಶ್ನೆಗಳಿಗೆ ಬಿಜೆಪಿಯ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಬಹಿರಂಗ ಪತ್ರದ ಮೂಲಕ ತೀಕ್ಷ್ಣವಾಗಿ ತಿರುಗೇಟು ನೀಡಿದ್ದಾರೆ.

ಇತ್ತೀಚೆಗೆ ಆರ್‌ಎಸ್‌ಎಸ್‌ನ ನೂರು ವರ್ಷಗಳ ಇತಿಹಾಸ, ಅದರ ಅಧಿಕೃತ ನೋಂದಣಿ ಸ್ಥಿತಿ ಮತ್ತು ನಿಧಿ ಸಂಗ್ರಹಣೆಯ ಪಾರದರ್ಶಕತೆಯನ್ನು ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ. ಇದಕ್ಕೆ ಪತ್ರದ ಮೂಲಕ ಆಕ್ರೋಶ ಹೊರಹಾಕಿರುವ ಸಂಸದ ಭಾಂಡಗೆ, ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಓಲೈಕೆ ರಾಜಕಾರಣ ಮಾಡುತ್ತಿದೆ. ಆರ್‌ಎಸ್‌ಎಸ್ ದೇಶಭಕ್ತಿ ಮತ್ತು ಸಮಾಜ ಸೇವೆಯಲ್ಲಿ ನಿರತವಾಗಿರುವ ಸಂಸ್ಥೆಯಾಗಿದ್ದು, ಅದರ ತೇಜೋವಧೆಗೆ ಹತಾಶ ಯತ್ನ ನಡೆಯುತ್ತಿದೆ ಎಂದು ಕಿಡಿಕಾರಿದ್ದಾರೆ. ಕೇವಲ ಸೈದ್ಧಾಂತಿಕ ಭಿನ್ನಾಭಿಪ್ರಾಯದ ಆಧಾರದ ಮೇಲೆ ಒಂದು ಸಂಸ್ಥೆಯ ಅಸ್ತಿತ್ವವನ್ನೇ ಪ್ರಶ್ನಿಸುವುದು ಸೂಕ್ತವಲ್ಲ. ಕಾಂಗ್ರೆಸ್ ಪಕ್ಷವು ಏಕೆ ನಿರಂತರವಾಗಿ ಹಿಂದೂ ಸಂಘಟನೆಗಳನ್ನೇ ಗುರಿಯಾಗಿಸಿಕೊಂಡು ಪ್ರಶ್ನಿಸುತ್ತದೆ ಎಂಬ ಅನುಮಾನ ಮೂಡಿದೆ. ಕರ್ನಾಟಕದಲ್ಲಿ ನಡೆದ ಹುಬ್ಬಳ್ಳಿ ಪೊಲೀಸ್ ಠಾಣೆ ಹಿಂಸಾಚಾರ, ಬೆಂಗಳೂರಿನ ಕೆ.ಜಿ.ಹಳ್ಳಿ ಹಾಗೂ ಡಿ.ಜೆ.ಹಳ್ಳಿ ಗಲಭೆಗಳು, ಹಿಂಸಾತ್ಮಕ ಗುಂಪುಗಳಿಂದ ಸಾರ್ವಜನಿಕ ಆಸ್ತಿ ಹಾಗೂ ಪೊಲೀಸ್ ಸಿಬ್ಬಂದಿ ಮೇಲೆ ನಡೆದ ದಾಳಿಗಳು ರಾಜ್ಯದ ಜನತೆಯ ನೆನಪಿನಲ್ಲಿ ಇನ್ನೂ ಜೀವಂತವಾಗಿವೆ. ಹಿಂಸೆಗೆ ಒಳಗಾದವರಲ್ಲಿ ಒಬಿಸಿ ಕಾಂಗ್ರೆಸ್ ಶಾಸಕರ ಮನೆಯೂ ಸೇರಿದೆ. ಇಂತಹ ಘಟನೆಗಳ ಕುರಿತು ಇದೇ ರೀತಿಯ ಬಹಿರಂಗ ಪತ್ರಗಳು, ಇದೇ ಮಟ್ಟದ ಆಕ್ರೋಶ ಮತ್ತು ಇದೇ ರೀತಿಯ ನೈತಿಕ ಪ್ರಶ್ನೆಗಳು ಏಕೆ ಉದ್ಭವಿಸಲಿಲ್ಲ ಎಂಬುದು ಜನರ ಪ್ರಶ್ನೆಯಾಗಿದೆ ಎಂದು ನಾರಾಯಣಸಾ ಭಾಂಡಗೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಸರ್ಕಾರಿ ಆಸ್ತಿಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ನಿರ್ಬಂಧ ವಿಧಿಸುವ ಸರ್ಕಾರದ ಆಲೋಚನೆಗಳ ಬೆನ್ನಲ್ಲೇ ಈ ಪತ್ರ ಮುನ್ನೆಲೆಗೆ ಬಂದಿದ್ದು, ರಾಜ್ಯ ರಾಜಕೀಯದಲ್ಲಿ ಸೈದ್ಧಾಂತಿಕ ಸಂಘರ್ಷವನ್ನು ಮತ್ತಷ್ಟು ತೀವ್ರಗೊಳಿಸಿದೆ.

## ಮತಾಂತರಿಗಳನ್ನು ಎಸ್‌ಟಿ ಪಟ್ಟಿಯಿಂದ ಕೈಬಿಡಿ: ಎಂಎಲ್‌ಸಿ ಶಾಂತಾರಾಮ ಸಿದ್ದಿ ಆಗ್ರಹ

**ಬೆಂಗಳೂರು, ಜೂ.16:** ಮತಾಂತರಗೊಂಡ ಬುಡಕಟ್ಟು ಸಮುದಾಯದವರಿಂದ ನೈಜ ಮೂಲ ಬುಡಕಟ್ಟಿನವರಿಗೆ ಅನ್ಯಾಯವಾಗುತ್ತಿದ್ದು, ಮತಾಂತರ ಹೊಂದಿದವರನ್ನು ಪರಿಶಿಷ್ಟ ಪಂಗಡದ ಪಟ್ಟಿಯಿಂದ ಕೈಬಿಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಶಾಂತಾರಾಮ ಸಿದ್ದಿ ಒತ್ತಾಯಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 12 ಕೋಟಿ ಬುಡಕಟ್ಟು ಸಮುದಾಯದ ಜನರಿದ್ದಾರೆ, ಅವರಲ್ಲಿ 1–2 ಕೋಟಿ ಜನ ಮತಾಂತರಗೊಂಡಿದ್ದಾರೆ. ಗಿರಿಜನರಿಗೆ ಸಿಗಬೇಕಾದ ಸೌಲಭ್ಯಗಳನ್ನು ಮತಾಂತರಿ ಬುಡಕಟ್ಟಿನವರೇ ಹೆಚ್ಚಾಗಿ ಪಡೆದುಕೊಳ್ಳುತ್ತಿದ್ದಾರೆ. ಕೆಲವು ಕಡೆಗಳಲ್ಲಿ ಇವರು ಇತ್ತ ಬುಡಕಟ್ಟು ಹಾಗೂ ಅತ್ತ ಮತಾಂತರಗೊಂಡ ಧರ್ಮದ ಎರಡೂ ಕಡೆಯ ಸೌಲಭ್ಯಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದರು.

ಈ ಅನ್ಯಾಯದ ಹಿನ್ನೆಲೆಯಲ್ಲಿ ನವದೆಹಲಿಯಲ್ಲಿ ರಾಷ್ಟ್ರಮಟ್ಟದ ಜನಜಾತಿ ಸುರಕ್ಷಾ ವೇದಿಕೆ ವತಿಯಿಂದ ಬೃಹತ್ ಸಮ್ಮೇಳನ ಆಯೋಜಿಸಲಾಗಿತ್ತು. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭಾಗವಹಿಸಿದ್ದ ಈ ಸಮ್ಮೇಳನದ ಬಳಿಕ, ರಾಷ್ಟ್ರಪತಿಗಳನ್ನೂ ಭೇಟಿ ಮಾಡಿ ಮನವಿ ಸಲ್ಲಿಸಲಾಗಿದೆ. ನಾವು ಯಾವುದೇ ಧರ್ಮ ಅಥವಾ ಮತವನ್ನು ವಿರೋಧಿಸುವುದಿಲ್ಲ. ಆದರೆ, ಬೇರೆ ಧರ್ಮಕ್ಕೆ ಮತಾಂತರ ಹೊಂದಿದವರು ಇಲ್ಲಿನ ಮೂಲ ಬುಡಕಟ್ಟು ಜನರಿಗೆ ಸಿಗುವ ಸರ್ಕಾರಿ ಸೌಲಭ್ಯಗಳನ್ನು ಪಡೆಯಬಾರದು ಎಂದು ಅವರು ಪ್ರತಿಪಾದಿಸಿದರು.

### ಸಚಿವ ಪ್ರಿಯಾಂಕ್ ಖರ್ಗೆಗೆ ಆರ್‌ಎಸ್‌ಎಸ್ ಬಗ್ಗೆ ಏನು ಗೊತ್ತು?

ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಕುರಿತಾಗಿ ಸಚಿವ ಪ್ರಿಯಾಂಕ್ ಖರ್ಗೆ ಬರೆದಿರುವ ಪತ್ರದ ವಿಚಾರವಾಗಿ ವಿಧಾನ ಪರಿಷತ್ ಸದಸ್ಯ ಶಾಂತಾರಾಮ ಸಿದ್ದಿ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದರು.

"ಆರ್‌ಎಸ್‌ಎಸ್ ಶಾಖೆಗೆ ನಿಯಮಿತವಾಗಿ ಹೋಗುವವರಿಗೇ ಸಂಘ ನೂರಕ್ಕೆ ನೂರರಷ್ಟು ಅರ್ಥವಾಗಿದೆ ಎಂದು ಹೇಳಲು ಸಾಧ್ಯವಿಲ್ಲ. ಇನ್ನು ಪಾಪ, ಪ್ರಿಯಾಂಕ್ ಖರ್ಗೆಯವರಿಗೆ ಅದರ ಬಗ್ಗೆ ಏನು ಗೊತ್ತಾಗಲು ಸಾಧ್ಯ" ಎಂದು ಲೇವಡಿ ಮಾಡಿದರು.

ಪ್ರಿಯಾಂಕ್ ಖರ್ಗೆ ಅವರು ಕೇವಲ ಕಾನೂನಾತ್ಮಕವಾಗಿ ಏನೋ ಪ್ರಶ್ನೆ ಕೇಳಿರಬಹುದು ಎಂದರು. ಆರೆಎಸ್‌ಎಸ್ ಕೇವಲ ವ್ಯಕ್ತಿ ನಿರ್ಮಾಣ ಮಾಡುವ ಶಿಸ್ತಿನ ಕೇಂದ್ರವಾಗಿದೆ. ಹಣಕಾಸಿನ ಪ್ರಶ್ನೆಯೇ ಇಲ್ಲ: ಇಲ್ಲಿ ಯಾವುದೇ ರೀತಿಯ ಆರ್ಥಿಕ ವ್ಯವಹಾರಗಳು ನಡೆಯುವುದಿಲ್ಲ. ಹಾಗಾಗಿ ಹಣಕಾಸಿನ ಪ್ರಶ್ನೆಯೇ ಉದ್ಭವಿಸುವುದಿಲ್ಲ ಎಂದರು. ಆರ್‌ಎಸ್‌ಎಸ್ ಚಟುವಟಿಕೆಗಳೆಲ್ಲವೂ ತೆರೆದ ಮೈದಾನದಲ್ಲಿ ಎಲ್ಲರ ಕಣ್ಣೆದುರೇ ನಡೆಯುತ್ತವೆ. ಅದನ್ನು ಬಿಟ್ಟು ಉಳಿದ ಅನಗತ್ಯ ಪ್ರಶ್ನೆಗಳಿಗೆ ಉತ್ತರಿಸುವ ಅಗತ್ಯವಿಲ್ಲ ಎಂದು ಉತ್ತರಿಸಿದರು.

## ಜೂ.25ರಂದು ಟಿ.ಬಿ.ಡ್ಯಾಂನ ಹೊಸ ಕ್ರಸ್ಟ್‌ಗೇಟ್‌ಗಳ ಲೋಕಾರ್ಪಣೆ

**ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್, ಚಂದ್ರಬಾಬು ನಾಯ್ಡು, ರೇವಂತರೆಡ್ಡಿ ಮೂರು ರಾಜ್ಯಗಳ ನೀರಾವರಿ ಸಚಿವರು ಭಾಗಿ**

**ಹೊಸಪೇಟೆ, ಜೂ.16:** ಕರ್ನಾಟಕ, ಆಂಧ್ರಪ್ರದೇಶ ಹಾಗೂ ತೆಲಂಗಾಣ ಸೇರಿದಂತೆ ಮೂರು ರಾಜ್ಯಗಳ 8 ಜಿಲ್ಲೆಗಳ ಜೀವನಾಡಿ ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಕಾರ್ಯ ಇದೇ ಜೂ.25 ರಂದು ಜರುಗಲಿದೆ.

ಸುದ್ದಿಗಾರರೊಂದಿಗೆ ಮಂಗಳವಾರ ಮಾತನಾಡಿದ ಜಿಲ್ಲಾಧಿಕಾರಿ ಕವಿತಾ ಮಣ್ಣಿಕೇರಿ, ತುಂಗಭದ್ರಾ ಜಲಾಶಯಕ್ಕೆ ನೂತನ ಕ್ರಸ್ಟ್ ಗೇಟುಗಳ ಆಳವಡಿಕೆ ಕಾರ್ಯ ಈಗಾಗಲೇ ಯಶಸ್ವಿಯಾಗಿ ಪೂರ್ಣಗೊಂಡಿದ್ದು. ಹೊಸ ಚೈನ್ ಅಳವಡಿಕೆ ಕಾರ್ಯ ಈಗಾಗಲೇ ಕೊನೆಯ ಹಂತಕ್ಕೆ ತಲುಪಿದ್ದು. ಈ ಹಿನ್ನಲೆಯಲ್ಲಿ ಜೂ.25 ರಂದು ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಸಮಾರಂಭವನ್ನು ಕರ್ನಾಟಕ ನೀರಾವರಿ ನಿಗಮದ ನೇತೃತ್ವದಲ್ಲಿ ಅದ್ದೂರಿಯಾಗಿ ನಡೆಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಜೂ.25 ರಂದು ಜರುಗಲಿರುವ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಸಮಾರಂಭದಲ್ಲಿ ಕರ್ನಾಟಕದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ರೇವಂತ ರೆಡ್ಡಿ, ಕೇಂದ್ರ ಸರ್ಕಾರದ ನೀರಾವರಿ ಸಚಿವರು ಸೇರಿದಂತೆ ಇನ್ನಿತರ ಗಣ್ಯರು ಭಾಗವಹಿಸಲಿದ್ದಾರೆ.

ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ನಂತರ ಮುನಿರಾಬಾದ್ ನ ಶಾಲಾ ಆವರಣದಲ್ಲಿ ಬೃಹತ್ ಸಮಾರಂಭ ಜರುಗಲಿದೆ. ಅದಕ್ಕಾಗಿ ಈಗಾಗಲೇ ಸ್ಥಳ ಪರಿಶೀಲನೆ ನಡೆಸಲಾಗಿದೆ ಎಂದು ಡಿಸಿ ಕವಿತಾ .ಮಣ್ಣಿಕೇರಿ ತಿಳಿಸಿದರು.ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಸಮಾರಂಭವನ್ನು ಅದ್ದೂರಿಯಾಗಿ ಮತ್ತು ಅಚ್ಚುಕಟ್ಟಾಗಿ ಆಯೋಜಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ.

ಈ ಕುರಿತು ಇತ್ತೀಚೆಗೆ ಬೆಂಗಳೂರಿನಲ್ಲಿ ಜರುಗಿದ ಅಧಿಕಾರಿಗಳ ಸಭೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಟ್ಟುನಿಟ್ಟಿನ ಆದೇಶ ನೀಡಿದ್ದು. ಒಟ್ಟಾರೆಯಾಗಿ ಸಮಾರಂಭವನ್ನು ಸ್ಮರಣೀಯವಾಗಿಸಲು ಸಿಎಂ ಸೂಚನೆ ನೀಡಿದ್ದಾರೆ. ಸಮಾರಂಭದಲ್ಲಿ ವಿಜಯನಗರ, ಬಳ್ಳಾರಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ರೈತ ಮುಖಂಡರು, ರೈತರು ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ. ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಸಮಾರಂಭ ಜೂ.25 ರಂದು ಅದ್ದೂರಿಯಾಗಿ ಜರುಗಲಿದೆ. ಸಮಾರಂಭದಲ್ಲಿ ಕರ್ನಾಟಕ ಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳು ಭಾಗವಹಿಸಲಿದ್ದಾರೆ. ಅದಕ್ಕಾಗಿ ಸಿದ್ಧತಾ ಕಾರ್ಯಭರದಿಂದ ನಡೆಯುತ್ತಿದೆ.

## ರೈತರ ಮೇಲಿನ ವಿಶ್ವಾಸ ಹೆಚ್ಚಿಸಿ, ಸಾಲ ವಿತರಣೆ ಸುಲಭಗೊಳಿಸಿ: ಸಂಸದ ಡಾ.ಮಂಜುನಾಥ್ ಸಲಹೆ

**ಬೆಂಗಳೂರು,ಜೂ.16:** ರಾಮನಗರದ ಬಿ.ಎಂ. ರಸ್ತೆಯಲ್ಲಿರುವ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಬ್ಯಾಂಕರ್‌ಗಳ ಜಿಲ್ಲಾ ಸಮಾಲೋಚನಾ ಸಮಿತಿ ಹಾಗೂ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆಯಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಭಾಗವಹಿಸಿದ್ದರು.



ಸಭೆಯಲ್ಲಿ ಕಿಸಾನ್ ಕ್ರೆಡಿಟ್ ಕಾರ್ಡ್ ಯೋಜನೆಯಡಿ ಸಾಧಿಸಿರುವ ಪ್ರಗತಿ, ಖೇತಿ ಬಚಾವೋ ಅಭಿಯಾನ ಹಾಗೂ ಕೃಷಿಕ ಅಪ್ಲಿಕೇಶನ್, ಪ್ರಧಾನ ಮಂತ್ರಿ ಬೀದಿ ವ್ಯಾಪಾರಿಗಳ ಆತ್ಮನಿರ್ಭರ್ ನಿಧಿ (PM SVANidhi), PM ವಿಶ್ವಕರ್ಮ ಯೋಜನೆ, ಪ್ರಧಾನ ಮಂತ್ರಿ ಮುದ್ರಾ ಯೋಜನೆ (PMMY), PM ಸೂರ್ಯ ಘರ್ ಯೋಜನೆ, ಪ್ರಧಾನ ಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ಯಮಗಳ ಔಪಚಾರಿಕೀಕರಣ ಯೋಜನೆ (PMFME) ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳಾದ PMJJBY, PMSBY ಮತ್ತು APY ಯೋಜನೆಗಳ ಪ್ರಗತಿ ಕುರಿತು ಸಮಗ್ರ ಪರಿಶೀಲನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಾನ್ಯ ಸಂಸದರು, ಕೇಂದ್ರ ಸರ್ಕಾರದ ಜನಪರ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪುವಂತೆ ಬ್ಯಾಂಕುಗಳು ಹಾಗೂ ಸಂಬಂಧಿತ ಇಲಾಖೆಗಳು ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ರೈತರಿಗೆ ಹಾಗೂ ಸಾಮಾನ್ಯ ಜನರಿಗೆ ಯೋಜನೆಗಳ ಕುರಿತು ವ್ಯಾಪಕ ಜಾಗೃತಿ ಮೂಡಿಸಿ, ಅಗತ್ಯವಿರುವ ಎಲ್ಲಾ ಸೌಲಭ್ಯಗಳು ಹಾಗೂ ಬ್ಯಾಂಕ್ ಸಾಲಗಳು ಸಕಾಲದಲ್ಲಿ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಲ್ಲದೆ, ದೇಶದಲ್ಲಿ ಕೆಲವರು ಸಾವಿರಾರು ಕೋಟಿ ರೂಪಾಯಿ ಸಾಲ ಪಡೆದು ಮರುಪಾವತಿ ಮಾಡದೆ ವಿದೇಶಗಳಿಗೆ ತೆರಳುವ ಘಟನೆಗಳು ನಡೆಯುತ್ತವೆ. ಆದರೆ ಸಾಮಾನ್ಯ ಜನರು ಹಾಗೂ ರೈತರು ಪಡೆದ ಸಾಲವನ್ನು ಪ್ರಾಮಾಣಿಕವಾಗಿ ಮರುಪಾವತಿಸುವವರಾಗಿದ್ದಾರೆ. ಆದ್ದರಿಂದ ಬ್ಯಾಂಕುಗಳು ರೈತರು ಮತ್ತು ಸಾಮಾನ್ಯ ಜನರ ಬಗ್ಗೆ ಹೆಚ್ಚಿನ ವಿಶ್ವಾಸ ಇಟ್ಟು, ಅವರಿಗೆ ಅಗತ್ಯವಿರುವ ಸಾಲ ಸೌಲಭ್ಯಗಳನ್ನು ಸುಲಭವಾಗಿ ಒದಗಿಸಬೇಕು ಎಂದು ಸಂಸದ ಡಾ. ಸಿ. ಎನ್. ಮಂಜುನಾಥ್ ರವರು ಅಭಿಪ್ರಾಯಪಟ್ಟರು.

ಈ ಸಭೆಯಲ್ಲಿ ರಾಮನಗರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅನ್ಮೋಲ್ ಜೈನ್, ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕ ವೈ. ಎನ್.ಮೋಹನ್ ಕುಮಾರ್ ಹಾಗೂ ರಾಮನಗರ ಜಿಲ್ಲೆಯ ವಿವಿಧ ಬ್ಯಾಂಕುಗಳ ಮುಖ್ಯಸ್ಥರು ಮತ್ತು ಅಧಿಕಾರಿಗಳು ಉಪಸ್ಥಿತರಿದ್ದರು.

## ಮೋಹನ್ ಭಾಗವತ್ ಹೇಳಿಕೆಗೆ ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಖಂಡನೆ

**ಬೆಂಗಳೂರು, ಜೂ.16:** ಆರೆಸ್ಸೆಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರು ಆರೆಸ್ಸೆಸ್ ಅನ್ನು ಹಿಂದೂ ಧರ್ಮಕ್ಕೆ ಹೋಲಿಕೆ ಮಾಡಿರುವುದು ಅತ್ಯಂತ ಖಂಡನೀಯ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದ್ದಾರೆ. ಹಿಂದೂ ಧರ್ಮವೂ ನೋಂದಣಿಯಾಗಿಲ್ಲ ಎಂಬ ಮೋಹನ್ ಭಾಗವತ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಅವರು, ಸಾವಿರಾರು ವರ್ಷಗಳ ಇತಿಹಾಸ, ಸಂಸ್ಕೃತಿ, ತತ್ವಶಾಸ್ತ್ರ ಮತ್ತು ವೈವಿಧ್ಯವನ್ನು ಹೊಂದಿರುವ ಹಿಂದೂ ಧರ್ಮವನ್ನು ಒಂದು ನಿರ್ದಿಷ್ಟ ಸಂಘಟನೆಯ ಮಟ್ಟಕ್ಕೆ ಇಳಿಸಿ ನೋಡುವುದು ಕೋಟ್ಯಂತರ ಹಿಂದೂಗಳ ಭಾವನೆಗಳಿಗೆ ಅವಮಾನ ಎಂದು ಹೇಳಿದ್ದಾರೆ. ಹಿಂದೂ ಧರ್ಮವು ಯಾವುದೇ ಒಂದು ಸಂಘಟನೆಯ ಸ್ವತ್ತಲ್ಲ. ಅದು ಆರ್‌ಎಸ್‌ಎಸ್‌ಗಿಂತಲೂ ದೊಡ್ಡದು, ವಿಶಾಲವಾದುದು ಮತ್ತು ಎಲ್ಲರನ್ನು ಒಳಗೊಳ್ಳುವ ನಾಗರಿಕತಾ ಪರಂಪರೆ. ವಿವಾದಾತ್ಮಕ ಹಿನ್ನೆಲೆ ಹೊಂದಿರುವ ಒಂದು ಸಂಘಟನೆಯನ್ನು ಸಂಪೂರ್ಣ ಹಿಂದೂ ಸಮಾಜದ ಪ್ರತಿನಿಧಿಯಂತೆ ಬಿಂಬಿಸುವುದು ಸರಿಯೇ ಎಂದು ಅವರು ಪ್ರಶ್ನಿಸಿದ್ದಾರೆ. ಹಿಂದುತ್ವದ ಬಗ್ಗೆ ದಿನವೂ ದೊಡ್ಡ ದೊಡ್ಡ ಭಾಷಣ ಮಾಡುವ ಬಿಜೆಪಿಯ ನಾಯಕರು ಮತ್ತು ಸ್ವಯಂ ಘೋಷಿತ ಹಿಂದೂ ರಕ್ಷಕರು' ಈಗ ಏನು ಹೇಳುತ್ತಾರೆ, ಹಿಂದೂ ಧರ್ಮ ಮತ್ತು ಆರ್‌ಎಸ್‌ಎಸ್ ಒಂದೇ ಎಂದು ಹೇಳುವುದನ್ನು ಅವರು ಒಪ್ಪುತ್ತಾರೆಯೇ ಎಂದು ಬಿ.ಕೆ. ಹರಿಪ್ರಸಾದ್ ಪ್ರಶ್ನಿಸಿದ್ದಾರೆ.

## ರಾಜ್ಯದ ಆರ್ಥಿಕ ಪರಿಸ್ಥಿತಿ ಕುರಿತು ಸಿಎಂ ಬೆಳಕು ಚೆಲ್ಲಲಿ: ಜಾಧವ್

**ಕಲಬುರಗಿ:** ಈಗ ಗ್ಯಾರಂಟಿಗೆ ಹಣ ಹೊಂದಿಸಲು ಸಾಧ್ಯವಾಗದೇ ಫಲಾನುಭವಿಗಳ ಮೇಲೆ ಆರೋಪ ಮಾಡಿಕೊಂಡು ಲಕ್ಷಾಂತರ ಫಲಾನುಭವಿಗಳನ್ನು ಕಡಿತ ಮಾಡಲು ಹೊರಟದ್ದು ಖಂಡಿತ ಸರಿಯಲ್ಲ ಎಂದು ಮಾಜಿ ಸಂಸದ ಡಾ.ಉಮೇಶ ಜಾಧವ ಅವರು ಆಕ್ಷೇಪಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ರಾಜ್ಯದ ಕಾಂಗ್ರೆಸ್ ಸರಕಾರವು ತಾನೇ ಘೋಷಿಸಿದ್ದ ಗ್ಯಾರಂಟಿಗಳ ಬಗ್ಗೆ ವ್ಯತಿರಿಕ್ತ ಹೇಳಿಕೆಗಳನ್ನು ಕೊಡುವುದಲ್ಲದೇ, ಮಾನದಂಡದ ಬದಲಾವಣೆಗಳನ್ನು ಸರಕಾರವೇ ಕೈಗೆತ್ತಿಕೊಂಡಿದೆ ಎಂದು ಟೀಕಿಸಿದರು. ಚುನಾವಣೆ ವೇಳೆ ಪ್ರತಿಯೊಬ್ಬ ಮಹಿಳೆಗೂ ಗೃಹಲಕ್ಷ್ಮಿ ಕೊಡುವುದಾಗಿ ಘೋಷಿಸಿದ್ದೀರಿ. ಬೇರೆ ಬೇರೆ ಯೋಜನೆಗಳನ್ನೂ ಪ್ರಕಟಿಸಿದ್ದೀರಿ ಎಂದು ಗಮನ ಸೆಳೆದರು.

ಗ್ಯಾರಂಟಿ ವಿಚಾರವಾಗಿ ಕೊಟ್ಟ ಮಾತಿನಂತೆ ನಡೆಯುವುದು ಈ ಸರಕಾರದ ಆದ್ಯ ಕರ್ತವ್ಯ ಎಂದ ಅವರು, ರಾಜ್ಯದ ಆರ್ಥಿಕ ಪರಿಸ್ಥಿತಿ ಕುರಿತು ಮುಖ್ಯಮಂತ್ರಿಗಳು ಬೆಳಕು ಚೆಲ್ಲಬೇಕು ಎಂದು ಆಗ್ರಹಿಸಿದರು.ಗ್ಯಾರಂಟಿಗಳ ಅನುಷ್ಠಾನ ಮಾಡಿ ಹಿಮಾಚಲ ಪ್ರದೇಶ ಸರಕಾರ ಯಾವ ರೀತಿ ತೊಂದರೆಗೆ ಈಡಾಗಿದೆಯೋ, ತೆಲಂಗಾಣದಲ್ಲೂ ಕಾಂಗ್ರೆಸ್ ಸರಕಾರ ಇದ್ದು, ಅಲ್ಲಿಯೂ ಇದೇ ಪರಿಸ್ಥಿತಿ ಉಂಟಾಗಿದೆ ಎಂದು ವಿವರಿಸಿದರು. ಸರಕಾರಿ ನೌಕರರಿಗೆ ಸಂಬಳ ಕೊಡಲಾಗದ ಪರಿಸ್ಥಿತಿ ಹಿಮಾಚಲ ಪ್ರದೇಶ, ತೆಲಂಗಾಣದಲ್ಲಿದೆ. ನಮ್ಮ ರಾಜ್ಯದಲ್ಲೂ ಇದೇ ಪರಿಸ್ಥಿತಿಗೆ ಬಂದು ನಿಂತಿದೆ ಎಂದು ತಿಳಿಸಿದರು.

## ಬೆಂಗಳೂರು ಕನ್ನಡ ಸಾಂಸ್ಕೃತಿಕ ರಾಯಭಾರಿಗಳ ದುಂಡು ಮೇಜಿನ ಪರಿಷತ್ ಚಿಂತನಾ ಸಭೆ

**ಬೆಂಗಳೂರು,ಜೂ.16:** ಕೇರಳ –ಕರ್ನಾಟಕ ರಾಜ್ಯದ ಗಡಿನಾಡಿನಲ್ಲಿ ಸ್ಥಾಪನೆಗೊಂಡಿರುವ ಕಾಸರಗೋಡು ಕನ್ನಡ ಗ್ರಾಮದಲ್ಲಿ , ಕೇರಳ ರಾಜ್ಯ ಕನ್ನಡ ಭಾಷಾ ಅಲ್ಪ ಸಂಖ್ಯಾತರ ಸಾಂಸ್ಕೃತಿಕ ಮತ್ತು ಸಾಹಿತ್ಯಿಕ ಸಂಘಟನೆಯಾದ ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ (ರಿ.), ಕಾಸರಗೋಡು ನೇತೃತ್ವದಲ್ಲಿ ತನ್ನ 36 ನೇ ಸಂಸ್ಥಾಪನಾ ವರ್ಷಾಚರಣೆಯ ಸಂಭ್ರಮದ ಪ್ರಯುಕ್ತ ನವಂಬರ್ 7 ಮತ್ತು 8ರಂದು ನಡೆಯುವ ಐತಿಹಾಸಿಕ ಕೇರಳ ರಾಜ್ಯ 8 ನೇ ಕನ್ನಡ ಸಮ್ಮೇಳನ –2026 ಮತ್ತು ಕೇರಳ– ಕರ್ನಾಟಕ ಉತ್ಸವ,ಕೇರಳ– ಕರ್ನಾಟಕ ಕನ್ನಡ ರಾಜ್ಯೋತ್ಸವದ ಉದ್ಘಾಟನೆಗೆ ಕರ್ನಾಟಕ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಾಗೂ ಕೇರಳ ಮುಖ್ಯಮಂತ್ರಿ ವಿ.ಡಿ ಸತೀಶನ್ ಅವರನ್ನು ಆಮಂತ್ರಿಸಲು ಶೀಘ್ರದಲ್ಲೇ ಉನ್ನತ ಮಟ್ಟದ ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳನ್ನೊಳಗೊಂಡ ನಿಯೋಗವನ್ನು ಕೊಂಡೊಯ್ಯಲಾಗುವುದೆಂದು ಬೆಂಗಳೂರು ಬೈರಮಂಗಲ ಬಿಡದಿಯ ವಿರೂಪಾಕ್ಷ ಮಠದ ಡಾ.ನಾಗರಾಜು ಸ್ವಾಮೀಜಿ ಹೇಳಿದರು. ಬೆಂಗಳೂರು ರವೀಂದ್ರ ಕಲಾಕ್ಷೇತ್ರದ ಚಾವಡಿಯಲ್ಲಿ 2026 ಜೂನ್ 10 ರಂದು ಕರ್ನಾಟಕ ರಾಜಧಾನಿಯ ಕನ್ನಡ ಸಾಂಸ್ಕೃತಿಕ ರಾಯಭಾರಿಗಳು,ಸಾಹಿತಿಗಳು, ವಿದ್ವಾಂಸರು,ಕಲಾವಿದರು, ಮಾಧ್ಯಮದವರು, ಉದ್ಯಮಿಗಳು ಆಡಳಿತಾಧಿಕಾರಿಗಳು ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ, ಕನ್ನಡ ಗ್ರಾಮ, ಕಾಸರಗೋಡು ಇದರ ನೇತೃತ್ವದಲ್ಲಿ ನಡೆದ ಬೆಂಗಳೂರು ಕನ್ನಡ ಸಾಂಸ್ಕೃತಿಕ ರಾಯಭಾರಿಗಳ ದುಂಡು ಮೇಜಿನ ಪರಿಷತ್ತು ಚಿಂತನಾ ಸಭೆಯಲ್ಲಿ ಹಲವು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಡಾ. ಶ್ರೀ ಮಠದ ನಾಗರಾಜು ಸ್ವಾಮೀಜಿ ಅವರು ಕಾಸರಗೋಡು ಕನ್ನಡ ಭಾಷೆ, ಸಾಹಿತ್ಯ,ಸಾಂಸ್ಕೃತಿಕ ಕ್ಷೇತ್ರದ ರಾಜಧಾನಿ ಎಂದರು. ಕೇರಳ ರಾಜ್ಯ 8 ನೇ ಕನ್ನಡ ಸಮ್ಮೇಳನ ಮತ್ತು ಕೇರಳ –ಕರ್ನಾಟಕ ಉತ್ಸವ,ಕೇರಳ– ಕರ್ನಾಟಕ ರಾಜ್ಯೋತ್ಸವಕ್ಕೆ ಕರ್ನಾಟಕ ರಾಜ್ಯದ ಹಲವು ಮಠಗಳು, ಸಂಘ ಸಂಸ್ಥೆಗಳ ಸಹಕಾರದೊಂದಿಗೆ ನೂರಾರು ಸಂಖ್ಯೆಯಲ್ಲಿ ಸಾಂಸ್ಕೃತಿಕ ನಿಯೋಗದೊಂದಿಗೆ,ವಿವಿಧ ಮಠಗಳ ಅಭಿಮಾನಿಗಳು ಪ್ರಥಮವಾಗಿ ಗಡಿನಾಡು ಕಾಸರಗೋಡಿಗೆ ಆಗಮಿಸಲಿದ್ದಾರೆ ಎಂದು ಘೋಷಿಸಿದರು.

ಕಾಸರಗೋಡು ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ, ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು,ಕೇರಳ ರಾಜ್ಯ ಘಟಕದ ಅಧ್ಯಕ್ಷ ಶಿವರಾಮ ಕಾಸರಗೋಡು ಅಧ್ಯಕ್ಷತೆ ವಹಿಸಿದ್ದರು.

ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ಬೆಂಗಳೂರು,ನಗರ, ಗ್ರಾಮಾಂತರ ಜಿಲ್ಲಾ ಘಟಕ, ಕನ್ನಡ ಸಾಹಿತ್ಯ ಪರಿಷತ್ತು ಕರ್ನಾಟಕ ಗಣಕ ಪರಿಷತ್ತು, ವಿ.ಕೆ.ಎಂ ಕಲಾವಿದರು ಬೆಂಗಳೂರು ಮತ್ತು ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳಾದ ಎಲ್.ಜಿ ಜ್ಯೋತೀಶ್ವರ, ಸಿ.ಎಂ.ತಿಮ್ಮಯ್ಯ, ಡಾ.ಮಲಕಪ್ಪ – ಮಹೇಶ್, ಗುರುಪ್ರಸಾದ್, ಎಲ್.ಎ.ಕೃಷ್ಣಪ್ಪ, ಸಿ.ವೈ.ಮೆಣಸಿನ ಕಾಯಿ, ಬೈಲಹೊಂಗಲ,ಬದ್ರಿನಾಥ್ ಕಬ್ಬಾಳ್, ಮಾದೇಶಪ್ಪ, ರಾಜೇಶ್ ಬಾಬು, ಡಾ.ಆಶಾ ಕೃಷ್ಣ ಸ್ವಾಮಿ, ಜಿ. ಎಲ್. ನರಶೇಷ ಮೂರ್ತಿ, ಜಿ.ಕೆ.ರವಿ, ಡಾ.ಕೆ.ಎನ್.ಅಡಿಗ ಅಡೂರು, ಡಾ.ಸಿ. ಸೋಮಶೇಖರ ಸಲಹೆ, ಸೂಚನೆ, ಮಾರ್ಗದರ್ಶನ ನೀಡಿದರು.



ನಿರ್ಮಾಪಕ,ಎಲ್. ಜಿ.ಜ್ಯೋತೀಶ್ವರ ಬೆಂಗಳೂರು ದಿಕ್ಸೂಚಿ ಭಾಷಣ ನೀಡಿದರು, ಅವರು ಕನ್ನಡದ ಪ್ರಥಮ ರಾಷ್ಟ್ರಕವಿ ಮಂಜೇಶ್ವರ ಗೋವಿಂದ ಪೈ ನೆಲೆಸಿದ "ರಾಷ್ಟ್ರಕವಿ ನಿವಾಸ"ವನ್ನು ರಾಷ್ಟ್ರ ಮರೆತಿರುವ ರಾಷ್ಟ್ರಕವಿಯ ಸ್ಮಾರಕ ಎಂದು ಪ್ರಸ್ತಾವಿಸಿದರು. ರಾಷ್ಟ್ರಕವಿ ಸ್ಮಾರಕದ ಸಮಗ್ರ ಅಭಿವೃದ್ಧಿಗಾಗಿ ಕೇರಳ– ಕರ್ನಾಟಕ ಸರಕಾರದ ನೂತನ ಮುಖ್ಯಮಂತ್ರಿ ವಿ.ಡಿ ಸತೀಶನ್, ಡಿ. ಕೆ. ಶಿವಕುಮಾರ್ ಹಾಗೂ ಕರ್ನಾಟಕ ಮಾಜಿ ಮುಖ್ಯಮಂತ್ರಿ ಡಾ. ಎಂ. ವೀರಪ್ಪ ಮೊಯ್ಲಿ ಅವರಲ್ಲಿಗೆ ರಾಜ್ಯದ ಹಿರಿಯ ಸಾಹಿತಿಗಳು, ವಿದ್ವಾಂಸರು,ಕಲಾವಿದರು, ಚಲನಚಿತ್ರನಟರು, ಮಾಧ್ಯಮದವರು,ವಿವಿಧ ಸಂಘಟನೆಗಳ ಪ್ರತಿನಿಧಿಗಳನ್ನೊಳಗೊಂಡ ಉನ್ನತ ಮಟ್ಟದ ನಿಯೋಗದೊಂದಿಗೆ ಭೇಟಿಮಾಡಿ ಮನವಿಯನ್ನು ಸಲ್ಲಿಸಲಾಗುವುದು.

**ಕೇರಳ ಸರಕಾರವು ಕೇರಳ ಕನ್ನಡ ಅಕಾಡೆಮಿ ಸ್ಥಾಪಿಸಲು ಮನವಿ :**

ಕೇರಳ ರಾಜ್ಯದಲ್ಲಿ ನೆಲೆಸಿರುವ ಸರ್ವ ಕನ್ನಡಿಗರು, ಕನ್ನಡ ಉಪಭಾಷೆಯ ಜನಾಂಗದವರ ಹಿತರಕ್ಷಣೆಗಾಗಿ ಹಾಗೂ ಕನ್ನಡ ಭಾಷೆ,ಸಾಹಿತ್ಯ, ಸಂಸ್ಕೃತಿ, ಪರಂಪರೆ ಇತಿಹಾಸವನ್ನು ಉಳಿಸಿ ಬೆಳೆಸಲು ಸಮಗ್ರವಾದ ಸಾಂಸ್ಕೃತಿಕ ಕನ್ನಡೀಕರಣ ಯೋಜನೆಯನ್ನು ಸಿದ್ಧಪಡಿಸಿ, ಮುಂದಿನ ಬಜೆಟ್ ನಲ್ಲಿ ಕೇರಳ ಸರಕಾರವು ಒಂದು ಕೋಟಿ ರೂಪಾಯಿ ಮೊತ್ತದ ಕನ್ನಡ ಸಾಂಸ್ಕೃತಿಕ ನಿಧಿಯೊಂದನ್ನು ಸ್ಥಾಪಿಸಿ, ನೂತನವಾಗಿ ಕೇರಳ ಕನ್ನಡ ಅಕಾಡೆಮಿಯನ್ನು ಸ್ಥಾಪಿಸಬೇಕೆಂದು ಪ್ರಸ್ತಾವನೆಯ ಮನವಿಯನ್ನು ಕೇರಳ ಮುಖ್ಯಮಂತ್ರಿ ವಿ.ಡಿ ಸತೀಶನ್ ಅವರಿಗೆ ನೀಡಿ ಒತ್ತಾಯಿಸಲಾಗಿದೆ.

**ಕೇರಳ ಸರಕಾರವು ಮಲಯಾಳಂ ಭಾಷಾ ಬಿಲ್ಸ್ –2025 ಸೂಕ್ತ ತಿದ್ದುಪಡಿಗೆ**

ಆಗ್ರಹಿಸಿ ಕೇರಳ ಮುಖ್ಯ ಮಂತ್ರಿಗೆ ಮನವಿ

ಕೇರಳ ಸರಕಾರವು (ಮಲಯಾಳಂ ಭಾಷಾ ಬಿಲ್ಸ್– 2025) ಮಲಯಾಳ ಭಾಷಾ ಮಸೂದೆಯನ್ನು ಕೇರಳ ವಿಧಾನಸಭೆಯಲ್ಲಿ ಅಂಗೀಕರಿಸಿದ್ದು ಈ ಮಸೂದೆಯನ್ನು ಪುನರ್ ಪರಿಶೀಲಿಸಿ ಸೂಕ್ತ ತಿದ್ದುಪಡಿಗಳನ್ನು ಮಾಡುವುದು ಕಾಸರಗೋಡು ಕನ್ನಡಿಗರು ಹಾಗೂ ಕನ್ನಡ ಮಕ್ಕಳ ಭಾಷಾ ಮತ್ತು ಶೈಕ್ಷಣಿಕ ಹಕ್ಕುಗಳ ಸಂರಕ್ಷಣೆಗಾಗಿ ಕೇರಳ ಹೈಕೋರ್ಟ್‌ನಲ್ಲಿ ರಿಟ್ ಅರ್ಜಿಗಳನ್ನು ಸಲ್ಲಿಸಿ ಕಾನೂನು ಹೋರಾಟ ನಡೆಸುತ್ತಿದ್ದು, ಕಾಸರಗೋಡು ಕನ್ನಡಿಗರ ನ್ಯಾಯಯುತ ಹಕ್ಕುಗಳನ್ನು ಸಂರಕ್ಷಿಸುವ ಜವಾಬ್ದಾರಿಯು ಕಾಸರಗೋಡು ಜಿಲ್ಲೆಯ ಶಾಸಕರು,ಜನಪ್ರತಿನಿಧಿಗಳು ಹಾಗೂ ಕೇರಳ ಸರಕಾರದ ಕರ್ತವ್ಯವಾಗಿದ್ದು,ಈ ಕುರಿತು ಕೇರಳ ಮುಖ್ಯಮಂತ್ರಿ ವಿ. ಡಿ ಸತೀಶನ್ ಅವರಿಗೆ, ಕರ್ನಾಟಕ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಾಗೂ ಅಖಿಲ ಭಾರತ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ಭಾರತೀಯ ಜನತಾ ಪಕ್ಷದ ಕೇರಳ ಘಟಕದ ಅಧ್ಯಕ್ಷ ರಾಜೀವ್ ಚಂದ್ರಶೇಖರ್ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಲಾಗಿದೆ.

ಕೇರಳ ರಾಜ್ಯ 8 ನೇ ಕನ್ನಡ ಸಮ್ಮೇಳನ – 2026 ಮತ್ತು ಕೇರಳ – ಕರ್ನಾಟಕ: ಉತ್ಸವಕ್ಕೆ ಕರ್ನಾಟಕ ಸರ್ಕಾರದಿಂದ ವಿಶೇಷ ಅನುದಾನಕ್ಕೆ ಮನವಿ

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ವೈದ್ಯರು ಕಣ್ಣಿಗೆ ಕಾಣುವ ದೇವರು: ಜನರ ನಂಬಿಕೆ ಉಳಿಸಿಕೊಳ್ಳಿ

## ಬದುಕಿಗೆ ಆದರ್ಶ ಅಗತ್ಯ, ಸಾಧನೆಗೆ ಗುರಿ ಇರಬೇಕು: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ

**ಬೆಂಗಳೂರು, ಜೂ.16:** ವೈದ್ಯರು ಕಣ್ಣಿಗೆ ಕಾಣುವ ದೇವರು. ಜನ ಎಷ್ಟೇ ಕಷ್ಟ ಇದ್ದರೂ ಬಹಳ ನಂಬಿಕೆ ಹಾಗೂ ವಿಶ್ವಾಸದಿಂದ ವೈದ್ಯರ ಬಳಿ ಹೋಗುತ್ತಾರೆ. ನೀವು ಅವರ ನಂಬಿಕೆ ಉಳಿಸಿಕೊಂಡು ಸೇವೆ ಮಾಡಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ವೈದ್ಯ ಪದವೀಧರರಿಗೆ ಕಿವಿಮಾತು ಹೇಳಿದ್ದಾರೆ.

ಬೆಂಗಳೂರಿನ ಜಿಕೆವಿಕೆ ಆವರಣದಲ್ಲಿ ಮಂಗಳವಾರ ನಡೆದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ 28ನೇ ವಾರ್ಷಿಕ ಘಟಿಕೋತ್ಸವದಲ್ಲಿ ಶಿವಕುಮಾರ್ ಮಾತನಾಡಿದರು. ಇದೇ ಸಂದರ್ಭದಲ್ಲಿ ರಾಜ್ಯಪಾಲರ ಜತೆ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದರು

ಈ ವೃತ್ತಿಯಲ್ಲಿ ನಿಮಗೆ ನಿತ್ಯ ಸವಾಲು ಎದುರಾಗುತ್ತದೆ. ನಿಮ್ಮ ಮುಂದೆ ದೊಡ್ಡ ಸ್ಪರ್ಧೆ ಇದೆ. ನಾನು ಬೇರೆ ದೇಶಗಳಲ್ಲಿ ಪ್ರವಾಸ ಮಾಡಿದ್ದೇನೆ. ಅಲ್ಲಿನ ಪ್ರತಿಷ್ಠಿತ ಆಸ್ಪತ್ರೆಗಳಲ್ಲಿ ಭಾರತೀಯರು ಅದರಲ್ಲೂ ಕರ್ನಾಟಕದ ವೈದ್ಯರು ಸೇವೆ ಸಲ್ಲಿಸುತ್ತಿದ್ದಾರೆ. ಇಲ್ಲಿರುವ ಗುಣಮಟ್ಟ ಭಾರತ ಮಾತ್ರವಲ್ಲ, ವಿಶ್ವದಲ್ಲೇ ಎಲ್ಲೂ ಇಲ್ಲ. ಇಲ್ಲಿ ತಯಾರಾದ ವೈದ್ಯರ ಪ್ರತಿಭೆ, ಗುಣಮಟ್ಟ, ಸೇವೆ ಹಾಗೂ ಬದ್ಧತೆಗೆ ಸರಿಸಾಟಿ ಯಾರೂ ಇಲ್ಲ ಎಂದರು.

ನಶೆಮುಕ್ತ ಭಾರತ, ನಶೆಮುಕ್ತ ಕರ್ನಾಟಕ, ನಶೆಮುಕ್ತ ಕ್ಯಾಂಪಸ್ ಮಾಡುವ ಅಭಿಯಾನ ಯಶಸ್ವಿಯಾಗಲಿ. ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಅವರು ವೈದ್ಯರಾಗಿದ್ದು, ಬಹಳ ಆಸಕ್ತಿಯಿಂದ ಈ ಕ್ಷೇತ್ರದಲ್ಲಿ ಸೇವೆ ಸಲ್ಲಿಸಬೇಕು ಎಂದು ಈ ಖಾತೆ ಜವಾಬ್ದಾರಿ ಹೊತ್ತಿದ್ದಾರೆ. ಅವರ ಅವಧಿಯಲ್ಲಿ ಇಲಾಖೆಯನ್ನು ಬಹಳ ಶಿಸ್ತಿನಿಂದ ನಡೆಸುತ್ತಿದ್ದು, ಇಷ್ಟು ಶಿಸ್ತನ್ನು ನಾನು ಕಳೆದ 30 ವರ್ಷಗಳಲ್ಲಿ ನೋಡಿರಲಿಲ್ಲ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

**ಗುಣಮಟ್ಟದ ಶಿಕ್ಷಕರೇ ವಿವಿಯ ಹೆಗ್ಗುರುತು:** ಯಾವುದೇ ಒಂದು ವಿವಿಯ ಶಕ್ತಿ ಎಂದರೆ ಅಲ್ಲಿನ ವಿದ್ಯಾರ್ಥಿಗಳ ಸಂಖ್ಯೆಯಲ್ಲ, ಪದವಿಗಳ ಸಂಖ್ಯೆಯೂ ಅಲ್ಲ. ಅಲ್ಲಿರುವ ಗುಣಮಟ್ಟದ ಶಿಕ್ಷಕರು. ಶಿಕ್ಷಕರು ವಿದ್ಯಾರ್ಥಿಗಳ ಮಾರ್ಗದರ್ಶಕರಾಗಬೇಕು, ಸಂಶೋಧನೆಗೆ ಪೂರಕವಾಗಿ ವಿದ್ಯಾರ್ಥಿಗಳಿಗೆ ಆದರ್ಶವಾಗಿರಬೇಕು. ಎಲ್ಲರೂ ಜತೆಯಾಗಿ ಕೆಲಸ ಮಾಡೋಣ. ಮುಂದೆ ನಾವು ನೀವೆಲ್ಲರೂ ರಾಮನಗರದ ಕ್ಯಾಂಪಸ್ ನಲ್ಲಿ ಸಿಗೋಣ. ಕರ್ನಾಟಕ ಸರ್ಕಾರ ಈ ವಿವಿಗೆ ಅಗತ್ಯವಿರುವ ಎಲ್ಲಾ ಸಹಕಾರವನ್ನು ನೀಡಲು ಬದ್ಧವಾಗಿದೆ ಎಂದು ತಿಳಿಸಿದರು.

ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಬಳಿಕ ನಾನು ಮಾಡುತ್ತಿರುವ ಮೊದಲ ಭಾಷಣವಿದು. ನಾನು ಹುಟ್ಟುತ್ತಾ ಕೃಷಿಕ, ವೃತ್ತಿಯಲ್ಲಿ ಉದ್ಯಮಿ, ಆಯ್ಕೆಯಲ್ಲಿ ಶಿಕ್ಷಣತಜ್ಞ, ಆಸಕ್ತಿಯಲ್ಲಿ ರಾಜಕಾರಣಿ. ರಾಜೀವ್ ಗಾಂಧಿ ವಿವಿ ದೇಶದ ಅತಿದೊಡ್ಡ ಆರೋಗ್ಯ ವಿವಿಗಳಲ್ಲಿ ಒಂದಾಗಿದೆ. 1044 ಅಫಿಲಿಯೇಟೆಡ್ ಕಾಲೇಜುಗಳಿವೆ. ಲಕ್ಷಾಂತರ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ ಎಂದು ತಿಳಿಸಿದರು.




ಬೆಂಗಳೂರಿನ ಜಿಕೆವಿಕೆ ಆವರಣದಲ್ಲಿ ನಡೆದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿವಿ 28ನೇ ವಾರ್ಷಿಕ ಘಟಿಕೋತ್ಸವದಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿದರು. ರಾಜ್ಯಪಾಲರಾದ ಥಾವರ್ ಚಂದ್ ಗೆಹಲೋಟ್, ವಿಶ್ವ ವಿದ್ಯಾಲಯದ ಉಪಕುಲಪತಿ ಡಾ. ಬಿ ಸಿ ಭಗವಾನ್, ರಿಜಿಸ್ಟ್ರಾರ್ ಗಳಾದ ಅರ್ಜುನ್ ಒಡೆಯರ್, ರಿಯಾಜ್ ಬಾಷಾ ಮತ್ತಿತರರು ಉಪಸ್ಥಿತರಿದ್ದರು.

### ರಾಜ್ಯದಲ್ಲಿ ಪ್ರತಿವರ್ಷ 13,940 ವೈದ್ಯರ ತಯಾರಿ

ನಮ್ಮ ರಾಜ್ಯ ಪ್ರತಿ ವರ್ಷ 72 ಸಾವಿರ ಪದವೀಧರರನ್ನು ತಯಾರಿಸುತ್ತಿದೆ. ವರ್ಷಕ್ಕೆ 13,940 ವೈದ್ಯರನ್ನು ಕೊಡುಗೆಯಾಗಿ ನೀಡುತ್ತಿದ್ದು, ಜಗತ್ತಿನಲ್ಲೇ ಅತಿ ಹೆಚ್ಚು ವೈದ್ಯರನ್ನು ನೀಡುತ್ತಿರುವುದು ನಮ್ಮ ರಾಜ್ಯ. ಅಟಲ್ ಬಿಹಾರಿ ವಾಜಪೇಯಿ ಅವರು ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಶಂಕುಸ್ಥಾಪನೆಗೆ ಬಂದಾಗ, ವಿಶ್ವದ ನಾಯಕರು ಮೊದಲು ದೆಹಲಿಗೆ ಬಂದು, ನಂತರ ದೇಶದ ಇತರೆ ಭಾಗಗಳಿಗೆ ಹೋಗುತ್ತಿದ್ದರು. ಈಗ ಕಾಲ ಬದಲಾಗುತ್ತಿದೆ. ಮೊದಲು ಬೆಂಗಳೂರಿಗೆ ಬಂದು ನಂತರ ದೇಶದ ಇತರೆ ಭಾಗಗಳಿಗೆ ಹೋಗುತ್ತಿದ್ದಾರೆ ಎಂದು ಹೇಳಿದರು. ನಮ್ಮ ರಾಜ್ಯ ಕೇವಲ ಐಟಿ ಕ್ಷೇತ್ರ ಮಾತ್ರವಲ್ಲ ಇತರೆ ಕ್ಷೇತ್ರಗಳಲ್ಲಿ ಪ್ರತಿಭಾವಂತ ಮಾನವ ಸಂಪನ್ಮೂಲವನ್ನು ಹೊಂದಿದೆ. ಬೆಂಗಳೂರಿನಲ್ಲಿ 26 ಲಕ್ಷ ಐಟಿ ವೃತ್ತಿಪರರಿದ್ದಾರೆ. ಕ್ಯಾಲಿಫೋರ್ನಿಯಾದಲ್ಲಿ 13 ಲಕ್ಷ ಐಟಿ ವೃತ್ತಿಪರರಿದ್ದಾರೆ. ನಮ್ಮ ರಾಜ್ಯದಲ್ಲೇ ಅತಿಹೆಚ್ಚು ಮೆಡಿಕಲ್ ಕಾಲೇಜುಗಳಿವೆ. 72 ವೈದ್ಯಕೀಯ ಕಾಲೇಜುಗಳಿದ್ದು, ದೇಶದ ಬೇರೆ ಯಾವುದೇ ರಾಜ್ಯಗಳಲ್ಲಿ ಇಲ್ಲ. ಇದು ನಮ್ಮ ಶಕ್ತಿ. ಇಲ್ಲಿ ತಯಾರಾದ ಅತ್ಯುತ್ತಮ ವೈದ್ಯರು, ನರ್ಸ್‌ಗಳು ವಿಶ್ವದಾದ್ಯಂತ ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ವಿವರಿಸಿದರು.

ರಾಜೀವ್‌ಗಾಂಧಿ ವಿವಿ ಇದಕ್ಕೆಲ್ಲಾ ಆಧಾರಸ್ತಂಭವಾಗಿ ನಿಂತಿದೆ. ಈ ವಿವಿಗೆ ನಮ್ಮ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಹೆಸರಿನಲ್ಲಿದೆ. ಅವರು ಶಿಕ್ಷಣವು ಸಮಾಜದಲ್ಲಿ ಸಮಾನತೆ ತರುವ ಸಾಧನ ಎಂದು ಹೇಳಿದವರು. ಈ ವಿವಿ ಕಳೆದ 3 ದಶಕಗಳಲ್ಲಿ 8 ಲಕ್ಷ ಪದವೀಧರರನ್ನು ತಯಾರು ಮಾಡಿದೆ. ಸಮಾಜದ ಎಲ್ಲಾ ವರ್ಗಕ್ಕೆ ಆರೋಗ್ಯ ಸೇವೆ ನೀಡಿ ಕಾಪಾಡುವುದು ಈ ವಿವಿಯ ಮೂಲ ಉದ್ದೇಶ ಎಂದರು.

### ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸಿ, ಜನ ನಗರಗಳತ್ತ ಬರುವುದನ್ನು ತಪ್ಪಿಸಿ

ಭಾರತ ಈಗ ಸಾಮಾಜಿಕ ಹಾಗೂ ತಂತ್ರಜ್ಞಾನ ಪರಿವರ್ತನೆಯ ತಿರುವಿನಲ್ಲಿದೆ. ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಅತ್ಯಾಧುನಿಕ ಅವಿಷ್ಕಾರ ಕಂಡಿದೆ. ನೀವು ಕೇವಲ ನಗರ ಪ್ರದೇಶಗಳಲ್ಲಿ ಆರೋಗ್ಯ ಸೇವೆ ಒದಗಿಸುವುದರ ಬಗ್ಗೆ ಮಾತ್ರ ಗಮನ ಹರಿಸಬಾರದು. ಗ್ರಾಮೀಣ ಪ್ರದೇಶದಲ್ಲೂ ಆರೋಗ್ಯ ಸೇವೆ ಒದಗಿಸುವತ್ತ ಗಮನಹರಿಸಬೇಕು ಎಂದು ಡಿ.ಕೆ. ಶಿವಕುಮಾರ್ ಕರೆ ನೀಡಿದರು.

# ಮಳೆ ಕೊರತೆ: ಪರ್ಯಾಯ ಜಲಮೂಲ ಗುರುತಿಸಿ



■ ಅಧಿಕಾರಿಗಳಿಗೆ ಸಚಿವ ಈಶ್ವರ ಖಂಡ್ರೆ ಸೂಚನೆ

**ಬೆಂಗಳೂರು, ಜೂ. 16:** ರಾಜ್ಯದಲ್ಲಿ ಮಳೆ ಕೊರತೆಯ ಮುನ್ಸೂಚನೆ ಹಿನ್ನೆಲೆಯಲ್ಲಿ ಪರ್ಯಾಯ ಜಲಮೂಲಗಳನ್ನು ಗುರುತಿಸಿ, ನೀರಿನ ಪರೀಕ್ಷೆ ಮಾಡಿ ಸನ್ನದ್ಧ ಸ್ಥಿತಿಯಲ್ಲಿರುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಕಾರ್ಯದರ್ಶಿಗಳಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಅವರು, ಜೂನ್ ಮಧ್ಯಭಾಗದ ಹೊತ್ತಿಗೆ ರಾಜ್ಯದಲ್ಲಿ ವಾಡಿಕೆಯಂತೆ ಆಗಬೇಕಿದ್ದ ಮಳೆ ಆಗಿಲ್ಲ, ಎಲ್ ನಿನೋ ಪ್ರಭಾವದಿಂದಾಗಿ ಮುಂಗಾರು ಮಳೆ ಕೊರತೆ ಉಂಟಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ, ಈ ಹಿನ್ನೆಲೆಯಲ್ಲಿ ಮುಂಜಾಗರೂಕತಾ ಕ್ರಮ ಕೈಗೊಳ್ಳುವಂತೆ ತಿಳಿಸಿದ್ದಾರೆ.ಈ ಬಾರಿ ರಾಜ್ಯದಲ್ಲಿ ಮಳೆಯ ಸರಾಸರಿ ಪ್ರಮಾಣ ಮತ್ತು ಸರಾಸರಿ ಮಳೆಯ ಅವಧಿ ಕಡಿಮೆ ಆಗುವ ಭೀತಿ ಎದುರಾಗಿದ್ದು, ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರುವ ಅಪಾಯವೂ ಇದೆ. ಈ ನಿಟ್ಟಿನಲ್ಲಿ ಎಲ್ಲ ಗ್ರಾಮ ಪಂಚಾಯ್ತಿ ಮಟ್ಟದಲ್ಲಿ ಹಾಲಿ ನೀರು ಪೂರೈಕೆ ಮಾಡುತ್ತಿರುವ ಜಲ ಮೂಲಗಳ ಜೊತೆಗೆ ಪರ್ಯಾಯ ಜಲ ಮೂಲಗಳನ್ನು ಗುರುತಿಸಿ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯ ಆಗದಂತೆ ಕ್ರಮ ಕೈಗೊಳ್ಳುವ ಅಗತ್ಯ ಮನಗಾಣಲಾಗಿದೆ ಎಂದು ತಿಳಿಸಿದ್ದಾರೆ.ಈ ಸಂಬಂಧ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಖಾಸಗಿ ತೆರೆದ ಬಾವಿ, ಕೊಳವೆ ಬಾವಿಗಳನ್ನು ಗುರುತಿಸಿ, ಆ ಬಾವಿಗಳ ನೀರಿನ ಪ್ರಮಾಣ, ಲಭ್ಯತೆ ಖಚಿತಪಡಿಸಿಕೊಂಡು ನೀರು ಕುಡಿಯಲು ಯೋಗ್ಯವಾಗಿದೆಯೇ ಇಲ್ಲವೇ ಎಂಬ ಬಗ್ಗೆ ಪರೀಕ್ಷೆ ನಡೆಸಿ, ಅಂತಹ ಖಾಸಗಿ ಜಲ ಮೂಲಗಳ ಮಾಲೀಕರೊಂದಿಗೆ ಮಾತನಾಡಿ, ಅಗತ್ಯ ಬಿದ್ದಲ್ಲಿ ನೀರು ಬಳಕೆ ಮಾಡುವ ಬಗ್ಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಂಡು ಸನ್ನದ್ಧ ಸ್ಥಿತಿಯಲ್ಲಿರುವಂತೆ ಅವರು ಸೂಚಿಸಿದ್ದಾರೆ.

# ವಿಜಯಪುರ ಜಿಲ್ಲೆಗೆ ಮತ್ತೊಂದು ಸಚಿವ ಸ್ಥಾನ ಅಗತ್ಯ: ಎಂ.ಬಿ. ಪಾಟೀಲ್



■ ಇಂತಹವರಿಗೆ ಕೊಡಿ ಎನ್ನಲ್ಲ, ಹೈಕಮಾಂಡ್, ಸಿಎಂ ವಿವೇಚನೆಗೆ ಬಿಟ್ಟಿದ್ದು

**ಬೆಂಗಳೂರು, ಜೂ.16:** ವಿಜಯಪುರ ಜಿಲ್ಲೆಗೆ ಮತ್ತೊಂದು ಸಚಿವ ಸ್ಥಾನ ನೀಡಬೇಕು ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಜಯಪುರ ಜಿಲ್ಲೆಯಲ್ಲಿ ಐವರು ಶಾಸಕರಿದ್ದು, ಇಂತವರಿಗೆ ಸಚಿವ ಸ್ಥಾನ ಕೊಡಿ ಎಂದು ಹೇಳುವುದಿಲ್ಲ. ಯಾರಿಗೆ ಸಚಿವ ಸ್ಥಾನ ನೀಡಬೇಕೆಂಬುದು ಪಕ್ಷದ ಹೈಕಮಾಂಡ್ ಹಾಗೂ ಮುಖ್ಯಮಂತ್ರಿಗಳ ವಿವೇಚನೆಗೆ ಬಿಟ್ಟ ವಿಚಾರ. ಕೇಳುವುದು ಮಾತ್ರ ಕರ್ತವ್ಯ ಎಂದರು. ಎಲ್ಲಾ ಶಾಸಕರೂ ಸಚಿವರಾಗಲು ಅರ್ಹರಿದ್ದು, ಸಚಿವ ಸ್ಥಾನ ಕೇಳುವುದರಲ್ಲಿ ತಪ್ಪಿಲ್ಲ. ಸಚಿವಾಕಾಂಕ್ಷಿಗಳು ಸಚಿವ ಸ್ಥಾನಕ್ಕಾಗಿ ಬೇಡಿಕೆ ಇಡುವುದು ತಪ್ಪಿಲ್ಲ. ಇದರ ಬಗ್ಗೆ ಹೈಕಮಾಂಡ್ ಸೂಕ್ತ ತೀರ್ಮಾನ ಕೈಗೊಳ್ಳುತ್ತದೆ ಎಂದು ಹೇಳಿದರು.

ಬೆಂಗಳೂರು ಅಭಿವೃದ್ಧಿ ಸಚಿವ ಶಿಸ್ತಿನ ಸಿಪಾಯಿಯಾಗಿದ್ದು, ಮಂತ್ರಿ ಮಾಡದಿದ್ದರೂ ಪರವಾಗಿಲ್ಲ ಎಂದಿದ್ದರು. ಅಸಮಾಧಾನದ ವಿಚಾರದ ಬಗ್ಗೆ ಹೈಕಮಾಂಡ್ ನಿರ್ಧಾರ ಮಾಡಲಿದೆ ಎಂದರು.

ಮೃತಪಟ್ಟವರಿಗೆ, ಅನರ್ಹರಿಗೆ ಗ್ಯಾರಂಟಿ ಯೋಜನೆ ಫಲ ದೊರೆಯುವುದನ್ನು ತಪ್ಪಿಸಲು ಪರಿಷ್ಕರಣೆ ಮಾಡಲಾಗುತ್ತಿದೆ. ಬಿಜೆಪಿಯವರು ನಮ ಗ್ಯಾರಂಟಿ ವಿರೋಧಿಸುತ್ತಾ ಬೇರೆ ರಾಜ್ಯಗಳಲ್ಲಿ ಅದನ್ನು ಜಾರಿ ಮಾಡಿದ್ದಾರೆ ಎಂದು ಆರೋಪಿಸಿದರು. ದೇಶದ ಆರ್ಥಿಕ ಪರಿಸ್ಥಿತಿ ಬಗ್ಗೆ ಶ್ವೇತಪತ್ರ ಹೊರಡಿಸಲು ಪ್ರಧಾನಿಯವರನ್ನು ಬಿಜೆಪಿಯವರು ಆಗ್ರಹಿಸಲಿ. ಪೆಟ್ರೋಲ್, ಡೀಸೆಲ್, ಅಡುಗೆ ಅನಿಲದ ಬೆಲೆಗಳು ಹೆಚ್ಚಾಗಿವೆ. ಅಚ್ಛೇ ದಿನ್ ಇನ್ನೂ ಬಂದಿಲ್ಲ ಎಂದು ಟೀಕಿಸಿದರು.

### ಕೈ ಶಾಸಕರಿಂದ ಜೆಡಿಎಸ್ ಸಂಪರ್ಕ ಕೇವಲ ವದಂತಿ

ವಿಧಾನ ಪರಿಷತ್‌ಗೆ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಐವರು ಅಭ್ಯರ್ಥಿಗಳನ್ನು ಕಣಕ್ಕಿಳಿಸಲಾಗಿದೆ. ನಮಗೆ ಯಾವುದೇ ರೀತಿಯ ಆತಂಕ ಇಲ್ಲ. ಅದು ಬೇರೆಯವರಿಗೆ ಇರಬೇಕು. 10 ರಿಂದ 15 ಶಾಸಕರು ಕೇಂದ್ರ ಸಚಿವ ಕುಮಾರಸ್ವಾಮಿಯವರ ಸಂಪರ್ಕದಲ್ಲಿದ್ದಾರೆ ಎಂಬ ಊಹಾಪೋಹ ಹಬ್ಬಿಸುವ ಕೆಲಸವಾಗುತ್ತಿದೆ. ಇದು ರಿವರ್ಸ್ ಆಗಿರಬೇಕು ಎಂದರು. ಇಂದು ನಡೆಯುವ ಶಾಸಕಾಂಗ ಪಕ್ಷದ ಸಭೆಯಲ್ಲಿ ಚುನಾವಣೆ ಕುರಿತಂತೆ ಚರ್ಚೆ ಮಾಡುತ್ತೇವೆ. ನಮ್ಮಲ್ಲಿ ಯಾವುದೇ ರೀತಿಯ ಗೊಂದಲವಿಲ್ಲ. ಸಿದ್ದರಾಮಯ್ಯನವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ಯುವಕರಿಗೆ ಅವಕಾಶ ಮಾಡಿಕೊಡಿ ಎಂದು ಹೈಕಮಾಂಡ್ ಹೇಳಿತ್ತು. ಅದರಂತೆ ನಡೆದುಕೊಂಡಿದ್ದಾರೆ. ರಾಜೀನಾಮೆ ನಂತರ ಅವರ ವರ್ಚಸ್ಸು ವೃದ್ಧಿಸಿದೆ ಎಂದು ಪಾಟೀಲ್ ಹೇಳಿದರು.



ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಕಿರಣ್ ಮಜುಂದಾರ್ ಶಾ, ಸುರೇಶ್, ಗೀತಾಂಜಲಿ ಕಿರ್ಲೋಸ್ಕರ್, ವಿಕ್ರಂ ವಿಶ್ವನಾಥ್, ಮೋಹನ್ ಸುರೇಶ್, ಶಬೀನಾ ಸುಲ್ತಾನ, ಕಾರ್ತಿಕ್ ತಲ್ಲಮ್, ರಾಘವೇಂದ್ರ ಪೂಜಾರಿ, ರವಿಶಂಕರ್ ಮತ್ತಿತರರನ್ನು ಒಳಗೊಂಡ ವಿವಿಧ ದೇಶಗಳ ರಾಯಭಾರಿಗಳ ನಿಯೋಗವು ವಿಧಾನಸೌಧದ ಸಿಎಂ ಕಚೇರಿಯಲ್ಲಿ ಮಂಗಳವಾರ ಭೇಟಿಯಾಗಿ ಅಭಿನಂದನೆ ಸಲ್ಲಿಸಿತು.

# 5700 ಕೋಟಿ ರೂ. ಹೂಡಿಕೆಯ ನಿರಾಣಿ ಗ್ರೂಪ್‌ನ ಅರ್ಜಿ ತಿರಸ್ಕೃತ

**ಬಾಗಲಕೋಟೆ, ಜೂ.16:** ರಾಜ್ಯದಲ್ಲಿ 5,700 ಕೋಟಿ ರೂ. ವೆಚ್ಚದಲ್ಲಿ ವಿಮಾನ ಇಂಧನ ಉತ್ಪಾದನಾ ಘಟಕ ಮತ್ತು ಬಯೋಪ್ಲಾಸ್ಟಿಕ್ ಘಟಕಗಳ ಸ್ಥಾಪನೆಗೆ ಅನುಮತಿ ಕೋರಿ ನಿರಾಣಿ ಗ್ರೂಪ್ ಸಲ್ಲಿಸಿದ್ದ ಅರ್ಜಿ ತಿರಸ್ಕರಿಸಲಾಗಿದ್ದು, ಇಲ್ಲಿ ಅವಕಾಶ ಸಿಗದಿದ್ದರೆ ಬೇರೆ ರಾಜ್ಯಗಳಲ್ಲಿ ಹೂಡಿಕೆ ಅನಿವಾರ್ಯ ಆಗುತ್ತದೆ ಎಂದು ಮಾಜಿ ಸಚಿವ ಮುರುಗೇಶ್ ನಿರಾಣಿ ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಬೇರೆ ದೇಶ, ಬೇರೆ ರಾಜ್ಯದ ಹೂಡಿಕೆದಾರರನ್ನು ಆಹ್ವಾನಿಸಲಾಗುತ್ತದೆ. ಆದರೆ, ರಾಜ್ಯದವರೇ ಆಸಕ್ತಿ ತೋರಿದರೆ, ತಿರಸ್ಕರಿಸಲಾಗುತ್ತದೆ. ಅರ್ಜಿ ತಿರಸ್ಕರಿಸಿದ್ದಕ್ಕೆ ಕಾರಣ ತಿಳಿಸಬೇಕು ಎಂದು ಆಗ್ರಹಿಸಿದರು. ಜಪಾನ್ ಸಂಸ್ಥೆ ಪಾಲುದಾರಿಕೆ ಇರಲಿದ್ದು, ಈ ಘಟಕಗಳ ಸ್ಥಾಪನೆಗೆ ಮಹಾರಾಷ್ಟ್ರದ ಮುಖ್ಯಮಂತ್ರಿ ಶೇ.50ರಷ್ಟು ಸಬ್ಸಿಡಿ ನೀಡುವುದಾಗಿ ಹೇಳಿದ್ದರೆ, ರಿಯಾಯಿತಿ ದರದಲ್ಲಿ 400 ಎಕರೆ ಭೂಮಿ ಕೊಡುವುದಾಗಿ ತಿಳಿಸಿದ್ದಾರೆ. ಏಷ್ಯಾದಲ್ಲಿ ನಿರಾಣಿ ಗ್ರೂಪ್ ಅತಿ ಹೆಚ್ಚು ಎಥೆನಾಲ್ ಉತ್ಪಾದನೆ ಮಾಡುತ್ತಿದೆ. ಕೇಂದ್ರ ಸರ್ಕಾರವು ವಾಹನಗಳಿಗೆ ಶೇ 100ರಷ್ಟು ಎಥೆನಾಲ್ ಬಳಕೆಗೆ ಅನುಮತಿ ನೀಡಿರುವುದನ್ನು ಸ್ವಾಗತಿಸುತ್ತೇನೆ. ಇದರಿಂದ ಪೆಟ್ರೋಲ್ ಆಮದಿನ ಹೊರೆ ಕಡಿಮೆಯಾಗಲಿದೆ ಎಂದರು.

# ಆರ್‌ಎಸ್‌ಎಸ್ ಇತಿಹಾಸ, ಕೊಡುಗೆ ತಿಳಿಯದೆ ಮಾತನಾಡುವುದು ಬೇಜವಾಬ್ದಾರಿ



■ ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಬಿಜೆಪಿ ನಾಯಕ ಛಲವಾದಿ ನಾರಾಯಣಸ್ವಾಮಿ ವಾಗ್ದಾಳಿ

**ಬೆಂಗಳೂರು, ಜೂ.16:** ರಾಷ್ಟ್ರೀಯ ಸ್ವಯಂಸೇವಕ ಸಂಘದ ಸೈದ್ಧಾಂತಿಕ ಹಿನ್ನೆಲೆ ಹಾಗೂ ದೇಶಭಕ್ತಿಯ ಕುರಿತು ಸಚಿವ ಪ್ರಿಯಾಂಕ್ ಖರ್ಗೆ ವ್ಯಕ್ತಪಡಿಸಿದ ನಿಲುವುಗಳ ವಿರುದ್ಧ ಛಲವಾದಿ ನಾರಾಯಣಸ್ವಾಮಿ ವಾಗ್ದಾಳಿ ನಡೆಸಿದ್ದಾರೆ. ಕಾಂಗ್ರೆಸ್ ಪಕ್ಷವು ಸದಾ ಸಂಘದ ವಿಚಾರದಲ್ಲಿ ಹಗೆತನ ಸಾಧಿಸುತ್ತಾ ಬಂದಿದೆ. ಆರ್‌ಎಸ್‌ಎಸ್ ಯಾವುದೇ ರಾಜಕೀಯ ಲಾಭಕ್ಕಾಗಿ ಕೆಲಸ ಮಾಡುವ ಸಂಘಟನೆಯಲ್ಲ ಎಂಬುದನ್ನು ಸಚಿವರು ಅರ್ಥ ಮಾಡಿಕೊಳ್ಳಬೇಕು ಎಂದಿದ್ದಾರೆ. ಸಂಘಟನೆಯ ಇತಿಹಾಸ ಮತ್ತು ಅದರ ಸಾಮಾಜಿಕ ಕೊಡುಗೆಗಳ ಬಗ್ಗೆ ಕನಿಷ್ಠ ಜ್ಞಾನವಿಲ್ಲದೆ ಮಾತನಾಡುವುದು ಬೇಜವಾಬ್ದಾರಿತನ ಎಂದು ಅವರು ಕಟುವಾಗಿ ಟೀಕಿಸಿದ್ದಾರೆ.

ರಾಷ್ಟ್ರದ ಸಾಂಸ್ಕೃತಿಕ ಪರಂಪರೆಯನ್ನು ಎತ್ತಿಹಿಡಿಯುವಲ್ಲಿ ಮತ್ತು ಯುವಜನರಲ್ಲಿ ದೇಶಪ್ರೇಮದ ಭಾವನೆಯನ್ನು ಬಿತ್ತುವಲ್ಲಿ ಆರ್‌ಎಸ್‌ಎಸ್ ದಶಕಗಳಿಂದ ಶ್ರಮಿಸುತ್ತಿದೆ. ಸಂಘಟನೆಯನ್ನು ನಿಷೇಧಿಸುವ ಅಥವಾ ಅದರ ಕಾರ್ಯಕರ್ತರನ್ನು ಕಡೆಗಣಿಸುವ ಯಾವುದೇ ಪ್ರಯತ್ನಗಳು ಸಫಲವಾಗುವುದಿಲ್ಲ. ಸರ್ಕಾರದ ವೈಫಲ್ಯಗಳನ್ನು ಮುಚ್ಚಿಹಾಕಲು ಕಾಂಗ್ರೆಸ್ ನಾಯಕರು ಇಂತಹ ವಿವಾದಾತ್ಮಕ ವಿಷಯಗಳನ್ನು ಮುನ್ನೆಲೆಗೆ ತರುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಇದೇ ರೀತಿ ಈ ಹಿಂದೆಯೂ ಸಾಕಷ್ಟು ಗಾಂಪರು, ಕಾಂಗ್ರೆಸ್ ನಾಯಕರು ಆರ್.ಎಸ್.ಎಸ್ ಬಗ್ಗೆ ಪ್ರಶ್ನೆ ಮಾಡಿದ್ದರು. ಆ ಎಲ್ಲರಿಗೂ ತಕ್ಕ ಉತ್ತರ ಸಿಕ್ಕಿದೆ, ಅಧಿಕಾರದ ಮದದಲ್ಲಿ ಸಾಂಸ್ಕೃತಿಕ ಮತ್ತು ರಾಷ್ಟ್ರೀಯ ಮೌಲ್ಯಗಳನ್ನು ಗೌರವಿಸುವುದನ್ನು ಸಚಿವರು ಮರೆಯಬಾರದು ಎಂದು ಎಚ್ಚರಿಸುವ ಮೂಲಕ ತಮ್ಮ ವಿರೋಧವನ್ನು ಸ್ಪಷ್ಟಪಡಿಸಿದ್ದಾರೆ.

# ಪೌರಕಾರ್ಮಿಕರ ಎಲ್ಲ ಬೇಡಿಕೆ ಈಡೇರಿಕೆಗೆ ಪೂರಕ ಕ್ರಮ



**ಬೆಂಗಳೂರು, ಜೂ.13:** ಪೌರ ಕಾರ್ಮಿಕರ ನೇರ ಪಾವತಿ ವ್ಯವಸ್ಥೆ ಅಡಿ ನೇಮಕಾತಿ, ಪೌರ ಕಾರ್ಮಿಕರ ಕಾಯಂಗೊಳಿಸುವಿಕೆ, ಕಸ ಗೂಡಿಸುವವರು, ಲೋಡ್ ಮಾಡುವವರು, ಕಸದ ವಾಹನಗಳ ಡ್ರೈವರ್‌ಗಳನ್ನು ಪೌರ ಕಾರ್ಮಿಕರನ್ನಾಗಿ ಪರಿಗಣಿಸುವುದು ಸೇರಿದಂತೆ ಪೌರ ಕಾರ್ಮಿಕರ ಎಲ್ಲಾ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಸರ್ಕಾರ ಪೂರಕವಾದ ಕ್ರಮಗಳನ್ನು, ಆದ್ಯತೆಯ ಮೇಲೆ ಕೈಗೊಳ್ಳಲಿದೆ ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಹೇಳಿದ್ದಾರೆ.

ಗೃಹ ಕಚೇರಿಯಲ್ಲಿ ಕರ್ನಾಟಕ ರಾಜ್ಯ ನಗರ ಪಾಲಿಕೆ, ನಗರಸಭೆ, ಪುರಸಭೆಗಳ ಪೌರ ಕಾರ್ಮಿಕರ ಮಹಾಸಂಘದ ಪದಾಧಿಕಾರಿಗಳ ಜತೆ ಮಂಗಳವಾರ ಸಭೆ ನಡೆಸಿದ ಸಚಿವರು, ಪೌರ ಕಾರ್ಮಿಕರ ಬೇಡಿಕೆಗಳ ಸಂಬಂಧ ತ್ವರಿತವಾಗಿ ಕ್ರಮ ಕೈಗೊಳ್ಳುವಂತೆ ನಗರಾಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಅಧ್ಯಕ್ಷರಾದ ನಾರಾಯಣ್ ಅವರು ಸರ್ಕಾರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 29,000 ಜನ ನೇರ ವೇತನ ಪೌರಕಾರ್ಮಿಕರನ್ನು ಕಾಯಂ ಮಾಡಿರುವ ಸರ್ಕಾರದ ಕ್ರಮವನ್ನು ಸ್ವಾಗತಿಸುತ್ತೇವೆ. ಅದೇ ರೀತಿ ಇನ್ನೂ ಬಾಕಿ ಉಳಿದಿರುವ ಸುಮಾರು 6,800 ಜನ ಪೌರಕಾರ್ಮಿಕರನ್ನು ಸಹ ಶೀಘ್ರವಾಗಿ ಕಾಯಂಗೊಳಿಸಬೇಕು ಎಂದು ಮನವಿ ಮಾಡಿದರು. ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಪದ್ಧತಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ಸ್ವಚ್ಛತಾ ವಾಹನ ಚಾಲಕರು, ಲೋಡರ್‌ಗಳು, ಕ್ಲೀನರ್‌ಗಳು ಕಾರ್ಮಿಕರನ್ನು ಹೊರಗುತ್ತಿಗೆ ಪದ್ಧತಿಯಿಂದ ಮುಕ್ತಗೊಳಿಸಿ, ನೇರ ಪಾವತಿ ವ್ಯವಸ್ಥೆಗೆ ಒಳಪಡಿಸಬೇಕು. ಕೆ.ಎಂ.ಸಿ ಕಾಯ್ದೆಯ ಪ್ರಕಾರ ಇವರೆಲ್ಲರೂ ಪೌರಕಾರ್ಮಿಕರೆಂದು ಇರುತ್ತದೆ ಎಂದರು. ಪೌರಕಾರ್ಮಿಕರು, ವಾಹನ ಚಾಲಕರು ಹಾಗೂ ಲೋಡರ್‌ಗಳಿಗೆ ನಗದುರಹಿತ ಆರೋಗ್ಯ ಸೇವೆ ಒದಗಿಸುವ ಸಂಜೀವಿನಿ ಆರೋಗ್ಯ ಯೋಜನೆ . ಜಾರಿಗೊಳಿಸಬೇಕು. ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ನೇರ ಪಾವತಿ ಅಡಿಯಲ್ಲಿ ಪೌರಕಾರ್ಮಿಕರಾಗಿ ಕೆಲಸ ನಿರ್ವಹಿಸುತ್ತಿದ್ದ ವೇಳೆ ಮೃತಪಟ್ಟ ಪೌರಕಾರ್ಮಿಕರ ಕುಟುಂಬದ ಸದಸ್ಯರಿಗೆ ಅನುಕಂಪದ ಆಧಾರದ ಮೇಲೆ ಕೆಲಸ ನೀಡಬೇಕು. ನೇರ ಪಾವತಿ ಅಡಿಯಲ್ಲಿ ಕಾರ್ಯನಿರ್ವಹಿಸಿ ನಿವೃತ್ತಿ ಹೊಂದಿರುವ ಪೌರಕಾರ್ಮಿಕರಿಗೆ ಸರ್ಕಾರದಿಂದ ವಿಶೇಷ ಆರ್ಥಿಕ ನೆರವು ನೀಡಬೇಕು. ಪೌರಕಾರ್ಮಿಕರ ಅವಲಂಬಿತ ವಿದ್ಯಾರ್ಥಿಗಳ ಶಿಕ್ಷಣದ ಅನುಕೂಲಕ್ಕಾಗಿ ಶಾಲಾ ಮತ್ತು ಕಾಲೇಜು ಶುಲ್ಕವನ್ನು ಸ್ಥಳೀಯ ಸಂಸ್ಥೆಗಳ ಮೂಲಕ ಭರಿಸುವಂತೆ ಸರ್ಕಾರ ಆದೇಶ ಹೊರಡಿಸಬೇಕು. ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ 670 ಜನ ಒಳಚರಂಡಿ ಸಹಾಯಕ ಪೌರಕಾರ್ಮಿಕರ ಪೈಕಿ 477 ಜನರನ್ನು ಈಗಾಗಲೆ ಖಾಯಂಗೊಳಿಸಲು ಸರ್ಕಾರ ನಿರ್ಧರಿಸಿರುವುದು ಸ್ವಾಗತಾರ್ಹ. ಬಾಕಿ ಉಳಿದಿರುವ 193 ಕಾರ್ಮಿಕರನ್ನು ಸಹ ಶೀಘ್ರವಾಗಿ ಖಾಯಂಗೊಳಿಸುವುದರ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಇನ್ನೂ ಅನೇಕ ಬೇಡಿಕೆಗಳನ್ನು ಅವರು ಸರ್ಕಾರಕ್ಕೆ ಸಲ್ಲಿಸಿದರು. ನಿಮ್ಮ ಎಲ್ಲಾ ಬೇಡಿಕೆಗಳನ್ನು ಸರ್ಕಾರ ಸಹಾನುಭೂತಿಯಿಂದ ಪರಿಗಣಿಸಿ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ಸಚಿವರು ಭರವಸೆ ನೀಡಿದರು.

ಸಭೆಯಲ್ಲಿ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಬಿ.ಬಿ.ಕಾವೇರಿ, ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರಾದ ರವೀಂದ್ರ, ಪೌರಕಾರ್ಮಿಕರ ಸಂಘದ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ರಸ್ತೆ ನಿರ್ಮಿಸೋದು ರಾಕೆಟ್ ವಿಜ್ಞಾನವೇ, ಗುಂಡಿ ಇಲ್ಲದೆ ರಸ್ತೆ ನಿರ್ಮಾಣ ಆಗಲ್ಲವೇ..?

### ಜಿಬಿಎ ಅಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ತರಾಟೆ

### ಬೆಂಗಳೂರು ಅಭಿವೃದ್ಧಿ ಕಾರ್ಯಗಳ ಮಾಹಿತಿ ಸಂಗ್ರಹ

**ಬೆಂಗಳೂರು, ಜೂ.16:** ಸಚಿವರಾಗಿ ಇಲಾಖೆಯ ಅಧಿಕಾರ ವಹಿಸಿಕೊಂಡ ಬಳಿಕ ನಡೆಸಿದ ಮೊದಲ ಸಭೆಯಲ್ಲೇ ಸಚಿವ ಕೃಷ್ಣ ಬೈರೇಗೌಡ ಅವರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಜಿಬಿಎ ಕೇಂದ್ರ ಕಚೇರಿಯಲ್ಲಿ ತಮ್ಮ ಅಧ್ಯಕ್ಷತೆಯಲ್ಲಿ ಮಂಗಳವಾರ ಮೊದಲ ಸಭೆ ನಡೆಸಿದ ಕೃಷ್ಣಬೈರೇಗೌಡ, ಬೆಂಗಳೂರಿನ ಸಮಸ್ಯೆಗಳ ಬಗ್ಗೆ ಜಿಬಿಎ ಅಧಿಕಾರಿಗಳ ಜತೆ ಚರ್ಚೆ ನಡೆಸಿದ ಸಚಿವರು, ರಸ್ತೆಯಲ್ಲಿ ಗುಂಡಿ ಯಾಕೆ ಬೀಳುತ್ತೆ, ರಸ್ತೆ ನಿರ್ಮಾಣ ಮಾಡೋದು ರಾಕೆಟ್ ಸೈನ್ಸಾ, ರಸ್ತೆ ಗುಂಡಿ ದುರಸ್ತಿ ಮಾಡೋದೇ ವರ್ಷಪೂರ್ತಿ ಅಂತಾರೆ. ಗುಂಡಿ ಇಲ್ಲದೆ ರಸ್ತೆ ಮಾಡಲು ಆಗಲ್ವಾ ಎಂದು ತರಾಟೆ ತೆಗೆದುಕೊಂಡರು.

ನಗರದಲ್ಲಿ ಇದುವರೆಗೆ ಅಗಿರುವ ಕಾಮಗಾರಿಗಳು ಹಾಗೂ ಅಭಿವೃದ್ಧಿ ಕಾರ್ಯ, ಸದ್ಯ ನಗರದಲ್ಲಿ ನಡೆಯುತ್ತಿರುವ ವೈಟ್ ಟಾಪಿಂಗ್, ಕೆರೆಗಳ ಅಭಿವೃದ್ಧಿ, ರಸ್ತೆ ಅಭಿವೃದ್ಧಿ ಬಗ್ಗೆ ಮಾಹಿತಿ ಪಡೆದರು. ಕಂದಾಯ ವಸೂಲಿ, ಬಾಕಿ ಇರುವ ಕಂದಾಯದ ವಸೂಲಿ ಬಗ್ಗೆ ಚರ್ಚೆ ನಡೆಸಿದ್ದು, ಇ ಖಾತಾ ಎಷ್ಟು ಅಗಿದೆ. ಎಷ್ಟು ಅರ್ಜಿ ಬಂದಿದೆ ಅನ್ನೋ ಬಗ್ಗೆ ಮಾಹಿತಿ ಸಂಗ್ರಹಿಸಿದರು. ಈ ಸಭೆಯಲ್ಲಿ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್‌ರಾವ್, ಐದು ಪಾಲಿಕೆಗಳ ಆಯುಕ್ತರು ಹಾಗೂ ಅಧಿಕಾರಿಗಳು ಭಾಗವಹಿಸಿದ್ದರು.

**ರಾಜಕಾಲುವೆ ನೀರು ರಸ್ತೆಗೆ ಹರಿದರೆ ಕ್ರಮ:** ರಾಜಕಾಲುವೆ ಹೂಳು ಎತ್ತುವ ಬಗ್ಗೆ ಇಂಜಿನಿಯರ್‌ಗಳಿಗೆ ಪ್ರಶ್ನೆ ಮಾಡಿದ ಸಚಿವರು, ಮಳೆ ಬಂದಾಗ ನಗರದ ರಾಜಕಾಲುವೆಯ ಮೋರಿ ನೀರು ರಸ್ತೆಗೆ ಹರಿಯುತ್ತದೆ. ಈ ಬಗ್ಗೆ ಇದುವರೆಗೆ ಕ್ರಮ ಕೈಗೊಂಡಿಲ್ಲ. ಮುಂದಿನ ದಿನಗಳಲ್ಲಿ ಮಳೆ ಬಂದಾಗ ರಾಜಕಾಲುವೆ ನೀರು ರಸ್ತೆಗೆ ಬಂದರೆ ಇಂಜಿನಿಯರ್ ಮೇಲೆ ಕ್ರಮದ ಎಚ್ಚರಿಕೆ ನೀಡಿದರು. ನನ್ನ ಕನಸಿನ ಬೆಂಗಳೂರು ಸಿಂಪಲ್ ಇದೆ. ಇಲ್ಲಿ ವಾಸ ಮಾಡುವ ಜನರೇ ನನಗೆ ಪ್ರಾಮುಖ್ಯ ಇವತ್ತಿಗೂ ಸಹ ಬೆಂಗಳೂರಲ್ಲಿ ಇರುವಷ್ಟು ರಿಯಲ್‌ಎಸ್ಟೇಟ್ ಬೇಡಿಕೆ ಬೇರೆ ಎಲ್ಲಿಯೂ ಇಲ್ಲ. ಬೇರೆ ನಗರದಲ್ಲಿ ಸಮಸ್ಯೆ ಇಲ್ಲವಾ, ದೆಹಲಿಯಲ್ಲಿ ಸಾರಿಗೆ ಸಮಸ್ಯೆ ಇಲ್ವಾ? ಆದರೆ ಬೆಂಗಳೂರಿನ ಸಮಸ್ಯೆ ಹೆಚ್ಚು ಸುದ್ದಿ ಆಗುತ್ತದೆ, ಏನಾದರೂ ಒಂದು ರೂಪದಲ್ಲಿ ಸಮಸ್ಯೆ ಬಗಹರಿಸುತ್ತೇವೆ ಎಂದು ಕೃಷ್ಣಬೈರೇಗೌಡ ಹೇಳಿದರು.

### 13 ದಿನದ ನಂತರ ಜವಾಬ್ದಾರಿ ವಹಿಸಿಕೊಂಡ ಸಚಿವರು



ಹದಿಮೂರು ದಿನಗಳ ಖಾತೆ ಹಂಚಿಕೆ, ಅಧಿಕಾರ ಹಂಚಿಕೆಯ ಅಸಮಾಧಾನ ನಂತರ ಸಚಿವ ಕೃಷ್ಣ ಭೈರೇಗೌಡ ಅವರು ಮಂಗಳವಾರ ಬೆಂಗಳೂರು ನಗರಾಭಿವೃದ್ಧಿ ಖಾತೆಯ ಜವಾಬ್ದಾರಿಯನ್ನು ವಹಿಸಿಕೊಂಡಿದ್ದಾರೆ. ಖಾತೆ ಹಂಚಿಕೆಯಲ್ಲಿ ಪೂರ್ಣ ಪ್ರಮಾಣದ ಅಧಿಕಾರ ಸಿಕ್ಕಿಲ್ಲ ಎಂಬ ಕಾರಣಕ್ಕೆ ಅವರು ಬೇಸರಗೊಂಡಿದ್ದರು. ಆದರೆ ಸಚಿವರ ಮುನಿಸನ್ನು ಎಐಸಿಸಿ ಪ್ರಧಾನ ಕಾರ್ಯದರ್ಶಿ ಮತ್ತು ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಂದೀಪ್ ಸಿಂಗ್ ಸುರ್ಜೇವಾಲ ಮನವೊಲಿಸುವ ಮೂಲಕ ಶಮನ ಮಾಡಿದರು.

### ಮುನಿಸು ಮರೆತು ಕೆಲಸ ಆರಂಭಿಸಿದ ರಾಮಲಿಂಗಾರೆಡ್ಡಿ



ಖಾತೆ ಹಂಚಿಕೆ ವಿಚಾರವಾಗಿ ಅಸಮಾಧಾನದಿಂದಿದ್ದ ಸಚಿವ ರಾಮಲಿಂಗಾರೆಡ್ಡಿ ಮಂಗಳವಾರದಿಂದ ಇಲಾಖೆಯ ಕಾರ್ಯಭಾರ ಆರಂಭಿಸಿದ್ದಾರೆ. ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರು ಮುನಿಸು ಮರೆತು ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದರು. ಬೆಂಗಳೂರಿಗೆ ಮರಳಿದ ಬಳಿಕ ಬೇರೆ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡಿದ್ದ ರಾಮಲಿಂಗಾ ರೆಡ್ಡಿಯವರು ಮಂಗಳವಾರ ಇಲಾಖೆಯ ಅಧಿಕಾರಿಗಳ ಜೊತೆ ಔಪಚಾರಿಕ ಸಭೆ ನಡೆಸಬೇಕಿತ್ತು. ಆದರೆ ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಸಂಜೆ ರೆಸಾರ್ಟ್‌ಗೆ ತೆರಳಬೇಕಿದ್ದರಿಂದ ಹಾಗೂ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾರ್ಯದ ಒತ್ತಡದಲ್ಲಿರುವುದರಿಂದ ರಾಮಲಿಂಗಾರೆಡ್ಡಿಯವರ ಸಮ್ಮುಖದಲ್ಲಿ ನಡೆಯಬೇಕಿದ್ದ ನೀರಾವರಿ ನಿಗಮಗಳ ಸಭೆ ಮುಂದೂಡಿಕೆಯಾಗಿದೆ.

# ಪ್ಯಾರಿಸ್ ಒಪ್ಪಂದದ ಅಡಿಯಲ್ಲಿ ಭಾರತ, ಜಪಾನ್ ಇಂಗಾಲದ ಡೈಆಕ್ಸೈಡ್ ವ್ಯಾಪಾರಕ್ಕಾಗಿ ನಿಯಮ ನಿಗದಿ

ನವದೆಹಲಿ, ಜೂನ್ 16: ಪ್ಯಾರಿಸ್ ಹವಾಮಾನ ಒಪ್ಪಂದದ ಅಡಿಯಲ್ಲಿ ಜಂಟಿ ಕ್ರೆಡಿಟ್ ಮೆಕ್ಯಾನಿಸಮ್ (ಜೆಸಿಎಂ) ಎಂಬ ಹೊಸ ಇಂಗಾಲದ ಕ್ರೆಡಿಟ್ ಪಾಲುದಾರಿಕೆಗಾಗಿ ಭಾರತ ಮತ್ತು ಜಪಾನ್ ಮಾರ್ಗದರ್ಶಿ ಪ್ರೋಟೋಕಾಲ್ ಅನ್ನು ಅಂತಿಮಗೊಳಿಸಿವೆ ಎಂದು ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ. ಹೊಸ ವ್ಯವಸ್ಥೆಯ ಭಾಗವಾಗಿ, ಹಸಿರುಮನೆ ಅನಿಲ ಹೊರಸೂಸುವಿಕೆಯನ್ನು ಕಡಿಮೆ ಮಾಡಲು ಅಥವಾ ತೆಗೆದುಹಾಕಲು ಯೋಜನೆಗಳಿಗೆ ಹಣಕಾಸು ಒದಗಿಸಲು ಭಾರತ ಜಪಾನಿನ ಹೂಡಿಕೆ ಮತ್ತು ತಂತ್ರಜ್ಞಾನವನ್ನು ಸ್ವೀಕರಿಸುತ್ತದೆ. ಎರಡೂ ದೇಶಗಳ ನಡುವೆ ಕಾರ್ಬನ್ ಡೈಆಕ್ಸೈಡ್ ಸಹ ಹಂಚಿಕೊಳ್ಳಬಹುದು, ಇದು ಅವರ ಹವಾಮಾನ ಗುರಿಗಳನ್ನು ಪೂರೈಸಲು ಸಹಾಯ ಮಾಡುತ್ತದೆ ಎಂದು ಅಧಿಕಾರಿಗಳು ಹೇಳಿದರು. ಕಳೆದ ವರ್ಷ ಎರಡೂ ರಾಷ್ಟ್ರಗಳು ಜೆಸಿಎಂಗಾಗಿ ಸಹಕಾರ ಜ್ಞಾಪಕ ಪತ್ರಕ್ಕೆ (ಎಂಒಸಿ) ಸಹಿ ಹಾಕಿದ್ದರೂ, ಕಾರ್ಯವಿಧಾನದ ಅನುಷ್ಠಾನಕ್ಕೆ ನಿಯಮಗಳನ್ನು ಜೂ.8 ರಂದು ಅಂಗೀಕರಿಸಲಾಯಿತು ಎಂದು ಸಚಿವಾಲಯ ಮಂಗಳವಾರ ಹೇಳಿಕೆಯಲ್ಲಿ ಸ್ಪಷ್ಟಪಡಿಸಿದೆ. "ಭಾರತ ಗಣರಾಜ್ಯ ಸರ್ಕಾರ ಮತ್ತು ಜಪಾನ್ ಸರ್ಕಾರವು ಜೂನ್ 8, 2026 ರಂದು ಯುನೈಟೆಡ್ ನೇಷನ್ಸ್ ಫ್ರೇಮ್ವರ್ಕ್ ಕನ್ವೆನ್ಷನ್ ಆನ್ ಕ್ಲೈಮೇಟ್ ಚೇಂಜ್ (ಯುಎನ್‌ಎಫ್ಸಿಸಿ) ಅಡಿಯಲ್ಲಿ ಪ್ಯಾರಿಸ್ ಒಪ್ಪಂದದ ಆರ್ಟಿಕಲ್ 6.2 ರ ಅಡಿಯಲ್ಲಿ ಜಂಟಿ ಕ್ರೆಡಿಟ್ ಮೆಕ್ಯಾನಿಸಂನ 'ಅನುಷ್ಠಾನದ ನಿಯಮ'ವನ್ನು ಅಳವಡಿಸಿಕೊಂಡಿದೆ" ಎಂದು ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ. ಹಸಿರುಮನೆ ಅನಿಲ ಹೊರಸೂಸುವಿಕೆ ಕಡಿತ ಅಥವಾ ತೆಗೆದುಹಾಕುವಿಕೆಯನ್ನು ನೀಡುವ ತಗ್ಗಿಸುವಿಕೆ ಚಟುವಟಿಕೆಗಳ ಸಹಯೋಗಕ್ಕಾಗಿ



ಎಂಒಸಿ ಒಂದು ಚೌಕಟ್ಟನ್ನು ಸ್ಥಾಪಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ, ಅದೇ ಸಮಯದಲ್ಲಿ ಭಾರತದಲ್ಲಿ ಸುಸ್ಥಿರ ಅಭಿವೃದ್ಧಿ ಫಲಿತಾಂಶಗಳನ್ನು ಬೆಂಬಲಿಸುತ್ತದೆ ಮತ್ತು ಎರಡೂ ದೇಶಗಳ ರಾಷ್ಟ್ರೀಯವಾಗಿ ನಿರ್ಧರಿಸಿದ ಕೊಡುಗೆಗಳ ಸಾಧನೆಗೆ ಕೊಡುಗೆ ನೀಡುತ್ತದೆ.

ಅನುಷ್ಠಾನದ ನಿಯಮವನ್ನು ವಿಸ್ತರಿಸುತ್ತಾ, ನಿಯಮಗಳು ಬಲವಾದ ಆಡಳಿತ ವ್ಯವಸ್ಥೆಗಳನ್ನು ನೀಡುತ್ತವೆ, ಇದರಲ್ಲಿ ಎರಡೂ ಸರ್ಕಾರಗಳ ಪ್ರತಿನಿಧಿಗಳನ್ನು ಒಳಗೊಂಡಿರುವ ಜಂಟಿ ಸಮಿತಿ, ಪಾರದರ್ಶಕ ಯೋಜನಾ ಅನುಮೋದನೆ ಕಾರ್ಯವಿಧಾನಗಳು, ಮೂರನೇ ವ್ಯಕ್ತಿಯ ಮೌಲ್ಯೀಕರಣ ಮತ್ತು ಪರಿಶೀಲನೆ, ಸುಸ್ಥಿರ ಅಭಿವೃದ್ಧಿ ಸುರಕ್ಷತೆಗಳು ಮತ್ತು ಕ್ರೆಡಿಟ್ಗಳ ವಿತರಣೆ ಮತ್ತು ವರ್ಗಾವಣೆಯನ್ನು ಪತ್ತೆಹಚ್ಚಲು ರಾಷ್ಟ್ರೀಯ ನೋಂದಣಿಗಳು ಸೇರಿವೆ. "ಜಂಟಿ ಕ್ರೆಡಿಟ್ ಕಾರ್ಯವಿಧಾನವು ಹವಾಮಾನ ಕ್ರಮಕ್ಕೆ ಭಾರತದ ದೃಢ ಬದ್ಧತೆಯನ್ನು ಪ್ರದರ್ಶಿಸುತ್ತದೆ. ಇದು ಹವಾಮಾನ ಬದಲಾವಣೆ ತಗ್ಗಿಸುವಿಕೆ ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಬೆಂಬಲಿಸಲು ಭಾರತದಲ್ಲಿ ಕಡಿಮೆ–ಇಂಗಾಲದ ತಂತ್ರಜ್ಞಾನಗಳನ್ನು ಒಳಗೊಂಡ ಯೋಜನೆಗಳಿಗೆ ಹೂಡಿಕೆ, ತಂತ್ರಜ್ಞಾನ ವರ್ಗಾವಣೆ ಮತ್ತು ಸಾಮರ್ಥ್ಯ–ವರ್ಧನೆಯನ್ನು ವೇಗವರ್ಧಿಸುತ್ತದೆ" ಎಂದು ಸಚಿವಾಲಯ ಹೇಳಿದೆ. ಇದು ಪ್ಯಾರಿಸ್ ಒಪ್ಪಂದದ ಅಡಿಯಲ್ಲಿ ಹವಾಮಾನ ಕ್ರಮಕ್ಕೆ ಭಾರತದ ಬದ್ಧತೆಯನ್ನು ಬಲಪಡಿಸುತ್ತದೆ.

## ಜಿ7 ಶೃಂಗಸಭೆಯಲ್ಲಿ ಭಾರತೀಯ ನಾವಿಕರ ಸಾವಿನ ಬಗ್ಗೆ ಮೋದಿ ಪ್ರಸ್ತಾಪಿಸಲು ಪ್ರಿಯಾಂಕಾ ಒತ್ತಾಯ

**ನವದೆಹಲಿ, ಜೂ.16:** ಫ್ರಾನ್ಸ್‌ನಲ್ಲಿ ನಡೆಯಲಿರುವ ಜಿ7 ಶೃಂಗಸಭೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ಸಭೆಗೆ ಮುನ್ನ, ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಮಂಗಳವಾರ ಪ್ರಧಾನಿ ಅವರನ್ನು ಇತ್ತೀಚಿನ ಅಮೆರಿಕದ ದಾಳಿಗಳಲ್ಲಿ ಸಾವನ್ನಪ್ಪಿದ್ದಾರೆ ಎಂದು ವರದಿಯಾದ ಮೂವರು ಭಾರತೀಯ ನಾವಿಕರ ವಿಷಯವನ್ನು ಪ್ರಸ್ತಾಪಿಸುವಂತೆ ಒತ್ತಾಯಿಸಿದರು, ಈ ವಿಷಯದ ಬಗ್ಗೆ ಸರ್ಕಾರದ ಮೌನವನ್ನು ಅವರು ಪ್ರಶ್ನಿಸಿದ್ದಾರೆ.

ಇಬ್ಬರು ನಾಯಕರ ನಡುವಿನ ಚರ್ಚೆಗಳಲ್ಲಿ ಭಾರತೀಯ ಪ್ರಜೆಗಳ ಸಾವುಗಳು ಪ್ರಮುಖ ಪಾತ್ರ ವಹಿಸಬೇಕು ಎಂದು ಪ್ರಿಯಾಂಕಾ ಗಾಂಧಿ ಹೇಳಿದರು. "ಯುಎಸ್ ದಾಳಿಯಲ್ಲಿ ಮೂವರು ಭಾರತೀಯ ನಾವಿಕರ ಹತ್ಯೆಯ ವಿಷಯವನ್ನು ಪ್ರಧಾನಿ ಎತ್ತಬೇಕು ಎಂದು ನಾನು ಭಾವಿಸುತ್ತೇನೆ. ಏನಾಗುತ್ತಿದೆ ಎಂಬುದರ ಕುರಿತು ನಾವು ಮಾತನಾಡದಿರುವುದು ಆಶ್ಚರ್ಯಕರವಾಗಿದೆ" ಎಂದು ಅವರು ಹೇಳಿದರು.

ಜಿ7 ಶೃಂಗಸಭೆಯ ಅಂಚಿನಲ್ಲಿ ಮೋದಿ ಮತ್ತು ಟ್ರಂಪ್ ನಡುವಿನ ನಿರೀಕ್ಷಿತ ದ್ವಿಪಕ್ಷೀಯ ನಿಶ್ಚಿತಾರ್ಥದ ಮೇಲೆ ಗಮನ ಕೇಂದ್ರೀಕರಿಸುತ್ತಿರುವಾಗ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಯವರ ಹೇಳಿಕೆಗಳು ಬಂದಿವೆ, ಅಲ್ಲಿ ಭೌಗೋಳಿಕ ರಾಜಕೀಯ, ಕಾರ್ಯತಂತ್ರ ಮತ್ತು ಆರ್ಥಿಕ ವಿಷಯಗಳ ಕುರಿತು ಚರ್ಚಿಸುವ ಸಾಧ್ಯತೆಯಿದೆ. ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಅಸ್ಥಿರತೆ, ಕಡಲ ಭದ್ರತೆಯ ಬಗೆಗಿನ ಕಳವಳ ಮತ್ತು ಜಾಗತಿಕ ವ್ಯಾಪಾರ ಮತ್ತು ಇಂಧನ ಪೂರೈಕೆಗಳ ಮೇಲೆ ಪ್ರಾದೇಶಿಕ ಸಂಘರ್ಷಗಳ ಪ್ರಭಾವದ ಹಿನ್ನೆಲೆಯಲ್ಲಿ ಈ ಸಭೆ ಮಹತ್ವದ್ದಾಗಿದೆ. ಈ ಹಿನ್ನೆಲೆಯಲ್ಲಿ, ಭಾರತೀಯ



ನಾವಿಕರ ಸಾವುಗಳು ತುರ್ತು ಗಮನಕ್ಕೆ ಅರ್ಹವಾಗಿವೆ ಎಂದು ಪ್ರಿಯಾಂಕಾ ಗಾಂಧಿ ಹೇಳಿದರು.

ಸರ್ಕಾರವು ಭಾರತದ ಕಳವಳವನ್ನು ಸ್ಪಷ್ಟವಾಗಿ ವ್ಯಕ್ತಪಡಿಸಬೇಕು ಮತ್ತು ಉನ್ನತ ಮಟ್ಟದ ಮಾತುಕತೆಯ ಸಮಯದಲ್ಲಿ ಉತ್ತರಗಳನ್ನು ಪಡೆಯಬೇಕು ಎಂದು ಪ್ರತಿಪಾದಿಸಿದರು.

ವಿದೇಶಗಳಲ್ಲಿ ಭಾರತೀಯ ನಾಗರಿಕರನ್ನು ರಕ್ಷಿಸುವಲ್ಲಿ ಮತ್ತು ಅಂತರರಾಷ್ಟ್ರೀಯ ಮಿಲಿಟರಿ ಕ್ರಮಗಳಿಂದ ಭಾರತೀಯರ ಜೀವಗಳಿಗೆ ತೊಂದರೆಯಾದಾಗಲೆಲ್ಲಾ ಹೊಣೆಗಾರಿಕೆಯನ್ನು ಖಚಿತಪಡಿಸಿಕೊಳ್ಳುವಲ್ಲಿ ಹೆಚ್ಚು ಪೂರ್ವಭಾವಿ ನಿಲುವನ್ನು ತೆಗೆದುಕೊಳ್ಳಬೇಕೆಂದು ಕಾಂಗ್ರೆಸ್ ಸರ್ಕಾರವನ್ನು ಪದೇ ಪದೇ ಒತ್ತಾಯಿಸಿದೆ. ನಡೆಯುತ್ತಿರುವ ಪ್ರಾದೇಶಿಕ ಉದ್ವಿಗ್ನತೆಗೆ ಸಂಬಂಧಿಸಿದ ದಾಳಿಗಳಲ್ಲಿ ಮೂವರು ಭಾರತೀಯ ನಾವಿಕರು ಪ್ರಾಣ ಕಳೆದುಕೊಂಡಿದ್ದಾರೆ ಎಂಬ ವರದಿಗಳ ನಂತರ ಈ ವಿಷಯವು ಮತ್ತೆ ಗಮನ ಸೆಳೆದಿದೆ.

# ಎನ್‌ಸಿಪಿಐ ಜತೆ ಟಿಎಂಸಿ ಬಂಡಾಯ ಸಂಸದರ ವಿಲೀನ ಕಾನೂನು ಸಲಹೆ ಪಡೆಯಲು ಸ್ಪೀಕರ್ ಚಿಂತನೆ

**ನವದೆಹಲಿ, ಜೂ. 16:** ಟಿಎಂಸಿಯಲ್ಲಿ ಬಂಡಾಯ ಎದ್ದಿರುವ ಸಂಸದರು ತಮ್ಮ ಬಣವನ್ನು ತ್ರಿಪುರಾದ ಸಣ್ಣಪಕ್ಷವಾದ "ಎನ್‌ಸಿಪಿಐ" ಜೊತೆ ವಿಲೀನ ಮಾಡಲು ಮುಂದಾಗಿದ್ದಾರೆ. ಅದಕ್ಕಾಗಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಮನವಿ ಸಲ್ಲಿಸಿದ್ದಾರೆ. ಇದು ಅಧಿಕೃತ ಟಿಎಂಸಿ ಮತ್ತು ಬಂಡಾಯ ಬಣದ ನಡುವೆ ಕಾನೂನು ಹೋರಾಟ ನಡೆಯುವ ಸಾಧ್ಯತೆಯನ್ನು ಹೆಚ್ಚಿಸಿದೆ. ಈ ಹಿನ್ನೆಲೆಯಲ್ಲಿ, ಎನ್‌ಸಿಪಿಐ ಜೊತೆ ಟಿಎಂಸಿಯ ಬಂಡಾಯ ಬಣದ ವಿಲೀನಕ್ಕೆ ಸಮ್ಮತಿ ನೀಡುವ ಬಗ್ಗೆ ಓಂ ಬಿರ್ಲಾ ಅವರು ಕಾನೂನು ಸಲಹೆ ಪಡೆದುಕೊಳ್ಳುವ ಸಾಧ್ಯತೆಗಳಿವೆ ಎಂದು ತಿಳಿದುಬಂದಿದೆ. ಜುಲೈ ಮೂರನೇ ವಾರದಲ್ಲಿ ಆರಂಭವಾಗುವ ಸಂಸತ್ತಿನ ಮುಂಗಾರು ಅಧಿವೇಶನಕ್ಕೂ ಮುನ್ನ ಟಿಎಂಸಿ ಬಂಡಾಯ ಗುಂಪಿನ ಬೇಡಿಕೆಯ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಹೇಳಲಾಗಿದೆ. ಟಿಎಂಸಿ ಬಣ ಮತ್ತು ಎನ್ಸಿಪಿಐ ವಿಲೀನಕ್ಕೆ ಸ್ಪೀಕರ್ ಅವಕಾಶ ನೀಡಿದರೆ ಮತ್ತು ಅದನ್ನು ಅಧಿಕೃತ ಟಿಎಂಸಿ ನ್ಯಾಯಾಲಯದಲ್ಲಿ ಪ್ರಶ್ನಿಸಿದರೆ, ಏನೆಲ್ಲ ಮಾಡಬೇಕು ಎಂಬುದರ ಬಗ್ಗೆ ಕಾನೂನು ಸಚಿವಾಲಯದಿಂದ ಓಂ ಬಿರ್ಲಾ ಅವರು ಲಿಖಿತ ಸಲಹೆ ಪಡೆದುಕೊಳ್ಳಲಿದ್ದಾರೆ ಎಂದು ವರದಿಯಾಗಿದೆ. ರಾಜಕೀಯ ಪಕ್ಷದ ನಾಯಕತ್ವವು ಮತ್ತೊಂದು ರಾಜಕೀಯ ಪಕ್ಷದೊಂದಿಗೆ ವಿಲೀನಗೊಳ್ಳಲು ನಿರ್ಧರಿಸಿದರೆ, ಅದರ ಶಾಸಕರು ಮತ್ತು ಸಂಸದರು ಆ ವಿಲೀನಕ್ಕೆ ಒಪ್ಪಿಕೊಳ್ಳಬೇಕಾಗುತ್ತದೆ.

ಆದರೆ ಸಂಸದರು ಅಥವಾ ಶಾಸಕರು ಮಾತ್ರವೇ ಮತ್ತೊಂದು ರಾಜಕೀಯ ಪಕ್ಷದೊಂದಿಗೆ ವಿಲೀನಗೊಳ್ಳಲು ಸಾಧ್ಯವಿಲ್ಲ. ಇದು ಸಾಂವಿಧಾನಿಕ ನಿಯಮವಾಗಿದೆ ಎಂದು ಲೋಕಸಭೆಯ ಮಾಜಿ ಪ್ರಧಾನ ಕಾರ್ಯದರ್ಶಿ ಮತ್ತು ಸಂವಿಧಾನ ತಜ್ಞ ಪಿ.ಡಿ.ಟಿ. ಆಚಾರಿ ಹೇಳಿದ್ದಾರೆ. ಮತ್ತೊಂದೆಡೆ, ಎನ್ಸಿಪಿಐ ರಾಷ್ಟ್ರೀಯ ಕಾರ್ಯದರ್ಶಿ ಶಂತನು ಡೇ ಮಾತನಾಡಿ, ಪಕ್ಷದ ಅಧ್ಯಕ್ಷರು ಇತರ ಪದಾಧಿಕಾರಿಗಳೊಂದಿಗೆ ಯಾವುದೇ ವಿಲೀನ ಪ್ರಸ್ತಾಪದ ಬಗ್ಗೆ ಚರ್ಚಿಸಿಲ್ಲ. ಈ ನಿರ್ಧಾರಕ್ಕೆ ಸಾಂಸ್ಥಿಕ ಅನುಮೋದನೆ ಇಲ್ಲ. ಪಕ್ಷದ ಅಧ್ಯಕ್ಷರು ಪಕ್ಷದೊಳಗೆ ವಿಲೀನದ ಬಗ್ಗೆ ಎಂದಿಗೂ ಮಾತನಾಡಿಲ್ಲ. ಇಂತಹ ನಿರ್ಧಾರಗಳನ್ನು ಅವರೊಬ್ಬರೇ ತೆಗೆದುಕೊಳ್ಳಲು ಸಾಧ್ಯವಿಲ್ಲ, ಎಂದು ಹೇಳಿದ್ದಾರೆ.



ಫ್ರಾನ್ಸ್‌ನ ಎವಿಯನ್‌ನಲ್ಲಿ ಮಂಗಳವಾರ ನಡೆದ ಜಿ 7 ಶೃಂಗಸಭೆಯ ಕಾರ್ಯಕಲಾಪಗಳು ಪ್ರಾರಂಭವಾಗುವ ಮೊದಲು ಪ್ರಧಾನಿ ನರೇಂದ್ರ ಮೋದಿ ಅವರು ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರೊಂದಿಗೆ ಸಂವಾದ ನಡೆಸಿದರು.

# 75,000 ರೂ. ಬೆಳೆಸಾಲ ಸಂಪೂರ್ಣ ಮನ್ನಾ: ರೈತರಿಗೆ ಭಾರಿ ಕೊಡುಗೆ ಕೊಟ್ಟ ತಮಿಳುನಾಡು ಸಿಎಂ ವಿಜಯ್

**ಚೆನ್ನೈ ಜೂ. 16:** ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ತಮಿಳುನಾಡಿನ ರೈತರಿಗೆ ಬಂಪರ್ ಕೊಡುಗೆ ನೀಡಿದ್ದಾರೆ. ವಿವಿಧ ಸಹಕಾರಿ ಬ್ಯಾಂಕುಗಳಲ್ಲಿ ರೈತರು ಪಡೆದಿರುವ 75,000 ರೂ. ವರೆಗಿನ ಬೆಳೆ ಸಾಲವನ್ನ ಸಂಪೂರ್ಣ ಮನ್ನಾ ಮಾಡುವುದಾಗಿ ಘೋಷಣೆ ಮಾಡಿದ್ದಾರೆ. ಇದರೊಂದಿಗೆ 75,000 ರೂ. ಗಿಂತಲೂ ಹೆಚ್ಚು ಬೆಳೆಸಾಲ ಪಡೆದವರಿಗೆ 35,000 ರೂ. ವರೆಗಿನ ಸಾಲಮನ್ನಾ ಮಾಡುವುದಾಗಿ ಘೋಷಿಸಿದ್ದಾರೆ. ಪರಿಷ್ಕೃತ ಯೋಜನೆಯ ಪ್ರಕಾರ, 2025 ರ ಮೇ 1 ರಿಂದ 2026 ರ ಫೆ.28 ರ ನಡುವೆ ಸಹಕಾರಿ ಬ್ಯಾಂಕುಗಳಿಂದ 75,000 ರೂ. ವರೆಗಿನ ಸಾಲ ಸಂಪೂರ್ಣ ಮನ್ನಾ ಆಗಲಿದೆ. ರಾಜ್ಯಾದ್ಯಂತ ಸುಮಾರು 14.43 ಲಕ್ಷಕ್ಕೂ ಹೆಚ್ಚು ರೈತರು ಇದರ ಪ್ರಯೋಜನ ಪಡೆಯಲಿದ್ದಾರೆ. ಆದ್ರೆ ಈ ಕ್ರಮದಿಂದ ಸರ್ಕಾರಕ್ಕೆ 5,932.23 ಕೋಟಿ ರೂ. ಹೊರೆಯಾಗಲಿದೆ.



### ಯಾರಿಗೆ ಪ್ರಯೋಜನ?

8.33 ಲಕ್ಷ ಸಣ್ಣ ರೈತರು, *5.16 ಲಕ್ಷ ಮಧ್ಯಮ ರೈತರು, 93,548 ಬೃಹತ್ ರೈತರಿಗೆ ಪ್ರಯೋಜನ ಒಟ್ಟು ಫಲಾನುಭವಿಗಳಲ್ಲಿ 75,000 ರೂ.ವರೆಗಿನ ಸಾಲ ಹೊಂದಿರುವ 6.22 ಲಕ್ಷಕ್ಕೂ ಹೆಚ್ಚು ರೈತರು ಸಂಪೂರ್ಣ ಮನ್ನಾ ಪ್ರಯೋಜನ ಪಡೆಯುತ್ತಾರೆ. ಅದಕ್ಕಿಂತಲೂ ಹೆಚ್ಚಿನ ಸಾಲ ಹೊಂದಿದವರಲ್ಲಿ 8.21 ಲಕ್ಷ ರೈತರ ಸಾಲ ತಲಾ 35,000 ರೂ. ಮನ್ನಾ ಆಗಲಿದೆ. ಇದು ಸಿಎಂ ವಿಜಯ್ ಸರ್ಕಾರ ಇದುವರೆಗೆ ಘೋಷಿಸಿದ ಅತಿದೊಡ್ಡ ರೈತಕಲ್ಯಾಣ ಕಾರ್ಯಕ್ರಮಗಳಲ್ಲಿ ಒಂದಾಗಿದೆ. ರಾಜ್ಯದ ರೈತರ ಆರ್ಥಿಕ ಸ್ಥಿತಿ ಮತ್ತು ರೈತರ ಅಗತ್ಯಗಳನ್ನು ನಿರ್ವಹಿಸಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ಯೋಜನೆಯಡಿ ಸಹಕಾರಿ ಬ್ಯಾಂಕುಗಳಿಗೆ ಪಾವತಿಸಬೇಕಾದ ಪಾವತಿಗಳನ್ನು ಭಾರತೀಯ ರಿಸರ್ವ್ ಬ್ಯಾಂಕ್ ಮಾರ್ಗಸೂಚಿಗಳಿಗೆ ಅನುಗುಣವಾಗಿ 45 ರಿಂದ 60 ದಿನಗಳಲ್ಲಿ ಇತ್ಯರ್ಥಪಡಿಸುವ ಸಾಧ್ಯತೆಗಳಿವೆ.

# ಮೆಡಿಕಲ್ ಶಾಪ್‌ನಲ್ಲಿ ಇನ್ನು ಸಾರ್ವಜನಿಕರು ನೇರವಾಗಿ ಸಿರಪ್ ಖರೀದಿ ಮಾಡುವಂತಿಲ್ಲ: ಕೇಂದ್ರ

### ಎಲ್ಲಾ ಸಿರಪ್‌ಗಳಿಗೆ ವೈದ್ಯರ ಚೀಟಿ ಕಡ್ಡಾಯ

**ನವದೆಹಲಿ, ಜೂ. 16:** ಮೆಡಿಕಲ್ ಶಾಪ್ಗಳಲ್ಲಿ ಇನ್ಮುಂದೆ ಸಾರ್ವಜನಿಕರು ನೇರವಾಗಿ ಸಿರಪ್ ಖರೀದಿ ಮಾಡುವಂತಿಲ್ಲ ಎಂದು ಕೇಂದ್ರ ಆರೋಗ್ಯ ಇಲಾಖೆ ಆದೇಶ ಹೊರಡಿಸಿದೆ. ವೈದ್ಯರ ಶಿಫಾರಸು ಇಲ್ಲದೇ ಯಾವುದೇ ಸಿರಪ್ಗಳನ್ನು ಖರೀದಿಸುವಂತಿಲ್ಲ. ಎಲ್ಲಾ ಸಿರಪ್ಗಳಿಗೆ ವೈದ್ಯರ ಪ್ರಿಸ್ಕ್ರಿಪ್ಷನ್ ಕಡ್ಡಾಯ. ಕೆಮ್ಮಿನ ಸಿರಪ್ಗೂ ವೈದ್ಯರ ಶಿಫಾರಸು ಅಗತ್ಯ ಎಂದು ಕೇಂದ್ರ ಸೂಚನೆ ನೀಡಿದೆ. ಕೇಂದ್ರವು 1945 ರ ಔಷಧ ನಿಯಮಗಳನ್ನು ತಿದ್ದುಪಡಿ ಮಾಡಿದೆ. ವೇಳಾಪಟ್ಟಿ ಏ ಅಡಿಯಲ್ಲಿ ಪಟ್ಟಿ ಮಾಡಲಾದ ವಿನಾಯಿತಿ ಪಡೆದ ಔಷಧಿಗಳ ವರ್ಗದಿಂದ ಸಿರಪ್‌ಗಳು ಎಂಬ ಪದವನ್ನು ತೆಗೆದುಹಾಕಿದೆ. ಇದು ಸಿರಪ್ ಆಧಾರಿತ ಸೂತ್ರೀಕರಣಗಳ ಮೇಲೆ ಬಿಗಿಯಾದ ನಿಯಂತ್ರಕ ಮೇಲ್ವಿಚಾರಣೆಯನ್ನು ಸೂಚಿಸುತ್ತದೆ. ಇದರರ್ಥ ವೈದ್ಯರ ಪ್ರಿಸ್ಕ್ರಿಪ್ಷನ್ ಇಲ್ಲದೆ ಕೆಮ್ಮು ಸಿರಪ್ ಸೇರಿದಂತೆ ಯಾವುದೇ ಸಿರಪ್ ಓವರ್–ದಿ–ಕೌಂಟರ್ ಮಾರಾಟವನ್ನು ಈಗ ನಿಷೇಧಿಸಲಾಗುವುದು. ಇದುವರೆಗೆ ಅನೇಕ ಕೆಮ್ಮಿನ ಸಿರಪ್ಗಳು ಮತ್ತು ಇತರ ದ್ರವ ಔಷಧಿಗಳನ್ನು ವೈದ್ಯರನ್ನು ಸಂಪರ್ಕಿಸದೆ ನೇರವಾಗಿ ಔಷಧಾಲಯಗಳಿಂದ ಖರೀದಿಸಬಹುದಿತ್ತು. ಆದರೆ, ಇನ್ಮುಂದೆ ಸಿರಪ್ ಖರೀದಿಗೆ ನೋಂದಾಯಿತ ವೈದ್ಯಕೀಯ ವೈದ್ಯರಿಂದ ಪ್ರಿಸ್ಕ್ರಿಪ್ಷನ್ ಅಗತ್ಯವಿರುತ್ತದೆ. ಕೆಮ್ಮು, ಶೀತ, ಜ್ವರ ಅಥವಾ ಸಿರಪ್ ಆಧಾರಿತ ಔಷಧಿಗಳ ಅಗತ್ಯವಿರುವ ಇತರ ಪರಿಸ್ಥಿತಿಗಳಲ್ಲಿ ಜನರು ಈ ಉತ್ಪನ್ನಗಳನ್ನು ಖರೀದಿಸುವ ಮೊದಲು ವೈದ್ಯರಿಂದ ಪ್ರಿಸ್ಕ್ರಿಪ್ಷನ್ ಪಡೆಯುವ ಅಗತ್ಯವಿದೆ.

# ಡೀಸೆಲ್‌ಗ್ಗೆ ಐಸೊಬ್ಯುಟನಾಲ್ ಮಿಶ್ರಣ ಕಡ್ಡಾಯಕ್ಕೆ ಕೇಂದ್ರ ಚಿಂತನೆ

**ನವದೆಹಲಿ, ಜೂ. 16:** ಪೆಟ್ರೋಲ್ಗೆ ಎಥನಾಲ್ ಮಿಶ್ರಣ ಮಾಡುವ ಯೋಜನೆಯನ್ನು ಈಗಾಗಲೇ ಯಶಸ್ವಿಯಾಗಿ ಜಾರಿಗೊಳಿಸುತ್ತಿರುವ ಕೇಂದ್ರ ಸರ್ಕಾರ ಮುಂದಿನ ಹೆಜ್ಜೆಯಾಗಿ, ಡೀಸೆಲ್ಗೆ ಐಸೊಬ್ಯುಟನಾಲ್ ಮಿಶ್ರಣ ಮಾಡುವುದನ್ನು ಕಡ್ಡಾಯಗೊಳಿ ಸಲು ಚಿಂತನೆ ನಡೆಸುತ್ತಿದೆ. ಜಗತ್ತಿನ ಅತಿ ಹೆಚ್ಚು ಇಂಧನ ಬಳಕೆ ಮಾಡುವ ದೇಶಗಳಲ್ಲಿ ಭಾರತವೂ ಒಂದಾಗಿದ್ದು, ಹೆಚ್ಚುತ್ತಿರುವ ವಾಹನಗಳ ಸಂಖ್ಯೆ ಮತ್ತು ಕೈಗಾರಿಕೀಕರಣದಿಂದಾಗಿ ಕಚ್ಚಾ ತೈಲದ ಆಮದು ದೇಶದ ಬೊಕ್ಕಸಕ್ಕೆ ದೊಡ್ಡ ಹೊರೆಯಾಗಿದೆ. ಪಳೆಯುಳಿಕೆ ಇಂಧನಗಳ (ಫಾಸಿಲ್ ಫ್ಯುಯೆಲ್ಸ್) ಬಳಕೆಯಿಂದಾಗುವ ವಾಯು ಮಾಲಿನ್ಯ ಮತ್ತು ಹಸಿರುಮನೆ ಅನಿಲಗಳ ಹೊರಸೂಸುವಿಕೆ ಜಾಗತಿಕ ತಾಪಮಾನ ಏರಿಕೆಗೆ ಕಾರಣವಾಗುತ್ತಿದೆ. ಈ ಸವಾಲುಗಳನ್ನು ಎದುರಿಸಲು ಕೇಂದ್ರ ಸರ್ಕಾರ ಈ ಮಹತ್ವಾಕಾಂಕ್ಷಿ ಯೋಜನೆಗೆ ಕೈಹಾಕುತ್ತಿದೆ. ಇದು ಭಾರತದ ಇಂಧನ ವಲಯ, ಪರಿಸರ ಸಂರಕ್ಷಣೆ ಮತ್ತು ಆರ್ಥಿಕತೆಯ ಮೇಲೆ ಪರಿಣಾಮ ಬೀರಲಿದೆ. ಡೀಸೆಲ್ಗೆ ಐಸೊಬ್ಯುಟನಾಲ್ ಮಿಶ್ರಣ ಕಡ್ಡಾಯಗೊಳಿಸುವ ಕೇಂದ್ರ ಸರ್ಕಾರದ ಚಿಂತನೆ ಭಾರತದ ಇಂಧನ ಸ್ವಾವಲಂಬನೆಯ ಕನಸಿಗೆ ಜೀವ ನೀಡುವ ಮತ್ತೊಂದು ಆಶಾದಾಯಕ ಹೆಜ್ಜೆ. ಇದರಿಂದ ತೈಲ ಆಮದು ಕಡಿಮೆ ಆಗುವುದಲ್ಲದೆ, ಪರಿಸರ ಮಾಲಿನ್ಯದ ವಿರುದ್ಧದ ಹೋರಾಟದಲ್ಲಿ ಭಾರತವನ್ನು ಜಾಗತಿಕ ಮಟ್ಟದಲ್ಲಿ ಮುಂಚೂಣಿಯಲ್ಲಿ ನಿಲ್ಲಿಸಲಿದೆ. ತಾಂತ್ರಿಕ ಸವಾಲುಗಳನ್ನು ಸಮರ್ಥವಾಗಿ ನಿಭಾಯಿಸಿ, ವ್ಯವಸ್ಥಿತವಾಗಿ ಜಾರಿಗೊಳಿಸಿದರೆ, ಈ ಯೋಜನೆ ದೇಶದ ಆರ್ಥಿಕತೆ, ಪರಿಸರ ಮತ್ತು ಕೃಷಿ ಈ ಮೂರೂ ವಲಯಗಳಿಗೂ ತ್ರಿವೇಣಿ ಸಂಗಮದಂತೆ ಕೆಲಸ ಮಾಡಿ ಲಾಭ ತಂದುಕೊಡಬಲ್ಲದು.

ನಾಲ್ಕು ಕಾರ್ಬನ್ ಪರಮಾಣುಗಳನ್ನು ಹೊಂದಿರುವ ಒಂದು ಪ್ರಮುಖ ಆಲ್ಕೋಹಾಲ್ಗೆ ಐಸೊಬ್ಯುಟನಾಲ್ ಎನ್ನುತ್ತಾರೆ. ಇದನ್ನು ಕೂಡ ಎಥನಾಲ್‌ನಂತೆ ಜೈವಿಕ ಮೂಲಗಳಿಂದಲೇ, ಅಂದರೆ ಕಬ್ಬಿನಸಿಪ್ಪೆ, ಜೋಳ, ಕೃಷಿತ್ಯಾಜ್ಯ ಮತ್ತು ಇತರ ಜೈವಿಕ ರಾಸಾಯನಿಕ ಪ್ರಕ್ರಿಯೆಗಳ ಮೂಲಕ ಉತ್ಪಾದಿಸಲಾಗುತ್ತದೆ. ದ್ವಿತೀಯ ಪೀಳಿಗೆಯ ಜೈವಿಕ ಇಂಧನ –ಸೆಕೆಂಡ್ ಜನರೇಷನ್ ಬಯೋ ಫ್ಯುಯೆಲ್– ಎಂಬ ಹೆಸರೂ ಇದಕ್ಕಿದೆ. ಎಥನಾಲ್‌ಗೆ ಹೋಲಿಸಿದರೆ ಐಸೊಬ್ಯುಟನಾಲ್ ಹೆಚ್ಚಿನ ಇಂಧನ ಸಾಂದ್ರತೆ ಮತ್ತು ಕಡಿಮೆ ತೇವಾಂಶ ಹೀರಿಕೊಳ್ಳುವ ಗುಣವನ್ನು ಹೊಂದಿದೆ. ಹೀಗಾಗಿ, ಇದನ್ನು ಡೀಸೆಲ್ ಜತೆ ಸುಲಭವಾಗಿ ಮಿಶ್ರಣ ಮಾಡಬಹುದು. ಇದು ಎಂಜಿನ್‌ಗಳ ದಕ್ಷತೆ ಕಾಯ್ದುಕೊಳ್ಳಲು ಸಹಾಯ ಮಾಡುತ್ತದೆ ಎನ್ನುತ್ತಾರೆ ವಿಜ್ಞಾನಿಗಳು. ಐಸೊಬ್ಯುಟನಾಲ್ ಸಾಮಾನ್ಯ ವಾಹನಗಳಿಗಷ್ಟೇ ಅಲ್ಲ, ಜಗತ್ತಿನ ಅತ್ಯಂತ ವೇಗದ ರೇಸಿಂಗ್ ಕಾರುಗಳಿಗೂ ಸೂಕ್ತ ಇಂಧನ. ಇದರ ಗರಿಷ್ಠ ಆಕ್ಟೇನ್ ಮತ್ತು ಸೆಟೇನ್ ರೇಟಿಂಗ್ ಗುಣಲಕ್ಷಣಗಳಿಂದಾಗಿ ಪ್ರಮುಖ ಅಂತಾರಾಷ್ಟ್ರೀಯ ರೇಸ್‌ಗಳಲ್ಲಿ ಇದನ್ನು ಹೈ ಪರ್ಫಾರ್ಮೆನ್ಸ್ ಇಂಧನವಾಗಿ ಬಳಸಲಾಗುತ್ತಿದೆ. ಡೀಸೆಲ್ ವಾಹನಗಳು ಪ್ರಮುಖವಾಗಿ ಕಣರೂಪದ ದ್ರವ್ಯಗಳನ್ನು (ಪಾರ್ಟಿಕ್ಯುಲೇಟ್ ಮ್ಯಾಟರ್ – ಪಿಎಂ 2.5) ಮತ್ತು ನೈಟ್ರೋಜನ್ ಆಕ್ಸೈಡ್ ಹೆಚ್ಚಿನ ಪ್ರಮಾಣದಲ್ಲಿ ಹೊರಸೂಸುತ್ತವೆ. ಇದು ನಗರ ಪ್ರದೇಶಗಳಲ್ಲಿ ತೀವ್ರ ವಾಯು ಮಾಲಿನ್ಯ ಮತ್ತು ಉಸಿರಾಟದ ಸಮಸ್ಯೆಗಳಿಗೆ ಕಾರಣವಾಗುತ್ತಿದೆ. ಐಸೊಬ್ಯುಟನಾಲ್ ಮಿಶ್ರಿತ ಡೀಸೆಲ್ ಬಳಕೆಯಿಂದ ಕಾರ್ಬನ್ ಮೊನಾಕ್ಸೈಡ್ ಮತ್ತು ಹೈಡ್ರೋಕಾರ್ಬನ್ ಹೊರಸೂಸುವಿಕೆ ಗಣನೀಯವಾಗಿ ಕಡಿಮೆಯಾಗುತ್ತದೆ. ಭಾರತ ತನಗಾಗುವ ಕಚ್ಚಾ ತೈಲದ ಅವಶ್ಯಕತೆಯಲ್ಲಿ ಶೇ. 80ಕ್ಕಿಂತ ಹೆಚ್ಚು ಭಾಗವನ್ನು ವಿದೇಶಗಳಿಂದ ಆಮದು ಮಾಡಿಕೊಳ್ಳುತ್ತದೆ. ಡೀಸೆಲ್ಗೆ ಐಸೊಬ್ಯುಟನಾಲ್ ಮಿಶ್ರಣ ಮಾಡುವುದರಿಂದ ಪ್ರತಿ ವರ್ಷ ಸಾವಿರಾರು ಕೋಟಿ ರೂ.ಗಳ ವಿದೇಶಿ ವಿನಿಮಯ ಉಳಿತಾಯವಾಗುತ್ತದೆ. ಜಾಗತಿಕ ಹವಾಮಾನ ಬದಲಾವಣೆ ಸಮ್ಮೇಳನಗಳಲ್ಲಿ ಭಾರತ ನೀಡಿದ ಭರವಸೆಯಂತೆ, 2070ರ ವೇಳೆಗೆ ನೆಟ್ ಜೀರೋ ಕಾರ್ಬನ್ ಹೊರಸೂಸುವಿಕೆ ಗುರಿಯನ್ನು ತಲುಪಲು ಈ ಯೋಜನೆ ಸಹಕಾರಿಯಾಗಿದೆ. ಐಸೊಬ್ಯುಟನಾಲ್ ಉತ್ಪಾದನೆಗೆ ಕೃಷಿತ್ಯಾಜ್ಯ, ಒಣ ಗಿದ ಹುಲ್ಲು, ಕಬ್ಬಿನ ಉಪ ಉತ್ಪನ್ನಗಳನ್ನು ಬಳಸುವುದರಿಂದ ಕೃಷಿ ತ್ಯಾಜ್ಯಕ್ಕೂ ಉತ್ತಮ ಬೆಲೆ ಸಿಕ್ಕಂತಾಗುತ್ತದೆ. ಗ್ರಾಮೀಣ ಆರ್ಥಿಕತೆ ಬಲಗೊಳ್ಳುತ್ತದೆ. ಯೋಜನೆ ಆಕರ್ಷಕವಾಗಿದ್ದರೂ, ಇದನ್ನು ತಳಮಟ್ಟದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಪ್ರಸ್ತುತ ಐಸೊಬ್ಯುಟನಾಲ್ ಉತ್ಪಾದನಾ ತಂತ್ರಜ್ಞಾನ ಎಥನಾಲ್‌ಗಿಂತ ಸ್ವಲ್ಪ ದುಬಾರಿ ಯಾಗಿದೆ. ವಾಣಿಜ್ಯಕವಾಗಿ ಇದನ್ನು ದೊಡ್ಡ ಪ್ರಮಾಣದಲ್ಲಿ ಉತ್ಪಾದಿಸಲು ತಂತ್ರಜ್ಞಾನದ ಸುಧಾರಣೆ ಅಗತ್ಯವಿದೆ. ವರ್ಷದ ಎಲ್ಲ ದಿನಗಳಲ್ಲೂ ಜೈವಿಕ ತ್ಯಾಜ್ಯ ಮತ್ತು ಕೃಷಿ ಉತ್ಪನ್ನಗಳು ಒಂದೇ ಪ್ರಮಾಣದಲ್ಲಿ ಲಭ್ಯವಿರುವುದನ್ನು ಖಚಿತಪಡಿಸಿಕೊಳ್ಳಲು ಬಲವಾದ ಪೂರೈಕೆ ಸರಪಳಿ ವ್ಯವಸ್ಥೆ ಬೇಕಾಗುತ್ತದೆ. ದೇಶದ ಪ್ರಮುಖ ತೈಲ ಮಾರುಕಟ್ಟೆ ಕಂಪನಿಗಳಾದ ಐಒಸಿಎಲ್, ಬಿಪಿಸಿಎಲ್, ಎಚ್ಪಿಸಿಎಲ್ ತಮ್ಮ ಸಂಗ್ರಹಣಾ ಗೋದಾಮುಗಳು ಮತ್ತು ಬ್ಲೆಂಡಿಂಗ್ (ಮಿಶ್ರಣ) ಘಟಕಗಳನ್ನು ಆಧುನೀಕರಿಸಬೇಕಾಗುತ್ತದೆ. ಗ್ರಾಹಕರಿಗೆ ಹೊರೆಯಾಗದಂತೆ ಮತ್ತು ಉತ್ಪಾದಕರಿಗೂ ನಷ್ಟವಾಗದಂತೆ ಐಸೊಬ್ಯುಟನಾಲ್ ಮಿಶ್ರಿತ ಡೀಸೆಲ್ ಬೆಲೆಯನ್ನು ನಿಯಂತ್ರಿಸುವುದು ಸರ್ಕಾರಕ್ಕೆ ಸವಾಲಿನ ಕೆಲಸವಾಗುತ್ತದೆ.

ಈ ಯೋಜನೆಯನ್ನು ಯಶಸ್ವಿಗೊಳಿಸಲು ಕೇಂದ್ರ ಸರ್ಕಾರ ಹಂತಹಂತವಾಗಿ ಕಾರ್ಯಪ್ರವೃತ್ತವಾಗಲು ಯೋಜಿಸಿದೆ. ದೇಶದ ಆಯ್ದ ಕೆಲವು ನಗರಗಳಲ್ಲಿ ಅಥವಾ ಸರ್ಕಾರಿ ಸಾರಿಗೆ ಸಂಸ್ಥೆಗಳ ಬಸ್‌ಗಳಲ್ಲಿ ಮೊದಲ ಹಂತದಲ್ಲಿ ಐಸೊಬ್ಯುಟನಾಲ್ ಮಿಶ್ರಿತ ಡೀಸೆಲ್ ಬಳಸಿ ಅದರ ಕಾರ್ಯಕ್ಷಮತೆಯನ್ನು ಪರೀಕ್ಷಿಸುವುದು. ಐಸೊಬ್ಯುಟನಾಲ್ ಉತ್ಪಾದನಾ ಘಟಕಗಳನ್ನು ಸ್ಥಾಪಿಸುವ ಉದ್ಯಮಿಗಳಿಗೆ ತೆರಿಗೆ ವಿನಾಯಿತಿ ಮತ್ತು ಹಣಕಾಸಿನ ನೆರವು ನೀಡುವುದು. ಕಡಿಮೆ ವೆಚ್ಚದಲ್ಲಿ ಐಸೊಬ್ಯುಟನಾಲ್ ಉತ್ಪಾದಿಸಲು ಭಾರತೀಯ ತಂತ್ರಜ್ಞಾನ ಸಂಸ್ಥೆಗಳು (ಐಐಟಿ) ಮತ್ತು ವೈಜ್ಞಾನಿಕ ಸಂಸ್ಥೆಗಳೊಂದಿಗೆ ಜಂಟಿ ಸಂಶೋಧನೆ ನಡೆಸುವುದು. ರೈತರು ಕೇವಲ ಅನ್ನದಾತರಲ್ಲ, ಇನ್ನು ಮುಂದೆ ಅವರು ಇಂಧನದಾತರೂ ಹೌದು. ಜೈವಿಕ ಸಂಸ್ಕರಣಾಗಾರಗಳ (ಬಯೋ ರಿಫೈನರ್ಸ್) ಸ್ಥಾಪನೆ: ದೇಶದಾದ್ಯಂತ ಹೊಸ ಐಸೊಬ್ಯುಟನಾಲ್ ಉತ್ಪಾದನಾ ಘಟಕಗಳು ಸ್ಥಾಪನೆಯಾಗುವುದರಿಂದ ಕೈಗಾರಿಕಾ ವಲಯದಲ್ಲಿ ಹೂಡಿಕೆ ಹೆಚ್ಚುತ್ತದೆ. ಗ್ರಾಮೀಣ ಮತ್ತು ಅರೆನಗರ ಪ್ರದೇಶಗಳಲ್ಲಿ ಕೃಷಿ ತ್ಯಾಜ್ಯ ಸಂಗ್ರಹಣೆ, ಸಾಗಣೆ ಮತ್ತು ಸಂಸ್ಕರಣಾ ಘಟಕಗಳಲ್ಲಿ ಲಕ್ಷಾಂತರ ಜನರಿಗೆ ಪ್ರತ್ಯಕ್ಷ ಹಾಗೂ ಪರೋಕ್ಷ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ.

ಕಬ್ಬಿನಿಂದ ಸಕ್ಕರೆ ಉತ್ಪಾದನೆ ಮಾತ್ರವಲ್ಲದೆ, ಉಪಉತ್ಪನ್ನಗಳಿಂದ ಐಸೊಬ್ಯುಟನಾಲ್ ತಯಾರಿಸುವುದರಿಂದ ಸಕ್ಕರೆ ಕಾರ್ಖಾನೆಗಳ ಆರ್ಥಿಕ ಪರಿಸ್ಥಿತಿ ಸುಧಾರಿಸಿ, ರೈತರಿಗೆ ಸಕಾಲದಲ್ಲಿ ಬಾಕಿ ಹಣ ಪಾವತಿಸಲು ಸಾಧ್ಯವಾಗುತ್ತದೆ. ಎಥನಾಲ್ ನೀರನ್ನು ಬೇಗನೆ ಹೀರಿಕೊಳ್ಳುವು ದರಿಂದ ಅದನ್ನು ಹೆಚ್ಚು ದಿನಗಳ ಕಾಲ ಇಡಲಾಗುವುದಿಲ್ಲ. ಆದರೆ, ಐಸೊಬ್ಯುಟನಾಲ್ ನೀರಿನೊಂದಿಗೆ ಬೆರೆಯದ ಗುಣ (ಹೈಡ್ರೋಫೋಬಿಕ್) ಹೊಂದಿರುವುದರಿಂದ, ಇದನ್ನು ವರ್ಷಗಟ್ಟಲೆ ಶೇಖರಿಸಿಟ್ಟರೂ ಇಂಧನದ ಗುಣಮಟ್ಟ ಕೆಡುವುದಿಲ್ಲ.

# ಮೂರನೇ ಬಾರಿ ನೀಟ್‌ಗೆ ತಯಾರಿ ನಡೆಸುತ್ತಿದ್ದ ವಿದ್ಯಾರ್ಥಿ ಆತ್ಮಹತ್ಯೆ

**ಸಿಕಾರ್,ಜೂ. 16:** ನೀಟ್–ಯುಜಿ ಪರೀಕ್ಷಾ ಆಕಾಂಕ್ಷಿಯೊಬ್ಬರು ಆತ್ಮಹತ್ಯೆಗೆ ಶರಣಾಗಿರುವ ಘಟನೆ ರಾಜಸ್ಥಾನ ಸಿಕಾರ್‌ನ ಉದ್ಯೋಗ್ ನಗರದಲ್ಲಿ ಸೋಮವಾರ ನಡೆದಿದೆ. ಮೃತನನ್ನು ಜುನ್ಝುನು ಜಿಲ್ಲೆಯ ನವಲ್ಗಢ ನಿವಾಸಿ ಉಮೇಶ್ ಮಾಲಿ(22) ಎಂದು ಗುರುತಿಸಲಾಗಿದೆ. ಉದ್ಯೋಗ್ ನಗರ ಪೊಲೀಸ್ ಠಾಣೆಯ ಅಧಿಕಾರಿ ರಾಜೇಶ್ ಕುಮಾರ್ ಬುಡಾನಿಯಾ ಅವರು ಪ್ರತಿಕ್ರಿಯಿಸಿ, ಉಮೇಶ್ ತನ್ನ ಕುಟುಂಬದೊಂದಿಗೆ ಸಿಕಾರ್ನ ವಾಸವಾಗಿದ್ದ. ಈತನ ತಂದೆ ಮುಂಬೈನಲ್ಲಿ ಟೈಲ್ ಗುತ್ತಿಗೆದಾರರಾಗಿ ಕೆಲಸ ಮಾಡುತ್ತಿದ್ದಾರೆ. ಕಳೆದೆರಡು ಬಾರಿ ನೀಟ್ ಬರೆದಿದ್ದು, ಜೂನ್ 21ರಂದು ನಿಗದಿಯಾಗಿದ್ದ ಮರು ಪರೀಕ್ಷೆಗೆ ಸಿದ್ಧತೆಯಲ್ಲಿ ತೊಡಗಿದ್ದ ಎಂದು ತಿಳಿಸಿದರು. ಪ್ರಾಥಮಿಕ ಮಾಹಿತಿಯ ಪ್ರಕಾರ, ತನ್ನ ಊರಿಗೆ ಭೇಟಿ ನೀಡಿದ ಉಮೇಶ್ ಸೋಮವಾರ ಸಿಕಾರ್‌ಗೆ ಮರಳಿದ್ದಾನೆ. ಮಧ್ಯಾಹ್ನ ಸಹೋದರಿಯ ಜತೆಗೆ ಫ್ಲ್ಯಾಟ್‌ಗೆ ಹಿಂದಿರುಗಿದ ಆತ, ಕೊಠಡಿ ಸೇರಿದ ಬಳಿಕ ಯಾವುದೇ ಪ್ರತಿಕ್ರಿಯೆ ನೀಡಿರಲಿಲ್ಲ. ಇದರಿಂದ ಆತಂಕಗೊಂಡು ಕುಟುಂಬಸ್ಥರು ಪರಿಶೀಲಿಸಿದಾಗ ಘಟನೆ ಬೆಳಕಿಗೆ ಬಂದಿದೆ. ತಕ್ಷಣವೇ ಅವರು ಪೊಲೀಸರಿಗೆ ಮಾಹಿತಿ ನೀಡಿದ್ದರು. ವಿದ್ಯಾರ್ಥಿ ಸಾವನ್ನಪ್ಪಿದ ಸ್ಥಳದಲ್ಲಿ ಆತನ ಕೈಬರಹದ ಡೆತ್‌ನೋಟ್ ದೊರೆತಿದ್ದು, ನಾನು ದೂರವಾಗುತ್ತಿದ್ದೇನೆ. ನಾನು ಎಲ್ಲಿಗೆ ಹೋಗುತ್ತಿದ್ದೇನೆ ಎಂದು ನನಗೆ ಗೊತ್ತಿಲ್ಲ. ಕ್ಷಮಿಸಿ ಎಂದು ಬರೆದಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ವಿದ್ಯಾರ್ಥಿಯ ಸಾವಿಗೆ



ಕಾರಣವೇನು ಎಂಬ ಕುರಿತು ಎಲ್ಲಾ ಆಯಾಮಗಳಲ್ಲೂ ತನಿಖೆ ನಡೆಸಲಾಗುತ್ತಿದೆ. ಎಂದು ಪೊಲೀಸರು ಹೇಳಿದ್ದಾರೆ. ಮೇ 3ರಂದು ನಡೆದ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯ ಹಿನ್ನೆಲೆಯಲ್ಲಿ ಪರೀಕ್ಷೆ ರದ್ದುಗೊಳಿಸಿ, ಜೂನ್ 21ರಂದು ಮರುಪರೀಕ್ಷೆ ನಿಗದಿ ಮಾಡಲಾಗಿದೆ.

### ಬಿಡದಿ ಟೌನ್‌ಶಿಪ್‌ಗೆ ಕೆಲವರಿಂದ ಮಾತ್ರ ವಿರೋಧ: ಯತೀಂದ್ರ ಸಿದ್ದರಾಮಯ್ಯ

# ಬೆಂಗಳೂರಿನ ಜನಸಂಖ್ಯೆಗೆ ತಕ್ಕಂತೆ ಉಪನಗರ ನಿರ್ಮಾಣ ಅಗತ್ಯ

**ಮೈಸೂರು, ಜೂ.16:** ಬಿಡದಿ ಸ್ಮಾರ್ಟ್ ಟೌನ್‌ಶಿಪ್ ಯೋಜನೆಗೆ ಕೇವಲ ಕೆಲವರು ಮಾತ್ರ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಯಾರೋ ಕೆಲವರ ಮಾತು ಕೇಳಿ ಇಂತಹ ದೊಡ್ಡ ಯೋಜನೆಯನ್ನು ಕೈಬಿಡಲು ಸಾಧ್ಯವಿಲ್ಲ ಎಂದು ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ, ಸರ್ಕಾರದ ನಿಲುವನ್ನು ಗಟ್ಟಿಯಾಗಿ ಸಮರ್ಥಿಸಿ ಕೊಂಡಿದ್ದಾರೆ. ಬೆಂಗಳೂರಿನ ಜನಸಂದಣಿ ಮತ್ತು ವಿಸ್ತರಣೆಯ ಅಗತ್ಯವನ್ನು ಮನಗಂಡು ಈ ಯೋಜನೆ ರೂಪಿಸಲಾಗುತ್ತಿದೆ. ಬೆಂಗಳೂರು ನಗರದ ಜನಸಂಖ್ಯೆ ಮತ್ತು ಜನಸಂದಣಿ ವಿಪರೀತವಾಗಿ ಹೆಚ್ಚಾಗಿದೆ.

ಎಷ್ಟೋ ಜನರಿಗೆ ಸ್ವಂತ ನಿವೇಶನದ ಅಗತ್ಯವಿದೆ. ನಗರದ ಜನಸಂಖ್ಯೆ ಸುತ್ತಮುತ್ತಲಿನ ಪ್ರದೇಶಗಳಿಗೂ ಹರಡಬೇಕಿರುವುದರಿಂದ ಬೆಂಗಳೂರು ವಿಸ್ತರಣೆ ಅತ್ಯಗತ್ಯವಾಗಿದೆ. ಇದಕ್ಕಾಗಿ ಬಿಡದಿ ಟೌನ್‌ಶಿಪ್



ಮಾಡುವುದು ಅನಿವಾರ್ಯ ಎಂದರು.

ಯೋಜನೆಗೆ ಶೇ.80 ರೈತರು ಹೆಚ್ಚಿನ ಮಟ್ಟದ ಪರಿಹಾರದ ಆಫರ್ ಒಪ್ಪಿ ಜಮೀನು ಕೊಡಲು ಮುಂದೆ ಬಂದಿದ್ದಾರೆ. ಬೆರಳೆಣಿಕೆ ಯಷ್ಟು ಜನ ಮಾತ್ರ ವಿರೋಧ ವ್ಯಕ್ತಪಡಿಸುತ್ತಿದ್ದು, ಇದರಲ್ಲಿ ಜೆಡಿಎಸ್ ನಾಯಕರು ರಾಜಕಾರಣ ಮಾಡುತ್ತಿದ್ದಾರೆ.

ಆದಾಗ್ಯೂ, ಉಳಿದ ರೈತರೊಂದಿಗೆ ಮತ್ತೊಮ್ಮೆ ಮಾತುಕತೆ ನಡೆಸಿ, ಅವರನ್ನು ಸಂಪೂರ್ಣ ವಿಶ್ವಾಸಕ್ಕೆ ತೆಗೆದುಕೊಂಡೇ ಯೋಜನೆ ಯನ್ನು ಮುಂದುವರಿಸಲಾ ಗುವುದು ಎಂದು ಯತೀಂದ್ರ ಸಿದ್ದರಾಮಯ್ಯ ಹೇಳಿದರು.

### ಕಾಂಗ್ರೆಸ್‌ನ ಎಲ್ಲ ಅಭ್ಯರ್ಥಿಗಳ ಗೆಲುವು ನಿಶ್ಚಿತ

ಇದೇ ಜೂನ್ 18 ರಂದು ನಡೆಯಲಿರುವ ವಿಧಾನ ಪರಿಷತ್ ಚುನಾವಣೆ ಹಾಗೂ ಕಾಂಗ್ರೆಸ್ ಶಾಸಕರ ರೆಸಾರ್ಟ್ ವಾಸ್ತವ್ಯದ ಕುರಿತು ಮಾತನಾಡಿದ ಯತೀಂದ್ರ ಸಿದ್ದರಾಮಯ್ಯ, ಕಾಂಗ್ರೆಸ್‌ನಿಂದ 5ನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದ್ದೇವೆ. ಚುನಾವಣೆಗಳ ಸಂದರ್ಭದಲ್ಲಿ ಶಾಸಕರನ್ನು ಒಟ್ಟಿಗೆ ಕರೆದೊಯ್ಯುವುದು ರಾಜಕಾರಣದಲ್ಲಿ ಒಂದು ಸಾಮಾನ್ಯ ಪ್ರಕ್ರಿಯೆ. ಬಿಡದಿಯ ರೆಸಾರ್ಟ್‌ನಲ್ಲಿ ನಡೆಯಲಿರುವ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಭಾಗಿಯಾಗುತ್ತಿದ್ದೇನೆ. ನಮ್ಮ ಎಲ್ಲಾ ಅಭ್ಯರ್ಥಿಗಳು ಗೆಲ್ಲುವುದು ಶತಸಿದ್ಧ ಎಂದು ವಿಶ್ವಾಸ ವ್ಯಕ್ತಪಡಿಸಿದರು.

### ರಾಜ್ಯದ 40ಕ್ಕೂ ಹೆಚ್ಚು ಕಡೆ ಲೋಕಾಯುಕ್ತ ಪೋಲೀಸರ ದಾಳಿ

# ಸರ್ಕಾರಿ ಅಧಿಕಾರಿ ಆಸ್ತಿ, ನಗದು, ಹೂಡಿಕೆ, ಆಭರಣ ಕಂಡು ಬೆಚ್ಚಿಬಿದ್ದ ಅಧಿಕಾರಿಗಳು

**ಬೆಂಗಳೂರು, ಜೂ.16:** ಬೆಳ್ಳಂಬೆಳಿಗ್ಗೆ ಲೋಕಾಯುಕ್ತ ಪೊಲೀಸರು ರಾಜ್ಯದ ಹಲವು ಜಿಲ್ಲೆಗಳಲ್ಲಿ ಕಾರ್ಯಾಚರಣೆ ನಡೆಸಿ ಭ್ರಷ್ಟ ಅಧಿಕಾರಿಗಳ ಅಕ್ರಮ ಸಂಪತ್ತು ಬಯಲಿಗೆಳೆದಿದ್ದಾರೆ.

ಅಕ್ರಮದ ಬಗ್ಗೆ ಬಂದ ದೂರುಗಳ ಹಿನ್ನೆಲೆಯಲ್ಲಿ ಪರಿಶೀಲನೆ ನಡೆಸಿ ರಾಜ್ಯದ 40ಕ್ಕೂ ಹೆಚ್ಚು ಕಡೆ ಮಂಗಳವಾರ ಕಾರ್ಯಾಚರಣೆ ಕೈಗೊಂಡು ಸರ್ಕಾರಿ ಅಧಿಕಾರಿಗಳ ಸ್ಥಿರಚರಾಸ್ತಿ, ಕೋಟ್ಯಂತರ ರೂ. ನಗದು, ವಿವಿಧ ವಲಯಗಳಲ್ಲಿ ಹೂಡಿಕೆ, ಚಿನ್ನಾಭರಣ ಸೇರಿದಂತೆ ಐಷಾರಾಮಿ ವಸ್ತುಗಳನ್ನು ಕಂಡು ಅಧಿಕಾರಿಗಳೇ ಬೆಚ್ಚಿ ಬಿದ್ದಿದ್ದಾರೆ.

ಬೆಂಗಳೂರು, ಕಲಬುರಗಿ, ದಾವಣಗೆರೆ, ಚಿತ್ರದುರ್ಗ, ಚಿಕ್ಕಮಗಳೂರು, ಧಾರವಾಡ ಸೇರಿದಂತೆ ಹಲವೆಡೆ ದಾಳಿ ನಡೆದಿದೆ.ದಾವಣಗೆರೆಯ ಲೋಕಾಯುಕ್ತ ಎಸ್ಪಿ ಎಂ.ಎಸ್. ಕೌಲಾಪುರ ನೇತೃತ್ವದಲ್ಲಿ ಹುಬ್ಬಳ್ಳಿಯ ಕೆಎಸ್‌ಆರ್‌ಟಿಸಿ (ವಾಯವ್ಯ) ಮುಖ್ಯ ಮೆಕ್ಯಾನಿಕ್ ಆಗಿರುವ ಸಿದ್ದೇಶ್ವರ ಹೆಬ್ಬಾಳ್ ಅವರಿಗೆ ಸೇರಿದ ವಾಣಿಜ್ಯ ಮಳಿಗೆಗಳು, ಕಚೇರಿ, ಮನೆ ಸೇರಿದಂತೆ 12ಕ್ಕೂ ಹೆಚ್ಚು ಕಡೆ ಶೋಧ ಕಾರ್ಯಾಚರಣೆ ನಡೆದಿದೆ.

ದಾವಣಗೆರೆ ನಗರದ ಆಂಜನೇಯ ಬಡಾವಣೆಯಲ್ಲಿರುವ ಮನೆ, ಹುಬ್ಬಳ್ಳಿಯ ಕಚೇರಿ ಸೇರಿದಂತೆ ಹಲವೆಡೆ ದಾಳಿ ನಡೆದಿದ್ದು, ಈ ವೇಳೆ ಮನೆಯಲ್ಲಿ ಸುಮಾರು 40 ಲಕ್ಷ ರೂ. ಹಣ ಪತ್ತೆಯಾಗಿದೆ. ಇದಲ್ಲದೆ ಕೆಜಿಗಟ್ಟಲೆ ಚಿನ್ನಾಭರಣ ಹಾಗೂ ಬೆಳ್ಳಿ ವಸ್ತುಗಳು ಸೇರಿದಂತೆ ರಾಜ್ಯದ ಹಲವೆಡೆ ನಿವೇಶನಗಳು ಮತ್ತು ವಿವಿಧ ಹಣಕಾಸು ಸಂಸ್ಥೆಗಳಲ್ಲಿ




ಹಣ ಹೂಡಿಕೆ ಮಾಡಿರುವುದು ಕಂಡುಬಂದಿದೆ.

ಚಿತ್ರದುರ್ಗದಲ್ಲಿ ಬಯಲು ಸೀಮೆ ಪ್ರಾಧಿಕಾರದ ಕೃಷ್ಣಾನಾಯಕ್‌ಗೂ ಲೋಕಾಯುಕ್ತ ಶಾಕ್ ನೀಡಿದೆ. ದಾವಣಗೆರೆಯ ಸಿದ್ದವೀರಪ್ಪ ಬಡಾವಣೆಯಲ್ಲಿರುವ ಅವರ ಮನೆ, ಚಿತ್ರದುರ್ಗದ ಕಚೇರಿ ಸೇರಿ 5 ಕಡೆ ದಾಳಿ ನಡೆಸಲಾಗಿದ್ದು, ಇವರ ಐಶಾರಾಮಿ ಮನೆಯಲ್ಲಿ ಬೆಲೆ ಬಾಳುವ ಅಲಂಕಾರಿಕ ವಸ್ತುಗಳು ಪತ್ತೆಯಾಗಿವೆ. ಇದಲ್ಲದೆ ಹಲವೆಡೆ ಕೃಷಿ ಜಮೀನು, ನಿವೇಶನಗಳು ಇವರ ಕುಟುಂಬದವರ ಹೆಸರಿನಲ್ಲಿರುವುದು ಪತ್ತೆಯಾಗಿದ್ದು, ಹಲವೆಡೆ ಎಪಿಎಂಸಿ ಮಳಿಗೆಯನ್ನೂ ಕೂಡಾ ಬೇನಾಮಿಯಾಗಿ ಹೊಂದಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಬೆಳಗಾವಿಯಲ್ಲಿ ಕೆಆರ್‌ಡಿಎಲ್ ಅಧೀಕ್ಷಕ ಎಂಜಿನಿಯರ್ ಸಣ್ಣ ಕೆಂಚಪ್ಪ ಅವರ ಮೂಲ ಚಿತ್ರದುರ್ಗ, ದಾವಣಗೆರೆ ಸೇರಿದಂತೆ 5ಕ್ಕೂ ಹೆಚ್ಚು ಕಡೆ ದಾಳಿ ನಡೆದಿದೆ. ಹಳ್ಳಿಕೇಡಿ ಗ್ರಾಮದಲ್ಲಿರುವ ತೋಟದ ಮನೆ, ಹುಮ್ನಾಬಾದ್‌ನಲ್ಲಿರುವ 2 ವಾಣಿಜ್ಯ ಕಾಂಪ್ಲೆಕ್ಸ್ ಗಳ ಮೇಲೂ ದಾಳಿ ನಡೆದಿದೆ. ಲೋಕಾಯುಕ್ತ ಎಸ್ಪಿ ಸಿದ್ದರಾಜು ನೇತೃತ್ವದಲ್ಲಿ ಬೆಳ್ಳಂಬೆಳಿಗ್ಗೆ ಅವರ ಮನೆಗೆ ಭೇಟಿ ನೀಡಿದ ಅಧಿಕಾರಿಗಳನ್ನು ಕಂಡು ಕುಟುಂಬಸ್ಥರು ಶಾಕ್ ಆಗಿದ್ದಾರೆ. ಮನೆಯಲ್ಲಿ ತಪಾಸಣೆ ವೇಳೆ ಆಸ್ತಿ ದಾಖಲೆಗಳು, ವಿದೇಶಿ ವಾಚ್‌ಗಳು ಸೇರಿದಂತೆ ಚಿನ್ನಾಭರಣ, ನಗದು ಪತ್ತೆಯಾಗಿದ್ದು, ಹಲವೆಡೆ ನಿವೇಶನಗಳನ್ನು ಹೊಂದಿರುವ ಮಾಹಿತಿ ಇದೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ.

ಕಲಬುರಗಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್‌ನ ನಿವೃತ್ತ ಸೂಪರಿಡೆಂಟೆಂಟ್ ಇಂಜಿನಿಯರ್ ನಿವಾಸದದಲ್ಲೂ ಲೋಕಾಯುಕ್ತ ಅಧಿಕಾರಿಗಳು ಶೋಧ ನಡೆಸಿದ್ದು ಕುತೂಹಲ ಕೆರಳಿಸಿದೆ. ಸ್ವತಃ ಲೋಕಾಯುಕ್ತ ಎಸ್ಪಿ ಸಿದ್ದರಾಜು ನೇತೃತ್ವದಲ್ಲಿ ದಾಳಿ ನಡೆಸಲಾಗಿದ್ದು, ಇವರು ಕರ್ತವ್ಯದಲ್ಲಿದ್ದಾಗ ಅಕ್ರಮದ ಬಗ್ಗೆ ಸಾಕಷ್ಟು ದೂರುಗಳು ಬಂದಿದ್ದವು.

ಚಿಕ್ಕಮಗಳೂರಿನಲ್ಲಿ ಎಸಿಎಫ್ ಮೋಹನ್ ಅವರ ಕಚೇರಿ ಹಾಗೂ ಕಡೂರಿನಲ್ಲಿರುವ ಅವರ ನಿವಾಸ ಹಾಗೂ ಅವರ ಸಂಬಂಧಿಕರ ಮನೆಯ ಮೇಲೂ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಲೋಕಾಯುಕ್ತ ಎಸ್ಪಿ ತಿರುಮಲೇಶ್ ನೇತೃತ್ವದಲ್ಲಿ ಕಾರ್ಯಾಚರಣೆ ಕೈಗೊಳ್ಳಲಾಗಿದ್ದು, ಇವರ ಮನೆಯಲ್ಲಿ ಕೆಲವು ಆಸ್ತಿ ದಾಖಲೆಗಳು ಪತ್ತೆಯಾಗಿವೆ. ಕೃಷಿ ಜಮೀನು ಹಾಗೂ ವಾಣಿಜ್ಯ ಮಳಿಗೆಗಳು ಕೂಡಾ ಹೊಂದಿರುವುದು ಗೊತ್ತಾಗಿದೆ. ಇವರ ಸಂಬಂಧಿಕರ ಹೆಸರಿನಲ್ಲಿ ರೆಸಾರ್ಟ್ ಕೂಡಾ ಇದೆ ಎಂದು ಹೇಳಲಾಗುತ್ತಿದ್ದು, ಅಪಾರವಾದ ಅಕ್ರಮ ಸಂಪತ್ತು ಪತ್ತೆಯಾಗಿದೆ ಎಂದು ಮೂಲಗಳು ತಿಳಿಸಿವೆ.

### ಬಿಜೆಪಿ ವಕ್ತಾರ ಎಸ್. ಪ್ರಕಾಶ್ ಸುದ್ದಿಗೋಷ್ಠಿ: ನಸೀರ್ ಅಹ್ಮದ್ ವಿರುದ್ಧ ಕ್ರಮಕ್ಕೆ ಆಗ್ರಹ

# ಕೆಲಸ ಮಾಡದ ಗ್ಯಾರಂಟಿ ಅನುಷ್ಠಾನ ಸಮಿತಿ ಅಗತ್ಯ ಇದೆಯೇ?

**ಬೆಂಗಳೂರು, ಜೂ.16:** ಗ್ಯಾರಂಟಿ ಅನುಷ್ಠಾನ ಸಮಿತಿ ರಚಿಸಿದ ಸರಕಾರವು ಕಳೆದ 3 ವರ್ಷಗಳಲ್ಲಿ ಆ ಸಮಿತಿಗಳಿಗೆ ಸುಮಾರು 100 ಕೋಟಿ ರೂ. ಖರ್ಚು ಮಾಡಿದೆ. ಆದರೆ, ಈ ಸಮಿತಿ ಸಮರ್ಪಕವಾಗಿ ಕೆಲಸ ಮಾಡಿಲ್ಲ ಎಂಬುದಕ್ಕೆ ಸರಕಾರವು ಗೃಹಲಕ್ಷ್ಮಿ ಯೋಜನೆಯಡಿ 3ರಿಂದ 4 ಲಕ್ಷ ಅನರ್ಹರು, ಅಪಾತ್ರರ ಹೆಸರನ್ನು ತೆಗೆದುಹಾಕಲು ಮುಂದಾದುದೇ ಸ್ಪಷ್ಟ ಉದಾಹರಣೆ ಎಂದು ಬಿಜೆಪಿ ರಾಜ್ಯ ವಕ್ತಾರ ಎಸ್. ಪ್ರಕಾಶ್ ಆಕ್ಷೇಪಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನುಷ್ಠಾನ ಸಮಿತಿ ಪದಾಧಿಕಾರಿಗಳಿಗೆ ಸಂಪುಟ ದರ್ಜೆ ಸ್ಥಾನಮಾನ ಕೊಡಲಾಗಿದೆ. ಪ್ರತಿ ವಿಧಾನಸಭಾ ಕ್ಷೇತ್ರದಲ್ಲೂ ನೇಮಕಾತಿ ಮಾಡಿ ಸಂಬಳ, ಪ್ರವಾಸ ಭತ್ಯೆ ನೀಡಿ ಸಮೃದ್ಧಿಯಾಗಿ ಪೋಷಿಸಲಾಗುತ್ತಿದೆ ಎಂದು ಟೀಕಿಸಿದರು. ಈ ಸಮಿತಿಗೆ ವಾರ್ಷಿಕವಾಗಿ 35 ಕೋಟಿ ಖರ್ಚಾಗಿದೆ ಎಂದು ವಿವರಿಸಿದರು.

ಈ ಸಮಿತಿಯು ಒಂದೇ ಒಂದು ಅರ್ಹ ಹೆಸರನ್ನು ಸೇರಿಸಿಲ್ಲ; ಅಥವಾ ಅನರ್ಹರೊಬ್ಬರ ಹೆಸರನ್ನು ರದ್ದು ಮಾಡಲು ಶಿಫಾರಸು ಮಾಡಿಲ್ಲ ಎಂದು ಆರೋಪಿಸಿದರು. ಓಡಾಡಲು ಕಾರು, ಸಂಬಳ, ಆಪ್ತ ಸಹಾಯಕರನ್ನು ಹೊಂದಿದ ಇವರು ಆರಾಮವಾಗಿ ಇದ್ದಾರೆ ಎಂದು ತಿಳಿಸಿದರು. ಏನೂ ಕೆಲಸ ಮಾಡದ ಇವರನ್ನು ಯಾಕೆ ಸಾಕಬೇಕು, ಇವರ ಅವಶ್ಯಕತೆ ಇದೆಯೇ ಎಂದು ಪ್ರಶ್ನಿಸಿದರು.

ಅನುಷ್ಠಾನ ಸಮಿತಿ ಉಪಾಧ್ಯಕ್ಷ ಮೆಹ್ರಾಜ್ ಖಾನ್ ಅವರಿಗೆ ಜಯಮಹಲ್‌ನಲ್ಲಿ ಸರಕಾರಿ ಮನೆ ಕೊಟ್ಟಿರುವುದು ದುರಂತ. ಮೇಲ್ಮನೆ ಮತ್ತು ಕೆಳಮನೆ ವಿಪಕ್ಷ ನಾಯಕರಿಗೆ ಮನೆ ಕೊಡುತ್ತಿಲ್ಲ. ಸರಕಾರಿ ನಿವಾಸದ ದುರುಪಯೋಗ ಆಗಿದೆ ಎಂದು ಆಕ್ಷೇಪ ವ್ಯಕ್ತ ಪಡಿಸಿದರು.




ತೆರಿಗೆ ಹಣ ಪೋಲಾಗುತ್ತಿದೆ. ಇವರಿಗೆ ಪ್ರಜಾಪ್ರಭುತ್ವದ ಮೌಲ್ಯದ ಲೆಕ್ಕ ಇಲ್ಲ. ಅಧಿಕಾರಕ್ಕೆ ಬಂದುದಕ್ಕಾಗಿ ನಿಮ್ಮ ಕಾರ್ಯಕರ್ತರನ್ನು ಸಾಕುತ್ತಿದ್ದೀರಿ; ಇದು ಎಷ್ಟರ ಮಟ್ಟಿಗೆ ಸರಿ ಎಂದು ಕೇಳಿದರು. ಇವರ ಕೈಯಲ್ಲಿ ಏನೂ ಮಾಡಲಾಗದಿದ್ದರೆ ಇವರನ್ನು ಮುಂದುವರಿಸಬೇಡಿ. ಸರಕಾರವು ಇದರ ಕುರಿತು ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ವಿಧಾನಪರಿಷತ್ ಸದಸ್ಯ ನಸೀರ್ ಅಹ್ಮದ್ ಅವರು ದಿವಾಳಿ ಎಂದು ಘೋಷಿಸಿಕೊಂಡಿದ್ದಾರೆ. ಈ ದಿವಾಳಿ ಪ್ರಕ್ರಿಯೆ ನಿನ್ನೆ ಮೊನ್ನೆ ಆರಂಭವಾಗಿಲ್ಲ; ಇವರು 21 ಟೆಕ್ಸ್‌ಟೈಲ್ ಕಂಪೆನಿ ಹೊಂದಿದ್ದು, ಸಿಬ್ಬಂದಿಗೆ ಸಂಬಳ, ಇಎಸ್‌ಐ, ಪಿಎಫ್ ಹಣ ಪಾವತಿಸಿಲ್ಲ. ಇಂಥ ವ್ಯಕ್ತಿಯನ್ನು ಮುಖ್ಯಮಂತ್ರಿಗಳಿಗೆ ಸಲಹೆಗಾರರಾಗಿ ಇಟ್ಟುಕೊಂಡಿದ್ದರು ಎಂದು ಟೀಕಿಸಿದರು. ಬ್ಯಾಂಕ್‌ಗಳಿಗೆ, ನೌಕರರಿಗೆ ಹೇಗೆ ಟೋಪಿ ಇಡಬೇಕು ಎಂಬುದಕ್ಕಾಗಿ ಇವರನ್ನು ಸಲಹೆಗಾರರನ್ನಾಗಿ ಇಟ್ಟುಕೊಂಡಿದ್ದರೇ ಎಂದು ಕೇಳಿದರು.

ಇವರು ಪಕ್ಷಕ್ಕೂ ಮೋಸ ಮಾಡಿದವರು. ದಾವಣಗೆರೆ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಕೆಲಸ ಮಾಡಿದ್ದರೆಂದು ಪಕ್ಷದಿಂದ ಉಚ್ಚಾಟಿಸಿದ್ದರು ಎಂದು ಗಮನ ಸೆಳೆದರು. ಅವರು ಈಗಲೂ ವಿಧಾನಪರಿಷತ್ ಸದಸ್ಯರಾಗಿದ್ದಾರೆ ಎಂದು ವಿವರಿಸಿದರು.

1,500 ಕೋಟಿ ಬ್ಯಾಂಕ್ ಹಣ ನುಂಗಿ ನೀರು ಕುಡಿದ ವ್ಯಕ್ತಿ ಬಗ್ಗೆ ಚಕಾರ ಎತ್ತಿಲ್ಲ. ಪಕ್ಷದಿಂದ ಅಮಾನತು ಮಾಡಲು ರಾಹುಲ್ ಗಾಂಧಿಯವರು ಸೂಚಿಸಿಲ್ಲ ಎಂದು ದೂರಿದರು.

ಜೀವಾವಧಿ ಶಿಕ್ಷೆ ಹೊಂದಿದವರನ್ನೂ ಸದಸ್ಯರಾಗಿ ಮುಂದುವರಿಸುತ್ತಾರೆ. ಇದೇ ನಸೀರ್ ಅಹ್ಮದ್ ವಿಧಾನಪರಿಷತ್ತಿನಲ್ಲಿ ಪ್ರಧಾನಿಯವರನ್ನು ವಂಚಕ ಎಂದು ಕರೆದಿದ್ದಾರೆ. ಇವರೇ ವಂಚಕರು ಎಂದರು. ಮತಬ್ಯಾಂಕ್ ರಾಜಕಾರಣದ ದೃಷ್ಟಿಕೋನದಿಂದ ಕಾಂಗ್ರೆಸ್ ಪಕ್ಷ ಇವರನ್ನು ಉಳಿಸಿಕೊಳ್ಳದೇ ಸಾರ್ವಜನಿಕ ಹಿತದೃಷ್ಟಿಯಿಂದ ಪಕ್ಷದಿಂದ ಅಮಾನತು ಮಾಡಬೇಕು ಎಂದು ಆಗ್ರಹಿಸಿದರು. ಬಾಕಿ ಇರುವ ನೌಕರರ ವೇತನ ಮತ್ತು ಪಿಎಫ್ ಹಣವನ್ನು ಸರ್ಕಾರ ವಸೂಲಿ ಮಾಡಬೇಕು ಅಥವಾ ವಂಚನೆಯ ಆರೋಪದ ಮೇಲೆ ಕ್ರಿಮಿನಲ್ ಮೊಕದ್ದಮೆ ಹೂಡಬೇಕು. ಇಂತಹ ಕಳಂಕಿತ ವ್ಯಕ್ತಿಯನ್ನು ಸಿದ್ದರಾಮಯ್ಯನವರು ತಮ್ಮ ಸಲಹೆಗಾರನಾಗಿ ನೇಮಕ ಮಾಡಿಕೊಂಡಿದ್ದು ಅಕ್ಷಮ್ಯ ಅಪರಾಧ.

ಇವರಿಂದ ಸಾಲ ಪಡೆದು ಬ್ಯಾಂಕ್‌ಗಳಿಗೆ ಹೇಗೆ ಮೋಸ ಮಾಡಬಹುದು ಎಂಬುದರ ಬಗ್ಗೆ ಸಲಹೆ ನೀಡಬಲ್ಲವರಾಗಿದ್ದರು. ಈ ಕಳಂಕಿತ ವ್ಯಕ್ತಿಯಿಂದ ಯಾವ ಸಲಹೆ ಪಡೆದರು. ಟೋಪಿ ಇಡುವುದಾ ಅಥವಾ ನೌಕರರಿಗೆ ಪಂಗನಾಮ ಹಾಕುವುದಾ ಇಲ್ಲವೇ ಬ್ಯಾಂಕ್‌ಗಳಿಗೆ ವಂಚನೆಯ ದಾರಿಯ ಸಲಹೆ ಪಡೆಯಲಾಯಿತಾ, ಸಾರ್ವಜನಿಕರ ತೆರಿಗೆ ಹಣ ಮತ್ತು ಬ್ಯಾಂಕ್ ಹಣಕ್ಕೆ ವಂಚನೆ ಮಾಡಿದ್ದಾರೆ ಎಂದರು.

ರಾಹುಲ್ ಗಾಂಧಿಯವರು ಕಂಡ ಕಂಡವರನ್ನೆಲ್ಲಾ 'ಚೋರ್' ಎಂದು ಕರೆಯುತ್ತಾರೆ, ಆದರೆ ತಮ್ಮದೇ ಪಕ್ಷದ ನಾಯಕನೊಬ್ಬ 1,454 ಕೋಟಿ ವಂಚನೆ ಮಾಡಿರುವ ಬಗ್ಗೆ ಉಸಿರೆತ್ತುತ್ತಿಲ್ಲ. ಕಾಂಗ್ರೆಸ್ ಇವರನ್ನು ಕೂಡಲೇ ಪ್ರಾಥಮಿಕ ಸದಸ್ಯತ್ವದಿಂದ ವಜಾ ಮಾಡಬೇಕು. ಇತ್ತೀಚಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷದ ವಂಚಕರು, ಅತ್ಯಾಚಾರಿಗಳು ಮತ್ತು ಕೊಲೆಗಡುಕರು ಕೋರ್ಟ್‌ನಲ್ಲಿ ಶಿಕ್ಷೆಗೆ ಒಳಪಡುತ್ತಿದ್ದಾರೆ. ಆದರೆ ಪಾರ್ಟಿ ಮಾತ್ರ ಅವರ ಮೇಲೆ ಯಾವುದೇ ಕ್ರಮ ಜರುಗಿಸದೆ ಪರೋಕ್ಷವಾಗಿ ಅವರ ಕಾನೂನುಬಾಹಿರ ಕೃತ್ಯಗಳಿಗೆ ಉತ್ತೇಜನ ನೀಡುತ್ತಿದೆ. ಕೂಡಲೇ ಕಾಂಗ್ರೆಸ್ ಓಟು ಬ್ಯಾಂಕ್ ರಾಜಕಾರಣ ಮಾಡದೆ, ನಸೀರ್ ಅಹಮದ್ ರವರನ್ನು ಅಮಾನತು ಮಾಡಬೇಕು ಎಂದು ಒತ್ತಾಯಿಸುತ್ತೇವೆ.



ಬೆಂಗಳೂರಿನ ಕೆ.ಆರ್. ಮಾರುಕಟ್ಟೆಯಲ್ಲಿ ವಾಹನ ಪ್ರವೇಶ ಮತ್ತು ಪಾರ್ಕಿಂಗ್ ವಿನ್ಯಾಸಗಳಿಗೆ ಸಂಬಂಧಿಸಿದಂತೆ ಹೊಸದಾಗಿ ಜಾರಿಗೆ ತರಲಾದ ನಾಗರಿಕ ನಿರ್ಬಂಧಗಳನ್ನು ವಿರೋಧಿಸಿ ಕೆ.ಆರ್.ಆರ್.ಎಸ್. ರೈತ ಗುಂಪಿನ ಸದಸ್ಯರು ವ್ಯಾಪಾರಿಗಳೊಂದಿಗೆ ಪ್ರತಿಭಟನೆ ಕೈಗೊಂಡು ಮಂಗಳವಾರ ಬಂದ್‌ಗೆ ಕರೆ ನೀಡಿದ್ದರು.

# ಅಸ್ತಿತ್ವಕ್ಕಾಗಿ ಜೆಡಿಎಸ್‌ನಿಂದ ಬಿಡದಿ ಟೌನ್‌ಶಿಪ್ ವಿರೋಧ: ಕೆಪಿಸಿಸಿ ವಕ್ತಾರ ಲಕ್ಷ್ಮಣ್ ವಾಗ್ದಾಳಿ

**ಬೆಂಗಳೂರು, ಜೂ.16:** ಬಿಡದಿ ಹೈಟೆಕ್ ಟೌನ್‌ಶಿಪ್ ನಿರ್ಮಾಣದ ಸುತ್ತಲಿನ ರಾಜಕೀಯ ಜಟಾಪಟಿ ಈಗ ಮತ್ತೊಂದು ತೀವ್ರ ಸ್ವರೂಪ ಪಡೆದುಕೊಂಡಿದೆ. ಯೋಜನೆಯ ವಿರುದ್ಧ ಜೆಡಿಎಸ್ ನಡೆಸುತ್ತಿರುವ ಹೋರಾಟ ಕೇವಲ ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳುವ ಹರಸಾಹಸ ಎಂದು ಕೆಪಿಸಿಸಿ ವಕ್ತಾರ ಎನ್. ಲಕ್ಷ್ಮಣ್ ತೀವ್ರವಾಗಿ ವಾಗ್ದಾಳಿ ನಡೆಸಿದ್ದಾರೆ.



ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜಾರಿಗೆ ತರುತ್ತಿದ್ದಾರೆ ಎನ್ನುವ ಒಂದೇ ಕಾರಣಕ್ಕೆ ಜೆಡಿಎಸ್ ಅಂಕಿಸಂಖ್ಯೆಗಳನ್ನು ತಿಳಿಸಿದ್ದಾರೆ. ಯೋಜನೆಯ ವ್ಯಾಪ್ತಿಯಲ್ಲಿ ಒಟ್ಟು 6,063 ರೈತರು ಈಗಾಗಲೇ ಭೂಮಿ ನೀಡಲು ಒಪ್ಪಿಗೆ ಸೂಚಿಸಿದ್ದಾರೆ ಎಂದು ತಿಳಿಸಿದರು.

ಇನ್ನುಳಿದ 1,367 ರೈತರು ಮಾತ್ರ ಇದಕ್ಕೆ ವಿರೋಧ ವ್ಯಕ್ತಪಡಿಸುತ್ತಿದ್ದು, ಇವರು ಸಮಿತಿ ಮುಂದೆ ಲಿಖಿತವಾಗಿಯೇ ಬರೆದುಕೊಟ್ಟಿದ್ದಾರೆ. ಅಂದರೆ, ಕೇವಲ ಶೇ. 11ರಷ್ಟು ರೈತರು ಮಾತ್ರ ಭೂಮಿ ಕೊಡಲ್ಲ

## ಎಚ್‌ಡಿಕೆ ಕುಟುಂಬದಿಂದಲೇ ಪರಿಹಾರ ಕೋರಿ ಪತ್ರ

ಈ ಯೋಜನೆಯಲ್ಲಿ ಯಾವುದೇ ರಿಯಲ್ ಎಸ್ಟೇಟ್ ದಂಧೆ ಅಥವಾ ಲೂಟಿ ನಡೆಯುತ್ತಿಲ್ಲ. ಬದಲಿಗೆ ರೈತರಿಗೆ ಶೇಕಡಾ 50ರಷ್ಟು ಅಭಿವೃದ್ಧಿಪಡಿಸಿದ ಜಮೀನನ್ನು (ಪ್ರತಿ ಎಕರೆಗೆ 9,600 ಚದರ ಅಡಿ) ವಾಪಸ್ ನೀಡಲಾಗುತ್ತಿದೆ. ಸ್ವತಃ ಕುಮಾರಸ್ವಾಮಿ ಅವರ ಕುಟುಂಬವೇ ಇಲ್ಲಿ ಜಮೀನು ಹೊಂದಿದ್ದು, ಅದಕ್ಕೆ ಪರಿಹಾರ ಕೇಳಿ ಪತ್ರ ಬರೆದಿದೆ ಎಂದು ಲಕ್ಷ್ಮಣ್ ಬಾಂಬ್ ಸಿಡಿಸಿದರು. ಅನಿತಾ ಕುಮಾರಸ್ವಾಮಿ 35 ಎಕರೆ ಹಾಗೂ ನಿಖಿಲ್ ಕುಮಾರಸ್ವಾಮಿ 5 ಎಕರೆ ಜಮೀನಿಗೆ ಪರಿಹಾರ ನೀಡುವಂತೆ ಪತ್ರ ಬರೆದಿದ್ದಾರೆ. ವಿನಯ್ ಗೌಡ ಎಂಬುವವರ ಹೆಸರಿನಲ್ಲಿದ್ದ ಜಮೀನನ್ನು ವಾಪಸ್ ಪಡೆದುಕೊಂಡಿರುವುದಾಗಿ ತಿಳಿಸಿ, ಅದರ ಪರಿಹಾರವನ್ನು ತಮಗೆ ನೀಡುವಂತೆ ಅನಿತಾ ಕುಮಾರಸ್ವಾಮಿ ಕೇಳಿದ್ದಾರೆ. ಇದು ವಿನಯ್ ಗೌಡ ಎಂಬ ಬೇನಾಮಿ ಹೆಸರಿನಲ್ಲಿ ಮಾಡಲಾದ ಕ್ಲೈಮ್‌ನಂತೆ ಕಾಣುತ್ತಿದೆ ಎಂದು ಗಂಭೀರ ಆರೋಪ ಮಾಡಿದರು. ಡಿಎಲ್‌ಎಫ್ ಸಂಸ್ಥೆಗೆ ಜಾಗವನ್ನೇ ಕೊಟ್ಟಿಲ್ಲ, ಅವರಿಂದ ಹಣ ಪಡೆದು ಭೂಮಿ ನೀಡದಿದ್ದಾಗ ಆ ಹಣವನ್ನು ನಿಯಮಾನುಸಾರ ವಾಪಸ್ ನೀಡಲಾಗಿದೆ. ಇದರಲ್ಲಿ ಯಾವುದೇ ಅಕ್ರಮ ನಡೆದಿಲ್ಲ. ಕುಮಾರಸ್ವಾಮಿ ಅವರು ಪದೇ ಪದೇ ಸುಳ್ಳು ಹೇಳುವುದನ್ನು ಬಿಡಬೇಕು. ಇನ್ನು ಬೆಂಗಳೂರಿನ ಕಸದ ವಿಚಾರದಲ್ಲಿ ಆರ್. ಅಶೋಕ್ ಮಾಡಿರುವ ಆರೋಪಗಳು ಪೂರ್ತಿ ನಿರಾಧಾರ. ಸುಳ್ಳು ಹೇಳುವುದರಲ್ಲಿ ಅಶೋಕ್ ನಂಬರ್ ವನ್ ಆಗಿದ್ದು, ಇವರಿಬ್ಬರಿಗೂ ಸುಳ್ಳು ಹೇಳಿದ್ದಕ್ಕಾಗಿ ಪ್ರಶಸ್ತಿ ಕೊಡಿಸಬೇಕು ಎಂದು ವ್ಯಂಗ್ಯವಾಡಿದರು.

ಬಿಡದಿ ಟೌನ್‌ಶಿಪ್ ಯೋಜನೆಗೆ ಮೊಟ್ಟಮೊದಲ ಬಾರಿಗೆ ಒರಿಜಿನಲ್ ನೋಟಿಫಿಕೇಶನ್ ಆಗಿದ್ದು ಎಚ್.ಡಿ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲೇ ಎಂದು ಲಕ್ಷ್ಮಣ್ ನೆನಪಿಸಿದರು.

ಬಿ.ಎಸ್.ಯಡಿಯೂರಪ್ಪ ಅವರು ಈ ಯೋಜನೆಯನ್ನು ಪೋಷಿಸಿ ಮುಂದುವರಿಸಿದ್ದರು. ಅಂದು ತಾವೇ ತಂದ ಯೋಜನೆಯನ್ನು ಇಂದು ನಾಯಕರು ರಾಜಕೀಯ ಮಾಡುತ್ತಿದ್ದಾರೆ. ಡಿ.ಕೆ. ಶಿವಕುಮಾರ್ ಅವರಿಗೆ ಕೆಟ್ಟ ಹೆಸರು ತರಬೇಕು ಎನ್ನುವ ಏಕೈಕ ಉದ್ದೇಶದಿಂದ ಈ ಹೋರಾಟ ರೂಪಿಸಲಾಗಿದ್ದೆಂದು ಆರೋಪಿಸಿದರು.

ಯೋಜನೆಗೆ ಶೇ.88 ರಷ್ಟು ರೈತರು ಭೂಮಿ ಕೊಡಲು ಒಪ್ಪಿಲ್ಲ ಎಂಬ ಜೆಡಿಎಸ್ ವಾದವನ್ನು ಸಂಪೂರ್ಣ ಸುಳ್ಳು ಎಂದು ತಳ್ಳಿಹಾಕಿದ ಲಕ್ಷ್ಮಣ್, ಇಲಾಖೆಯ ಅಧಿಕೃತ ಎನ್ನುತ್ತಿದ್ದಾರೆಯೇ ಹೊರತು ಶೇ. 88ರಷ್ಟು ಮಂದಿ ಅಲ್ಲ. ಇನ್ನು ನೋಟಿಸ್ ನೀಡಿದರೂ ಬಾರದ 247 ಮಂದಿ ಪೂರ್ತಿ ಬೋಗಸ್ ಆಸಾಮಿಗಳಂತೆ ಕಾಣುತ್ತಿದ್ದಾರೆ. ಇತ್ತೀಚೆಗೆ ನಡೆದ ಧರಣಿಯಲ್ಲಿ ಭಾಗವಹಿಸಿದ್ದವರಲ್ಲಿ ಹೆಚ್ಚಿನವರು ನಿಜವಾದ ರೈತರಲ್ಲ, ಹಸಿರು ಶಾಲು ಹೊದ್ದಿದ್ದ ಜೆಡಿಎಸ್ ಕಾರ್ಯಕರ್ತರಾಗಿದ್ದರು ಎಂದರು.

### ನ್ಯಾಯಾಲಯದ ಸಮಯ ವ್ಯರ್ಥ ಮಾಡಿದ್ದಕ್ಕೆ ಅರ್ಜಿದಾರರಿಗೆ 50 ಸಾವಿರ ರೂ. ದಂಡ ವಿಧಿಸಿ ಹೈಕೋರ್ಟ್ ಆದೇಶ

# ಸಂಪುಟ ರಚನೆ ಸಂವಿಧಾನಬಾಹಿರವೆಂದು ಘೋಷಿಸುವಂತೆ ಕೋರಿದ್ದ ಮನವಿ ವಜಾ

**ಬೆಂಗಳೂರು, ಜೂ.16:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ 14 ಮಂದಿ ಸಚಿವರ ಪ್ರಮಾಣ ವಚನ ಸ್ವೀಕಾರ ಹಾಗೂ ಮಂತ್ರಿಮಂಡಲದ ರಚನೆ ಸಂವಿಧಾನಬಾಹಿರವೆಂದು ಘೋಷಿಸುವಂತೆ ಕೋರಿ ಸಲ್ಲಿಕೆಯಾಗಿದ್ದ ಅರ್ಜಿ ವಜಾಗೊಳಿಸಿರುವ ಹೈಕೋರ್ಟ್, ಅರ್ಜಿದಾರರಿಗೆ 50 ಸಾವಿರ ರೂ. ದಂಡ ವಿಧಿಸಿದೆ.

ಮುಖ್ಯಮಂತ್ರಿ ಹಾಗೂ 13 ಸಚಿವರನ್ನು ಪ್ರತಿವಾದಿಗಳನ್ನಾಗಿ ಮಾಡಿ ಹುಬ್ಬಳ್ಳಿಯ ನಿವಾಸಿ ಮಂಗಳಪ್ಪ ತಿಪ್ಪಣ್ಣ ಹುಲಿಕೇರಿ ಎಂಬುವರು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರಿದ್ದ ವಿಭಾಗೀಯ ನ್ಯಾಯಪೀಠ ಮಂಗಳವಾರ ವಿಚಾರಣೆ ನಡೆಸಿತು. ಕೆಲಕಾಲ ಅರ್ಜಿ ಆಲಿಸಿದ ನ್ಯಾಯಪೀಠ, ಇದೊಂದು ಊಹೆ ಮತ್ತು ಗ್ರಹಿಕೆಗಳ ಆಧಾರದಲ್ಲಿ ಪ್ರಚಾರ ಗಿಟ್ಟಿಸಿಕೊಳ್ಳಲು




ಸಲ್ಲಿಸಲಾಗಿರುವ ಕ್ಷುಲ್ಲಕ ಅರ್ಜಿಯಾಗಿದೆ. ಇಂಥ ಅರ್ಜಿ ಸಲ್ಲಿಸುವ ಮೂಲಕ ನ್ಯಾಯಾಲಯದ ಅಮೂಲ್ಯ ಸಮಯ ವ್ಯರ್ಥ ಮಾಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿ, ಅರ್ಜಿದಾರರಿಗೆ 50 ಸಾವಿರ ರೂ. ದಂಡ ವಿಧಿಸಿ ಅರ್ಜಿ ವಜಾಗೊಳಿಸಿ ಆದೇಶಿಸಿತು.

ಜತೆಗೆ, ದಂಡದ ಮೊತ್ತವನ್ನು 2 ವಾರಗಳಲ್ಲಿ ಕಾನೂನು ಸೇವಾ ಪ್ರಾಧಿಕಾರಕ್ಕೆ ಪಾವತಿಸಬೇಕು ಎಂದು ನಿರ್ದೇಶನ ನೀಡಿತು. ಈ ಮಧ್ಯೆ, ಅರ್ಜಿ ಹಿಂಪಡೆದುಕೊಳ್ಳಲಾಗುವುದು ಎಂದು ವಕೀಲರು ಪದೇಪದೇ ಮನವಿ ಮಾಡಿದರಾದರೂ, ಅದನ್ನು ನ್ಯಾಯಪೀಠ ತಳ್ಳಿ ಹಾಕಿತು.

### ಸಚಿವ ಪ್ರಿಯಾಂಕ್ ಖರ್ಗೆಗೆ ವಿಎಚ್‌ಪಿ ಅಂತಾರಾಷ್ಟ್ರೀಯ ಅಧ್ಯಕ್ಷ ಅಲೋಕ್ ಕುಮಾರ್ ತಿರುಗೇಟು

# ಸಂಘದ ಗುರುದಕ್ಷಿಣೆ ನಿಧಿಗೆ ಆದಾಯ ತೆರಿಗೆ ವಿನಾಯಿತಿ ಇದೆ

**ಬೆಂಗಳೂರು, ಜೂ.16**ಆರ್.ಎಸ್.ಎಸ್ ನೋಂದಣಿ ಪ್ರಶ್ನಿಸಿ ಮೋಹನ್ ಭಾಗವತ್ ಅವರಿಗೆ ಪತ್ರ ಬರೆದಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ವಿಶ್ವ ಹಿಂದೂ ಪರಿಷತ್ ಅಂತಾರಾಷ್ಟ್ರೀಯ ಅಧ್ಯಕ್ಷ ಅಲೋಕ್ ಕುಮಾರ್ ತಿರುಗೇಟು ನೀಡಿದ್ದಾರೆ.

ದೇಶದ ಎಲ್ಲಾ ಸಂಸ್ಥೆಗಳೂ ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕು ಎಂದು ಹೇಳುವ ಕಾನೂನು ಎಲ್ಲಿದೆ ಎಂಬುದನ್ನು ಮೊದಲು ಖರ್ಗೆ ಉಲ್ಲೇಖಿಸಲಿ ಎಂದು ಸವಾಲು ಹಾಕಿದ್ದಾರೆ. ಸಂಘದ 'ಗುರುದಕ್ಷಿಣೆ' ನಿಧಿಗೆ ಆದಾಯ ತೆರಿಗೆಯಿಂದ ವಿನಾಯಿತಿ ಇದೆ ಎಂದು ಹೈಕೋರ್ಟ್ ನೀಡಿರುವ ಹಳೆಯ ತೀರ್ಪುಗಳನ್ನು ಅವರು ನೆನಪಿಸಿದ್ದಾರೆ.

ಅಲ್ಲದೆ, ಇಂತಹ ಟೀಕೆಗಳ ಮೂಲಕ ಆರ್.ಎಸ್.ಎಸ್ ವರ್ಚಸ್ಸಿಗೆ ಮಸಿ ಬಳಿಯಲು ಕಾಂಗ್ರೆಸ್ ಯತ್ನಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.




ಆರ್.ಎಸ್.ಎಸ್ ಸಂಸ್ಥೆಯ ಆರ್ಥಿಕ ಪಾರದರ್ಶಕತೆ ಮತ್ತು ನಿಧಿ ಸಂಗ್ರಹಣೆಯ ಬಗ್ಗೆ ಮಾತನಾಡಿರುವ ಅಲೋಕ್ ಕುಮಾರ್, ಸಂಘದ ಕಾರ್ಯವೈಖರಿಯನ್ನು ಸ್ಪಷ್ಟಪಡಿಸಿದ್ದಾರೆ.

ಆರ್.ಎಸ್.ಎಸ್ ವಿಶ್ವಾದ್ಯಂತ ಯಾವುದೇ ಬಾಹ್ಯ ಸಂಸ್ಥೆಗಳಿಂದ, ವಿದೇಶಗಳಿಂದ ಅಥವಾ ಸಾರ್ವಜನಿಕರಿಂದ ದೇಣಿಗೆಯ ರೂಪದಲ್ಲಿ ಹಣವನ್ನು ಸ್ವೀಕರಿಸುವುದಿಲ್ಲ. ಸಂಘದ ಒಳಗೆ ವರ್ಷಕ್ಕೊಮ್ಮೆ 'ಗುರುದಕ್ಷಿಣೆ' ಕಾರ್ಯಕ್ರಮ ನಡೆಯುತ್ತದೆ. ಸಂಘದ ಸ್ವಯಂಸೇವಕರು ಮಾತ್ರ ತಮ್ಮ ಶಕ್ತ್ಯಾನುಸಾರ ನೀಡುವ ಕಾಣಿಕೆಯಿಂದಲೇ ಸಂಘದ ಎಲ್ಲಾ ಸಾಮಾಜಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳು ನಡೆಯುತ್ತವೆ ಎಂದಿದ್ದಾರೆ.

# ದುಷ್ಕರ್ಮಿಗಳಿಂದ ಆರ್‌ಟಿಓ ಕಚೇರಿಗಳನ್ನು ಸ್ಫೋಟಿಸುವ ಬೆದರಿಕೆ

**ಬೆಂಗಳೂರು, ಜೂ.16:** ರಾಜಧಾನಿ ಬೆಂಗಳೂರಿನ ವಿವಿಧ ಪ್ರಾದೇಶಿಕ ಸಾರಿಗೆ ಕಚೇರಿಗಳಿಗೆ ಬಾಂಬ್ ಇಟ್ಟು ಸ್ಫೋಟಿಸುವುದಾಗಿ ದುಷ್ಕರ್ಮಿ ಗಳು ಇ-ಮೇಲ್ ಮೂಲಕ ಬೆದರಿಕೆ ಹಾಕಿರುವ ಆಘಾತಕಾರಿ ಘಟನೆ ನಡೆದಿದೆ.

ನಗರದ ಕಸ್ತೂರಿನಗರ, ಜ್ಞಾನ ಭಾರತಿ, ತಲಘಟ್ಟಪುರ ಹಾಗೂ ಎಚ್.ಎಸ್.ಆರ್ ಲೇಔಟ್ ಸೇರಿದಂತೆ ಹಲವು ಪ್ರಮುಖ ಆರ್‌ಟಿಓ ಕಚೇರಿಗಳಿಗೆ ಈ ಬಾಂಬ್ ಬೆದರಿಕೆ ಇ-ಮೇಲ್ ಬಂದಿದೆ. ಮಂಗಳವಾರ ಮಧ್ಯಾಹ್ನ ಸುಮಾರು 1:30ರ ಸುಮಾರಿಗೆ ದುಷ್ಕರ್ಮಿಗಳು ಈ ಇ-ಮೇಲ್ ಕಳುಹಿಸಿದ್ದು, ಕಚೇರಿಗಳನ್ನು ಸ್ಫೋಟಿಸುವುದಾಗಿ ಎಚ್ಚರಿಸಿದ್ದರು. ಬೆದರಿಕೆ ಸಂದೇಶ ತಿಳಿಯುತ್ತಿದ್ದಂತೆಯೇ ಆರ್‌ಟಿಓ ಕಚೇರಿಗಳಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ವಿಷಯ ತಿಳಿಯುತ್ತಿದ್ದಂತೆಯೇ ತಕ್ಷಣ ಎಚ್ಚೆತ್ತ ಸ್ಥಳೀಯ ಪೊಲೀಸರು ಮತ್ತು ಶ್ವಾನದಳ ಹಾಗೂ ಬಾಂಬ್ ಪತ್ತೆ ದಳದ ಸಿಬ್ಬಂದಿ ಆಯಾ ಆರ್‌ಟಿಓ ಕಚೇರಿಗಳಿಗೆ ಧಾವಿಸಿದರು. ಮುಂಜಾಗ್ರತಾ ಕ್ರಮವಾಗಿ ಕಚೇರಿಯಲ್ಲಿದ್ದ ಸಿಬ್ಬಂದಿ ಮತ್ತು ಸಾರ್ವಜನಿಕರನ್ನು ಸುರಕ್ಷಿತ ಸ್ಥಳಕ್ಕೆ ಕಳುಹಿಸಿ,




ಕಚೇರಿಯ ಮೂಲೆಮೂಲೆಗಳಲ್ಲೂ ತೀವ್ರ ಶೋಧ ಕಾರ್ಯ ನಡೆಸಿದರು.

ಪೊಲೀಸರು ನಡೆಸಿದ ಸುದೀರ್ಘ ಹಾಗೂ ಸರಣಿ ಪರಿಶೀಲನೆಯ ನಂತರ ಯಾವುದೇ ಕಚೇರಿಯಲ್ಲೂ ಯಾವುದೇ ಅನುಮಾನಾಸ್ಪದ ವಸ್ತು ಅಥವಾ ಬಾಂಬ್ ಪತ್ತೆಯಾಗಿಲ್ಲ. ಹೀಗಾಗಿ ಇದು ಸಾರ್ವಜನಿಕರಲ್ಲಿ ಗೊಂದಲ ಹಾಗೂ ಆತಂಕ ಸೃಷ್ಟಿಸಲು ದುಷ್ಕರ್ಮಿಗಳು ಮಾಡಿದ ಹುಸಿ ಬಾಂಬ್ ಬೆದರಿಕೆ ಕರೆ (ಇ-ಮೇಲ್) ಎಂಬುದು ಸ್ಪಷ್ಟವಾಗಿದೆ. ತನಿಖೆಯ ನಂತರ ಪೊಲೀಸರು ಹಾಗೂ ಸಾರ್ವಜನಿಕರು ನಿರಾಳರಾಗಿದ್ದಾರೆ.

# ಮುಂಗಾರು ಕೊರತೆ: ಜಲಾಶಯಗಳಲ್ಲಿ ನೀರಿನ ಸಂಗ್ರಹ ಕುಸಿತ

**ಬೆಂಗಳೂರು, ಜೂ.16:** ರಾಜ್ಯದಲ್ಲಿ ನೈರುತ್ಯ ಮುಂಗಾರು ಕೊರತೆಯಿಂದ ಬರದ ಆತಂಕ ಎದುರಾಗಿದ್ದು ಜಲಾಶಯಗಳಲ್ಲೂ ನೀರಿನ ಮಟ್ಟ ಕುಸಿದಿದೆ ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾಗದಿದ್ದರೆ ಕುಡಿಯುವ ನೀರಿಗೂ ತತ್ವಾರವಾಗಲಿದೆ.

ದೇಶ ಹಾಗೂ ರಾಜ್ಯದಲ್ಲಿ ಮುಂಗಾರು ಮಳೆ ಕಡಿಮೆಯಾಗಿದ್ದು ಜೂನ್ ಮೊದಲ ವಾರದಲ್ಲಿ ರಾಜ್ಯದಲ್ಲಿ ಮುಂಗಾರು ಮಳೆ ವಾಡಿಕೆಗಿಂತ ಶೇ.21ರಷ್ಟು ಕಡಿಮೆಯಾಗಿದೆ ಮಳೆ ಕೊರತೆಯಿಂದ ರಾಜ್ಯದ ಜಲಾಶಯಗಳಲ್ಲೂ ನೀರಿನ ಮಟ್ಟ ಕುಸಿದಿದ್ದು



ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಜಲಾಶಯಗಳಲ್ಲಿ ನೀರಿನ ಸಂಗ್ರಹ ತೀರಾ ಕಡಿಮೆ ಇದೆ ಹಾಗಾಗಿ ಬರದ ಆತಂಕದ ಜೊತೆಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆಯೂ ಇದೆ ಮಳೆ ಕೊರತೆಯ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ನಿನ್ನೆ ಅಧಿಕಾರಿಗಳ ಸಭೆ ನಡೆಸಿ ಮುಂದಿನ ದಿನಗಳಲ್ಲೂ ಮಳೆ ಕೊರತೆ ಮುಂದುವರಿದರೆ ಬರ ಪರಿಸ್ಥಿತಿಯನ್ನು ಎದುರಿಸಲು ತಯಾರಿ ತಯಾರಿ ಮಾಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಸೂಚಿಸಿದ್ದಾರೆ ಬೆಂಗಳೂರು ಸೇರಿದಂತೆ ರಾಜ್ಯದ ದಕ್ಷಿಣ ಭಾಗಗಳಿಗೆ ಕುಡಿಯುವ ನೀರು ಒದಗಿಸುವ ಕಾವೇರಿ ಜಲಾಯನ ಪ್ರದೇಶದಲ್ಲೂ ಮಳೆ ವಾಡಿಕೆಗಿಂತ ಕಡಿಮೆಯಾಗಿದೆ ಈ ವರ್ಷ ಕಾವೇರಿ ಕಣಿವೆಯಲ್ಲಿ ಶೇಕಡ 36ರಷ್ಟು ಮಳೆ ಕೊರತೆ ಆಗಿದೆ ಇಷ್ಟೇ ಅಲ್ಲದೆ ಕರಾವಳಿಯಲ್ಲೂ ಶೇ.41%ರಷ್ಟು ಮಳೆ ಕಡಿಮೆಯಾಗಿದೆ. ರಾಜ್ಯ ಅಷ್ಟೇ ಅಲ್ಲ ಇಡೀ ದೇಶದಲ್ಲೇ ಮಳೆ ಕೊರತೆ ಉಂಟಾಗಿದೆ ನೈರುತ್ಯ ಮುಂಗಾರಿನ ಮಳೆ ಕೊರತೆ ಇಡೀ ದೇಶದಲ್ಲಿ ಶೇಕಡ 40ರಷ್ಟು ಆಗಿದ್ದು ಅಣೆಕಟ್ಟುಗಳು ಖಾಲಿಯಾಗಿವೆ.

**ಇನ್ನು ಒಂದು ವಾರ ಮಳೆ ಇಲ್ಲ:** ಮುಂಗಾರು ಮಾರುತಗಳು ತಾಂತ್ರಿಕವಾಗಿ ಮುನ್ನಡೆಯುತ್ತಿದ್ದರೂ, ವ್ಯಾಪಕ ಮಳೆಯಾಗುವ ಪ್ರಕ್ರಿಯೆ ಮುಂದಿನ



ಕನಿಷ್ಠ ಒಂದು ವಾರದ ಮಟ್ಟಿಗೆ ತಣ್ಣಗಾಗುವ ಸಾಧ್ಯತೆಯಿದೆ. ಹವಾಮಾನ ಮಾದರಿಗಳ ಪ್ರಕಾರ, ಪ್ರಸ್ತುತ ಉಂಟಾಗಿರುವ ಈ ಮಳೆ ಕೊರತೆಯು ಜೂನ್ 23ರ ಆಸುಪಾಸಿನವರೆಗೂ ಮುಂದುವರಿಯಲಿದ್ದು, ಆ ನಂತರವಷ್ಟೇ ಮುಂಗಾರು ಚುರುಕಾಗುವ ಮುನ್ಸೂಚನೆ ಲಭ್ಯವಾಗಿದೆ.

ಹವಾಮಾನ ತಜ್ಞರ ಪ್ರಕಾರ, ಮುಂಗಾರು ಮಾರುತಗಳು ಈಗಾಗಲೇ ಮಧ್ಯ ಹಾಗೂ ಪೂರ್ವ ಭಾರತದ ಹಲವು ಭಾಗಗಳಿಗೆ ಪ್ರವೇಶಿಸಿವೆ. ಆದರೆ, ಮಳೆ ತರುವ ಈ ಮಾರುತಗಳ ವ್ಯವಸ್ಥೆ ಅತ್ಯಂತ ದುರ್ಬಲವಾಗಿದೆ.



ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಅವರು ತಮ್ಮ ಅಧ್ಯಕ್ಷತೆಯಲ್ಲಿ ಸಂಸದೀಯ ಸ್ಥಾಯಿ ಸಮಿತಿಯ ಪ್ರವಾಸದ ಅಂಗವಾಗಿ ಕೋಲ್ಕತ್ತಾದಲ್ಲಿ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರನ್ನು ಭೇಟಿ ಮಾಡಿದ್ದರು. ಈ ಸಂದರ್ಭದಲ್ಲಿ ಬಂಗಾಳದಲ್ಲಿ ಭಾರತೀಯ ಜನತಾ ಪಕ್ಷದ ಐತಿಹಾಸಿಕ ವಿಜಯಕ್ಕೆ ಅವರಿಗೆ ಅಭಿನಂದನೆ ಸಲ್ಲಿಸಿ, ರಾಜ್ಯದ ಸರ್ವಾಂಗೀಣ ಅಭಿವೃದ್ಧಿ ಹಾಗೂ ಜನಕಲ್ಯಾಣಕ್ಕಾಗಿ ಅವರ ನಾಯಕತ್ವದಲ್ಲಿ ಯಶಸ್ವಿ ಆಡಳಿತ ದೊರೆಯಲಿ ಎಂದು ಶುಭ ಹಾರೈಸಿದರು.

# ರೈತರಿಗೆ ರಸಗೊಬ್ಬರ ಸಮಸ್ಯೆಯಾದರೆ ಅಧಿಕಾರಿಗಳೇ ಹೊಣೆ: ಖಂಡ್ರೆ ಎಚ್ಚರಿಕೆ

**ಬೀದರ್, ಜೂ. 16**: ಮುಂಗಾರು ಹಂಗಾಮು ಈಗಾಗಲೇ ಆರಂಭವಾಗಿದ್ದು, ಅಲ್ಲಲ್ಲಿ ಮಳೆ ಕೂಡ ಅಲ್ಪಸ್ವಲ್ಪ ಆಗುತ್ತಿದೆ. ಜಿಲ್ಲೆಯಲ್ಲಿ ರೈತರಿಗೆ ರಸಗೊಬ್ಬರ ಸಮಸ್ಯೆಯಾದರೆ ಅಮಾನತು ಮಾಡಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಎಚ್ಚರಿಕೆ ನೀಡಿದರು.



ಗ್ರಾಮೀಣ ಅಭಿವೃದ್ಧಿ ಮತ್ತು ಪಮಚಾಯತ್ ರಾಜ್ ಸಚಿವರಾಗಿ ಅಧಿಕಾರ ಸ್ವೀಕರಿಸಿದ ನಂತರ ಮೊದಲ ಬಾರಿಗೆ ಜಿಲ್ಲೆಗೆ ಆಗಮಿಸಿದ ಅವರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತಮ್ಮ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿ, ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟ ಹಾಗೂ ಖಾಸಗಿ ಮಾರಾಟಗಾರರು ಪ್ರತಿದಿನದ ಮಾರಾಟದ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ದಾಖಲಿಸುತ್ತಿಲ್ಲ. ಇದರಿಂದ ಜಿಲ್ಲೆಗೆ ಸಮರ್ಪಕ ಪೂರೈಕೆ ಆಗುತ್ತಿಲ್ಲ. ತಕ್ಷಣದಿಂದಲೇ ಎಲ್ಲಾ ಖಾಸಗಿ ಮಾರಾಟಗಾರರು ದಿನನಿತ್ಯದ ಮಾರಾಟ ಮಾಹಿತಿಯನ್ನು ಕಡ್ಡಾಯವಾಗಿ ದಾಖಲಿಸಬೇಕು. ನಿಯಮ ಉಲ್ಲಂಘಿಸುವ ಮಾರಾಟಗಾರರ ಪರವಾನಗಿ ರದ್ದುಪಡಿಸಬೇಕು' ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಬಿತ್ತನೆ ಬೀಜಗಳ ಕೊರತೆ ಇಲ್ಲ. ಈಗಾಗಲೇ ಬಹುತೇಕ ರೈತರಿಗೆ ವಿತರಣೆ ಮಾಡಲಾಗಿದೆ. ಆದರೆ, ರಸಗೊಬ್ಬರ ಕೊರತೆ ಉಂಟಾಗಿದೆ ಎಂದು ಕೃಷಿ ಇಲಾಖೆಯ ಅಧಿಕಾರಿಗಳ ಕಾರ್ಯವೈಖರಿಗೆ ಅಸಮಾಧಾನ ವ್ಯಕ್ತಪಡಿಸಿದರು.

ಜೆಜೆಎಂ ಪ್ರಗತಿಗೆ ಅಸಮಾಧಾನ: ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಲಜೀವನ್ ಮಿಷನ್ ಕಾಮಗಾರಿಗಳ ಪ್ರಗತಿ ತೃಪ್ತಿಕರವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ ಸಚಿವರು, 'ಇನ್ನೂ ಅನೇಕ ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು ತಲುಪಿಲ್ಲ' ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಬಾಕಿ ಇರುವ ಎಲ್ಲಾ ಕಾಮಗಾರಿಗಳನ್ನು ಅತ್ಯಂತ ಆದ್ಯತೆಯ ಮೇರೆಗೆ ಮುಂದಿನ ಎರಡು ತಿಂಗಳೊಳಗೆ ಪೂರ್ಣಗೊಳಿಸಬೇಕು. ಜಿಲ್ಲೆಯ ಪ್ರತಿಯೊಂದು ಗ್ರಾಮಕ್ಕೂ ಶುದ್ಧ ಕುಡಿಯುವ ನೀರು ತಲುಪುವಂತೆ ಖಚಿತಪಡಿಸಬೇಕು ಎಂದು ಸೂಚಿಸಿದರು.

ಯಾವುದೇ ಕಾರಣಕ್ಕೂ ಯಾವುದೇ ಹಳ್ಳಿಗಳಿಗೆ ಕಲುಷಿತ ನೀರು ಪೂರೈಕೆಯಾಗಬಾರದು. ಈ ಕುರಿತು ಅಧಿಕಾರಿಗಳು ವಿಶೇಷ ನಿಗಾ ವಹಿಸಬೇಕು. ಶುದ್ಧ ಕುಡಿಯುವ ನೀರು ಪೂರೈಕೆಯಲ್ಲಿ ನಿರ್ಲಕ್ಷ್ಯ ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ, ಕಲ್ಯಾಣ ಪಥ ಹಾಗೂ ಪ್ರಗತಿ ಪಥ ರಸ್ತೆ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಬೇಕು. 'ನಮ್ಮ ಹೊಲ ನಮ್ಮ ದಾರಿ' ಯೋಜನೆಯಡಿ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಕೃಷಿ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳಿಗೆ ಸಂಬಂಧಿಸಿದ ಪ್ರಸ್ತಾವಗಳನ್ನು ಒಂದು ವಾರದೊಳಗೆ ಸಲ್ಲಿಸಬೇಕು. ಜಿಲ್ಲೆಯ ಕೊನೆಯ ಹಳ್ಳಿವರೆಗೂ ಗುಣಮಟ್ಟದ ರಸ್ತೆ ನಿರ್ಮಾಣ ಮಾಡಿ ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲ ಕಲ್ಪಿಸಲಾಗುವುದು ಎಂದರು.

# ಪುಸ್ತಕಗಳು ಜ್ಞಾನ ನಿಡುತ್ತವೆ, ಜ್ಞಾನ ಎಂದೂ ಅಳಿಯುವುದಿಲ್ಲ: ಲೀಲಾವತಿ ಚಾಕೋತೆ

**ಬೀದರ್, ಜೂ. 16:** ಪುಸ್ತಕಗಳು ಜ್ಞಾನ ನಿಡುತ್ತವೆ. ಬಹಿರಂಗದ ವಸ್ತುಗಳು ಅಳಿಯಬಹುದು. ಆದರೆ ಅಂತರಂಗದ ಜ್ಞಾನ ಎಂದಿಗೂ ಅಳಿಯುವದಿಲ್ಲ. ಪುಸ್ತಕಗಳು, ಕವನಗಳು, ಕಥೆಗಳು ಗತಕಾಲದ ಇತಿಹಸವನ್ನು ತಿಳಿಸುತ್ತವೆ ಎಂದು ನಿವೃತ್ತ ಪ್ರಾಚಾರ್ಯ ಲೀಲಾವತಿ ಚಾಕೋತೆ ಹೇಳಿದರು.



ನಗರದ ಕರ್ನಾಟಕ ಬರಹಗರರ ಮತ್ತು ಕಲಾವಿದರ ಸಂಘ, ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಯ ಸಹಯೋಗದಲ್ಲಿ ದಿ.ಕಲಾವತಿ ಪ್ರೊ. ಎಸ್.ಬಿ.ಬಿರಾದಾರ ಅವರು ರಚಿಸಿರುವ 'ಭಾವಕುಸುಮ' ಕವನ ಸಂಕಲನದ ಪುಸ್ತಕ ಬಿಡುಗಡೆ ಮತ್ತು ಪರಿಚಯ ಕಾರ್ಯಕ್ರಮವನ್ನು ಸಸಿಗೆ ನೀರೇರೆದು ಉದ್ಘಟಿಸಿ ಮಾತನಾಡಿದರು.

ಕಲಾವತಿಯವರು ತಮ್ಮ ಭಾವಕುಸುಮದಲ್ಲಿ ಗುರುಪ್ರೇಮ, ಪಾಲಕರ ಪ್ರೇಮ, ಪತಿಯೇ ದೈವ, ಸಮಾಜ ಮತ್ತು ಆಧ್ಯಾತ್ಮ ಕುರಿತು ಬರೆಯಲು ಪ್ರಯತ್ನ ಮಾಡಿದ್ದಾರೆ. ಅವರಿಗೆ ಪತಿ ಪ್ರೊ. ಎಸ್.ಬಿ.ಬಿರಾದಾರ ಅವರ ಸಹಕಾರ ಸಾಕಷ್ಟಿತ್ತು. ಬಿಎ ಪದವೀಧರರಾದ ಅವರು, ಹಲವು ಕವಿತೆಗಳನ್ನು ಬರೆದಿದ್ದಾರೆ. ಒಟ್ಟು ಮೂರು ಪುಸ್ತಕಗಳನ್ನು ರಚಿಸಿ ಸದ್ದಿಲ್ಲದೆ ಸಾಹಿತ್ಯ ಸೇವೆ ಮಾಡಿದ್ದಾರೆ ಎಂದರು.

ಚಿದಂಬರ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ ಮಾತನಾಡಿ, ಸಾಹಿತ್ಯ ಮತ್ತು ಕಲಾಸೇವೆ ಮಾಡುವ ಸಾಧಕರು ಯಾವಾಗಲೂ ಹಠವಾದಿಗಳು ಮತ್ತು ಸ್ವಚ್ಛ ಮನಸ್ಸಿನವರಾಗಿರುತ್ತಾರೆ. ಒಬ್ಬರೇ ಇದ್ದರೂ ತಮ್ಮ ಸೇವೆ ಮುಂದುವರಿಸುವ ಸುಂದರ ಮನಸ್ಸು ಅವರು ಹೊಂದಿರುತ್ತಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಬರಹಗಾರರ ಮತ್ತು ಕಲಾವಿದರ ಸಂಘದ ಅಧ್ಯಕ್ಷ ಜಗನ್ನಾಥ ಹೆಬ್ಬಾಳೆ ಮಾತನಾಡಿ, ಕಲಾವತಿ ಬಿರಾದಾರ ಅವರು ಒಬ್ಬ ಮಹಿಳಾ ಸಾಹಿತಿಯಾಗಿ ಶಾಂತ ಸ್ವಭಾವದವರಾಗಿದ್ದರು. ಈ ಪುಸ್ತಕದಲ್ಲಿ ಅವರು ತಮ್ಮ ಭಾವನೆಗಳನ್ನು ಹೂವಿನಂತೆ ಪೋಣಿಸಿ, ಒಟ್ಟು 63 ಕವನಗಳನ್ನು ಓದುಗರ ಕೈಗೆ ನೀಡಿ ಹೋಗಿದ್ದಾರೆ ಎಂದು ತಿಳಿಸಿದರು.

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ; ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ

## ಪ್ರತಿಯೊಬ್ಬ ಅರ್ಹರಿಗೂ ಸಿಗಲಿ ಮತದಾನದ ಹಕ್ಕು: ಜವಾಬ್ದಾರಿಯುತ ಕಾರ್ಯಕ್ಕೆ ಬಳ್ಳಾರಿ ಜಿಲ್ಲಾಧಿಕಾರಿ ಕರೆ

**ಬಳ್ಳಾರಿ,ಜೂ.16.**ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಅತ್ಯಂತ ಜವಾಬ್ದಾರಿಯಿಂದ ಕೆಲಸ ಮಾಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಆದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು ಸೂಚಿಸಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ, 94-ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮತಗಟ್ಟೆ ಅಧಿಕಾರಿಗಳು, ಮತಗಟ್ಟೆ ಮೇಲ್ವಿಚಾರಕರು ಹಾಗೂ ನೋಡಲ್ ಅಧಿಕಾರಿಗಳಿಗೆ ನಗರದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಮಂಗಳವಾರ ಆಯೋಜಿಸಿದ್ದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಈ ವಿಶೇಷ ತೀವ್ರ ಪರಿಷ್ಕರಣೆಯ ಮುಖ್ಯ ಉದ್ದೇಶ ಕೇವಲ ಹೆಸರುಗಳನ್ನು ತೆಗೆದುಹಾಕುವುದು ಅಲ್ಲ, ಬದಲಿಗೆ ಅರ್ಹರನ್ನು ಸೇರ್ಪಡೆಗೊಳಿಸುವುದು ಮತ್ತು ದೋಷಮುಕ್ತ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದಾಗಿದೆ ಎಂದು ತಿಳಿಸಿದರು.

ಎಸ್‌ಐಆರ್ ಪ್ರಕ್ರಿಯೆಯನ್ನು ಅತ್ಯಂತ ವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಚುನಾವಣಾ ಆಯೋಗವು ವಿಧಿ-ವಿಧಾನಗಳನ್ನು ರೂಪಿಸಿದೆ. ಮನೆ-ಮನೆ ಸಮೀಕ್ಷೆ ಮತ್ತು ಗಣತಿ ಪ್ರಕ್ರಿಯೆಯಲ್ಲಿ ಬೂತ್‌ಮಟ್ಟದ ಅಧಿಕಾರಿಗಳು ಮತ್ತು ವಿವಿಧ ರಾಜಕೀಯ ಪಕ್ಷಗಳು ನೇಮಿಸಿರುವ ಬೂತ್‌ಮಟ್ಟದ ಏಜೆಂಟರು ಮನೆ-ಮನೆಗೆ ಭೇಟಿನೀಡಿ ಮಾಹಿತಿ ಸಂಗ್ರಹಿಸುತ್ತಾರೆ. ಮತದಾರರಿಗೆ ಗಣತಿ ನಮೂನೆಯನ್ನು ನೀಡಲಾಗುತ್ತದೆ. ಇದರಲ್ಲಿ ಎರಡು ಪ್ರತಿಗಳಿರುತ್ತವೆ.ಒಂದನ್ನು ಮತದಾರರು ತಮ್ಮ ಬಳಿ ಇಟ್ಟುಕೊಳ್ಳಬೇಕು, ಮತ್ತೊಂದನ್ನು ಅಧಿಕಾರಿಗಳಿಗೆ ನೀಡಬೇಕು ಎಂದರು.

ಮತದಾನ ಪ್ರಕ್ರಿಯೆ ಮತ್ತು ಮತದಾರರ ಪಟ್ಟಿ ಪರಿಷ್ಕರಣೆಯನ್ನು ಮತ್ತಷ್ಟು ಪಾರದರ್ಶಕ ಹಾಗೂ ಸುಲಭಗೊಳಿಸಲು ತರಲಾಗಿರುವ ಎಸ್‌ಐಆರ್ ತಂತ್ರಾಂಶ/ವ್ಯವಸ್ಥೆಯ ಕುರಿತು ಸವಿಸ್ತಾರವಾದ ಮಾಹಿತಿ ಹೊಂದಬೇಕು. ಈ ವ್ಯವಸ್ಥೆಯನ್ನು ಕ್ಷೇತ್ರ ಮಟ್ಟದಲ್ಲಿ ಹೇಗೆ ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಮತ್ತು ತಾಂತ್ರಿಕ ಸವಾಲುಗಳನ್ನು ಹೇಗೆ ಎದುರಿಸಬೇಕು ಎಂಬುದನ್ನು ಅಧಿಕಾರಿಗಳು ಮನವರಿಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.



ಈ ಪ್ರಕ್ರಿಯೆಯಲ್ಲಿ ಯಾವುದೇ ಆಕ್ಷೇಪಣೆಗಳು ಅಥವಾ ದೂರುಗಳಿದ್ದಲ್ಲಿ, ಜಿಲ್ಲಾಧಿಕಾರಿಗಳು ಅಂತಿಮ ಪ್ರಾಧಿಕಾರವಾಗಿ ಕಾರ್ಯನಿರ್ವಹಿಸುತ್ತಾರೆ ಎಂದು ಅವರು ತಿಳಿಸಿದರು.

ತರಬೇತಿ ನಡೆಯುತ್ತಿದ್ದ ಎಲ್ಲಾ ಕೊಠಡಿಗಳಿಗೂ ಖುದ್ದಾಗಿ ಭೇಟಿ ನೀಡಿದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು, ಅಧಿಕಾರಿಗಳಿಗೆ ಅಗತ್ಯ ಸಲಹೆ-ಸೂಚನೆ ನೀಡಿದರು.

ಮತಗಟ್ಟೆ ಅಧಿಕಾರಿಗಳ ಕರ್ತವ್ಯಗಳು, ತಪ್ಪುಗಳಿಲ್ಲದ ಮತದಾರರ ಪಟ್ಟಿ ಸಿದ್ಧಪಡಿಸುವುದು ಮತ್ತು ಸಾರ್ವಜನಿಕರಿಗೆ ಸೂಕ್ತ ಮಾಹಿತಿ ನೀಡುವುದು ಸೇರಿದಂತೆ ಪರಿಷ್ಕರಣಾ ಪ್ರಕ್ರಿಯೆಯ ವಿವಿಧ ಹಂತಗಳ ಬಗ್ಗೆ ತರಬೇತಿಯಲ್ಲಿ ಸಂಪೂರ್ಣವಾಗಿ ವಿವರಿಸಲಾಯಿತು.

# ಪಬ್‌ನಲ್ಲಿ ಅಗ್ನಿ ಅವಘಡ: ಅಬಕಾರಿ ಡಿಸಿ ಅಮಾನತಿಗೆ ಶಿಫಾರಸು-ಸಚಿವ ಯತೀಂದ್ರ ಸಿದ್ದರಾಮಯ್ಯ

**ಮೈಸೂರು, ಜೂ.16:** ಪಬ್‌ನಲ್ಲಿ ಬೆಂಕಿ ಅವಘಡ ಪ್ರಕರಣಕ್ಕೆ ಸಂಬಂಧಿಸಿದಂತೆ ಅಬಕಾರಿ ಡಿಸಿ ಅಮಾನತಿಗೆ ಶಿಫಾರಸು ಮಾಡಲಾಗಿದೆ ಹಾಗೂ ಪಬ್ ಮಾಲೀಕರ ವಿರುದ್ಧ ದೂರು ದಾಖಲು ಮಾಡಲಾಗಿದ್ದು, ಅವರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ಲೈಸೆನ್ಸ್ ಇಲ್ಲದೆ ಪಬ್ ನಡೆಯುತ್ತಿತ್ತು. ಮೈಸೂರಿನಲ್ಲಿ ಅನೇಕ ಪಬ್, ಬಾರ್ ಅಂಡ್ ರೆಸ್ಟೋರೆಂಟ್‌ಗಳು ಲೈಸೆನ್ಸ್ ಪಡೆಯದೆ ನಡೆಸುತ್ತಿರುವ ವಿಚಾರ ಗೊತ್ತಾಗಿದೆ. ಎಲ್ಲೆಲ್ಲಿ ಅಕ್ರಮ ಹಾಗೂ ಲೈಸೆನ್ಸ್ ಇಲ್ಲದೆ ಬಾರ್ ರೆಸ್ಟೋರೆಂಟ್ ನಡೆಯುತ್ತಿದೆ ಅಂಥವುಗಳ ಮೇಲೆ ಕಠಿಣ ಕ್ರಮ ತೆಗೆದುಕೊಳ್ಳುವಂತೆ ಅಬಕಾರಿ ಡಿಸಿಗೆ ಸೂಚನೆ ಕೊಟ್ಟಿದ್ದೇನೆ. ಲೈಸೆನ್ಸ್ ಇಲ್ಲದೆ ಬಾರ್ ನಡೆಸುತ್ತಿದ್ದರೂ ಅಬಕಾರಿ ಡಿಸಿ ಕಣುಚ್ಚಿ ಕುಳಿತಿದ್ದಾರೆ. ಅಧಿಕಾರಿಗಳ ಮೇಲೂ ಕ್ರಮಕ್ಕೆ ಒತ್ತಾಯ ಕೇಳಿ ಬಂದಿದೆ. ಪೊಲೀಸರಿಗೂ ಕೂಡ ಎಲ್ಲಾ ಕಡೆ ಪರಿಶೀಲನೆ ನಡೆಸಿ ಎಂದು ಸೂಚನೆ ನೀಡಿದ್ದೇನೆ. ಮೈಸೂರಿನ ಎಲ್ಲಾ ವಾಣಿಜ್ಯ ಕಟ್ಟಡಗಳಲ್ಲಿ ಅಗ್ನಿ ಸುರಕ್ಷತೆ ಬಗ್ಗೆ ಮುಂಜಾಗ್ರತೆ ಕ್ರಮ ತೆಗೆದುಕೊಂಡಿರುವ ಕುರಿತು ಪರಿಶೀಲನೆ ನಡೆಸಲು ಮತ್ತು ಇಂತಹ ಘಟನೆ ಮರುಕಳಿಸದಂತೆ ಕ್ರಮ ವಹಿಸಲು ನಿರ್ದೇಶನ ನೀಡಲಾಗಿದೆ.



ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ 5ನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದ್ದೇವೆ. ನಮ ಅಭ್ಯರ್ಥಿಗಳು ಗೆಲ್ಲುತ್ತಾರೆ. ಇಂದು ನಡೆಯುವ ಸಿ.ಎಲ್. ಪಿ ಸಭೆಯಲ್ಲಿ ನಾನು ಕೂಡ ಭಾಗಿಯಾಗು ತ್ತೇನೆ ಎಂದ ಅವರು, ಬಿಡದಿ ಟೌನ್‌ಶಿಪ್ ಮಾಡುವುದು ಅತ್ಯವಶ್ಯಕ. ಶೇ.80ರಷ್ಟು ರೈತರು ಜಮೀನು ಕೊಡಲು ಒಪ್ಪಿದ್ದಾರೆ. ಕೆಲವರು ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದಾರೆ.ಇದರಲ್ಲಿ ಜೆಡಿಎಸ್ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದರು. ಕೆಲವರ ಮಾತನ್ನು ಕೇಳಿ ಯೋಜನೆ ಕೈ ಬಿಡಲು ಆಗಲ್ಲ. ಬೆಂಗಳೂರು ಜನಸಂದಣಿ ಹೆಚ್ಚಾಗಿದೆ. ಬೆಂಗಳೂರು ವಿಸ್ತರಣೆಯ ಅವಶ್ಯಕತೆಯಂತೂ ಇದೆ. ರೈತರೊಂದಿಗೆ ಮಾತುಕತೆ ನಡೆಸಿ, ವಿಶ್ವಾಸಕ್ಕೆ ತೆಗೆದ ುಕೊಂಡು ಯೋಜನೆ ಮಾಡುತ್ತೇವೆ ಎಂದರು.

## ಆರ್‌ಎಸ್‌ಎಸ್ ನೋಂದಣಿ: ಸಚಿವ ಖರ್ಗೆ ಹೇಳಿಕೆ ಸಮರ್ಥಿಸಿದ ಸಚಿವ ಯತೀಂದ್ರ

ಆರೆಸ್ಸೆಸ್‌ನವರು ಹಿಂದೂಗಳಲ್ಲ, ಹಿಂದುತ್ವವಾದಿಗಳು. ಧರ್ಮದ ಹೆಸರಿನಲ್ಲಿ ಏನು ಬೇಕಾದರೂ ಮಾಡಬಹುದಾ ಎಂದಿ ಸಚಿವ ಯತೀಂದ್ರ ಸಿದ್ದರಾಮಯ್ಯ, ಆರೆಸ್ಸೆಸ್ ನೋಂದಣಿ ಮಾಡಿಸಬೇಕೆಂಬ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ಹೇಳಿಕೆ ಕಾನೂನು ಪ್ರಕಾರ ಸರಿಯಾಗಿದೆ ಎಂದಿದ್ದಾರೆ. ನಗರದಲ್ಲಿ ಮಂಗಳವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಆರೆಸ್ಸೆಸ್ ಯಾಕೆ ನೋಂದಣಿ ಮಾಡಿಸಬಾರದು. ದೇಶದಲ್ಲಿ ಎಲ್ಲರಿಗೂ ಒಂದೇ ಕಾನೂನು. ಆರೆಸ್ಸೆಸ್ ಗೆ ಬೇರೆ ಕಾನೂನು ಇಲ್ಲ, ಆರೆಸ್ಸೆಸ್ ಸಾಂಸ್ಕೃತಿಕ ಸಂಘಟನೆ ಎಂದು ಹೇಳಿಕೊಂಡರೂ ವಾಸ್ತವವಾಗಿ ರಾಜಕೀಯ ಸಂಘಟನೆ. ಬಿಜೆಪಿಯ ಪರವಾಗಿ ಕೆಲಸ ಮಾಡುವ ಸಂಸ್ಥೆ, ಹಾಗಾಗಿ ಆರೆಸ್ಸೆಸ್ ದೇಶದ ಕಾನೂನುಗಳನ್ನು ಪಾಲಿಸಬೇಕು ಮತ್ತು ನೋಂದಾಯಿಸಿಕೊಳ್ಳಬೇಕು ಎಂದು ಹೇಳಿದರು.

# ವಚನಾನಂದ ಶ್ರೀಗಳಿಗೆ ಜಾಮೀನು: ಕೆಳ ನ್ಯಾಯಾಲಯದ ನಡೆಗೆ ಹೈಕೋರ್ಟ್ ಅಸಮಾಧಾನ

**ದಾವಣಗೆರೆ, ಜೂ.16:** ದಾವಣಗೆರೆ ಜಿಲ್ಲೆ ಹರಿಹರದ ಹರಹರಪುರದ ಪಂಚಮಸಾಲಿ ಗುರುಪೀಠದ ವಚನಾನಂದ ಸ್ವಾಮೀಜಿ ವಿರುದ್ಧ ದಾಖಲಾಗಿರುವ ಪೋಕ್ಸೋ ಪ್ರಕರಣವು ಈಗ ಕಾನೂನು ವಲಯದಲ್ಲಿ ತೀವ್ರ ಸ್ವರೂಪ ಪಡೆದಿದೆ. ಮಕ್ಕಳ ದುರ್ಬಳಕೆ ಹಾಗೂ ದೌರ್ಜನ್ಯ ಎಸಗಿದ ಗಂಭೀರ ಆರೋಪ ಎದುರಿಸುತ್ತಿರುವ ಸ್ವಾಮೀಜಿಗೆ ಕೆಳ ನ್ಯಾಯಾಲಯವು ನಿರೀಕ್ಷಣಾ ಜಾಮೀನು ಮಂಜೂರು ಮಾಡಿರುವುದಕ್ಕೆ ಕರ್ನಾಟಕ ಹೈಕೋರ್ಟ್ ತೀವ್ರ ಕಳವಳ ಮತ್ತು ಅಸಮಾಧಾನ ವ್ಯಕ್ತಪಡಿಸಿದೆ.

ದೂರು ದಾಖಲಾಗುವ ಮುನ್ನವೇ ಜಾಮೀನು. ಈ ಪ್ರಕರಣದಲ್ಲಿ ಅತ್ಯಂತ ಆಘಾತಕಾರಿ ವಿಷಯವೆಂದರೆ, ಸ್ವಾಮೀಜಿ ವಿರುದ್ಧ ಅಧಿಕೃತವಾಗಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗುವ ಮುನ್ನವೇ ದಾವಣಗೆರೆ ಜಿಲ್ಲಾ ನ್ಯಾಯಾಲಯವು ಅವರಿಗೆ ನಿರೀಕ್ಷಣಾ ಜಾಮೀನು ನೀಡಿತ್ತು. ಬಂಧನದ ಭೀತಿಯಲ್ಲಿದ್ದ ಸ್ವಾಮೀಜಿಗೆ ಏಪ್ರಿಲ್ 21ರಂದು ಜಿಲ್ಲಾ ನ್ಯಾಯಾಲಯವು ಈ ಪರಿಹಾರ ಒದಗಿಸಿತ್ತು. ಆದರೆ, ಕಾನೂನಿನ ಪ್ರಕ್ರಿಯೆ ಪೂರ್ಣಗೊಳ್ಳುವ ಮುನ್ನವೇ ಜಾಮೀನು ನೀಡಿರುವ ಕೆಳ ನ್ಯಾಯಾ ಲಯದ ಕ್ರಮವನ್ನು ಹೈಕೋರ್ಟ್ ಗಂಭೀರವಾಗಿ ಪರಿಗಣಿಸಿದೆ. ಸ್ವಾಮೀಜಿಗೆ ನೀಡಲಾದ ನಿರೀಕ್ಷಣಾ ಜಾಮೀನನ್ನು ಪ್ರಶ್ನಿಸಿ ಸಂತ್ರಸ್ತ ಬಾಲಕನ ತಾಯಿ ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠವು, ಕೆಳ ನ್ಯಾಯಾಲಯದ ನಡೆಗೆ ಆಶ್ಚರ್ಯ ವ್ಯಕ್ತಪಡಿಸಿದೆ. "ದೂರು ದಾಖಲಾಗುವ ಮುನ್ನವೇ ನಿರೀಕ್ಷಣಾ ಜಾಮೀನು




ನೀಡಿರುವುದು ಅತ್ಯಂತ ಆಘಾತಕಾರಿಯಾಗಿದೆ. ಮೇಲ್ನೋಟಕ್ಕೆ ಈ ಜಾಮೀನು ಮಂಜೂರು ಮಾಡಿದ ವಿಧಾನವೇ ಸರಿಯಾಗಿ ಕಂಡುಬರುತ್ತಿಲ್ಲ" ಎಂದು ಪೀಠವು ಕಠಿಣ ಪದಗಳಲ್ಲಿ ಅಭಿಪ್ರಾಯಪಟ್ಟಿದೆ. ಮಕ್ಕಳ ರಕ್ಷಣೆಗಾಗಿ ಇರುವ ಅತ್ಯಂತ ಕಠಿಣ ಕಾನೂನಾದ ಪೋಕ್ಸೋ ಕಾಯ್ದೆಯಡಿ ವಚನಾನಂದ ಸ್ವಾಮೀಜಿ ವಿರುದ್ಧ ಗಂಭೀರ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಇಂತಹ ಸೂಕ್ಷ್ಮ ಹಾಗೂ ಗಂಭೀರ ಸ್ವರೂಪದ ಪ್ರಕರಣಗಳಲ್ಲಿ ಕಾನೂನಿನ ಚೌಕಟ್ಟನ್ನು ಸರಿಯಾಗಿ ಪಾಲಿಸಬೇಕಿತ್ತೆಂದು ಕೋರ್ಟ್ ಹೇಳಿದೆ. ಆರೋಪಗಳು ಮೇಲ್ನೋಟಕ್ಕೆ ಗಂಭೀರವಾಗಿದ್ದರೂ, ಕೆಳ ನ್ಯಾಯಾಲಯವು ತುರ್ತಾಗಿ ಜಾಮೀನು ನೀಡಿದ ರೀತಿಗೆ ಹೈಕೋರ್ಟ್ ಆಕ್ಷೇಪ ವ್ಯಕ್ತಪಡಿಸಿದೆ.

ಸದ್ಯ ಹೈಕೋರ್ಟ್ ಈ ಪ್ರಕರಣವನ್ನು ಗಂಭೀರವಾಗಿ ಕೈಗೆತ್ತಿಕೊಂಡಿದ್ದು, ಪ್ರತಿವಾದಿಯಾಗಿರುವ ವಚನಾನಂದ ಸ್ವಾಮೀಜಿಗೆ ತುರ್ತು ನೋಟಿಸ್ ಜಾರಿ ಮಾಡಿದೆ. ಕೆಳ ನ್ಯಾಯಾಲಯದ ಜಾಮೀನು ಆದೇಶದ ಸಾಧಕ-ಬಾಧಕಗಳನ್ನು ಕೂಲಂಕಷವಾಗಿ ಪರಿಶೀಲಿಸಲು ನಿರ್ಧರಿಸಿರುವ ನ್ಯಾಯಪೀಠವು, ಮುಂದಿನ ಮಹತ್ವದ ವಿಚಾರಣೆಯನ್ನು ಜೂನ್ 23ಕ್ಕೆ ನಿಗದಿಪಡಿಸಿದೆ. ಇದರಿಂದಾಗಿ ವಚನಾನಂದ ಶ್ರೀಗಳಿಗೆ ಮುಂದಿನ ದಿನಗಳಲ್ಲಿ ಕಾನೂನು ಸಂಕಷ್ಟ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ದಟ್ಟವಾಗಿದೆ.

# ಸಾಂವಿಧಾನಿಕ ಹಕ್ಕುಗಳ ಜಾಗೃತಿ ಮೂಡಿಸಿದ್ದು ಪ್ರೊ.ಕೃಷ್ಣಪ್ಪ: ಧನರಾಜ್

**ಬೀದರ್, ಜೂ. 16:** ರಾಜ್ಯದಲ್ಲಿ ದಲಿತರ ಹಕ್ಕುಗಳ ರಕ್ಷನೆಗಗಿಮತ್ತು ಅವರ ಹಕ್ಕುಗಳನ್ನು ಪಡೆಯಲು ಹೋರಾಟಗಳನ್ನು ರೂಪಿಸುವಲ್ಲಿ ಪ್ರೊ.ಬಿ.ಕೃಷ್ಣಪ್ಪ ಅವರು ಮಹತ್ವದ ಪಾತ್ರ ವಹಿಸಿದರು. ಹಿಂದೆ ಅಂಬೇಡಕರ್ ಅವರು ಸಾಂವಿಧಾನಿಕ ವಾಗಿ ನಮಗೆ ಹಕ್ಕುಗಳನ್ನುನೀಡಿದರು. ಆದರೆ ಆ ಹಕ್ಕುಗಳನ್ನು ನಮ್ಮ ವರೆಗೆ ತಲುಪಿಸುವ ಮತ್ತು ಹಕ್ಕುಗಳನ್ನು ಪಡೆಯುವ ಜಾಗೃತಿಮೂಡಿಸಿದ್ದು ಪ್ರೊ.ಕೃಷ್ಣಪ್ಪ ಅವರು ಎಂದು ದಲಿತ ಸಂಘರ್ಷ ಸಮನಿತಿ ಜಿಲ್ಲಾ ಸಂಚಾಲಕ ಧನರಾಜ ಮುಸ್ತಾಪುರ ಹೇಳಿದರು.

# ಶಾಲಾ ಕಟ್ಟಡ ಕುಸಿತ: ಎಐಡಿಎಸ್‌ಓ ಕಾರ್ಯಕರ್ತರ ಪ್ರತಿಭಟನೆ

**ಕಲಬುರಗಿ, ಜೂ. 16:** ನಗರದ ಏಕೈಕ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸಂಭವಿಸಿದ ಛಾವಣಿ ಕುಸಿತದ ದುರಂತ ಖಂಡಿಸಿ, ಗಾಯಗೊಂಡ ವಿದ್ಯಾರ್ಥಿನಿ ಯರಿಗೆ ತಕ್ಷಣ ಪರಿಹಾರ ನೀಡಲು ಹಾಗೂ ನೂತನ ಕಟ್ಟಡ ನಿರ್ಮಿಸಲು ಆಗ್ರಹಿಸಿ ಎಐಡಿಎಸ್‌ಓ ಸಂಟನೆಯ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.




ಸಂಟನೆ ಜಿಲ್ಲಾಧ್ಯಕ್ಷ ತುಳಜಾರಾಮ ಎನ್.ಕೆ. ಮಾತನಾಡಿ, ಜಿಲ್ಲೆಯಾದ್ಯಂತ ನೂರಾರು ಹಳ್ಳಿಗಳಿಂದ, ಬಡ ರೈತ ಹಾಗೂ ಕಾರ್ಮಿಕ ಕುಟುಂಬದ ಸಾವಿರಾರು ಹೆಣ್ಣುಮಕ್ಕಳು ಉನ್ನತ ವ್ಯಾಸಂಗಕ್ಕಾಗಿ ಈ ಕಾಲೇಜು ನಂಬಿ ಬರುತ್ತಿದ್ದಾರೆ. ಕಾಲೇಜಿನ ಮೂರನೇ ಮಹಡಿಯಲ್ಲಿ ಪ್ರಥಮ ವರ್ಷದ ವಾಣಿಜ್ಯ ವಿಭಾಗದ ತರಗತಿ ನಡೆಯುತ್ತಿದ್ದಾಗ ಛಾವಣಿಯ ಸಿಮೆಂಟ್ ಕುಸಿದು ಐವರು ವಿದ್ಯಾರ್ಥಿನಿಯರು ಗಾಯಗೊಂಡಿರುವುದು ಅತ್ಯಂತ ಆಘಾತಕಾರಿ ಎಂದರು.

ಈ ಕಟ್ಟಡ ನಿರ್ಮಿಇಸಿ ಕೇವಲ ಐದು ವರ್ಷಗಳಾಗಿವೆ. ಐದು ವರ್ಷಗಳಲ್ಲಿ ಕಟ್ಟಡದ ಸ್ಥಿತಿ ಈ ದುರ್ಗತಿಯಾದರೆ ಈ ಮಳೆಗಾಲದಲಿ ಮುಂದೇನು ಗತಿ? ಈ ಕಟ್ಟಡ ನಿರ್ಮಿಇಸಿದವರು ಯರು? ಗುತ್ತಿಗೇದಾರ ಮತ್ತು ಅಧಿಕಾರಿಗಳಿಗೆ ಈ ಘಟನೆಯ ಹೊಣೆಗಾರಿಕೆ ಮಾಡಿ ಅವರ ರುದ್ಧ ಕ್ರಮ ಜರುಗಿಸಬೇಕು. ಈ ಟನೆಯ ನಂತರ ವಿದ್ಯಾರ್ಥಿನಿಯರು ಹಾಗೂ ಪೋಷಕರು ಜೀವಭಯದಲ್ಲೇ ಕಾಲೇಜಿಗೆ ಬರುವ ಅನಿವಾರ್ಯತೆ ನಿರ್ಮಾಣವಾಗಿದೆ ಎಂದರು.

> ಸರ್ಕಾರ ಗಾಯಗೊಂಡಿರುವ ವಿದ್ಯಾರ್ಥಿನಿಯರಿಗೆ ಸೂಕ್ತ ಪರಿಹಾರ ಮಂಜೂರು ಮಾಡಬೇಕು. ಶಿಥಿಲಗೊಂಡಿರುವ ಕಟ್ಟಡ ತಕ್ಷಣ ದುರಸ್ತಿಗೊಳಿಸಿ, ನೂತನ ಕಟ್ಟಡದ ನಿರ್ಮಾಣಕ್ಕಾಗಿ ಹಣ ಬಿಡುಗಡೆ ಮಾಡಬೇಕು.
> – ತುಳಜಾರಾಮ ಪವಾರ್, ಅಧ್ಯಕ್ಷ, ಎಐಡಿಎಸ್‌ಓ ಕಲಬುರಗಿ.

ಜಿಲ್ಲೆಯಾದ್ಯಂತ ಬಹುತೇಕ ಸರ್ಕಾರಿ ಶಿಕ್ಷಣ ಸಂಸ್ಥೆಗಳ ಪರಿಸ್ಥಿತಿಯೂ ಇದಕ್ಕಿಂತ ಭಿನ್ನವಾಗಿಲ್ಲ. ಮಳೆ ಬಂದರೆ ಯಾವಾಗ ಕಟ್ಟಡ ಕುಸಿಯುತ್ತದೋ ಎಂಬ ಭೀತಿಯಲ್ಲೇ ವಿದ್ಯಾರ್ಥಿಗಳು ಪಾಠ ಕೇಳುವಂತಾಗಿದೆ. ಸರ್ಕಾರಿ ಕಾಲೇಜುಗಳಲ್ಲಿ ಗುಣಮಟ್ಟದ ಕಟ್ಟಡ, ಸುರಕ್ಷತೆ ಮತ್ತು ಮೂಲ ಸೌಕರ್ಯ ಒದಗಿಸುವಲ್ಲಿ ಸಂಪೂರ್ಣ ವಿಫಲವಾಗಿದೆ.

ಈ ಆಘಾತಕಾರಿ ಟನೆಯನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು. ಕಾಲೇಜಿಗೆ ಅಗತ್ಯವಿರುವ ಮೂಲ ಸೌಕರ್ಯ ಒದಗಿಸಿ, ಭಯದ ನೆರಳಿನಲ್ಲಿರುವ ವಿದ್ಯಾರ್ಥಿನಿಯರ ಸುರಕ್ಷತೆ ಖಾತ್ರಿಪಡಿಸಬೇಕು. ಇಲ್ಲದಿದ್ದರೆ ವಿದ್ಯಾರ್ಥಿನಿಯರ ಹಿತರಕ್ಷಣೆಗಾಗಿ ಸಂಟನೆಯು ಜಿಲ್ಲಾದ್ಯಂತ ತೀವ್ರ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

# ಹಿರಿಯೂರು ಕ್ಷೇತ್ರ ಉಪಚುನಾವಣೆ: ಅಧಿಕೃತ ಘೋಷಣೆಗೂ ಮುನ್ನವೇ ಕಾವೇರುತ್ತಿದೆ ಕಣ

## ಕಾಂಗ್ರೆಸ್ ಸೋಲಿಸಲು ಜೆಡಿಎಸ್ ತಂತ್ರ, ಕೈ ಅಸಮಾಧಾನಿತ ನಾಯಕನ್ನು ಸೆಳೆಯಲು ದಾಳ

**ಚಿತ್ರದುರ್ಗ, ಜೂ.16:** ರಾಜ್ಯ ರಾಜಕೀಯದಲ್ಲಿ ಮುಂಬರುವ ಚುನಾವಣಾ ಕಣಗಳು ಈಗಿನಿಂದಲೇ ಕಾವೇರುತ್ತಿವೆ. ಇದಕ್ಕೆ ಪೂರಕವೆಂಬಂತೆ, ಹಿರಿಯೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಅಧಿಕೃತ ಘೋಷಣೆಗೂ ಮುನ್ನವೇ ರಾಜಕೀಯ ಫೈಟ್ ಜೋರಾಗಿದೆ. ಆಡಳಿತಾರೂಢ ಕಾಂಗ್ರೆಸ್ ಪಕ್ಷಕ್ಕೆ ಸೋಲಿನ ರುಚಿ ತೋರಿಸಲು ಜೆಡಿಎಸ್ ಭಾರಿ ತಂತ್ರಗಾರಿಕೆ ಹೆಣೆಯುತ್ತಿದೆ.

ಸಚಿವ ಡಿ.ಸುಧಾಕರ್ ಅವರು ಅಕಾಲಿಕ ನಿಧನದ ನಂತ್ರ ಹಿರಿಯೂರು ವಿಧಾನಸಭಾ ಕ್ಷೇತ್ರಕ್ಕೆ ಉಪ ಚುನಾವಣೆಯ ಹೊಸ್ತಿಲಿಗೆ ಬಂದು ನಿಂತಿದೆ. ಹಿರಿಯೂರು ಉಪಚುನಾವಣೆಯನ್ನು ಅತ್ಯಂತ ಪ್ರತಿಷ್ಠಿತವಾಗಿ ಪರಿಗಣಿಸಿರುವ ಜೆಡಿಎಸ್, ತೆರೆಮರೆಯಲ್ಲಿ ಗೆಲುವಿಗಾಗಿ ಭಾರಿ ಕಸರತ್ತು ನಡೆಸುತ್ತಿದೆ. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ನಿಖಿಲ್ ಕುಮಾರಸ್ವಾಮಿ ಅವರು ಈಗಾಗಲೇ ಒಂದೆರಡು ಸುತ್ತಿನ ಮಾತುಕತೆ ನಡೆಸಿದ್ದು, ಕಾಂಗ್ರೆಸ್‌ನ ಪ್ರಮುಖ ನಾಯಕರೊಬ್ಬರಿಗೆ ಜೆಡಿಎಸ್ ಗಾಳ ಹಾಕಿದೆ. ಕಾಂಗ್ರೆಸ್‌ನಲ್ಲಿ ಅಸಮಾಧಾನಗೊಂಡಿರುವ ತುಮಕೂರಿನ ಪ್ರಮುಖ ಕಾಂಗ್ರೆಸ್ ಮುಖಂಡ ಸಾಸಲು ಸತೀಶ್ ಅವರನ್ನು ಜೆಡಿಎಸ್ ಆಪರೇಷನ್ ಮಾಡಲು ಮುಂದಾಗಿದೆ. ಕಳೆದ 2023ರ ವಿಧಾನಸಭಾ ಚುನಾವಣೆಯಲ್ಲಿ ಶಿರಾ ಕ್ಷೇತ್ರದಿಂದ ಕಾಂಗ್ರೆಸ್ ಟಿಕೆಟ್‌ನ ಪ್ರಬಲ ಆಕಾಂಕ್ಷಿಯಾಗಿದ್ದರು ಸಾಸಲು ಸತೀಶ್. ಆದರೆ ಕೊನೇ ಕ್ಷಣದಲ್ಲಿ ಹಿರಿಯ ನಾಯಕ ಟಿ.ಬಿ. ಜಯಚಂದ್ರ ಅವರಿಗೆ ಕಾಂಗ್ರೆಸ್ ಟಿಕೆಟ್ ನೀಡಲಾಗಿತ್ತು. ತದನಂತರ ಪಕ್ಷದಲ್ಲಿ ಸೂಕ್ತ ಸ್ಥಾನಮಾನ ಸಿಗದೇ ಇರುವುದರಿಂದ ಸಾಸಲು ಸತೀಶ್ ತೀವ್ರ ಅಸಮಾಧಾನಗೊಂಡಿದ್ದಾರೆ.

ಈ ಹಿಂದೆ ಹಲವು ಸಾಮಾಜಿಕ ಕೆಲಸವನ್ನು ಮಾಡಿದ್ದಂತ ಸಾಸಲು ಸತೀಶ್ ಅವರು, ಹಿರಿಯೂರು ವಿಧಾನಸಭಾ ಕ್ಷೇತ್ರದಲ್ಲಿ ಪರಿಚಯ ಮುಖ. ವೇಣುಕಲ್ಲು ಗುಡ್ಡದಲ್ಲಿ ಅಕಾಲಿಕವಾಗಿ ಕುರಿಗಳು ಸಾವನ್ನಪ್ಪಿದಂತ ಸಂದರ್ಭದಲ್ಲಿ ಸಾಸಲು ಸತೀಶ್ ಮಾಡಿದಂತ ಸಹಾಯವನ್ನು ಕ್ಷೇತ್ರದ ಜನರು ಮರೆತಿಲ್ಲ. ಅಂದು ಸಚಿವರಾಗಿದ್ದಂತ ಡಿ.ಸುಧಾಕರ್ ಅವರನ್ನೇ ಸಾಸಲು ಸತೀಶ್ ಮಾಡಿದಂತ ನೆರವು ಬೆಚ್ಚಿ ಬೀಳುವಂತೆ ಮಾಡಿತ್ತು. ಹೀಗಾಗಿ ಹಿರಿಯೂರು ವಿಧಾನಸಭಾ ಕ್ಷೇತ್ರದಲ್ಲಿ ಸಾಸಲು ಸತೀಶ್ ತನ್ನದೇ ಆದಂತ ಹಿಡಿತವನ್ನು ಹೊಂದಿದ್ದಾರೆ ಎನ್ನಲಾಗುತ್ತಿದೆ.

ಹಿರಿಯೂರು ವಿಧಾನಸಭಾ ಕ್ಷೇತ್ರದಲ್ಲಿ ಗೆಲುವಿನ ನಗೆ ಬೀರಬೇಕಾದರೆ ಆಯಾ ಸಮುದಾಯಗಳ ಮತಗಳೇ ನಿರ್ಣಾಯಕ ಪಾತ್ರ ವಹಿಸುತ್ತವೆ.ಕ್ಷೇತ್ರದಲ್ಲಿ ಕುಂಚಿಟಿಗ ಮತ್ತು ಕಾಡುಗೊಲ್ಲ ಸಮುದಾಯದ ಮತಗಳು ದೊಡ್ಡ ಸಂಖ್ಯೆಯಲ್ಲಿದ್ದು, ಇವರೇ ಇಲ್ಲಿ ಕಿಂಗ್ ಮೇಕರ್ಸ್. ಸಾಸಲು ಸತೀಶ್ ಅವರು ಕಾಡುಗೊಲ್ಲ ಸಮುದಾಯಕ್ಕೆ ಸೇರಿದ ಪ್ರಭಾವಿ ನಾಯಕರಾಗಿದ್ದಾರೆ. ಹಿರಿಯೂರು ಕ್ಷೇತ್ರದಲ್ಲಿ ಸರಿಸುಮಾರು 40 ರಿಂದ 50 ಸಾವಿರ ಕಾಡುಗೊಲ್ಲ ಸಮುದಾಯದ ಮತಗಳಿದ್ದು, ಇವುಗಳನ್ನು ಸೆಳೆಯಲು ಸತೀಶ್ ಅವರ ಎಂಟ್ರಿ ಜೆಡಿಎಸ್‌ಗೆ ದೊಡ್ಡ ಪ್ಲಸ್ ಪಾಯಿಂಟ್ ಆಗಲಿದೆ ಎಂಬುದು ಎಚ್‌ಡಿಕೆ ಲೆಕ್ಕಾಚಾರವಾಗಿದೆ.

ಹಿರಿಯೂರು ಉಪಚುನಾವಣೆಯಲ್ಲಿ ಕೂಡ ಕಾಡುಗೊಲ್ಲ ಸಮುದಾಯದ ಮತಗಳು ನಿರ್ಣಾಯಕ ಪಾತ್ರ ವಹಿಸಲಿದೆ.ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಪಕ್ಷಗಳಾಗಿರುವುದರಿಂದ, ಈ ಹಿಂದೆ ಬಾಗಲಕೋಟೆ ಹಾಗೂ ದಾವಣಗೆರೆ ಉಪಚುನಾವಣೆಗಳಲ್ಲಿ ಬಿಜೆಪಿಗೆ ಜೆಡಿಎಸ್ ಬೆಂಬಲ ನೀಡಿತ್ತು. ಸದ್ಯಕ್ಕೆ ಕಾಂಗ್ರೆಸ್‌ನಿಂದ ಪೂರ್ಣಿಮಾ ಶ್ರೀನಿವಾಸ್ ಸೇರಿದಂತೆ ಹಲವು ನಾಯಕರ ಹೆಸರುಗಳು ಕೇಳಿಬರುತ್ತಿದ್ದು, ಜೆಡಿಎಸ್‌ನ ಈ "ಆಪರೇಷನ್ ಸಾಸಲು ಸತೀಶ್" ತಂತ್ರಗಾರಿಕೆ ವರ್ಕೌಟ್ ಆದಲ್ಲಿ ಕಾಂಗ್ರೆಸ್‌ಗೆ ಭಾರಿ ಹಿನ್ನಡೆಯಾಗುವುದಂತೂ ಗ್ಯಾರಂಟಿ ಎಂಬುದು ಕ್ಷೇತ್ರದ ಜನರ ಮಾತು. ಅದು ಏನಾಗಲಿದೆ ಎಂಬುದನ್ನು ಉಪ ಚುನಾವಣೆ ಘೋಷಣೆಯ ನಂತರ ಕಾದು ನೋಡಬೇಕಿದೆ.

# ಚಾರ್ಮಾಡಿ ಘಾಟ್ ತಿರುವಿನಲ್ಲಿ ಕಾರು ಪಲ್ಟಿ, ಎಸ್‌ಐಟಿ ತಂಡದ ಅಧಿಕಾರಿಗಳು ಅಪಾಯದಿಂದ ಪಾರು

**ಮಂಗಳೂರು, ಜೂ.16:** ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಚಾರ್ಮಾಡಿ ಘಾಟ್ ರಸ್ತೆಯ ತಿರುವಿನಲ್ಲಿ ವಿಶೇಷ ತನಿಖಾ ದಳದ ಪೊಲೀಸ್ ವರಿಷ್ಠಾಧಿಕಾರಿ ಪ್ರಯಾಣಿಸುತ್ತಿದ್ದ ಕಾರು ನಿಯಂತ್ರಣ ತಪ್ಪಿ ಪಲ್ಟಿಯಾದ ಘಟನೆ ಸಂಭವಿಸಿದೆ.

ಧರ್ಮಸ್ಥಳದ ಇತ್ತೀಚಿನ ಬಹುಚರ್ಚಿತ 'ಬುರುಡೆ ಪ್ರಕರಣ'ದ ತನಿಖೆಗಾಗಿ ರಚನೆಯಾಗಿರುವ ಎಸ್‌ಐಟಿ ತಂಡದ ಪ್ರಮುಖ ಅಧಿಕಾರಿಗಳು ಈ ವಾಹನದಲ್ಲಿದ್ದರು. ಅದೃಷ್ಟವಶಾತ್ ಕಾರಿನಲ್ಲಿದ್ದ ಅಧಿಕಾರಿಗಳು ಸೇರಿ ನಾಲ್ವರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ.



ಧರ್ಮಸ್ಥಳದ ಬುರುಡೆ ಪ್ರಕರಣದ ತನಿಖೆಯನ್ನು ತೇಲಿಗೆ ತರಲು ಸರ್ಕಾರ ಎಸ್‌ಐಟಿ ರಚನೆ ಮಾಡಿದೆ. ಈ ಹೈಪ್ರೊಫೈಲ್ ಕೇಸ್‌ಗೆ ಸಂಬಂಧಿಸಿದಂತೆ ಪ್ರಮುಖ ವಿಚಾರಗಳನ್ನು ಚರ್ಚಿಸಲು ಹಾಗೂ ಮುಂದಿನ ತನಿಖಾ ಕಾರ್ಯಸೂಚಿಯನ್ನು ಸಿದ್ಧಪಡಿಸಲು ಎಸ್‌ಐಟಿ ಅಧಿಕಾರಿಗಳು ಚಿಕ್ಕಮಗಳೂರಿಗೆ ತೆರಳುತ್ತಿದ್ದರು. ಚಿಕ್ಕಮಗಳೂರು ಎಸ್ಪಿ ದಾಯಮ್ಮ ಅವರನ್ನು ಭೇಟಿಯಾಗಿ ಪ್ರಕರಣದ ಲಿಂಕ್‌ಗಳ ಬಗ್ಗೆ ಮಾಹಿತಿ ವಿನಿಮಯ ಮಾಡಿಕೊಳ್ಳುವ ಉದ್ದೇಶದಿಂದ ಚಾರ್ಮಾಡಿ ಘಾಟ್ ಮಾರ್ಗವಾಗಿ ಪ್ರಯಾಣಿಸುತ್ತಿದ್ದಾಗ ಈ ದುರ್ಘಟನೆ ನಡೆದಿದೆ. ಅಪಘಾತದ ತೀವ್ರತೆಗೆ ಕಾರು ಸಂಪೂರ್ಣವಾಗಿ ಪಲ್ಟಿಯಾಗಿದ್ದು, ವಾಹನದಲ್ಲಿದ್ದ ಎಸ್‌ಐಟಿ ಎಸ್‌ಪಿ ಸಿ.ಎ. ಸೈಮನ್ ಹಾಗೂ ಇನ್ಸ್‌ಪೆಕ್ಟರ್ ಕುಸುಮಾಧರ್ ಅವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಇವರೊಂದಿಗೆ ಕಾರಿನಲ್ಲಿದ್ದ ಮತ್ತೊಬ್ಬ ಪೊಲೀಸ್ ಸಿಬ್ಬಂದಿ ಹಾಗೂ ವಾಹನದ ಚಾಲಕನಿಗೂ ಲಘು ಗಾಯಗಳಾಗಿದ್ದು, ತಕ್ಷಣವೇ ಅವರನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಿ ಪ್ರಥಮ ಚಿಕಿತ್ಸೆ ಕೊಡಿಸಲಾಗಿದೆ.

# ಕೇಂದ್ರ ಸರ್ಕಾರದ 12 ವರ್ಷಗಳ ದೇಶದ ಅಭಿವೃದ್ಧಿಯ ಗಮನಾರ್ಹ ಸಾಧನೆ



ಬಳ್ಳಾರಿ, ಜೂ.16.ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರದ 12 ವರ್ಷಗಳ ಆಡಳಿತಾವಧಿಯಲ್ಲಿ ಭಾರತವು ಆರ್ಥಿಕತೆ, ಮೂಲಸೌಕರ್ಯ, ರಾಷ್ಟ್ರೀಯ ಭದ್ರತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ಮಾಡಿದ್ದು, ದೇಶವನ್ನು ಅಭಿವೃದ್ಧಿಯ ಹೊಸಹಾದಿಯಲ್ಲಿ ಮುನ್ನಡೆಸಲಾಗಿದೆ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ ಹೇಳಿದ್ದಾರೆ.

ನಗರದ ಮೋಕಾ ರಸ್ತೆಯ ವಾಜಪೇಯಿ ಬಡಾವಣೆಯಲ್ಲಿ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ಮೋದಿ ದೇಶದ ಸುದೀರ್ಘ ಅವಧಿಯ ಪ್ರಧಾನಮಂತ್ರಿಗಳಲ್ಲಿ ಒಬ್ಬರಾಗಿ ಹೊಸ ದಾಖಲೆ ನಿರ್ಮಿಸಿದ್ದು, ಆ ಅವಧಿಯಲ್ಲಿ ಜನರ ವಿಶ್ವಾಸವನ್ನು ಗಳಿಸಿ ಆಡಳಿತ ವ್ಯವಸ್ಥೆಗೆ ಹೊಸ ಚೈತನ್ಯ ತುಂಬಿದ್ದಾರೆ ಎಂದು ಹೇಳಿದರು.

ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿದ್ದ ಭಾರತವನ್ನು ಮೇಲಕ್ಕೆತ್ತುವಲ್ಲಿ ಕೇಂದ್ರ ಸರ್ಕಾರ ಶ್ರಮಿಸಿದ್ದು, ದೇಶದ ಅಭಿವೃದ್ಧಿಗೆ ವೇಗ ನೀಡಲಾಗಿದೆ. ಭಯೋತ್ಪಾದನೆ ವಿರುದ್ಧ ಕಠಿಣ ನಿಲುವು ತಾಳಲಾಗಿದ್ದು, "ಭಯೋತ್ಪಾದಕರಿಗೆ ಬಿರಿಯಾನಿ ಕೊಡುವ ಸರ್ಕಾರ ನಮ್ಮದಲ್ಲ" ಎಂದು ಪರೋಕ್ಷವಾಗಿ ವಿರೋಧ ಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದರು. ದೇಶವನ್ನು ನಕ್ಸಲ್ ಮುಕ್ತವಾಗಿಸುವ ದಿಸೆಯಲ್ಲಿ ಕೇಂದ್ರ ಸರ್ಕಾರ ಮಹತ್ವದ ಕ್ರಮಗಳನ್ನು ಕೈಗೊಂಡಿದೆ ಎಂದರು.

ಜಾಗತಿಕ ಯುದ್ಧ ಮತ್ತು ಅಂತಾರಾಷ್ಟ್ರೀಯ ಪರಿಸ್ಥಿತಿಗಳ ಪರಿಣಾಮವಾಗಿ ವಿಶ್ವದ ಹಲವು ರಾಷ್ಟ್ರಗಳಲ್ಲಿ ಬೆಲೆ ಏರಿಕೆ ಹೆಚ್ಚಾಗಿದ್ದರೂ, ಭಾರತದಲ್ಲಿ ಅದನ್ನು ನಿಯಂತ್ರಣದಲ್ಲಿಡುವಲ್ಲಿ ಕೇಂದ್ರ ಸರ್ಕಾರ ಯಶಸ್ವಿಯಾಗಿದೆ ಎಂದು ತಿಳಿಸಿದರು. ಪೆಟ್ರೋಲ್ ಮತ್ತು ಇಂಧನ ದರ ಏರಿಕೆಗೆ ಹಿಂದಿನ ಯುಪಿಎ ಸರ್ಕಾರದ ಆಯಿಲ್ ಬಾಂಡ್ ನೀತಿಗಳೇ ಪ್ರಮುಖ ಕಾರಣವಾಗಿದ್ದು, ಅದರ ಆರ್ಥಿಕ ಹೊರೆ ಈಗಿನ ಸರ್ಕಾರದ ಮೇಲೆ ಬಿದ್ದಿದೆ ಎಂದು ಆರೋಪಿಸಿದರು.

ದೇಶದ ಇಂಧನ ಸ್ವಾವಲಂಬನೆಗಾಗಿ ಎಥನಾಲ್ ಉತ್ಪಾದನೆ ಹಾಗೂ ಸೌರಶಕ್ತಿ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಉದ್ಯಮಿಗಳಾದ ಅದಾನಿ ಮತ್ತು ಅಂಬಾನಿ ಕುರಿತ ಆರೋಪಗಳಿಗೆ ಪ್ರತಿಕ್ರಿಯಿಸಿದ ಅವರು, "ಅವರು ಭಾರತೀಯ ಉದ್ಯಮಿಗಳೇ ಆಗಿದ್ದು, ದೇಶದ ಅಭಿವೃದ್ಧಿಯಲ್ಲಿ ಹೂಡಿಕೆ ಮಾಡುತ್ತಿದ್ದಾರೆ" ಎಂದು ಹೇಳಿದರು.

ಭಯೋತ್ಪಾದನೆ ವಿರುದ್ಧದ ಕಾರ್ಯಾಚರಣೆಗಳಲ್ಲಿ ಸರ್ಕಾರ ಚಾಣಕ್ಯನ ನೀತಿಯನ್ನು ಅನುಸರಿಸುತ್ತಿದೆ ಎಂದು ಹೇಳಿದ ಅವರು, ಕೆಲ ರಾಜಕೀಯ ಪಕ್ಷಗಳು ಭಯೋತ್ಪಾದಕರ ಬಗ್ಗೆ ಮೃದು ಧೋರಣೆ ಹೊಂದಿವೆ ಎಂದು ಟೀಕಿಸಿದರು.

ಮತದಾರರ ಪಟ್ಟಿಯ ವಿಶೇಷ ಸಾಂದರ್ಭಿಕ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ನಡೆಯಬೇಕು. ಶುದ್ಧ ಮತದಾರರ ಪಟ್ಟಿಯನ್ನು ಉಳಿಸುವ ಉದ್ದೇಶದಿಂದ ಕೈಗೊಳ್ಳುವ ಈ ಕ್ರಮವನ್ನು ವಿರೋಧಿಸುವವರು ದೇಶದ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಅವರು ಅಭಿಪ್ರಾಯಪಟ್ಟರು.

ಕೆಲ ಸಂಘಟನೆಗಳು ಹಾಗೂ "ತುಕಡೆ ಗ್ಯಾಂಗ್"ಗಳು ಅರಾಜಕತೆ ಸೃಷ್ಟಿಸುವ ಉದ್ದೇಶದಿಂದ ಹೋರಾಟಗಳನ್ನು ನಡೆಸುತ್ತಿವೆ ಎಂದು ಆರೋಪಿಸಿದರು.

ರಾಜ್ಯ ಬಿಜೆಪಿ ಅಧ್ಯಕ್ಷರ ಬದಲಾವಣೆ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಪಕ್ಷದಲ್ಲಿ ಯಾರೇ ಅಧ್ಯಕ್ಷರಾದರೂ ಅವರ ನೇತೃತ್ವದಲ್ಲಿ ತಾವು ಕಾರ್ಯ ನಿರ್ವಹಿಸುವುದಾಗಿ ತಿಳಿಸಿದರು. ಅಧ್ಯಕ್ಷರ ಆಯ್ಕೆ ಅಥವಾ ಬದಲಾವಣೆ ಕುರಿತ ಅಂತಿಮ ನಿರ್ಧಾರವನ್ನು ಪಕ್ಷದ ಸಂಸದೀಯ ಮಂಡಳಿ ಕೈಗೊಳ್ಳಲಿದೆ ಎಂದರು.



ಬೆಂಗಳೂರು ನಗರ ಪೊಲೀಸರು ವಶಪಡಿಸಿಕೊಂಡ ಕಳವಿನ ವಸ್ತುಗಳನ್ನು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಮಂಗಳವಾರ ಪರಿಶೀಲಿಸಿದರು.

# ಕಳಪೆ ಕಾಮಗಾರಿ ಪ್ರಶ್ನಿಸಿದವರಿಗೆ ಅಶ್ಲೀಲ ಪದ ಬಳಕೆ ಸಂಸದ ತುಕಾರಾಂ ವಿರುದ್ಧ ಬಿಜೆಪಿ ಪ್ರತಿಭಟನೆ




**ಬಳ್ಳಾರಿ, ಜೂ.16:** ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಡಾಣಾಪುರ ಗ್ರಾಮದ ಸಮೀಪ ರಾಷ್ಟ್ರೀಯ ಹೆದ್ದಾರಿ, 50ರ ಸರ್ವಿಸ್ ರಸ್ತೆ ಕಳಪೆ ಕಾಮಗಾರಿಯಿಂದ ಕುಸಿದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಸದ ಇ. ತುಕಾರಾಂ ಅವರ ವಿರುದ್ಧ ಬಳ್ಳಾರಿ ಬಿಜೆಪಿ ಘಟಕ ತೀವ್ರ ಆಕ್ರೋಶ ವ್ಯಕ್ತಪಡಿಸಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು.

ಪ್ರತಿಭಟನಾಕಾರರ ಆರೋಪದಂತೆ, ಸುಮಾರು ?33 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಮೇಲ್ಸೇತುವೆ ಹಾಗೂ ಸರ್ವಿಸ್ ರಸ್ತೆ ಕಾಮಗಾರಿಯಲ್ಲಿ ಗುಣಮಟ್ಟದ ಮಾನದಂಡಗಳನ್ನು ಪಾಲಿಸದೆ ಮಣ್ಣಿನ ಬದಲಾಗಿ ಹಾರುಬೂದಿ ಬಳಸಿ ರಸ್ತೆ ನಿರ್ಮಿಸಲಾಗಿದೆ. ಕಾಮಗಾರಿ ಪೂರ್ಣಗೊಂಡು ಹತ್ತು ದಿನಗಳು ಕಳೆಯುವಷ್ಟರಲ್ಲಿ ಸರ್ವಿಸ್ ರಸ್ತೆ ಕುಸಿದಿದ್ದು, ಈ ವೇಳೆ ಟ್ರಕ್‌ವೊಂದು ರಸ್ತೆಯಲ್ಲಿ ಸಿಲುಕಿಕೊಂಡ ಘಟನೆ ನಡೆದಿದೆ. ಇದರಿಂದ ಸ್ಥಳೀಯರು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಜಿಲ್ಲಾಡಳಿತ ಹಾಗೂ ಸಂಬಂಧಿಸಿದ ಗುತ್ತಿಗೆದಾರರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸೋಮವಾರ ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದ ಬಳ್ಳಾರಿ ಸಂಸದ ಇ. ತುಕಾರಾಂ ಅವರನ್ನು ಕೆಲ ಸ್ಥಳೀಯರು ಕಳಪೆ ಕಾಮಗಾರಿ ಕುರಿತು ಪ್ರಶ್ನಿಸಿದ ವೇಳೆ, ಪ್ರಶ್ನಿಸಿದವರ ವಿರುದ್ಧ ಅವಹೇಳನಕಾರಿ ಹಾಗೂ ಅಶ್ಲೀಲ ಪದಗಳನ್ನು ಬಳಕೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಈ ನಡೆ ಜನಪ್ರತಿನಿಧಿಯ ಘನತೆಗೆ ಧಕ್ಕೆ ತರುವಂತಹದ್ದು ಎಂದು ಬಿಜೆಪಿ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.

ಈ ವಿಚಾರವನ್ನು ಖಂಡಿಸಿ ಬಳ್ಳಾರಿಯ ರಾಯಲ್ ಸರ್ಕಲ್‌ನಲ್ಲಿ ಬಿಜೆಪಿ ಕಾರ್ಯಕರ್ತರು ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು. ಬಳಿಕ ಸಂಸದ ಇ. ತುಕಾರಾಂ ಅವರ ಪ್ರತಿಕೃತಿ ದಹಿಸಿ ಪ್ರತಿಭಟನೆ ನಡೆಸಿದರು, ತಕ್ಷಣವೇ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಬಳ್ಳಾರಿ ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಅನಿಲ್ ಕುಮಾರ್ ಮೋಕಾ, "ಕಳಪೆ ಕಾಮಗಾರಿ ಬಗ್ಗೆ ಪ್ರಶ್ನೆ ಮಾಡಿದ ಸಾರ್ವಜನಿಕರೊಂದಿಗೆ ಸಂಸದರು ಈ ರೀತಿಯ ಭಾಷೆ ಬಳಸಿರುವುದು ಖಂಡನೀಯ. ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕಾದ ಜನಪ್ರತಿನಿಧಿ ಈ ರೀತಿ ನಡೆದುಕೊಳ್ಳುವುದು ಸರಿಯಲ್ಲ. ಬಳ್ಳಾರಿ ಜಿಲ್ಲೆಯ ಅಭಿವೃದ್ಧಿಯಲ್ಲಿ ವಿಫಲರಾಗಿರುವ ಸಂಸದ ಇ. ತುಕಾರಾಂ ಅವರು ನೈತಿಕ ಹೊಣೆ ಹೊತ್ತು ಕೂಡಲೇ ರಾಜೀನಾಮೆ ನೀಡಬೇಕು" ಎಂದು ಆಗ್ರಹಿಸಿದರು.

# ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಪ್ರಗತಿ ಹೊಂದಿ: ಮೇಯರ್ ಗಾದೆಪ್ಪ ಕರೆ




**ಬಳ್ಳಾರಿ ಜೂ. 16:** ವಿದ್ಯಾರ್ಥಿ ಜೀವನ ಬಂಗಾರದ ದಿನಗಳ ಜೀವನ, ನೀವು ನಿಮ್ಮ ಪದವಿ ಮುಗಿಸಿಕೊಂಡು ಇನ್ನೂ ಉನ್ನತ ವಿದ್ಯಾಭ್ಯಾಸ ಮಾಡಿ ಒಳ್ಳೆಯ ಉದ್ಯೋಗ ಪಡೆದು ನಿಮ್ಮ ತಾಯಿ–ತಂದೆಗಳಿಗೆ, ವಿದ್ಯೆ ಕಲಿಸಿದ ಸಂಸ್ಥೆಗೆ ಹೆಸರು ತರುವಂತಹ ಈ ದೇಶದ ಸತ್ಪ್ರಜೆಗಳಾಗಿ ಬಾಳಿರಿ ಎಂದು ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರ ಪಿ ಗಾದೆಪ್ಪ ಅಭಿಪ್ರಾಯ ಪಟ್ಟರು. ಶನಿವಾರ ನಗರದ ಜೋಳದರಾಶಿ ದೊಡ್ಡನಗೌಡ ರಂಗ ಮಂದಿರದಲ್ಲಿ ಆಯೋಜಿಸಲಾಗಿದ್ದ ಲಾರ್ಡ್ಸ್ ವಿದ್ಯಾಸಂಸ್ಥೆಯ ಇಂಡೋ–ಅಮೆರಿಕನ್ ಪದವಿ ಕಾಲೇಜು ವಿದ್ಯಾರ್ಥಿಗಳ ಬೀಳ್ಕೊಡಿಗೆ ಸಮಾರಂಭವನ್ನು ಉದ್ಘಾಟಿಸಿ, ಆರಂಭದಲ್ಲಿ ಲಾರ್ಡ್ಸ್ ವಿದ್ಯಾಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಪಿ ಎಚ್ ನಾಯ್ಡು ಅವರು ಪ್ರಾಸ್ತಾವಿಕ ನುಡಿಗಳನ್ನು ಆಡುತ್ತಾ ವಿದ್ಯಾರ್ಥಿಗಳು ಇಂದಿನ ಸ್ಪರ್ಧಾತ್ಮಕ ಹಾಗೂ ತಂತ್ರಜ್ಞಾನದ ಯುಗದಲ್ಲಿ ಇಂದು ಕೃತಕ ಬುದ್ಧಿಮತ್ತೆ ಅವಶ್ಯಕತೆ ತುಂಬಾ ಇದ್ದು ಇದರ ಜ್ಞಾನವನ್ನು ವಿದ್ಯಾರ್ಥಿಗಳು ತಿಳಿದುಕೊಂಡು ಇಂದಿನ ಎಐ ತಂತ್ರಜ್ಞಾನಕ್ಕೆ ಹೊಂದಿಕೊಳ್ಳಬೇಕು ಎಂದು ಕರೆಕೊಟ್ಟು ಮುಂದಿನ ದಿನಗಳಲ್ಲಿ ನಿಮ್ಮ ಭವಿಷ್ಯ ಸುಖಮಯ ವಾಗಿರಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಬಳ್ಳಾರಿಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎನ್ ನವೀನ ಕುಮಾರ ಅವರು ಮಾತನಾಡುತ್ತಾ ವಿದ್ಯಾರ್ಥಿಗಳು ಕೇವಲ ಪದವಿಗಳನ್ನು ಪಡೆದು ಸಾಮಾನ್ಯ ಉದ್ಯೋಗಗಳನ್ನು ಮಾಡುವುದರ ಬದಲು IAS, IPS, IFS ಮುಂತಾದ ಸ್ಪರ್ಧಾತ್ಮಕ ಜಗತ್ತಿನ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕೆಂದು ಕಿವಿಮಾತು ಹೇಳಿದರು.

ಸದರಿ ಪದವಿ ಕಾಲೇಜಿನ ಪ್ರಾಚಾರ್ಯರಾದ ಶೇಕ್ ಸಲೀಮ್ ಬಾಷಾ ಅವರು ಮಾತನಾಡುತ್ತಾ ವಿದ್ಯಾರ್ಥಿಗಳ ಜೊತೆಗಿನ ಸವಿನೆನಪುಗಳನ್ನು ಮೆಲಕು ಹಾಕಿದರು ಮತ್ತು ಶುಭವನ್ನು ಕೋರಿದರು.

# ಬಾಲಕಾರ್ಮಿಕತೆ ದೇಶದ ಪ್ರಗತಿಗೆ ಅಡ್ಡಿ: ನ್ಯಾ.ಶ್ರೀನಿವಾಸ ನವಲೆ ಅಭಿಮತ



**ಕಲಬುರಗಿ, ಜೂ. 16:** ದೇಶದ ಸಮಗ್ರ ಅಭಿವೃದ್ಧಿ ಮತ್ತು ಪ್ರಗತಿಯಲ್ಲಿ ಮಕ್ಕಳ ಪಾತ್ರ ಮಹತ್ವದ್ದಾಗಿದೆ. ಬಾಲಕಾರ್ಮಿಕ ಪದ್ಧತಿಯು ದೇಶದ ಪ್ರಗತಿಗೆ ಅಡ್ಡಿಯಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರೂ ಆದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಹೇಳಿದರು.

ಸೇಂಟ್ ಮೇರಿ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯಿಂದ ಶುಕ್ರವಾರ ಆಯೋಜಿಸಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, 14 ವರ್ಷ ದೊಳಗಿನ ಮಕ್ಕಳನ್ನು ಉದ್ಯೋಗದಲ್ಲಿ ತೊಡಗಿಸುವುದು ನಿಷೇಧ. ಬಾಲ ಕಾರ್ಮಿಕ ಪದ್ಧತಿಯಿಂದ ಮಕ್ಕಳು ತಮ್ಮ ಅಮೂಲ್ಯ ಬಾಲ್ಯ ಕಳೆದು ಕೊಳ್ಳುವುದರ ಜತೆಗೆ ಶಿಕ್ಷಣದಿಂದ ವಂಚಿತರಾಗುತ್ತಾರೆ ಎಂದರು.

**ಬಾಲಕಾರ್ಮಿಕ ಪದ್ಧತಿಗೆ ಬಡತನ ಪ್ರಮುಖ ಕಾರಣವಾಗಿದ್ದು, ಇಂತಹ ಕುಟುಂಬಗಳಿಗೆ ಸರ್ಕಾರದ ಸೌಲಭ್ಯ ಪರಿಣಾಮಕಾರಿಯಾಗಿ ತಲುಪಿಸಬೇಕು. ಬಾಲಕಾರ್ಮಿಕತೆ ನಿರ್ಮೂಲನೆ ಕೇವಲ ಸರ್ಕಾರದ ಹೊಣೆಗಾರಿಕೆಯಲ್ಲ, ಪ್ರತಿಯೊಬ್ಬರೂ ಈ ನಿಟ್ಟಿನಲ್ಲಿ ಜವಾಬ್ದಾರಿಯಿಂದ ಕೆಲಸ ಮಾಡಬೇಕಿದೆ.– ಶ್ರೀನಿವಾಸ ನವಲೆ, ಹಿರಿಯ ಸಿವಿಲ್ ನ್ಯಾಯಾಧೀಶರು.**

ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ವಿಶ್ವಾರಾಧ್ಯ ಇಜೇರಿ ಮಾತನಾಡಿ, ಬಾಲಕಾರ್ಮಿಕ ಪ್ರಕರಣಗಳು ಕಂಡು ಬಂದಲ್ಲಿ ಮಕ್ಕಳ ಸಹಾಯವಾಣಿ 1098ಕ್ಕೆ ಮಾಹಿತಿ ನೀಡಬೇಕು. ವಲಸೆ ಮಕ್ಕಳನ್ನು ಗುರುತಿಸಿ ಅವರಿಗೆ ಶಿಕ್ಷಣ ಕಲ್ಪಿಸಲು ಸರ್ಕಾರ ಮತ್ತು ಸಮಾಜ ಒಟ್ಟಾಗಿ ಶ್ರಮಿಸಬೇಕು. ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪ ಹಳಿಮನಿ ಮಾತನಾಡಿ, 14 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಇಟ್ಟುಕೊಳ್ಳುವ ಮಾಲೀಕರಿಗೆ 6 ತಿಂಗಳಿಂದ 2 ವರ್ಷದವರೆಗೆ ಜೈಲುಶಿಕ್ಷೆ ಹಾಗೂ 20ರಿಂದ 50 ಸಾವಿರ ರೂ.ವರೆಗೆ ದಂಡ ವಿಧಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಜಿಲ್ಲಾ ಆರೋಗ್ಯಾಧಿಕಾರಿ ಡಾ.ಶರಣ ಬಸಪ್ಪ ಕ್ಯಾತನಾಳ, ಉಪ ಕಾರ್ಮಿಕ ಆಯುಕ್ತ ಡಾ.ವೆಂಕಟೇಶ ಶಿಂದಿಹಟ್ಟಿ, ಸಹಾಯಕ ಕಾರ್ಮಿಕ ಆಯುಕ್ತ ಮಹಮ್ಮದ್ ಬಶೀರ್ ಅನ್ಸಾರಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ಪಾಟೀಲ್, ಫಾದರ್ ಜೋಸೆಫ್ ಪ್ರವಿಣ್, ಆನಂದರಾಜ್, ಶಿವಕುಮಾರ ರೇಷ್ಮೆ, ವಿಠಲ ಚಿಕ್ಕಣಿ, ಸಂತೋಷ ಕುಲಕರ್ಣಿ ಇತರರಿದ್ದರು. ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದಿಂದ ಸೇಂಟ್ ಮೇರಿ ಶಾಲೆವರೆಗೂ ಜಾಥಾ ನಡೆಯಿತು.

# ಕಲಬುರಗಿ–ಬೆಂಗಳೂರು ವಂದೇ ಭಾರತ್ ರೈಲು ಮೆಜೆಸ್ಟಿಕ್‌ವರೆಗೆ ವಿಸ್ತರಿಸುವಂತೆ ಪ್ರಯಾಣಿಕರ ಆಗ್ರಹ

**ಕಲಬುರಗಿ, ಜೂ. 16:** ಕಲ್ಯಾಣ ರ್ನಾಟಕದ ಕೇಂದ್ರ ಸ್ಥಾನವಾಗಿರುವ ಕಲಬುರಗಿ–ಬೆಂಗಳೂರು ನಡುವೆ ಸಂಚರಿಸುವ ವಂದೇ ಭಾರತ ರೈಲು ಈ ಭಾಗದ ಜನರಿಗೆ ಸಾಕಷ್ಟು ಅನುಕೂಲವಾಗಿದೆ. ಆದರೆ ಬೆಂಗಳೂರಿನ ಎಸ್‌ಎಂವಿಟಿ ರೈಲು ನಿಲ್ದಾಣಕ್ಕೆ ತಲುಪುವ ಈ ರೈಲನ್ನು ಬೆಂಗಳೂರು ನಗರದ ಹೃದಯಭಾಗದಲ್ಲಿರುವ ಮೆಜೆಸ್ಟಿಕ್ ವರೆಗೆ ವಿಸ್ತರಿಸಿದರೆ ಪ್ರಯಾಣಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂಬುದು ಆಗ್ರಹವಾಗಿದೆ.

ಉತ್ತರ ಕರ್ನಾಟಕದ ಜಿಲ್ಲೆಗಳಿಂದ ಬೆಂಗಳೂರಿಗೆ ಸಂಚರಿಸುವ ವಂದೇ ಭಾರತ ರೈಲಿನಲ್ಲಿ ಸಂಚರಿಸುವ ಸಾವಿರಾರು ಪ್ರಯಾಣಿಕರು ಈಗ ರೈಲ್ವೆ ಇಲಾಖೆಯ ಮುಂದೆ ಮೆಜೆಸ್ಟಿಕ್ ವರೆಗೆ ವಿಸ್ತರಿಸುವ ಪ್ರಮುಖ ಬೇಡಿಕೆಯನ್ನು ಇಟ್ಟಿದ್ದಾರೆ. ಪ್ರಸ್ತುತ ಬೈಯಪ್ಪನಹಳ್ಳಿಯ ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ (ಎಸ್‌ಎಂವಿಟಿ) ತಲುಪುತ್ತದೆ ಮತ್ತು ಅಲ್ಲಿಂದಲೇ ಬೆಂಗಳೂರು–ಬೀದರ್ ಎಕ್ಸ್‌ಪ್ರೆಸ್ ಮತ್ತು ಬೆಂಗಳೂರು–ಕಲಬುರಗಿ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳನ್ನು ಬಿಡಲಾಗುತ್ತದೆ.

ವಾಸ್ತವದಲ್ಲಿ ಎಸ್‌ಎಂವಿಟಿಯಿಂದ ನಗರದ ವಿವಿಧ ಭಾಗಗಳಿಗೆ ಹೋಗಲು ಮೆಟೋ ಸಂಪರ್ಕ ಇಲ್ಲ. ಹೀಗಾಗಿ ಪ್ರಯಾಣಿಕರು ಆಟೋ, ಕ್ಯಾಬ್ ಮುಂತಾದವುಗಳ ಮೊರೆ ಹೋಗಬೇಕಾಗುತ್ತದೆ. ಬೈಯಪ್ಪನಹಳ್ಳಿಯಲ್ಲಿ ಮೆಟ್ರೋ ನಿಲ್ದಾಣವಿದ್ದು, ಪ್ರಯಾಣಿಕರು ಎಸ್‌ಎಂವಿಟಿಯಿಂದ ಆಟೋದಲ್ಲಿ ಬಯ್ಯಪ್ಪನಹಳ್ಳಿ ವಿವೇಕಾನಂದ ಮೆಟ್ರೋ ನಿಲ್ದಾಣಕ್ಕೆ ಹೋಗಬೇಕಾಗುತ್ತದೆ. ಅಲ್ಲಿಂದ ಮೆಟ್ರೋ ಹಿಡಿದು ತಮ್ಮ ಸಥಳಗಳಿಗೆ ಹೋಗಲು ಪರದಾಡಬೇಕಾಗುತ್ತದೆ.

ಅಲ್ಲದೇ ಬಯ್ಯಪ್ಪನಹಳ್ಳಿ ಮೂಲಕವೇ ಹಾದು ಹೋಗುವ ವಂದೇ ಭಾರತ ರೈಲಿಗೆ ಅಲ್ಲಿ ನಿಲುಗಡೆ ನೀಡಿರುವದಿಲ್ಲ. ಪ್ರಯಾಣಿಕರು ಅನುಭವಿಸುವ ಈ ಸಂಕಷ್ಟ ರೈಲ್ವೆ ಇಲಾಖೆಗೆ ಅರ್ಥವಾಗುವುದಿಲ್ಲವೇ? ಒಂದೋ ವಂದೇ ಭಾರತ ರೈಲನ್ನು ಮೆಜೆಸ್ಟಿಕ್ ವರೆಗೆ ವಿಸ್ತರಿಸಬೇಕು. ಮತ್ತು ಬೈಯಪ್ಪನಹಳ್ಳಿಗೆ ವಂದೇ ಭರತ ನಿಲುಗಡೆ ನೀಡಿದರೆ, ಪ್ರಯಣಿಕರು ಮೆಟ್ರೋ ಹಿಡಿದು ತಮ್ಮ ಸ್ಥಳಗಳಿಗೆ ಹೋಗಲು ಅನುಕೂಲವಾಗುವಂತೆ ಮಾಡಬೇಕೆಂಬುದು ಪ್ರಯಾಣಿಕರ ಆಗ್ರಹವಾಗಿದೆ.

ಸದ್ಯಕ್ಕೆ ಈ ಎರಡೂ ರೈಲುಗಳು ಬೈಯಪ್ಪನಹಳ್ಳಿಯ ಎಸ್‌ಎಂವಿಟಿ ನಿಲ್ದಾಣದಿಂದ ಆರಂಭವಾಗಿ ಅಲ್ಲೇ ಕೊನೆಗೊಳ್ಳುತ್ತವೆ. ಆದರೆ, ಬೆಂಗಳೂರಿನ ಪಶ್ಚಿಮ ಮತ್ತು ಉತ್ತರ ಭಾಗಗಳಲ್ಲಿ ವಾಸಿಸುವ ಪ್ರಯಾಣಿಕರಿಗೆ ಎಸ್‌ಎಂವಿಟಿ ನಿಲ್ದಾಣಕ್ಕೆ ತಲುಪುವುದು ಒಂದು ದೊಡ್ಡ ಸವಾಲಾಗಿದೆ. ನಗರದ ಪಶ್ಚಿಮ ಭಾಗಗಳಿಂದ



ಎಸಎಂವಿಟಿ ನಿಲ್ದಾಣಕ್ಕೆ ಹೋಗಲು ಗಂಟೆಗಟ್ಟಲೆ ಟ್ರಾಫಿಕ್‌ನಲ್ಲಿ ಸಿಲುಕಬೇಕಾಗುತ್ತದೆ. ವಿಶೇಷವಾಗಿ ತಡರಾತ್ರಿ ಅಥವಾ ಮುಂಜಾನೆ ರೈಲು ಹತ್ತಬೇಕಾದಾಗ ಸಾರ್ವಜನಿಕ ಸಾರಿಗೆಯ ಕೊರತೆಯಿಂದಾಗಿ ದುಬಾರಿ ಕ್ಯಾಬ್‌ಗಳನ್ನು ಅವಲಂಬಿಸಬೇಕಾಗುತ್ತದೆ ಎಂದು ನಿವಾಸಿಗಳು ತಮ್ಮ ಅಳಲು ತೋಡಿಕೊಂಡಿದ್ದಾರೆ.

ಪ್ರಯಾಣಿಕರ ಪ್ರಕಾರ, ಮೆಜೆಸ್ಟಿಕ್ ನಿಲ್ದಾಣವು ನಗರದ ಮಧ್ಯಭಾಗದಲ್ಲಿದೆ ಮತ್ತು ಇಲ್ಲಿಂದ ನಮ್ಮ ಮೆಟ್ರೋ ಹಾಗೂ ಬಿಎಂಟಿಸಿ ಬಸ್ ಸಂಪರ್ಕ ಅತ್ಯುತ್ತಮವಾಗಿದೆ. ಮೆಜೆಸ್ಟಿಕ್‌ನಿಂದ ನಗರದ ಯಾವುದೇ ಮೂಲೆಗೆ ಹೋಗಲು ಸುಲಭ ಮತ್ತು ಕಡಿಮೆ ವೆಚ್ಚವಾಗುತ್ತದೆ. ದೂರದ ಊರುಗಳಿಗೆ ಹೋಗುವ ರೈಲುಗಳು ಮೆಜೆಸ್ಟಿಕ್‌ನಿಂದ ಹೊರಟರೆ ನಮಗೆ ಸಮಯ ಮತ್ತು ಹಣ ಎರಡೂ ಉಳಿತಾಯವಾಗುತ್ತದೆ. ಎಸ್‌ಎಂವಿಟಿ ನಿಲ್ದಾಣವು ಸಂಪರ್ಕದ ದೃಷ್ಟಿಯಿಂದ ಇನ್ನೂ ಸಾಕಷ್ಟು ಸುಧಾರಿಸಬೇಕಿದೆ ಎಂದು ಪ್ರಯಾಣಿಕರು ತಿಳಿಸಿದ್ದಾರೆ.

ಈ ಬಗ್ಗೆ ರೈಲ್ವೆ ಅಧಿಕಾರಿಗಳನ್ನು ಕೇಳಿದಾಗ, ಅವರು ಮೆಜೆಸ್ಟಿಕ್ ಮತ್ತು ಕಂಟೋನ್ಮೆಂಟ್ ನಿಲ್ದಾಣಗಳಲ್ಲಿನ ಅತಿಯಾದ ದಟ್ಟಣೆಯನ್ನು ಕಡಿಮೆ ಮಾಡಲು ಎಸ್‌ಎಂವಿಟಿ ಟರ್ಮಿನಲ್ ಅನ್ನು ಅಭಿವೃದ್ಧಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ. ಆರಂಭದಲ್ಲಿ ಕಂಟೋನ್ಮೆಂಟ್ ನಿಲ್ದಾಣವನ್ನು ಈ ರೈಲುಗಳಿಗೆ ಟರ್ಮಿನಲ್ ಮಾಡಲು ಉದ್ದೇಶಿಸಲಾಗಿತ್ತು. ಆದರೆ, ಅಲ್ಲಿ 'ಪಿಟ್–ಲೈನ್' ಮತ್ತು ಚಾರ್ಜಿಂಗ್ ಸೌಲಭ್ಯಗಳ ಕೊರತೆ ಇರುವುದರಿಂದ ತಾತ್ಕಾಲಿಕವಾಗಿ ಎಸ್‌ಎಂವಿಟಿ ನಿಲ್ದಾಣವನ್ನು ಬಳಸಲಾಗುತ್ತಿದೆ ಎಂದು ಅಧಿಕಾರಿಗಳು ವಿವರಿಸಿದ್ದಾರೆ.

ಆದರೆ, ಕೇವಲ ದಟ್ಟಣೆ ಕಡಿಮೆ ಮಾಡುವ ನೆಪದಲ್ಲಿ ಪ್ರಯಾಣಿಕರಿಗೆ ತೊಂದರೆ ಕೊಡಬಾರದು ಎಂಬುದು ರೈಲವೆ ಪ್ರಯಣಿಕರ ವಾದವಾಗಿದೆ. ರೈಲ್ವೆ ಇರುವುದು ಪ್ರಯಣಿಕರ ಸೌಲಭ್ಯಗಳಿಗಾಗಿ. ಅದುವೇ ಅನಾನುಕೂಲವಾದರೆ ಹೇಗೆ? ಉತ್ತರ ಕರ್ನಾಟಕದ ಜನರಿಗೆ ಅನುಕೂಲವಾಗುವಂತೆ ಈ ಪ್ರಮುಖ ರೈಲುಗಳನ್ನು ಮೆಜೆಸ್ಟಿಕ್ ನಿಲ್ದಾಣದವರೆಗೆ ವಿಸ್ತರಿಸುವ ಬಗ್ಗೆ ರೈಲ್ವೆ ಮಂಡಳಿ ಶೀಘ್ರವೇ ತೀರ್ಮಾನ ಕೈಗೊಳ್ಳಬೇಕೆಂದು ಪ್ರಯಾಣಿಕರ ಸಂಘಟನೆಗಳು ಒತ್ತಾಯಿಸಿವೆ.

# ಲಾರಿ ಉದ್ಯಮದ ಸಮಸ್ಯೆಗಳ ಪರಿಹಾರಕ್ಕೆ ಸಂಘಟಿತ ಹೋರಾಟ ಅಗತ್ಯ: ನವೀನ್ ರೆಡ್ಡಿ



**ರಾಯಚೂರು, ಜೂ. 16:** ಲಾರಿ ಉದ್ಯಮವು ಪ್ರಸ್ತುತ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದು, ಸಮಸ್ಯೆಗಳ ಪರಿಹಾರಕ್ಕಾಗಿ ಲಾರಿ ಮಾಲೀಕರು ಸಂಘಟಿತರಾಗಿ ಹೋರಾಟ ನಡೆಸುವುದು ಅನಿವಾರ್ಯ ಎಂದು ಫೆಡರೇಷನ್ ಆಫ್ ಕರ್ನಾಟಕ ಲಾರಿ ಓನರ್ಸ್ ಅಸೋಸಿಯೇಷನ್ ಸಂಘದ ರಾಜ್ಯ ಘಟಕದ ಅಧ್ಯಕ್ಷ ಸಿ.ನವೀನ್‌ರೆಡ್ಡಿ ಕರೆ ನೀಡಿದ್ದಾರೆ.

ಲಾರಿ ಮಾಲೀಕರ ಒಕ್ಕೂಟ ಆಯೋಜಿಸಿದ್ದ ಸಂಘಟನೆಯ 35ನೇ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ಉದ್ಘಾಟಿಸಿ, 20 ವರ್ಷಕ್ಕಿಂತ ಹಳೆಯ ವಾಹನಗಳ ಫಿಟ್‌ನೆಸ್ ಪ್ರಮಾಣಪತ್ರ ಶುಲ್ಕವನ್ನು 1,200ರಿಂದ 30,000ಕ್ಕೆ ಹೆಚ್ಚಿಸಿರುವುದು, ಡೀಸೆಲ್ ಮೇಲಿನ ತೆರಿಗೆ ಏರಿಕೆ, ಟೋಲ್ ಶುಲ್ಕದ ಹೆಚ್ಚಳ ಸೇರಿದಂತೆ ಹಲವು ಸಮಸ್ಯೆಗಳು ಲಾರಿ ಉದ್ಯಮದ ಮೇಲೆ ಗಂಭೀರ ಪರಿಣಾಮ ಬೀರಿವೆ. ಸರ್ಕಾರಗಳು ಈ ಕುರಿತು ತಕ್ಷಣ ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರಾಷ್ಟ್ರೀಯ ಹೆದ್ದಾರಿಗಳಲ್ಲಿ ಚಾಲಕರಿಗೆ ಸುಸಜ್ಜಿತ ವಿಶ್ರಾಂತಿ ಕೇಂದ್ರ ನಿರ್ಮಾಣ, ಸಾರಿಗೆ ಇಲಾಖೆಯ ಚೆಕ್‌ಪೋಸ್ಟ್‌ಗಳ ತೆರವು, ವಿಎಲ್‌ಟಿಡಿ– ಜಿಪಿಎಸ್ ಸಾಧನಗಳ ಹೆಸರಿನಲ್ಲಿ ನಡೆಯುತ್ತಿರುವ ಅತಿಯಾದ ಶುಲ್ಕ ವಸೂಲಾತಿಗೆ ನಿಯಂತ್ರಣ ನಿಲ್ಲಿಸಬೇಕು. ಇಂಧನ ಮತ್ತು ನಿರ್ವಹಣಾ ವೆಚ್ಚಗಳು ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಲಾರಿ ಉದ್ಯಮದ ಉಳಿವಿಗಾಗಿ ಸಾಗಾಣಿಕೆ ಬಾಡಿಗೆಯನ್ನು ಶೇ 15ರಿಂದ 20ರಷ್ಟು ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.

ಸಂಘದ ಚಟುವಟಿಕೆಗಳು ಹಾಗೂ ಭವಿಷ್ಯದ ಯೋಜನೆ ಕುರಿತು ಸದಸ್ಯರಿಗೆ ಮಾಹಿತಿ ನೀಡಿದರು.

ನಂತರ ಸಭೆಯಲ್ಲಿ 34ನೇ ವಾರ್ಷಿಕ ಸರ್ವ ಸದಸ್ಯರ ಸಭೆಯ ನಡವಳಿಕೆಗಳಿಗೆ, 2025–26ನೇ ಸಾಲಿನ ಪರಿಶೋಧಿತ ಲೆಕ್ಕಪತ್ರಗಳಿಗೆ ಹಾಗೂ 2026–27ನೇ ಸಾಲಿನ ಲೆಕ್ಕಪರಿಶೋಧಕರ ನೇಮಕಾತಿಗೆ ಸರ್ವಾನುಮತದ ಅನುಮೋದನೆ ನೀಡಲಾಯಿತು.

ಲಾರಿ ಮಾಲೀಕರ ಹಿತಾಸಕ್ತಿಗಳ ರಕ್ಷಣೆ ಹಾಗೂ ಉದ್ಯಮದ ಸಮಸ್ಯೆಗಳ ಪರಿಹಾರಕ್ಕಾಗಿ ಸಂಘವು ನಿರಂತರ ಹೋರಾಟ ಮುಂದುವರಿಸುವುದಾಗಿ ನಿರ್ಣಯ ಕೈಗೊಳ್ಳಲಾಯಿತು.

# ದೈವಕಾರ್ಯಕ್ಕೆ ಬೇಕಾಗುವ ಸಸಿಗಳನ್ನು ನೆಟ್ಟು ವನಮಹೋತ್ಸವ

ಅಂಕೋಲಾ, ಜೂ.16 : ವಾಸರೆಯ ಶ್ರೀ ಶಾಂತಿಕಾ ಪರಮೇಶ್ವರಿ ದೇವಾಲಯದ ಮೂಲ ಸ್ಥಳವಾದ ದೇವತೆಮನೆ ಜಾಗದಲ್ಲಿ ವನಮೋತ್ಸವ ಕಾರ್ಯಕ್ರಮ ನಡೆಯಿತು. ದೇವತಾ ಕಾರ್ಯಕ್ಕೆ ಬೇಕಾಗುವ ಬಿಲ್ವಪತ್ರೆ, ಸೆಮೆಗಿಡ ಮುಂತಾದ ಗಿಡಗಳನ್ನು ಸಂರಕ್ಷಿಸುವ ನಿಟ್ಟಿನಲ್ಲಿ ನೆಡಲಾಯಿತು. ದೇವಸ್ಥಾನದ ಅಧ್ಯಕ್ಷ ಕಾಂತ ಮಾಸ್ತರ, ಗ್ರಾಮ ಪಂಚಾಯಿತಿ ನಿಕಟಪೂರ್ವ ಅಧ್ಯಕ್ಷ ಪ್ರದೀಪ ನಾರಾಯಣ ನಾಯಕ, ನವೀನ ನೀಲಕಂಠ, ಚಂದ್ರಕಾಂತ, ಬಾಬು, ಯುವಕ ಮಂಡಲದ ನೇಸರ ಸುರೇಶ ನಾಯಕ, ವೈಭವ ನಾಯಕ, ಕೌಸ್ತುಬ ನಾಯಕ ಇದ್ದರು.



# ಮಳೆ ನೀರು ನಿರ್ವಹಣೆ: ವಿಜಯಪುರ ಪಾಲಿಕೆ ಅಧಿಕಾರಿಗಳಿಗೆ ಮೇಯರ್ ಕರಡಿ ಸೂಚನೆ

**ವಿಜಯಪುರ,ಜೂ.16–**ನಗರದಲ್ಲಿ ಮಳೆಯಿಂದ ಸಂಗ್ರಹವಾಗುವ ಮಳೆ ನೀರನ್ನು ಸರಾಗವಾಗಿ ಹರಿದು ಹೋಗಲು ಕೋಟೆ ಗೋಡೆ ಸುತ್ತಲಿನ ಕಂದಕಗಳು ಹಾಗೂ ರಾಜ ಕಾಲುವೆಗಳಲ್ಲಿ ಸಂಗ್ರಹಣೆಯಾಗಿರುವ ಮಣ್ಣು ಹಾಗೂ ಹೂಳನ್ನು ತೆಗೆಯುವ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು ಎಂದು ಮಹಾನಗರ ಪಾಲಿಕೆ ಮೇಯರ್ ಎಂ.ಎಸ್.ಕರಡಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಪಾಲಿಕೆಯ ಸಭಾಭವನದಲ್ಲಿ ಮೇಯರ್ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆದ ಪ್ರವಾಹ ಎದುರಾದಲ್ಲಿ ಸಮರ್ಥವಾಗಿ ಎದುರಿಸುವ, ಬೀದಿದೀಪ, ಸ್ವಚ್ಛತೆ, ನೀರು ಪೂರೈಕೆ ಕುರಿತಾಗಿ ಪಾಆಲಿಕೆ ಸದಸ್ಯರು ಹಾಗು ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಈ ಸೂಚನೆ ನೀಡಿದರು.

ನಗರದಲ್ಲಿರುವ ಅಪಾಯಕಾರಿ ಮರ ಮತ್ತು ಅನೇಕ ಮರಗಳ ಟೊಂಗೆಗಳು ವಿದ್ಯುತ್ ತಂತಿಗೆ ತಗುಲಿ ವಿದ್ಯುತ್ ಸಂಪರ್ಕ ಹಾಗೂ ಯಾವುದೇ ಹಾನಿಯಾಗದಂತೆ ಮುಂಚಿತವಾಗಿ ಯೋಜನೆ ರೂಪಿಸಿಕೊಳ್ಳಬೇಕು. ಮಳೆಗಾಲದಲ್ಲಿ ಮುಂಜಾಗ್ರತೆಯಾಗಿ ಅಪಾಯಕಾರಿ ಮರಗಳನ್ನು ತೆರವುಗೊಳಿಸುವಂತೆ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಹಾಗೂ ಮಳೆಗಾಲದ ಸನ್ನಿವೇಶದಲ್ಲಿ ತುರ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳುವ ಪಾಲಿಕೆಯ ಎಲ್ಲ ಅಧಿಕಾರಿ,



ಸಿಬ್ಬಂದಿ ಕಡ್ಡಾಯವಾಗಿ ಸುರಕ್ಷತಾ ಪರಿಕರಗಳನ್ನು ಧರಿಸಿ ಕಾರ್ಯ ನಿರ್ವಹಿಸಬೇಕು ಎಂದರು.

ಮಳೆಗಾಲದ ಸಂದರ್ಭದಲ್ಲಿ ಮಳೆಯಿಂದ ತಗ್ಗು ಪ್ರದೇಶಗಳಲ್ಲಿನ ಮನೆಗಳಿಗೆ ನೀರು ನುಗ್ಗಿ ಜನ ಜೀವನಕ್ಕೆ ತೊಂದರೆ ಉಂಟಾಗದಂತೆ ಹಾಗೂ ರಸ್ತೆಗಳು ಜಲಾವೃತಗೊಂಡು ಸಂಚಾರಕ್ಕೆ ಅನಾನುಕೂಲವಾಗದ ನಿಟ್ಟಿನಲ್ಲಿ ಈ ಕುರಿತು ಮುಂಜಾಗೃತ ಕ್ರಮವಾಗಿ ಅವಶ್ಯಕ ಕಾಮಗಾರಿಗಳನ್ನು ಕೈಗೊಂಡು ಪ್ರವಾಹ ಪರಿಸ್ಥಿತಿಯಾಗದಂತೆ ಪರಿಹಾರ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಿದರು. ಅಪಾಯಕಾರಿ ರೀತಿಯಲ್ಲಿ ಇರುವ ವಿದ್ಯುತ್ ಕಂಬಗಳನ್ನು ಈ ಕೂಡಲೇ ಸ್ಥಳಾಂತರ ಮಾಡುವಂತೆ ಹಾಗೂ ಹೊಸದಾಗಿ ವಿದ್ಯುತ್ ಕಂಬಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಹಾಗೂ ಜಾನುವಾರುಗಳ ಜೀವಕ್ಕೆ ಹಾನಿಯಾಗದಂತೆ ಕೂಡಲೆ ಕ್ರಮ ವಹಿಸುವಂತೆ ಹೆಸ್ಕಾಂ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

# ಇರಾನ್ ಪುನರ್ ನಿರ್ಮಾಣಕ್ಕೆ 300 ಶತಕೋಟಿ ಡಾಲರ್ ನಿಧಿ ಘೋಷಣೆ: ವರದಿ ನಿರಾಕರಿಸಿದ ಟ್ರಂಪ್

**ವಾಷಿಂಗ್ಟನ್, ಜೂನ್ 16:** ಸಂಘರ್ಷವನ್ನು ಕೊನೆಗೊಳಿಸಲು ವಾಸ್ತವಿಕವಾಗಿ ಸಹಿ ಹಾಕಲಾದ ಒಪ್ಪಂದದ ಭಾಗವಾಗಿ ತಮ್ಮ ಆಡಳಿತವು ಇರಾನ್‌ಗೆ 300 ಶತಕೋಟಿ ಡಾಲರ್ ನಿಧಿಯನ್ನು ನೀಡುತ್ತಿದೆ ಎಂಬ ವರದಿಗಳನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿರಸ್ಕರಿಸಿದ್ದಾರೆ. "ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರವನ್ನು ಹೊಂದಲು ಒಪ್ಪಿಕೊಂಡಿಲ್ಲ. ಅಲ್ಲದೆ, ಅಮೆರಿಕ ಇರಾನ್‌ಗೆ 300 ಶತಕೋಟಿ ಡಾಲರ್ ಪಾವತಿಸುತ್ತಿದೆ ಎಂಬ ಕಥೆಯು ಡೆಮೋಕ್ರಾಟ್‌ಗಳು ಹೊರಹಾಕಿದ ನಕಲಿ ಸುದ್ದಿ ಎಂದು ಟ್ರಂಪ್ ಟ್ರುತ್ ಸೋಷಿಯಲ್‌ನಲ್ಲಿ ಬರೆದಿದ್ದಾರೆ. ಒಪ್ಪಂದದ ನಿಯಮಗಳನ್ನು ಪಾಲಿಸಿದರೆ ಇರಾನ್ 300 ಶತಕೋಟಿ ಡಾಲರ್ ಪುನರ್ನಿರ್ಮಾಣ ನಿಧಿಗೆ "ಪ್ರವೇಶವನ್ನು ಹೊಂದಬಹುದು" ಎಂದು ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಸೂಚಿಸಿದ ಕೆಲವೇ ಗಂಟೆಗಳ ನಂತರ ಅವರ ಹೇಳಿಕೆಗಳು ಬಂದಿವೆ, ಗಲ್ಫ್ ರಾಷ್ಟ್ರಗಳಿಂದ ಬರುವ ನಿರೀಕ್ಷೆಯಿದೆ. "ಅವರು ತಮ್ಮ ಬಾಧ್ಯತೆಯ ಅಂತ್ಯವನ್ನು ಗೌರವಿಸುವವರೆಗೆ, ಗಲ್ಫ್ ಕೋಸ್ಟ್ ಒಕ್ಕೂಟದಿಂದ ಹಣವನ್ನು ಪಡೆಯುವ ಮೂಲಕ ಅವರು ಪ್ರವೇಶವನ್ನು ಹೊಂದಿರಬಹುದಾದ ವಿಷಯ



ಅದು" ಎಂದು ವ್ಯಾನ್ಸ್ ಹೇಳಿದರು. ವ್ಯಾನ್ಸ್ ಬಹುಶಃ ಬಹ್ರೇನ್, ಕುವೈತ್, ಓಮನ್, ಕತಾರ್, ಸೌದಿ ಅರೇಬಿಯಾ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ಒಳಗೊಂಡಿರುವ ಗಲ್ಫ್ ಸಹಕಾರ ಮಂಡಳಿಯನ್ನು ಉಲ್ಲೇಖಿಸುತ್ತಿದ್ದರು.

"ನಾವು ಸ್ಥಗಿತಗೊಂಡ ನಿಧಿಗಳನ್ನು ಬಿಡುಗಡೆ ಮಾಡುವ ಸಾಧ್ಯತೆ, ನಿರ್ಬಂಧಗಳ ಪರಿಹಾರ, ನಿಮಗೆ ತಿಳಿದಿದೆ, ಅವರ ದೇಶವನ್ನು ಪುನರ್ನಿರ್ಮಿಸಲು 300 ಶತಕೋಟಿ ಡಾಲರ್ ನಿಧಿಯನ್ನು ನೀಡುವ ಸಾಧ್ಯತೆ ಮತ್ತು ಈ ಎಲ್ಲಾ ವಿಷಯಗಳನ್ನು ಕಾರ್ಯಕ್ಷಮತೆಗೆ ಜೋಡಿಸಲಾಗುವುದು" ಎಂದು ಅಮೆರಿಕದ ಅಧಿಕಾರಿಯೊಬ್ಬರು ವರದಿಗಾರರಿಗೆ ನೀಡಿದ ಹಿಂದಿನ ಮಾಹಿತಿಯಲ್ಲಿ ತಿಳಿಸಿದ್ದಾರೆ.

"ಮತ್ತು ಅವರೊಂದಿಗೆ ಚರ್ಚಿಸಲಾಗುವುದು ಏನೆಂದರೆ, ನೀವು ನೋಡುತ್ತೀರಿ, ಸ್ಥಗಿತಗೊಂಡ ನಿಧಿಗಳನ್ನು ಬಿಡುಗಡೆ ಮಾಡುವ ಸಾಧ್ಯತೆ, ನಿರ್ಬಂಧಗಳ ಪರಿಹಾರ, ನಿಮಗೆ ತಿಳಿದಿದೆ, ಅವರ ದೇಶವನ್ನು ಪುನರ್ನಿರ್ಮಿಸಲು 300 ಶತಕೋಟಿ ಡಾಲರ್ ನೀಡುವ ಸಾಧ್ಯತೆಯ ಬಗ್ಗೆ ನಾವು ಚರ್ಚಿಸಿದ್ದೇವೆ" ಎಂದು ಅಮೆರಿಕದ ಹಿರಿಯ ಅಧಿಕಾರಿಯೊಬ್ಬರು ಹೇಳಿದರು.

ನ್ಯೂಯಾರ್ಕ್ ಟೈಮ್ಸ್ ಈ ಹಿಂದೆ ಕರಡು ಒಪ್ಪಂದವು ಇರಾನ್‌ಗೆ ಸಂಭಾವ್ಯ 300 ಶತಕೋಟಿ ಪುನರ್ನಿರ್ಮಾಣ ಹೂಡಿಕೆ ನಿಧಿಯನ್ನು ಒಳಗೊಂಡಿದೆ ಎಂದು ಇರಾನ್ ಮತ್ತು ರಾಜತಾಂತ್ರಿಕ ಮೂಲಗಳನ್ನು ಉಲ್ಲೇಖಿಸಿ ವರದಿ ಮಾಡಿದೆ. ಆದಾಗ್ಯೂ, ವಾರಾಂತ್ಯದಲ್ಲಿ ಡಿಜಿಟಲ್ ರೂಪದಲ್ಲಿ ಸಹಿ ಮಾಡಲಾದ ಒಪ್ಪಂದ ಪತ್ರ ಕೇವಲ ಆರಂಭಿಕ ಹೆಜ್ಜೆಯಾಗಿದೆ ಎಂದು ಹಿರಿಯ ಯುಎಸ್ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ, ವಿವರವಾದ ತಾಂತ್ರಿಕ ಮಾತುಕತೆಗಳು ವಾರದ ಕೊನೆಯಲ್ಲಿ ಪ್ರಾರಂಭವಾಗುವ ನಿರೀಕ್ಷೆಯಿದೆ ಮತ್ತು ವ್ಯಾನ್ಸ್ ನೇತೃತ್ವದಲ್ಲಿ.



ನಡೆಯುತ್ತಿರುವ ಸಂಘರ್ಷವನ್ನು ಕೊನೆಗೊಳಿಸುವ ಮತ್ತು ಟೆಹ್ರಾನ್‌ನ ಪರಮಾಣು ಮಹತ್ವಾಕಾಂಕ್ಷೆಗಳನ್ನು ನಿಗ್ರಹಿಸುವ ಗುರಿಯನ್ನು ಹೊಂದಿರುವ ಪ್ರಸ್ತಾವಿತ ಒಪ್ಪಂದದಡಿಯಲ್ಲಿ ಇರಾನ್ ಯಾವುದೇ ಅಮೆರಿಕದ ತೆರಿಗೆದಾರರ ಹಣವನ್ನು ಸ್ವೀಕರಿಸುವುದಿಲ್ಲ ಎಂದು ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಸೋಮವಾರ ಹೇಳಿದ್ದಾರೆ, ಆದರೆ ನಿರ್ಬಂಧಗಳನ್ನು ತೆಗೆದುಹಾಕಿ ಇರಾನ್ ಒಪ್ಪಂದದ ಷರತ್ತುಗಳನ್ನು ಪಾಲಿಸಿದರೆ ವಿದೇಶಿ ಹೂಡಿಕೆಯ ಸಾಧ್ಯತೆಯನ್ನು ಮುಕ್ತವಾಗಿ ಬಿಡಲಾಗಿದೆ. ದಿನದ ಆರಂಭದಲ್ಲಿ, ಒಪ್ಪಂದದ ನಿಯಮಗಳನ್ನು ಪೂರೈಸಿದರೆ ಇರಾನ್ ಪ್ರಸ್ತಾವಿತ 300 ಶತಕೋಟಿ ಡಾಲರ್ ಪುನರ್ನಿರ್ಮಾಣ ನಿಧಿಗೆ "ಪ್ರವೇಶವನ್ನು ಹೊಂದಬಹುದು" ಎಂದು ವ್ಯಾನ್ಸ್ ಸೂಚಿಸಿದ್ದರು. ಇದನ್ನು ಗಲ್ಫ್ ರಾಷ್ಟ್ರಗಳು ಹಣಕಾಸು ಒದಗಿಸುತ್ತವೆ ಎಂದು ಅವರು ಹೇಳಿದ್ದರು.

ವಾರಾಂತ್ಯದಲ್ಲಿ ಒಔಗ ಗೆ ಸಹಿ ಹಾಕುವ ಮೊದಲು, ಉಪಾಧ್ಯಕ್ಷರು ಅಮೆರಿಕದೊಂದಿಗಿನ ಒಪ್ಪಂದದ ಅಡಿಯಲ್ಲಿ ಟೆಹ್ರಾನ್ "ಯಾವುದೇ ಹಣವನ್ನು ಪಡೆಯುವುದಿಲ್ಲ" ಎಂದು ಹೇಳಿದರು. "ಮೊದಲನೆಯದಾಗಿ, ಇರಾನಿಯನ್ನರು ಯಾವುದೇ ಹಣವನ್ನು ಸ್ವೀಕರಿಸುತ್ತಿಲ್ಲ, ಮತ್ತು ಕೇವಲ ಒಪ್ಪಂದಕ್ಕೆ ಸಹಿ ಹಾಕಲು ಅಥವಾ ಸಭೆಗೆ ಹಾಜರಾಗಲುಯಾವುದೇ ಹಣವನ್ನು ಬಿಡುಗಡೆ ಮಾಡಲಾಗುತ್ತಿಲ್ಲ" ಎಂದು ವ್ಯಾನ್ಸ್ ಹೇಳಿದರು. "ಯುಎಸ್ ಮತ್ತು ಅದರ ಮಿತ್ರರಾಷ್ಟ್ರಗಳ ಕಾಳಜಿಗಳನ್ನು ಆದ್ಯತೆ ನೀಡಲಾಗಿದೆ ಎಂದು ಖಚಿತಪಡಿಸಿಕೊಳ್ಳಲು ಒಪ್ಪಂದವನ್ನು ರಚಿಸಲಾಗಿದೆ ಮತ್ತು ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್ ತನ್ನ ಜವಾಬ್ದಾರಿಗಳನ್ನು ಪೂರೈಸಿದರೆ, ಆರ್ಥಿಕ ಪ್ರಯೋಜನಗಳು ಅವರಿಗೆ ಮತ್ತು ಇಡೀ ಪ್ರದೇಶಕ್ಕೆ ಹರಿಯುತ್ತವೆ."

# ಫ್ರಾನ್ಸ್‌ನಲ್ಲಿ ಜಾಗತಿಕ ನಾಯಕರ ಸಮಾವೇಶ: ಜಿ7 ಶೃಂಗಸಭೆಯ ಗಮನ ಸೆಳೆಯಲು ಮೋದಿ-ಟ್ರಂಪ್ ಸಭೆ ಸಿದ್ಧ

ನವದೆಹಲಿ, ಜೂನ್ 16: ಫ್ರಾನ್ಸ್‌ನಲ್ಲಿ ನಡೆಯಲಿರುವ ಜಿ7 ಶೃಂಗಸಭೆಯ ಹೊರತಾಗಿ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ಸಭೆಯು ವಾರದ ಅತ್ಯಂತ ನಿಕಟವಾಗಿ ವೀಕ್ಷಿಸಲ್ಪಡುವ ರಾಜತಾಂತ್ರಿಕ ಕಾರ್ಯಕ್ರಮಗಳಲ್ಲಿ ಒಂದಾಗಲಿದೆ, ಹೆಚ್ಚುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು, ಆರ್ಥಿಕ ಅನಿಶ್ಚಿತತೆ ಮತ್ತು ಹೆಚ್ಚುತ್ತಿರುವ ಭದ್ರತಾ ಸವಾಲುಗಳ ನಡುವೆ ವಿಶ್ವ ನಾಯಕರು ಎವಿಯನ್ ಸರೋವರದ ತೀರದ ರೆಸಾರ್ಟ್ ಪಟ್ಟಣದಲ್ಲಿ ಭೇಟಿಯಾಗುತ್ತಿದ್ದಾರೆ.

52 ನೇ ಜಿ7 ಶೃಂಗಸಭೆಯಲ್ಲಿ ಭಾಗವಹಿಸಲು ಮೋದಿ ಫ್ರಾನ್ಸ್ ತಲುಪಿದ್ದಾರೆ. ಅಲ್ಲಿ ಉಕ್ರೇನ್ ಯುದ್ಧ ಮತ್ತು ಪಶ್ಚಿಮ ಏಷ್ಯಾದಲ್ಲಿನ ವಿಕಸನಗೊಳ್ಳುತ್ತಿರುವ ಪರಿಸ್ಥಿತಿಯಿಂದ ಹಿಡಿದು ಜಾಗತಿಕ ವ್ಯಾಪಾರ, ಇಂಧನ ಭದ್ರತೆ ಮತ್ತು ಅಂತರರಾಷ್ಟ್ರೀಯ ಆಡಳಿತದ ಭವಿಷ್ಯದವರೆಗೆ ಚರ್ಚೆಗಳು ನಡೆಯುವ ನಿರೀಕ್ಷೆಯಿದೆ. ಮೋದಿ-ಟ್ರಂಪ್ ಸಭೆಯು ಎರಡೂ ನಾಯಕರಿಗೆ ದ್ವಿಪಕ್ಷೀಯ ಸಂಬಂಧಗಳನ್ನು ಪರಿಶೀಲಿಸಲು ಮತ್ತು ಪ್ರಮುಖ ಅಂತರರಾಷ್ಟ್ರೀಯ ಬೆಳವಣಿಗೆಗಳ ಕುರಿತು





ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲು ಅವಕಾಶವನ್ನು ಒದಗಿಸುತ್ತದೆ ಎಂದು ನಿರೀಕ್ಷಿಸಲಾಗಿದೆ. ಭಾರತ ಮತ್ತು ಅಮೆರಿಕ ಇತ್ತೀಚಿನ ವರ್ಷಗಳಲ್ಲಿ ರಕ್ಷಣೆ, ವ್ಯಾಪಾರ, ತಂತ್ರಜ್ಞಾನ ಮತ್ತು ಕಾರ್ಯತಂತ್ರದ ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸಿವೆ, ಜೊತೆಗೆ ಇಂಡೋ-ಪೆಸಿಫಿಕ್, ಭಯೋತ್ಪಾದನೆ ನಿಗ್ರಹ ಮತ್ತು ಜಾಗತಿಕ ಆರ್ಥಿಕ ಸ್ಥಿರತೆಗೆ ಸಂಬಂಧಿಸಿದ ವಿಷಯಗಳ ಬಗ್ಗೆಯೂ ಸಮನ್ವಯ ಸಾಧಿಸಿವೆ.

ಭಾರತಕ್ಕೆ, ಮೋದಿಯ ಭಾಗವಹಿಸುವಿಕೆಯು ಅಂತರರಾಷ್ಟ್ರೀಯ ರಾಜತಾಂತ್ರಿಕತೆಯಲ್ಲಿ ನವದೆಹಲಿಯ ವಿಸ್ತರಿಸುತ್ತಿರುವ ಪಾತ್ರವನ್ನು ಒತ್ತಿಹೇಳುತ್ತದೆ. ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಗಳಲ್ಲಿ ಒಂದಾಗಿರುವ ಮತ್ತು ಜಾಗತಿಕ ದಕ್ಷಿಣದ ಪ್ರಭಾವಶಾಲಿ ಧ್ವನಿಯಾಗಿ, ಭಾರತವು ಆರ್ಥಿಕ ಸ್ಥಿತಿಸ್ಥಾಪಕತ್ವ, ಇಂಧನ ಭದ್ರತೆ, ತಾಂತ್ರಿಕ ಸಹಕಾರ ಮತ್ತು ಬಹುಪಕ್ಷೀಯ ಸಂಸ್ಥೆಗಳ ಸುಧಾರಣೆಯ ಕುರಿತು ಚರ್ಚೆಗಳಲ್ಲಿ ಪ್ರಮುಖ ಪಾಲುದಾರನಾಗಿ ಮಾರ್ಪಟ್ಟಿದೆ. ಜಿ7 ನ ಫ್ರಾನ್ಸ್‌ನ ಅಧ್ಯಕ್ಷತೆಯಲ್ಲಿ ಆಯೋಜಿಸಲಾದ ಎರಡು ದಿನಗಳ ಶೃಂಗಸಭೆಯು ಕೆನಡಾ, ಫ್ರಾನ್ಸ್, ಜರ್ಮನಿ, ಇಟಲಿ, ಜಪಾನ್, ಯುನೈಟೆಡ್ ಕಿಂಗ್ಡಮ್ ಮತ್ತು ಅಮೆರಿಕ ನಾಯಕರನ್ನು ಮತ್ತು ಯುರೋಪಿಯನ್ ಒಕ್ಕೂಟದ ಪ್ರತಿನಿಧಿಗಳನ್ನು ಒಟ್ಟುಗೂಡಿಸುತ್ತದೆ.





ಫ್ರಾನ್ಸ್‌ನ ಎವಿಯನ್‌ನಲ್ಲಿ ಮಂಗಳವಾರ ಜಿ7 ಶೃಂಗಸಭೆಯಲ್ಲಿ ಜಾಗತಿಕ ನಾಯಕರೊಂದಿಗೆ ಸಮೂಹ ಛಾಯಾಚಿತ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಂಡರು.

# ಜಿ7 -ಪ್ರಾದೇಶಿಕ ಮಾತುಕತೆ: ಮಧ್ಯಪ್ರಾಚ್ಯ ಸ್ಥಿರತೆ, ವ್ಯಾಪಾರ ಮಾರ್ಗ ಆರ್ಥಿಕ ಬೆಂಬಲಕ್ಕೆ ಐರೋಪ್ಯ ಒಕ್ಕೂಟ ಒತ್ತಾಯ

**ಎವಿಯನ್, ಜೂನ್ 16:** ಫ್ರಾನ್ಸ್‌ನ ಎವಿಯನ್ ನಲ್ಲಿದ್ದು **G7** ಶೃಂಗಸಭೆಯಲ್ಲಿ ಭಾಗವಹಿಸುತ್ತಿರುವ ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್, ಪ್ರಾದೇಶಿಕ ಪಾಲುದಾರರೊಂದಿಗೆ ಮಧ್ಯಪ್ರಾಚ್ಯ ಕೇಂದ್ರಿತ ಅಧಿವೇಶನದಲ್ಲಿ, ಹಾರ್ಮುಜ್ ಜಲಸಂಧಿಯಲ್ಲಿ ಸಂಚರಣೆ ಸ್ವಾತಂತ್ರ್ಯವನ್ನು ಪುನಃಸ್ಥಾಪಿಸುವುದು ಆದ್ಯತೆಯಾಗಿದೆ ಎಂದು ಹೇಳಿದರು. "ಮೊದಲನೆಯದಾಗಿ, ಹಾರ್ಮುಜ್ ಜಲಸಂಧಿಯಲ್ಲಿ ನಿರ್ಬಂಧಗಳಿಲ್ಲದೆ ಸಂಚರಣೆ ಸ್ವಾತಂತ್ರ್ಯದ ಸಂಪೂರ್ಣ ಪುನಃಸ್ಥಾಪನೆಯನ್ನು ನಾವು ಖಚಿತಪಡಿಸಿಕೊಳ್ಳಬೇಕು" ಎಂದು ಅವರು ಹೇಳಿದರು. ಇತ್ತೀಚಿನ ಅಡಚಣೆಗಳು ಪ್ರಮುಖ ದುರ್ಬಲತೆಗಳನ್ನು ಬಹಿರಂಗಪಡಿಸಿವೆ ಮತ್ತು ಪರ್ಯಾಯ ಪೂರೈಕೆ ಮಾರ್ಗಗಳು ಮತ್ತು ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್ ನಂತಹ ಹೊಸ ಸಂಪರ್ಕ ಕಾರಿಡಾರ್ಗಳನ್ನು ಅಭಿವೃದ್ಧಿಪಡಿಸುವ ಅಗತ್ಯವನ್ನು ಒತ್ತಿಹೇಳಿವೆ ಎಂದು ಅವರು ಹೇಳಿದರು. "ಸ್ಥಿರ ಮತ್ತು ಶಾಂತಿಯುತ ಮಧ್ಯಪ್ರಾಚ್ಯಕ್ಕೆ ಸ್ಥಿರ ಮತ್ತು ಶಾಂತಿಯುತ ಲೆಬನಾನ್ ಅಗತ್ಯವಿದೆ" ಎಂದು ಅವರು ಒತ್ತಿ ಹೇಳಿದರು. **G7** ರ ಸಂದರ್ಭದಲ್ಲಿ ಈಜಿಪ್ಟ್ ಅಧ್ಯಕ್ಷ ಅಬ್ದೆಲ್ ಫತ್ತಾಹ್ ಎಲ್-ಸಿಸಿ ಅವರೊಂದಿಗಿನ ಭೇಟಿಯ ನಂತರ ಈಜಿಪ್ಟ್‌ನ ಸುಧಾರಣಾ ಕಾರ್ಯಸೂಚಿಯನ್ನು ಬೆಂಬಲಿಸಲು ವಾನ್ ಡೆರ್ ಲೇಯೆನ್ ಹೊಸ 1.5 ಬಿಲಿಯನ್ ವಿತರಣೆಯನ್ನು ಘೋಷಿಸಿದರು. ಈಜಿಪ್ಟ್ ಅನ್ನು "ಪ್ರಕ್ಷುಬ್ಧತೆಯ ಪ್ರದೇಶದಲ್ಲಿ ಯುರೋಪ್‌ಗೆ ಕೇಂದ್ರ ಮತ್ತು ಸ್ಥಿರ ಪಾಲುದಾರ" ಎಂದು ಅವರು ಬಣ್ಣಿಸಿದರು, 2024 ರ ಪಾಲುದಾರಿಕೆಯ ಅಡಿಯಲ್ಲಿ ಸುಮಾರು 8 ಶತಕೋಟಿ ಹೂಡಿಕೆಗಳನ್ನು ಈಗಾಗಲೇ ಸಜ್ಜುಗೊಳಿಸಲಾಗಿದೆ ಎಂದು ಗಮನಿಸಿದರು. ಚರ್ಚೆಗಳು ಯುಎಸ್-ಇರಾನ್ ಚೌಕಟ್ಟಿನ ಒಪ್ಪಂದ ಮತ್ತು ಗಾಜಾದಲ್ಲಿ ಪುನರ್ನಿರ್ಮಾಣ ಪ್ರಯತ್ನಗಳು ಸೇರಿದಂತೆ ಮಧ್ಯಪ್ರಾಚ್ಯ ರಾಜತಾಂತ್ರಿಕತೆಯನ್ನು ಸಹ ಒಳಗೊಂಡಿತ್ತು. ಪ್ರತ್ಯೇಕವಾಗಿ, ವಾನ್ ಡೆರ್ ಲೇಯೆನ್ ಯುಕೆ ಪ್ರಧಾನಿ ಕೀರ್ ಸ್ಟಾರ್ಮರ್ ಅವರನ್ನು ಎವಿಯನ್‌ನಲ್ಲಿ ಭೇಟಿಯಾದರು, ಅಲ್ಲಿ ಅವರು ಮಧ್ಯಪ್ರಾಚ್ಯದಲ್ಲಿನ ಬೆಳವಣಿಗೆಗಳು, ಉಕ್ರೇನ್‌ಗೆ ನಿರಂತರ ಬೆಂಬಲ ಮತ್ತು ಮುಂಬರುವ EU-UK ಶೃಂಗಸಭೆಯ ಸಿದ್ಧತೆಗಳ ಬಗ್ಗೆ ಚರ್ಚಿಸಿದರು.

# ವೈಭವ್ ಸೂರ್ಯವಂಶಿ ಮೇಲೆ ನಿಷೇಧದ ತೂಗುಗತ್ತಿ

**ನವದೆಹಲಿ, ಜೂ. 16:** ಭಾರತ ಎ ಮತ್ತು ಶ್ರೀಲಂಕಾ ಎ ತಂಡಗಳ ನಡುವಣ ಪಂದ್ಯದ ಬಳಿಕ ನಡೆದ ದೈಹಿಕ ಘರ್ಷಣೆ ಹಿನ್ನಲೆ ಟೀಮ್ ಇಂಡಿಯಾದ ಯುವ ದಾಂಡಿಗ ವೈಭವ್ ಸೂರ್ಯವಂಶಿ ವಿರುದ್ಧ ಐಸಿಸಿ ಕಠಿಣ ಶಿಸ್ತುಕ್ರಮ ಕೈಗೊಳ್ಳಲು ಸಾಧ್ಯತೆಯಿದೆ. ದಂಬುಲ್ಲಾದಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ 49.2 ಓವರ್‌ಗಳಲ್ಲಿ 265 ರನ್ ಕಲೆಹಾಕಿತ್ತು. ಈ ಗುರಿಯನ್ನು ಬೆನ್ನತ್ತಿದ ಶ್ರೀಲಂಕಾ ತಂಡ 50 ಓವರ್ಗಳಲ್ಲಿ 265 ರನ್‌ಗಳಿಸಿ ಪಂದ್ಯವನ್ನು ಟೈ ಮಾಡಿಕೊಂಡಿದ್ದರು. ಬಳಿಕ ನಡೆದ ಸೂಪರ್ ಓವರ್‌ನಲ್ಲಿ ಶ್ರೀಲಂಕಾ ಬ್ಯಾಟರ್ಗಳು 16 ರನ್ ಕಲೆಹಾಕಿದ್ದರು. ಈ ಗುರಿ ಬೆನ್ನುಹತ್ತಿದ ಭಾರತ 6 ಎಸೆತಗಳಲ್ಲಿ ಕೇವಲ 9 ರನ್‌ಗಳಿಸಿ 7 ರನ್‌ಗಳಿಂದ ಸೋಲೊಪ್ಪಿಕೊಂಡಿದ್ದರು. ಈ ಸೋಲಿನ ಬಳಿಕ ಪೆವಿಲಿಯನ್ ಕಡೆ ಹೆಜ್ಜೆ ಹಾಕುತ್ತಿದ್ದ ವೈಭವ್ ಸೂರ್ಯವಂಶಿಯನ್ನು ಗುರಿಯಾಗಿಸಿ ಶ್ರೀಲಂಕಾ ಆಟಗಾರ ವಿಶೇನ್ ಹಾಲಂಬಾಗೆ ಅದೇನೋ ಹೇಳಿದ್ದಾರೆ. ಇದರಿಂದ ಕೆರಳಿದ ವೈಭವ್ ಸೂರ್ಯವಂಶಿ ಲಂಕಾ ಆಟಗಾರನತ್ತ ಧಾವಿಸಿ ಮಾತಿನ ಚಕಮಕಿ ನಡೆಸಿದ್ದರು. ಈ ವಾಗ್ವಾದದ ನಡುವೆ ವೈಭವ್ ಸೂರ್ಯವಂಶಿ ವಿಶೇನ್ ಹಾಲಂಬಾ ಅವರನ್ನು ಕೈಯಿಂದ ತಳ್ಳುತ್ತಿರುವುದು ಕ್ಯಾಮರಾದಲ್ಲಿ ಸೆರೆಯಾಗಿದೆ. ಈ ಹಿನ್ನಲೆಯಲ್ಲಿ ಐಸಿಸಿ ವೈಭವ್ ಸೂರ್ಯವಂಶಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ. ಐಸಿಸಿ ಕ್ರಿಕೆಟ್ ನಿಯಮಾವಳಿಗಳ ಪ್ರಕಾರ ಮೈದಾನದಲ್ಲಿ ಎದುರಾಳಿ ಆಟಗಾರರ ಮೇಲೆ ದೈಹಿಕವಾಗಿ ಕೈಮಾಡುವುದು ಅಥವಾ ತಳ್ಳುವುದು "ಲೆವೆಲ್-2" ಅಥವಾ "ಲೆವೆಲ್-3" ಮಾದರಿಯ ಗಂಭೀರ ಶಿಸ್ತು ಉಲ್ಲಂಘನೆಯಾಗಿದೆ. ಮ್ಯಾಚ್ ರೆಫರಿ ಪ್ರದೀಪ್ ಜಯಪ್ರಗಾಶ್ ಅವರು ಈ ಇಡೀ ಘಟನೆಯ ವಿಡಿಯೋ ಸಾಕ್ಷ್ಯಗಳು ಮತ್ತು ಆನ್-ಫೀಲ್ಡ್ ಅಂಪೈರ್ಗಳ ವರದಿಯನ್ನು ತೀವ್ರವಾಗಿ ಪರಿಶೀಲಿಸುತ್ತಿದ್ದಾರೆ. ಐಸಿಸಿ ನೀತಿ ಸಂಹಿತೆಯ ಅಡಿಯಲ್ಲಿ ತಪ್ಪಿತಸ್ಥರೆಂದು ಸಾಬೀತಾದರೆ, ವೈಭವ್ ಸೂರ್ಯವಂಶಿ ಅವರಿಗೆ ಪಂದ್ಯ ಶುಲ್ಕದ 100% ವರೆಗೆ ದಂಡ ವಿಧಿಸಬಹುದು. ಮ್ಯಾಚ್ ರೆಫರಿ ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿದರೆ ವೈಭವ್ ಸೂರ್ಯವಂಶಿ ಅವರನ್ನು ಕೆಲವು ಪಂದ್ಯಗಳಿಂದ ನಿಷೇಧಿಸಬಹುದು. ಇದೀಗ ಮೈದಾನದಲ್ಲಿ ಅಶಿಸ್ತು ತೋರಿದ ಶ್ರೀಲಂಕಾದ ವಿಶೇನ್ ಹಾಲಂಬಾ ಹಾಗೂ ವೈಭವ್ ಸೂರ್ಯವಂಶಿ ವಿರುದ್ಧ ಮ್ಯಾಚ್ ರೆಫರಿ ಪ್ರದೀಪ್ ಜಯಪ್ರಗಾಶ್ ಯಾವ ಕ್ರಮ ಕೈಗೊಳ್ಳಲಿದ್ದಾರೆ ಎಂಬುದೇ ಸದ್ಯದ ಕುತೂಹಲ.



# 60 ದಿನಗಳ ಕಾಲಾವಧಿಯಲ್ಲಿ ಇರಾನ್ ಜೊತೆಗಿನ ಮಾತುಕತೆ ನಿಗದಿಗಿಂತ ಬೇಗ ಅಂತಿಮ ಸಾಧ್ಯತೆ

**ಎವಿಯನ್-ಲೆಸ್-ಬೈನ್ಸ್, ಜೂನ್ 16:** ಇರಾನ್ ಜೊತೆಗಿನ ಮಾತುಕತೆಗಳು ಶುಕ್ರವಾರ ಔಪಚಾರಿಕವಾಗಿ ಸಹಿ ಹಾಕಲಿರುವ ಜಂಟಿಯಾಗಿ ಒಪ್ಪಿಕೊಂಡ ತಿಳುವಳಿಕೆ ಪತ್ರದಲ್ಲಿ ವಿವರಿಸಿರುವ 60 ದಿನಗಳ ವೇಳಾಪಟ್ಟಿಗಿಂತ ಬೇಗ ಮುಕ್ತಾಯಗೊಳ್ಳಬಹುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಹೇಳಿದ್ದಾರೆ, ಆದರೆ ಈ ಪ್ರಕ್ರಿಯೆಯು ಹೆಚ್ಚು ಸಮಯ ತೆಗೆದುಕೊಳ್ಳಬಹುದು ಎಂದು ಒಪ್ಪಿಕೊಂಡರು. ಫ್ರಾನ್ಸ್‌ನಲ್ಲಿ ನಡೆದ ಜಿ7 ಶೃಂಗಸಭೆಯ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, ಸಮಯವು ಹೊಂದಿಕೊಳ್ಳುವಂತಿದೆ ಎಂದು ಹೇಳಿದರು. "ಇದು ವೇಗವಾಗಿ ಹೋಗಬಹುದು, ಹೆಚ್ಚು ಸಮಯ ತೆಗೆದುಕೊಳ್ಳಬಹುದು. ಆದರೆ ಅದು ವೇಗವಾಗಿ ಹೋಗಬಹುದು" ಎಂದು ಅವರು ಹೇಳಿದರು.

ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವಿನ ಮುಂದಿನ ಮಾತುಕತೆಗಳಿಗೆ ಚೌಕಟ್ಟನ್ನು ಒದಗಿಸುವ ಉದ್ದೇಶವನ್ನು ಈ ಒಔಗ ಹೊಂದಿದೆ. ಔಪಚಾರಿಕವಾಗಿ ಸಹಿ ಮಾಡಿದ ನಂತರ, ಇರಾನ್‌ಗೆ ಪರಮಾಣು ಕಾರ್ಯಕ್ರಮದ ಭವಿಷ್ಯ ಸೇರಿದಂತೆ ಹೆಚ್ಚು ಬಾಕಿ ಇರುವ ಬಗೆಹರಿಯದ ಸಮಸ್ಯೆಗಳ ಮೇಲೆ ಕೇಂದ್ರೀಕರಿಸಿದ 60 ದಿನಗಳ ಮಾತುಕತೆಗಳನ್ನು ಇದು ಪ್ರಚೋದಿಸುತ್ತದೆ. ತಿಂಗಳುಗಳ ಅಡಚಣೆಯ ನಂತರ ಹಡಗು ಸಂಚಾರ ಚೇತರಿಸಿಕೊಳ್ಳಲು ಪ್ರಾರಂಭಿಸಿರುವ ಹಾರ್ಮುಜ್ ಜಲಸಂಧಿಯಲ್ಲಿನ ಬೆಳವಣಿಗೆಗಳ ಬಗ್ಗೆ ಟ್ರಂಪ್ ಆಶಾವಾದವನ್ನು ವ್ಯಕ್ತಪಡಿಸಿದರು. ಅಮೆರಿಕದ ಅಧಿಕಾರಿಗಳು ಈ ಜ್ಞಾಪಕ ಪತ್ರವನ್ನು ಅಂತಿಮ ಇತ್ಯರ್ಥಕ್ಕಿಂತ ಆರಂಭಿಕ ಚೌಕಟ್ಟು ಎಂದು ಪದೇ ಪದೇ ವಿವರಿಸಿದ್ದಾರೆ.

ಈ ಒಪ್ಪಂದವು ಕದನ ವಿರಾಮವನ್ನು ವಿಸ್ತರಿಸುವುದು, ಹಾರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಅನುಕೂಲವಾಗುವುದು ಮತ್ತು ಇರಾನ್ನ ಪರಮಾಣು ಕಾರ್ಯಕ್ರಮ ಮತ್ತು ಇತರ ಬಾಕಿ ಇರುವ ವಿಷಯಗಳ ಕುರಿತು ವಿವರವಾದ ಮಾತುಕತೆಗಳನ್ನು ಪ್ರಾರಂಭಿಸುವ ನಿರೀಕ್ಷೆಯಿದೆ.

## ಲೆಬನಾನ್‌ನಲ್ಲಿ ಐಡಿಎಫ್‌ನ ನಿರಂತರ ಉಪಸ್ಥಿತಿ ಅಮೆರಿಕ-ಇರಾನ್ ಜಂಟಿ ಒಪ್ಪಂದದ ಉಲ್ಲಂಘನೆ: ಇರಾನಿನ ವಿದೇಶಾಂಗ ಸಚಿವ ಅಬ್ಬಾಸ್ ಅರಕ್ಚಿ ಹೇಳಿಕೆ

**ಜೆರುಸಲೆಮ್/ಟೆಹ್ರಾನ್, ಜೂನ್ 16:** ಲೆಬನಾನ್‌ನಲ್ಲಿ ಇಸ್ರೇಲಿ ಪಡೆಗಳ ನಿರಂತರ ಉಪಸ್ಥಿತಿಯು ಅಮೆರಿಕ ಮತ್ತು ಇರಾನ್ ನಡುವಿನ ಇತ್ತೀಚೆಗೆ ಒಪ್ಪಿಕೊಂಡ ಚೌಕಟ್ಟಿನ ಉಲ್ಲಂಘನೆಯಾಗಿದೆ ಎಂದು ಇರಾನಿನ ವಿದೇಶಾಂಗ ಸಚಿವ ಅಬ್ಬಾಸ್ ಅರಕ್ಚಿ ಹೇಳಿದ್ದಾರೆ, ಶುಕ್ರವಾರ ಔಪಚಾರಿಕವಾಗಿ ಸಹಿ ಹಾಕಲು ಸಿದ್ಧವಾಗಿದೆ.

ಟೆಹ್ರಾನ್‌ನಲ್ಲಿ ವಿದೇಶಿ ರಾಜತಾಂತ್ರಿಕರೊಂದಿಗೆ ಮಾತನಾಡಿದ ಅರಕ್ಚಿ, ರಾಜ್ಯ ಮಾಧ್ಯಮದಲ್ಲಿ ದೂರದರ್ಶನದಲ್ಲಿ ಪ್ರಸಾರವಾದ ಹೇಳಿಕೆಗಳು, "ನಾವು ಕದನ ವಿರಾಮವನ್ನು ತಲುಪಿದಾಗ, ನಾವು ಅದನ್ನು ಎಲ್ಲಾ ರಂಗಗಳಲ್ಲಿ ಘೋಷಿಸಿದ್ದೇವೆ, ನಿರ್ದಿಷ್ಟವಾಗಿ ಲೆಬನಾನ್‌ಗೆ ಒತ್ತು ನೀಡಿದ್ದೇವೆ ... ಲೆಬನಾನ್ ಪ್ರದೇಶದ ಯಾವುದೇ ಮುಂದುವರಿದ ಆಕ್ರಮಣವನ್ನು ನಾವು ಒಪ್ಪಂದದ ಉಲ್ಲಂಘನೆ ಎಂದು ಪರಿಗಣಿಸುತ್ತೇವೆ" ಎಂದು ಹೇಳಿದರು. ಇರಾನಿನ ವಿದೇಶಾಂಗ ಸಚಿವರ ಪ್ರಕಾರ, ಟೆಹ್ರಾನ್ ಇಸ್ರೇಲ್ ಮತ್ತು ಇಸ್ಲಾಮಿಕ್ ಗಣರಾಜ್ಯದ ಬೆಂಬಲಿತ ಹಿಜ್ಬುಲ್ಲಾ ಮಿಲಿಟಿಯಾವನ್ನು ಪರಿಗಣಿಸುತ್ತದೆ, ಇಸ್ರೇಲ್ ಲೆಬನಾನ್‌ನ ದಕ್ಷಿಣ ಪ್ರದೇಶಗಳಲ್ಲಿ ತಿಂಗಳುಗಳಿಂದ ಹೋರಾಡುತ್ತಿದೆ.

ಜೆರುಸಲೆಮ್ ಅಥವಾ ವಾಷಿಂಗ್ಟನ್ ಲೆಬನಾನ್ ಅನ್ನು ಒಪ್ಪಂದದ ಭಾಗವೆಂದು ಪರಿಗಣಿಸುವುದಿಲ್ಲ ಮತ್ತು ಬದಲಿಗೆ ಅದನ್ನು ಸಂಪೂರ್ಣವಾಗಿ ಪ್ರತ್ಯೇಕ ಸಮಸ್ಯೆಯಾಗಿ ನೋಡುವುದಿಲ್ಲ, ಆದಾಗ್ಯೂ ಈ ವಿಷಯವು ಜಂಟಿ ಒಪ್ಪಂದದ ಷರತ್ತಿನಲ್ಲಿ ಕಾಣಿಸಿಕೊಂಡಿದೆ. "ನಾನು ಒತ್ತಿ ಹೇಳಲು ಬಯಸುವ ಒಂದು ಪ್ರಮುಖ ಅಂಶವೆಂದರೆ, ನಮ್ಮ ಅಭಿಪ್ರಾಯದಲ್ಲಿ, ಈ ಒಪ್ಪಂದದ ಎರಡು ಪಕ್ಷಗಳು ಒಂದು ಕಡೆ ಅಮೆರಿಕ ಮತ್ತು ಇಸ್ರೇಲ್, ಮತ್ತು ಇನ್ನೊಂದು ಕಡೆ ಇರಾನ್ ಮತ್ತು ಹೆಜ್ಬೊಲ್ಲಾ" ಎಂದು ಅರಾಕ್ಚಿ ರಾಜತಾಂತ್ರಿಕರಿಗೆ ತಿಳಿಸಿದರು. ಸೋಮವಾರ, ಐಡಿಎಫ್ ತನ್ನ ಪಡೆಗಳು ಲೆಬನಾನ್‌ನಲ್ಲಿಯೇ ಇರುತ್ತವೆ ಮತ್ತು ಹಿಜ್ಬುಲ್ಲಾದ ಹೆಚ್ಚಿನ ಉಪಸ್ಥಿತಿಯು ಅಲ್ಲಿ ಕೇಂದ್ರೀಕೃತವಾಗಿರುವುದರಿಂದ ಪ್ರಸ್ತುತ ಲೆಬನಾನ್ನ ದಕ್ಷಿಣ ಭಾಗದ ವಿಶಾಲ ಭಾಗವನ್ನು ಆಕ್ರಮಿಸಿಕೊಂಡಿದೆ ಎಂದು ಹೇಳಿದೆ, ಇದರಿಂದಾಗಿ ಹತ್ತಾರು ಸಾವಿರ ನಿವಾಸಿಗಳು ಸ್ಥಳಾಂತರಿಸ ಬೇಕಾಯಿತು.



ಇಸ್ರೇಲ್ ಜ್ಞಾಪಕ ಪತ್ರದ ಪಕ್ಷವಲ್ಲ ಮತ್ತು ಒಪ್ಪಂದದ ಸಂಪೂರ್ಣ ವಿವರಗಳನ್ನು ಇನ್ನೂ ಸ್ವೀಕರಿಸಿಲ್ಲ ಎಂದು ಪ್ರಧಾನಿ ಬೆಂಜಮಿನ್ ನೇತನ್ಯಾಹು ಸೋಮವಾರ ಹೇಳಿದ್ದಾರೆ. ಇಸ್ರೇಲ್ ಪಡೆಗಳು ಕಾಲ ದಕ್ಷಿಣ ಲೆಬನಾನ್‌ನಲ್ಲಿರುವ ಭದ್ರತಾ ವಲಯದಲ್ಲಿ ಉಳಿಯುತ್ತವೆ ಎಂದು ನೇತನ್ಯಾಹು ಹೇಳಿದರು. "ಇರಾನ್ ನಾವು ಅಲ್ಲಿಂದ ಹಿಂದೆ ಸರಿಯಬೇಕೆಂದು ಬಯಸಿದೆ. ಅದು ಆಗಲಿಲ್ಲ" ಎಂದು ಅವರು ಹೇಳಿದರು. "ಈ ವಿಷಯದಲ್ಲಿ ನಾನು ತುಂಬಾ ನಿಶ್ಚಯದಿಂದ ಇದ್ದೆ. ಮತ್ತು ನಮ್ಮ ಅಮೆರಿಕನ್ ಸ್ನೇಹಿತರು ಆ ದೃಢನಿಶ್ಚಯ ಮತ್ತು ಆ ದೃಢ ನಿಲುವನ್ನು ಗೌರವಿಸುತ್ತಾರೆ ಎಂದು ನಾನು ಭಾವಿಸುತ್ತೇನೆ." "ಟ್ರಂಪ್ರ ಒಪ್ಪಂದವು ನಮ್ಮನ್ನು ಬಂಧಿಸುವುದಿಲ್ಲ" ಎಂದು ಇಸ್ರೇಲ್‌ನಬಲಪಂಥೀಯ ರಾಷ್ಟ್ರೀಯ ಭದ್ರತಾ ಸಚಿವ ಇಟಮರ್ ಬೆನ್‌ಗ್ವಿರ್ ಸೋಮವಾರ ವಾದಿಸಿದರು.

# ಜಾಗತಿಕ ಇಂಧನ ಮಾರ್ಗ ಮತ್ತೆ ಆರಂಭವಾದಂತೆ ರಷ್ಯಾದ ತೈಲ ನಿರ್ಬಂಧ ಮರಳುವ ಸಾಧ್ಯತೆ: ಅಮೆರಿಕ ಅಧ್ಯಕ್ಷ ಟ್ರಂಪ್ ಸುಳಿವು

**ಇವಿಯನ್, ಜೂನ್ 16 :** ಹಾರ್ಮುಜ್ ಜಲಸಂಧಿಯನ್ನು ಅಂತರರಾಷ್ಟ್ರೀಯ ಹಡಗುಗಳಿಗೆ ಮತ್ತೆ ತೆರೆದ ನಂತರ ಮತ್ತು ಜಾಗತಿಕ ಇಂಧನವು ಸರಾಗವಾಗಿ ಹರಿಯುವ ನಂತರ ವಾಷಿಂಗ್ಟನ್ ಶೀಘ್ರದಲ್ಲೇ ರಷ್ಯಾದ ತೈಲದ ವಿರುದ್ಧ ನಿರ್ಬಂಧಗಳನ್ನು ಮತ್ತೆ ಪರಿಚಯಿಸಬಹುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ಹೇಳಿದ್ದಾರೆ. ಮಾಸ್ಕೋ ವಿರುದ್ಧ ಕಠಿಣ ಕ್ರಮಗಳನ್ನು ಪರಿಗಣಿಸಲಾಗುತ್ತಿದೆಯೇ ಎಂಬ ಬಗ್ಗೆ ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದ ಟ್ರಂಪ್, "ತೈಲ ಮಾರುಕಟ್ಟೆಗಳು ಸ್ಥಿರವಾದ ನಂತರ ನಿರ್ಬಂಧಗಳನ್ನು ಪುನರುಜ್ಜೀವನಗೊಳಿಸಬಹುದು. ತೈಲ ಈಗ ಹರಿಯುತ್ತಿರುವುದರಿಂದ ನಾವು ಅದನ್ನು ಮಾಡಲು ಸಾಧ್ಯವಾಗುತ್ತದೆ" ಎಂದು ಹೇಳಿದರು. "ನಾವು ನಿರ್ಬಂಧಗಳನ್ನು ತೆಗೆದುಹಾಕಿದ್ದೇವೆ ಏಕೆಂದರೆ ನಾವು ತೈಲದ ಹರಿವನ್ನು ತಡೆಯಲು ನೋಡುತ್ತಿಲ್ಲ, ಆದ್ದರಿಂದ ನಾವು ಶೀಘ್ರದಲ್ಲೇ ಅದನ್ನು ಮಾಡುವ ಸ್ಥಿತಿಯಲ್ಲಿದ್ದೇವೆ" ಎಂದು ಅವರು ಹೇಳಿದರು. ಇರಾನ್ ಒಳಗೊಂಡ ವಿಶಾಲ ಸಂಘರ್ಷಕ್ಕೆ ಸಂಬಂಧಿಸಿದ ಇಂಧನ ಬಿಕ್ಕಟ್ಟಿನಿಂದ ಪ್ರಭಾವಿತವಾಗಿರುವ ದೇಶಗಳು ಸಾಗಣೆಯಲ್ಲಿ ಸಿಲುಕಿಕೊಂಡಿದ್ದ ರಷ್ಯಾದ ಸಮುದ್ರದ ಮೂಲಕ ತೈಲವನ್ನು ಖರೀದಿಸುವುದನ್ನು ಮುಂದುವರಿಸಲು ಯುಎಸ್ ಖಜಾನೆ ಇಲಾಖೆಯು ನೀಡಿದ ಸರಣಿ ವಿನಾಯಿತಿಗಳ ನಂತರ ಯುಎಸ್ ಮತ್ತು ಇರಾನ್ ನಡುವೆ ಒಪ್ಪಂದಕ್ಕೆ ಸಹಿ ಹಾಕಿದ ನಂತರ ಅವರ ಹೇಳಿಕೆ ಬಂದಿದೆ. ಈಗಾಗಲೇ ಒತ್ತಡಕ್ಕೊಳಗಾದ ಜಾಗತಿಕ ಇಂಧನ ಪೂರೈಕೆಗಳಿಗೆ ಮತ್ತಷ್ಟು ಅಡ್ಡಿಯಾಗದಂತೆ ತಡೆಯಲು ವಿನಾಯಿತಿಗಳನ್ನು ಉದ್ದೇಶಿಸಲಾಗಿದೆ. ಒಪ್ಪಂದವು ಹಾರ್ಮುಜ್ ಜಲಸಂಧಿಯನ್ನು ಅಂತರರಾಷ್ಟ್ರೀಯ ಸಾಗಣೆಗೆ ಮತ್ತೆ ತೆರೆಯುವ ನಿಬಂಧನೆಗಳನ್ನು ಒಳಗೊಂಡಿದೆ ಎಂದು ಟ್ರಂಪ್ ಸೂಚಿಸಿದರು, ಇದು ಜಾಗತಿಕ ಇಂಧನ ಮಾರ್ಗಗಳನ್ನು ಮತ್ತಷ್ಟು ಸ್ಥಿರಗೊಳಿಸುವ ನಿರೀಕ್ಷೆಯಿದೆ. ಸಮುದ್ರ ಪರಿಸ್ಥಿತಿಗಳು ಸುಧಾರಿಸಿ ತೈಲ ಹರಿವು ಸಾಮಾನ್ಯವಾದ ನಂತರ, ಆಡಳಿತವು ರಷ್ಯಾದ ಇಂಧನ ರಫ್ತುಗಳನ್ನು ಗುರಿಯಾಗಿಸಿಕೊಂಡು ನಿರ್ಬಂಧಗಳನ್ನು ಮರುಪರಿಶೀಲಿಸುವ ಬಲವಾದ ಸ್ಥಾನದಲ್ಲಿರುತ್ತದೆ ಎಂದು ಯುಎಸ್ ಅಧಿಕಾರಿಗಳು ಹೇಳಿದ್ದಾರೆ.